ಸಂಪುಟ: 04 ಸಂಚಿಕೆ: 338 ಪುಟಗಳು: 08 ಬುಧವಾರ 19 ಫೆಬ್ರವರಿ 2025
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
9448225696 +91 8035841833 ₹5

**ಮುಂಜಾನೆ ಮಾತು**
ನಿನ್ನ ತಪ್ಪು ಇಲ್ಲದೆ ಯಾರು ನಿನ್ನನ್ನು ನಿಂದಿಸಿದರೆ ಪ್ರತೀಕಾರ ತೀರಿಸಲು ನಿನ್ನ ಕೈಯಲ್ಲಿ ಆಗದಿದ್ದರೂ ಕಾಲ ಅವರನ್ನು ತಪ್ಪದೇ ಶಿಕ್ಷಿಸುತ್ತದೆ, ಏಕೆಂದರೆ ಅವರು ಮಾಡಿದ ಕರ್ಮಗಳಿಗೆ ಅವರೇ ಶಿಕ್ಷೆ ಅನುಭವಿಸಬೇಕು.

# ಉದಯ ವಾಹಿನಿ
UV
ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ಇನ್ಮುಂದೆ ಸರ್ಕಾರಿ ಶಾಲೆಗಳಲ್ಲಿ ಚಿಕ್ಕಿ ವಿತರಣೆ ಕ್ಯಾನ್ಸಲ್

• ಉದಯವಾಹಿನಿ, ಬೆಂಗಳೂರು

ಕಲ್ಬುರ್ಗಿಯಲ್ಲಿ ಸರ್ಕಾರಿ ಶಾಲೆಗಳಲ್ಲಿ ನೀಡುತ್ತಿರುವ ಚಿಕ್ಕಿಯಲ್ಲಿ ಮಕ್ಕಳ ಆರೋಗ್ಯದ ಮೇಲೆ ಪರಿಣಾಮ ಬೀರುವ ಅಂಶಗಳು ಪತ್ತೆಯಾಗಿದ್ದರ ಹಿನ್ನೆಲೆಯಲ್ಲಿ ಇದೀಗ ಶಿಕ್ಷಣ ಇಲಾಖೆಯ ಇನ್ನು ಮುಂದೆ ಸರಕಾರಿ ಶಾಲೆಗಳಲ್ಲಿ ಚಿಕ್ಕಿ ವಿತರಣೆ ಇಲ್ಲ ಎಂದು ತಿಳಿಸಿದೆ. ಹೌದು ಇನ್ಮುಂದೆ ಸರ್ಕಾರಿ ಶಾಲೆಗಳಲ್ಲಿ ಚಿಕ್ಕ ವಿತರಣೆ ಇಲ್ಲ. ಕಲ್ಬುಗಿರ್ಯಲ್ಲಿ ಮಕ್ಕಳಿಗೆ ಕೊಟ್ಟ, ಚಿಕ್ಕ ತಿನ್ನಲು ಯೋಗ್ಯವಾಗಿರಲಿಲ್ಲ. ಮಕ್ಕಳ ಆರೋಗ್ಯದ ಮೇಲೆ ಪರಿಣಾಮ ಬೀರುವ ಅಂಶ ಇದೀಗ ಚಿಕ್ಕಿಯಲ್ಲಿ ಪತ್ತೆಯಾಗಿದೆ. ಸಕ್ಕರೆ ಅಂಶ ಹೆಚ್ಚಿನ ಮಟ್ಟದಲ್ಲಿದೆ ಎನ್ನುವ ಮಾಹಿತಿ ತಿಳಿದು ಬಂದಿದೆ. ಈ ಸಂಬಂಧ ಇಲಾಖೆ ಹೆಚ್ಚುವರಿ ಆಯುಕ್ತರು ಪತ್ರ ಬರೆದಿದ್ದರು. ಹಾಗಾಗಿ ಮಕ್ಕಳಿಗೆ ಚಿಕ್ಕಿ ವಿತರಣೆ ಮಾಡಿದರೂ ಶಿಕ್ಷಣ ಇಲಾಖೆ ನಿರ್ಧರಿಸಿದೆ. ಶಾಲಾ ವಿದ್ಯಾರ್ಥಿಗಳಿಗೆ ಮಧ್ಯಾಹ್ನದ ಉಪಹಾರ ಯೋಜನೆಯಡಿ ಪೂರಕ ಪೌಷ್ಠಿಕಾಂಶದ ರೂಪದಲ್ಲಿ ಮೊಟ್ಟೆ ಅಥವಾ ಬಾಳೆಹಣ್ಣನ್ನು ಮಾತ್ರ ವಿತರಣೆ ಮಾಡಬೇಕು. ಚಿಕ್ಕಿ ವಿತರಣೆ ಮಾಡಬಾರದು ಎಂದು ರಾಜ್ಯ ಸರ್ಕಾರ ತನ್ನ ಆದೇಶದಲ್ಲಿ ಸ್ಪಷ್ಟಪಡಿಸಿದೆ.2022-23ನೇ ಸಾಲಿನಲ್ಲಿ ಪ್ರಧಾನಮಂತ್ರಿ ಪೋಷಣ ಶಕ್ತಿ ನಿರ್ಮಾಣ ಯೋಜನೆಯಡಿ 1 ರಿಂದ 8ನೇ ತರಗತಿಯವರೆಗೆ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ 46 ದಿನಗಳಿಗೆ ಪೂರಕ ಪೌಷ್ಠಿಕಾಂಶದ ರೂಪದಲ್ಲಿ ಮೊಟ್ಟೆ ಅಥವಾ ಬಾಳೆಹಣ್ಣು/ಚಿಕ್ಕಿಯನ್ನು ವಿತರಿಸಲು ಆದೇಶಿಸಲಾಗಿತ್ತು.

## ತೇಜಸ್ವಿ ಸೂರ್ಯ ಮತ್ತು ಶಿವಶ್ರೀ ಸ್ಕಂದಪ್ರಸಾದ್ ವಿವಾಹ ಮಾ. 6ಕ್ಕೆ

• ಉದಯವಾಹಿನಿ, ಬೆಂಗಳೂರು

ಬಿಜೆಪಿಯ ಯುವಮೋರ್ಚಾ ರಾಷ್ಟ್ರೀಯ ಅಧ್ಯಕ್ಷ ಹಾಗೂ ಸಂಸದ ತೇಜಸ್ವಿ ಸೂರ್ಯ ಅವರು ಮಾ. 9ರಂದು ಗಾಯಕಿ ಶಿವಶ್ರೀ ಸ್ಕಂದಪ್ರಸಾದ್ ಅವರನ್ನು ವರಿಸಲಿದ್ದಾರೆ ಅಂದು ಬೆಂಗಳೂರಿನ ಅರಮನೆ ಮೈದಾನದ ಗಾಯತ್ರಿ ವಿಹಾರದಲ್ಲಿ ಸಾಂಪ್ರದಾಯಿಕವಾಗಿ ವಿವಾಹ ಕಾರ್ಯಕ್ರಮ ನಡೆಯಲಿದೆ. ತಮಿಳುನಾಡು ಮೂಲದ ಶಿವಶ್ರೀ ಅವರು ಈಗಾಗಲೇ ಗಾಯನದಿಂದ ಖ್ಯಾತರಾಗಿದ್ದಾರೆ. ಕಳೆದ ಹಲವು ದಿನಗಳಿಂದ ಎರಡೂ ಕುಟುಂಬಗಳ ನಡುವೆ ಮಾತುಕತೆ ನಡೆದು ವಿವಾಹ ತೀರ್ಮಾನಿಸಲಾಗಿತ್ತು. ಇತ್ತೀಚೆಗೆ ಆರ್ಟ್ ಆಫ್ ಲಿವಿಂಗ್‌ನಲ್ಲಿ ನಡೆದ ಕಾರ್ಯಕ್ರಮದ ವೇಳೆ ಇಬ್ಬರೂ ಒಟ್ಟಿಗೆ ಕಾಣಿಸಿಕೊಂಡಿದ್ದರು. ಶಿವಶ್ರೀ ಅವರು ಗಾಯನವಲ್ಲದೆ ಭರತನಾಟ್ಯ ಕಲಾವಿದೆ ಕೂಡ ಹೌದು. ಮದ್ರಾಸ್ ವಿಶ್ವವಿದ್ಯಾಲಯದಿಂದ ಭರತನಾಟ್ಯದಲ್ಲಿ ಪದವಿಯನ್ನೂ ಗಳಿಸಿದ್ದಾರೆ.

## ಜಿ.ಪರಮೇಶ್ವರಗೆ ಕಾಂಗ್ರೆಸ್ ಹೈಕಮಾಂಡ್ ಬುಲಾವ್!

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ಆಡಳಿತಾರೂಢ ಕಾಂಗ್ರೆಸ್ ಪಕ್ಷದಲ್ಲಿ ಬಣ ರಾಜಕೀಯ ವಿಚಾರ ಮುನ್ನಲೆಯಲ್ಲೇ ಇದೆ. ಮುಖ್ಯಮಂತ್ರಿ ಮತ್ತು ಕೆಪಿಸಿಸಿ ಅಧ್ಯಕ್ಷರ ಬದಲಾವಣೆ ಮಾತುಗಳು ಕೇಳಿ ಬಂದ ಬೆನ್ನಲ್ಲೆ ರಾಜ್ಯ ಗೃಹ ಸಚಿವರಿಗೆ ಕಾಂಗ್ರೆಸ್ ಹೈಕಮಾಂಡ್ ಬುಲಾವ್ ನೀಡಿದೆ. ದೆಹಲಿಗೆ ಬಂದು ಭೇಟಿ ಮಾಡುವಂತೆ ಕಾಂಗ್ರೆಸ್ ವರಿಷ್ಠರು ಡಾ.ಜಿ.ಪರಮೇಶ್ವರ ಅವರಿಗೆ ಕರೆ ನೀಡಿದ್ದಾರೆ. ಈ ಕರೆ ಮೇರೆಗೆ ಸಚಿವರು ಮಂಗಳವಾರ ಬೆಳಗ್ಗೆ ವಿಮಾನ ಮೂಲಕ ದೆಹಲಿಗೆ ತೆರಳಲಿದ್ದಾರೆ. ಎಲ್ಲಾರ ಚಿತ್ತ ಇದೀಗ ದೆಹಲಿ ಅಂಗಳದತ್ತ ನೆಟ್ಟಿದೆ. ಬೆಂಗಳೂರು ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ (ಕೆಐಎ)ದಿಂದ ವಿಮಾನ ಮೂಲಕ ದೆಹಲಿಗೆ ಬೆಳಗ್ಗೆ 10.20ಕ್ಕೆ ಪ್ರಯಾಣ. ಬೆಳೆಸಲಿದ್ದಾರೆ. ಮಧ್ಯಾಹ್ನ 1.15ರ ಹೊತ್ತಿಗೆ ಅವರು ದೆಹಲಿ ತಲುಪಲಿದ್ದಾರೆ.
ಅಲ್ಲಿ ಅವರು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ್ ಖರ್ಗೆ, ಸಂಸದ ಮತ್ತು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ, ರಾಜ್ಯ ಉಸ್ತುವಾರಿಗಳು ಸೇರಿದಂತೆ ವರಿಷ್ಠರನ್ನು ಭೇಟಿ ಮಾಡಲಿದ್ದಾರೆ.

## ಸಿಎಂ, ಗೃಹ ಸಚಿವರನ್ನು ನಿಂದಿಸಿ ವಿಡಿಯೋ ಹರಿಬಿಟ್ಟ ವ್ಯಕ್ತಿ ಅರೆಸ್ಟ್

• ಉದಯವಾಹಿನಿ, ಬೆಂಗಳೂರು

ಮುಖ್ಯಮಂತ್ರಿ ಸಿದ್ದರಾಮಯ್ಯ, ಗೃಹ ಸಚಿವ ಡಾ.ಜಿ.ಪರಮೇಶ್ವರ್ ಅವರನ್ನು ಅವಾಚ್ಯವಾಗಿ ನಿಂದಿಸಿ, ಸಾಮಾಜಿಕ ಜಾಲತಾಣಗಳಲ್ಲಿ ವಿಡಿಯೋ ಹರಿಬಿಟ್ಟಿದ್ದ ಆರೋಪಿಯನ್ನು ಪೊಲೀಸರು ಬಂಧಿಸಿದ್ದಾರೆ. ಸುಂಕದ ಕಟ್ಟೆ ವಾರ್ಡ್ ಕಾಂಗ್ರೆಸ್ ಅಧ್ಯಕ್ಷ ನವೀನ್ ಕುಮಾರ್ ನೀಡಿದ್ದ ದೂರಿನ ಹಿನ್ನೆಲೆಯಲ್ಲಿ ಆರೋಪಿಯನ್ನು ಕಾಮಾಕ್ಷಿಪಾಳ್ಯ ಠಾಣೆ ಪೊಲೀಸರು ಬಂಧಿಸಿ, ವಿಚಾರಣೆ ನಡೆಸಿದ್ದಾರೆ. ವ್ಯಕ್ತಿಯೋರ್ವ ಸಿಎಂ ಸಿದ್ದರಾಮಯ್ಯ, ಗೃಹ ಸಚಿವ ಪರಮೇಶ್ವರ್ ಅವರನ್ನು ನಿಂದಿಸಿ. ಸೋಷಿಯಲ್ ಮೀಡಿಯಾಗಳಲ್ಲಿ ವಿಡಿಯೋ ಅಪ್ ಲೋಡ್ ಮಾಡಿದ್ದ ಇದನ್ನು ಗಮನಿಸಿದ್ದ ಕಾಂಗ್ರೆಸ್ ನಾಯಕ ನವೀನ್ ಕುಮಾರ್, ಆರೋಪಿ ಕೋಮುಗಲಭೆಗೆ ಪ್ರಚೋದನೆ ನೀಡುತ್ತಿದ್ದಾನೆ. ಆತನ ವಿರುದ್ಧ ಕ್ರಮ ಕೈಗೊಳ್ಳುವಂತೆ ದೂರು ನೀಡಿದ್ದರು. ಈ ಹಿನ್ನೆಲೆಯಲ್ಲಿ ಆರೋಪಿಯನ್ನು ಬಂಧಿಸಲಾಗಿದೆ.

# ಗೃಹಲಕ್ಷ್ಮಿಗೇ ಗ್ರಹಣ



**ಲಕ್ಷ್ಮಕ್ಕ ಎಲ್ಲಿದ್ದಿಯಕ್ಕ ಬಾಕಿ ಹಣ ಹಾಕಕ್ಕ**

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ

**'ಕೈ'ಕೊಟ್ಟ ಗೃಹಲಕ್ಷ್ಮಿ ಫಲಾನುಭವಿಗಳು ಕಂಗಾಲು**

**ಗೃಹಲಕ್ಷ್ಮಿ**

**ಪ್ರತಿ ಮನೆ ಯಜಮಾನಿಗೆ ಪ್ರತಿ ತಿಂಗಳು ₹2000**

• ಉದಯವಾಹಿನಿ, ಬೆಂಗಳೂರು

ಈ ತಿಂಗಳು ಬರುತ್ತೆ. ಮುಂದಿನ ತಿಂಗಳು ಹಾಕುತ್ತಾರೆ ಮಕ್ಕಳು ಫೀಸ್ ಕಟ್ಟಬೇಕು, ಬಾಡಿಗೆ ನೀಡಬೇಕು, ಯಾವಾಗ ಹಾಕುತ್ತಾರೆ ಹಣ ಅಂತ ಕಾದಿದ್ದೇ ಆಯ್ತು. ಒಂದಲ್ಲ, ಎರಡಲ್ಲ, ಮೂರು ತಿಂಗಳು ಕಳೆದರೂ ಅಕೌಂಟ್ ಗೆ ಗ್ಯಾರಂಟಿ ಹಣ ಬಂದಿಲ್ಲ. ಇದೇ ಹಣಕ್ಕಾಗಿ ಜಾತಕ ಪಕ್ಷಿಯಂತೆ ಕಾಯುತ್ತಿರುವ ಫಲಾನುಭವಿಗಳು ಸರ್ಕಾರದ ವಿರುದ್ಧ ಅಸಮಾಧಾನ ಹೊರಹಾಕುತ್ತಿದ್ದಾರೆ. ಅನ್ನಭಾಗ್ಯದ ಬಿಪಿಎಲ್ ಫಲಾನುಭವಿಗಳಿಗೆ 5 ಕೆಜಿ ಅಕ್ಕಿ ಬದಲಿಗೆ ನೀಡಲಾಗುತ್ತಿದ್ದ ಹಣವು ಬರೋಬ್ಬರಿ 5 ತಿಂಗಳಿನಿಂದ ಸ್ಥಗಿತಗೊಂಡಿದೆ ಎಂಬ ಆರೋಪ ಕೇಳಿ ಬಂದಿದೆ. ಹಣದ ಬದಲಿಗೆ ಅಕ್ಕಿಯನ್ನೇ ಕೊಡುತ್ತೇವೆ ಎಂದು ಅಧಿಕಾರಿಗಳು ಕಾಗೆ ಹಾರಿಸುತ್ತಿದ್ದಾರೆ ಎಂದು ಫಲಾನುಭವಿಗಳು ಅಲ್ಲಲ್ಲಿ ಅಸಮಾಧಾನ ಹೊರಹಾಕುತ್ತಿದ್ದಾರೆ. ಇದ್ರಿಂದಾಗಿ ಬಿಪಿಎಲ್ ಕಾರ್ಡ್‌ದಾರರಿಗೆ ಅತ್ತ ಹಣವೂ ಇಲ್ಲ, ಇತ್ತ ಅಕ್ಕಿಯೂ ಸಿಗದಂತಾಗಿದೆ. ಇಷ್ಟೇ ಯಾಕೆ ಗ್ಯಾರಂಟಿಗಳಲ್ಲಿ ಫೇಮಸ್ ಆಗಿರುವ ಗೃಹಲಕ್ಷ್ಮೀಯದ್ದೇ ಇದೇ ಕತೆ.. ಕಳೆದ ಎರಡ್ಮೂರು ತಿಂಗಳಿಂದ ಮನೆಯ ಗೃಹಲಕ್ಷ್ಮೀಯರ ಅಕೌಂಟ್ ಗೆ ಹಣ ಬಂದಿಲ್ವಂತೆ.

| | |
|---|---|
| 1 | ನನಗೂ ಫ್ರೀ, ನಿನಗೂ ಫ್ರೀ, ಎಲ್ಲರಿಗೂ ಫ್ರೀ.. ಫ್ರೀ..! ಕಪಟ ನಾಟಕವಾಡಿ ಅಧಿಕಾರಕ್ಕೆ ಬಂದ ಬಳಿಕ ವರಸೆ ಬದಲಿಸಿದ್ದಾರೆ |
| 2 | ಸರ್ಕಾರದ ವಿರುದ್ಧ BJP ವಾಗ್ದಾಳಿ |
| 3 | ಗೃಹಲಕ್ಷ್ಮಿ, ಅನ್ನಭಾಗ್ಯ ಯೋಜನೆ "ಗೊತ್ತಿರಲಿಲ್ಲ" ಸಿಎಂ ಹೇಳಿಕೆಗೆ ಟೀಕೆ! |

ಇದರಿಂದ ಮಕ್ಕಳ ಫೀಸು, ಬಾಡಿಗೆ ಸೇರಿ ಕಮಿಟ್ಮೆಂಟ್ ಗೆ ಹಣ ನೀಡೋದಕ್ಕೆ ಆಗದಂತಾಗಿದೆಯಂತೆ. ಗ್ಯಾರಂಟಿ ಕುರಿತಾಗಿ ಹಲವು ಬಿಜೆಪಿ ನಾಯಕರು ಕ್ಲಾಸ್ ತೆಗೆದುಕೊಂಡಿದ್ದಾರೆ. ಇನ್ನು ಗೃಹಲಕ್ಷ್ಮೀ ಹಣ ಬಾಕಿ ವಿಚಾರವಾಗಿ ರಾಜ್ಯಾದ್ಯಂತ ಮಹಿಳೆಯರು ಆಕ್ರೋಶ ವ್ಯಕ್ತಪಡಿದ್ದಾರೆ. ಬೆಳಗಾವಿಯಲ್ಲಿ ಗೃಹಲಕ್ಷ್ಮಿಯರು ಪ್ರತಿಕ್ರಿಯಿಸಿದ್ದು, ಮೂರು ತಿಂಗಳಿಂದ ಗೃಹಲಕ್ಷ್ಮಿ ಹಣ ಬಂದಿಲ್ಲ. ಆರು ತಿಂಗಳಿಂದ ಪಡಿತರ ಹಣ ಕೂಡ ಜಮಾವಣೆ ಆಗಿಲ್ಲ. ಯೋಜನೆ ಸಿಗ್ತವೆ ಅಂತಾ ಸರ್ಕಾರ ನಂಬಿ ವೋಟ್ ಹಾಕಿದ್ದರೂ ರಸ್ತೆ ಸೇರಿ ಯಾವುದನ್ನೂ ಕೇಳಿದ್ರೂ, ಬರೀ ಹಣ ಇಲ್ಲಾ ಅಂತಾರೆ. ಗೃಹಲಕ್ಷ್ಮೀ ಹಣದಿಂದ ಜೀವನ ಸಾಗ್ತಿತ್ತು ಹಣ ಹಾಕದಿದ್ರೇ ಹೇಗೆ ಮಾಡೋದು. ಆದಷ್ಟು ಬೇಗ ಹಣ ಜಮಾವಣೆ ಮಾಡುವಂತೆ ಸರ್ಕಾರಕ್ಕೆ ಒತ್ತಾಯಿಸಿದ್ದಾರೆ. ಇದೇ ವಿಷಯಕ್ಕೆ ಪರಿಷತ್ ನ ವಿಪಕ್ಷ ನಾಯಕ ಚೆಲುವಾದಿ ನಾರಾಯಣಸ್ವಾಮಿ ಕೆಂಡ ಕಾರಿದ್ದಾರೆ. ರಾಜ್ಯ ಸರ್ಕಾರದ ವಿರುದ್ಧ ಬೆಂಕಿಯುಗುಳಿದ್ದಾರೆ. ಜನ ಕೂಡ ಸರ್ಕಾರದ ವಿರುದ್ಧ ಮುನಿಸಿಕೊಂಡಿದ್ದಾರೆ. ಗ್ಯಾರಂಟಿ ಹಣದಿಂದಲೇ ನಿತ್ಯ ಜೀವನ ಸಾಗಿಸುತ್ತಿದ್ದ ಕೆಲವು ಜನರಿಗೆ ದಿಕ್ಕುತೋಚದಂತಾಗಿದೆ. ಅತ್ತ ವಿಪಕ್ಷಗಳ ಆರೋಪಕ್ಕೆ ಸಿಎಂ, ಡಿಸಿಎಂ ನಯವಾಗಿಯೇ ತಿರುಗೇಟು ನೀಡಿ, ಹಣ ಹಾಕುತ್ತೇವೆ ಎಂದು ಭರವಸೆ ನೀಡಿದ್ದಾರೆ.

**ಅನ್ನಭಾಗ್ಯದ ಹಣವೂ ಇಲ್ಲ ಗೃಹಲಕ್ಷ್ಮೀ ದುಡ್ಡು ಕೊಟ್ಟಿಲ್ಲ**

ಯಾವುದನ್ನೂ ನಿಲ್ಲಿಸುವ ಪ್ರಶ್ನೆಯೇ ಇಲ್ಲ: ಅನ್ನಭಾಗ್ಯ, ಗೃಹಲಕ್ಷ್ಮೀ ಹಣ ಬಿಡುಗಡೆ ಆಗಿಲ್ಲ ಎಂಬ ಆರೋಪದ ಸ್ವತಃ ಸಿಎಂ ಸಿದ್ದರಾಮಯ್ಯ ಪ್ರತಿಕ್ರಿಯಿಸಿ, ಹಣ ಬಿಡುಗಡೆ ಆಗಿಲ್ಲ ಎಂದು ಯಾರು ಹೇಳಿದ್ದು. ಯಾವುದನ್ನೂ ಕೂಡ ನಿಲ್ಲಿಸುವ ಪ್ರಶ್ನೆಯೇ ಇಲ್ಲ. ಮೂರು ತಿಂಗಳಿಂದ ಪೆಂಡಿಂಗ್ ಇರೋದು ನನಗೆ ಗೊತ್ತಿಲ್ಲ. ಕೂಡಲೇ ಗೃಹಲಕ್ಷ್ಮೀ ಯೋಜನೆ ಹಣ ಬಿಡುಗಡೆ ಮಾಡುತ್ತೇವೆ ಎಂದು ಸ್ಪಷ್ಟಪಡಿಸಿದರು. 'ಅನ್ನಭಾಗ್ಯ' ಯೋಜನೆಯ 5 ಕೆಜಿ ಅಕ್ಕಿಯ ಹಣ ವಿಳಂಬ ವಿಚಾರದ ಬಗ್ಗೆ ಸಚಿವ ಮುನಿಯಪ್ಪ ಮಾತನಾಡಿ, 2 ತಿಂಗಳ ಹಣ ಮಾತ್ರ ಬಾಕಿ ಇದೆ, ನಾಲ್ಕೈದು ತಿಂಗಳ ಬಾಕಿ ಇಲ್ಲ. ಎರಡೆರಡು ತಿಂಗಳಿಗೆ ಒಂದು ಬಾರಿ ಹಣ ಹಾಕ್ತಿದ್ದೇವೆ. ಇನ್ಮುಂದೆ ಪ್ರತಿ ತಿಂಗಳು ಹಣ ಹಾಕುವುದಕ್ಕೆ ಏರ್ಪಾಡು ಮಾಡುತ್ತೇವೆ. ವಿಪಕ್ಷಗಳು ಟೀಕೆ ಮಾಡಿದ್ರೆ ನಾವು ಸರಿಯಾಗಿ ಕೆಲಸ ಮಾಡೋದು ಎಂದರು. ಸದ್ಯ ಮೂರ್ನಾಲ್ಕು ತಿಂಗಳಿನಿಂದ ಗೃಹಲಕ್ಷ್ಮೀಯರು ಹಣವಿಲ್ಲದೇ ಒದ್ದಾಡಿದ್ದಾರೆ. ಮಹಿಳೆಯರ ಸಂಕಷ್ಟ ಸರ್ಕಾರಕ್ಕೂ ತಲುಪಿದೆ ಹೀಗಾಗಿ ಫಲಾನುಭವಿಗಳ ಖಾತೆಗೆ ಹಣ ಯಾವಾಗ ಬೀಳುತ್ತೋ ಕಾದು ನೋಡಬೇಕು.



**ಹಣ ಫಲಾನುಭವಿಗಳ ಖಾತೆಗೆ ಜಮಾ**

**ಗೃಹ ಲಕ್ಷ್ಮೀ ಯೋಜನೆಯ 3 ತಿಂಗಳ ಬಾಕಿ ಹಣ ಶೀಘ್ರದಲ್ಲೇ ಫಲಾನುಭವಿಗಳ ಅಕೌಂಟಿಗೆ ಹಾಕಲಿದ್ದೇವೆ.ನಾವು ಕೊಟ್ಟ ಮಾತಿನಂತೆ ನಡೆಯುತ್ತೇವೆ ಎಂದು ಭರವಸೆ ನೀಡಿದ್ದಾರೆ. ಈ ಕುರಿತು ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಸಹ ಪ್ರತಿಕ್ರಿಯಿಸಿದ್ದು, ಹಿಂದಿನ ಮಾದರಿಯಂತೆ ಜಿಲ್ಲಾ ಉಪ ನಿರ್ದೇಶಕರ ಮೂಲಕವೇ ಗೃಹಲಕ್ಷ್ಮೀ ಯೋಜನೆ ಹಣ ಫಲಾನುಭವಿಗಳ ಖಾತೆಗೆ ಜಮಾ ಆಗಲಿದೆ. ತಾಲ್ಲೂಕು ಪಂಚಾಯಿತಿ ಮೂಲಕ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಗೆ ಹಣ ರವಾನೆಯಾಗುತ್ತಿದ್ದು, ಉಪ ನಿರ್ದೇಶಕರ ಮೂಲಕ ಹಣ ಹಾಕಲಾಗುತ್ತಿದೆ ಎಂದರು. ನಾವು ನಮ್ಮ ಕರ್ತವ್ಯ ಮಾಡುತ್ತಿದ್ದೇವೆ. ಇದು ದೊಡ್ಡ ಮೊತ್ತದ ಯೋಜನೆ, ಇದರ ಗುಣಮಟ್ಟ ಸರಿಯಾಗಿದೆಯೇ ಸದ್ಯ 150 ಕಿ.ಮೀ ಉದ್ದದ ರಸ್ತೆ ಕಾಮಗಾರಿ ನಡೆಯುತ್ತಿದೆ. 1,700 ಕೋಟಿ ಮೊತ್ತದ ಯೋಜನೆ. ಇದನ್ನು ಕಾಲಮಿತಿಯೊಳಗೆ ಮುಗಿಸುವ ಗುರಿ ಹೊಂದಿದ್ದೇವೆ.**

### ಅನ್ನಭಾಗ್ಯ ಯೋಜನೆ

ಸಿದ್ದರಾಮಯ್ಯ ಸರ್ಕಾರ ದಿವಾಳಿಯೆದ್ದಿದೆ, ಗ್ಯಾರಂಟಿ ಯೋಜನೆಗಳನ್ನು ಮುಂದುವರಿಸಿಕೊಂಡು ಹೋಗಲು ಬೊಕ್ಕಸದಲ್ಲಿ ಹಣವಿಲ್ಲ ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಹೇಳಿದ್ದು ಸರಿಯೆನಿಸುತ್ತಿದೆ. ಹುಬ್ಬಳ್ಳಿಯ ಮಹಿಳೆಯರು ಸರ್ಕಾರಕ್ಕೆ ಹಿಡಿಶಾಪ ಹಾಕಿದ್ದರು, ಇವತ್ತು ಕಲಬುರಗಿ ಬಸವ ನಗರದ ಮಹಿಳೆಯರು ಅದನ್ನೇ ಮಾಡುತ್ತಿದ್ದಾರೆ. ನಮ್ಮ ವರದಿಗಾರನೊಂದಿಗೆ ಮಾತಾಡಿರುವ ಈ ಮಹಿಳೆ ಮೂರು ತಿಂಗಳಿಂದ ಗೃಹಲಕ್ಷ್ಮಿಯೋಜನೆ ಹಣ ಬಂದಿಲ್ಲ ಮತ್ತು 5 ತಿಂಗಳಿಂದ ಅನ್ನಭಾಗ್ಯ ಸ್ಕೀಮಿನ ಅಕ್ಕಿ ಹಣ ಬಂದಿಲ್ಲ ಎಂದು ಹೇಳುತ್ತಾರೆ. ಕೊಡುವ 5 ಕೆಜಿ ರೇಷನ್ ನಲ್ಲಿ 3 ಕೆಜಿ ಅಕ್ಕಿ ಮತ್ತು 2 ಕೆಜಿ ಜೋಳ ಸಿಗುತ್ತಿದೆ, ಮಾನವ ಸೇವನೆಗೆ ಯೋಗ್ಯವಲ್ಲದ ಜೋಳವನ್ನು ಅವರು ಕೊಡುತ್ತಿದ್ದಾರೆ ಎಂದು ಮಹಿಳೆ ಹೇಳುತ್ತಾರೆ.

### ಜನರಿಗೆ ಸಿದ್ದರಾಮಯ್ಯ ಸರ್ಕಾರ ಮೋಸ ಮಾಡಿದೆ

ಕರ್ನಾಟಕ ಸರ್ಕಾರ ನಮಗೆ ಮೋಸ ಮಾಡಿದೆ, ಮುಖ್ಯಮಂತ್ರಿ ಸಿದ್ದರಾಮಯ್ಯ ಬಡವರ ಹೊಟ್ಟೆ ಮೇಲೆ ಬರೆ ಎಳೆಯುತ್ತಿದ್ದಾರೆ ಎಂದು ಚಿತ್ರದುರ್ಗದ ಮಹಿಳೆಯರು ಹೇಳುತ್ತಿದ್ದಾರೆ. ಇಲ್ಲೂ ಅದೇ ಗೋಳು. ಗೃಹಲಕ್ಷ್ಮಿ ಮತ್ತು ಅನ್ನಭಾಗ್ಯ ಸ್ಕೀಮಿನ ದುಡ್ಡನ್ನು ಸರ್ಕಾರ ಕ್ರಮವಾಗಿ ಮೂರು ಮತ್ತು ಐದು ತಿಂಗಳುಗಳಿಂದ ಫಲಾನುಭವಿಗಳ ಖಾತೆಗೆ ಹಾಕಿಲ್ಲ. ಚುನಾವಣೆ ಸಮಯದಲ್ಲಿ ಕಾಂಗ್ರೆಸ್ ನಾಯಕರು ನೀಡಿದ ಆಶ್ವಾಸನೆಗಳನ್ನು ನಂಬಿ, ನಮ್ಮ ಬದುಕು ಹಸನಾದೀತು, ವಯಸ್ಸಾದವರ ಔಷಧಿ, ಮಕ್ಕಳ ಶಾಲಾ ಫೀಸು ಮತ್ತು ಮನೆ ಬಾಡಿಗೆಗೆ ನೆರವಾದೀತು ಅವರಿಗೆ ವೋಟು ಹಾಕಿ ಮೋಸ ಹೋಗಿದ್ದೇವೆ ಎಂದು ದುರ್ಗದ ಮಹಿಳೆಯರು ಹೇಳುತ್ತಿದ್ದಾರೆ.


ಸಿದ್ದರಾಮಯ್ಯ ಹೇಳಿದ್ದೇನು... ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಗ್ಯಾರಂಟಿ ಯೋಜನೆಗಳನ್ನು ಯಾವುದೇ ಕಾರಣಕ್ಕೂ ನಿಲ್ಲಿಸಲ್ಲ, ಇಷ್ಟು ದಿನ ಕೊಟ್ಟಿದ್ದೇವೆ ಎಂದಾದರೆ ಮುಂದೆಯೂ ಕೊಡಲಿದ್ದೇವೆ ಎಂದು ಅವರು ಹೇಳಿದ್ದರು. ಆದರೆ, ಈ ರೀತಿ ಹೇಳುವ ಸಂದರ್ಭದಲ್ಲಿ ಅವರು ಅನ್ನಭಾಗ್ಯ ಯೋಜನೆಯ ಹಾಗೂ ಗೃಹಲಕ್ಷ್ಮಿ ಯೋಜನೆಯ ಹಣ ಜನರ ಖಾತೆಗೆ ವರ್ಗಾವಣೆ ಆಗದೆ ಇರುವುದು ನನಗೆ ಗೊತ್ತಿರಲಿಲ್ಲ. ಎರಡೂ ಯೋಜನೆಗಳ ಹಣವನ್ನು ಶೀಘ್ರ, ಜನರ ಖಾತೆಗೆ ಜಮೆ ಮಾಡಲು ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗುವುದು ಎಂದಿದ್ದರು. ಇನ್ನು ಇದೀಗ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಹೇಳಿಕೆ ತೀವ್ರ ಟೀಕೆಗೆ ಗುರಿಯಾಗಿದೆ. ರಾಜ್ಯ ಸರ್ಕಾರದ ಪ್ರಮುಖ ಯೋಜನೆಗಳ ಹಣ ಕಳೆದ ಮೂರು ತಿಂಗಳಿನಿಂದ ಜನರ ಖಾತೆಗೆ ಸೇರಿಲ್ಲ ಎಂದಾದರೂ ಸಿಎಂಗೆ ವಿಷಯ ಗೊತ್ತಿಲ್ಲ ಎಂದಾದರೆ ಹೇಗೆ ಎಂದು ಹಲವರು ಸೋಷಿಯಲ್ ಮೀಡಿಯಾದಲ್ಲಿ ಪ್ರಶ್ನೆ ಮಾಡಿದ್ದಾರೆ.

## ಹಾಸನದಲ್ಲಿ 720 ಕೋಟಿ ರೂ. ವೆಚ್ಚದಲ್ಲಿ ಫುಡ್‌ಪಾರ್ಕ್

• ಉದಯವಾಹಿನಿ, ಹಾಸನ

ಹಾಸನದಲ್ಲಿ 720 ಕೋಟಿ ರೂ. ವೆಚ್ಚದ ಫುಡ್‌ಪಾರ್ಕ್ ಸ್ಥಾಪನೆ ಸಂಬಂಧ ಇತ್ತೀಚೆಗೆ ಬೆಂಗಳೂರಿನಲ್ಲಿ ನಡೆದ ಇನ್ವೆಸ್ಟ್ ಕರ್ನಾಟಕ - 2025 ಜಾಗತಿಕ ಹೂಡಿಕೆದಾರರ ಸಮಾವೇಶದಲ್ಲಿ ಒಡಂಬಡಿಕೆಯಾಗಿದೆ ಎಂದು ರಾಜ್ಯ ವಾಣಿಜ್ಯ ಮತ್ತು ಕೈಗಾರಿಕಾ ಮಹಾಸಂಸ್ಥೆ (ಎಫ್‌ಕೆಸಿಸಿಐ) ರಾಜ್ಯಾಧ್ಯಕ್ಷ ಎಂ.ಜಿ. ಬಾಲಕೃಷ್ಣ ಮಾಹಿತಿ ನೀಡಿದರು.

"ಹಾಸನದಲ್ಲಿ ಪ್ರವಾಸೋದ್ಯಮಕ್ಕೆ ಅತಿ ಹೆಚ್ಚಿನ ಅವಕಾಶವಿದೆ. ಪ್ರವಾಸೋದ್ಯಮ ಬೆಳೆದರೆ ಜಿಲ್ಲೆ ಹಾಗೂ ಆರ್ಥಿಕ ಕ್ಷೇತ್ರದ ಬೆಳವಣಿಗೆ ಸಾಧ್ಯವಾಗಲಿದೆ. ಈ ನಿಟ್ಟಿನಲ್ಲಿ ಜಿಲ್ಲೆಯ ಉದ್ಯಮಿಗಳು ಗಮನಹರಿಸಬೇಕು" ಎಂದು ಎಂ.ಜಿ.ಬಾಲಕೃಷ್ಣ ಅವರು ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.



"ಕಿರು ಹಾಗೂ ಮಧ್ಯಮ ಗಾತ್ರದ ಉದ್ದಿಮೆಗಳನ್ನು ಸ್ಥಾಪಿಸಲು ಹಾಸನ ಸೂಕ್ತ ಸ್ಥಳವಾಗಿದೆ. ಅಗತ್ಯ ರಸ್ತೆ ಹಾಗೂ ಮೂಲ ಸೌಕರ್ಯಕ್ಕೆ ಜಿಲ್ಲಾಡಳಿತ ಹಾಗೂ ರಾಜ್ಯ ಸರಕಾರ ಇನ್ನೂ ಹೆಚ್ಚಿನ ಮಟ್ಟದಲ್ಲಿ ಪ್ರೋತ್ಸಾಹ ನೀಡಿದಲ್ಲಿ ಹಾಸನ ಮುಂದಿನ ದಿನಗಳಲ್ಲಿ ಔದ್ಯೋಗಿಕ ಕೇಂದ್ರವಾಗಿ ಬೆಳೆದು ಸಾವಿರಾರು ಯುವಕರಿಗೆ ಉದ್ಯೋಗ ನೀಡುವ ತಾಣ ಆಗಬಲ್ಲದು" ಎಂದು ಎಂ.ಜಿ. ಬಾಲಕೃಷ್ಣ ಅಭಿಪ್ರಾಯಪಟ್ಟರು.

"ಜಿಲ್ಲಾ ಮಟ್ಟದಲ್ಲಿ ಹೊಸ ತಲೆಮಾರಿನ ಉದ್ದಿಮೆಗಳನ್ನು ಪ್ರಾರಂಭಿಸಲು ಕರ್ನಾಟಕ ರಾಜ್ಯ ಕೈಗಾರಿಕೋದ್ಯಮಿಗಳ ಸಂಘ ನಿರಂತರವಾಗಿ ಶ್ರಮಿಸುತ್ತಿದೆ. ರಾಜ್ಯ ಸರಕಾರ ಹಾಗೂ ಕೇಂದ್ರ ಸರಕಾರದ ಜತೆಗೂ ಈ ಬಗ್ಗೆ ಹಲವು ಸುತ್ತಿನ ಮಾತುಕತೆಗಳು ನಡೆದಿವೆ, ಎಂದು ರಾಜ್ಯ ವಾಣಿಜ್ಯ ಮತ್ತು ಕೈಗಾರಿಕಾ ಮಹಾಸಂಸ್ಥೆ (ಎಫ್‌ಕೆಸಿಸಿಐ) ರಾಜ್ಯಾಧ್ಯಕ್ಷರು ಮಾಹಿತಿ ನೀಡಿದರು.

**ಇನ್ವೆಸ್ಟ್ ಕರ್ನಾಟಕದಲ್ಲಿ ಒಪ್ಪಂದ**


ಹಾಸನ ಕ್ಷೇತ್ರದ ಜೆಡಿಎಸ್ ಶಾಸಕ ಸ್ವರೂಪ್ ಪ್ರಕಾಶ್ ಮಾತನಾಡಿ, "ಹಾಸನದಲ್ಲಿ ಐಟಿ ಪಾರ್ಕ್ ಸ್ಥಾಪನೆಗೆ ಈಗಾಗಲೇ ಯೋಜನೆ ಸಿದ್ಧವಾಗುತ್ತಿದೆ. ಈ ಕುರಿತು ಕೇಂದ್ರ ಬೃಹತ್ ಕೈಗಾರಿಕೆ ಹಾಗೂ ಉಕ್ಕು ಸಚಿವ ಎಚ್‌ಡಿ ಕುಮಾರಸ್ವಾಮಿ ಸೂಕ್ತ ಸಹಕಾರ ನೀಡುವ ಭರವಸೆಯನ್ನು ಈಗಾಗಲೇ ನೀಡಿದ್ದಾರೆ, ಎಂದು ಇದೇ ಸಂದರ್ಭದಲ್ಲಿ ವಿವರ ನೀಡಿದರು.

## ಬಿಎಂಟಿಸಿ ಪ್ರಯಾಣಿಕರ ಸಂಖ್ಯೆ ಏರಿಕೆ

• ಉದಯವಾಹಿನಿ, ಬೆಂಗಳೂರು೦

ಬೆಂಗಳೂರು ನಮ್ಮ ಮೆಟ್ರೋ ದರ ಏರಿಕೆ ಆಗಿದ್ದರಿಂದ ಜನರು ರೋಸಿಹೋಗಿದ್ದಾರೆ. ಇದರ ಪರಿಣಾಮವೆಂಬಂತೆ ಪ್ರಯಾಣಿಕರ ಸಂಖ್ಯೆಯಲ್ಲಿ ಇಳಿಕೆ ಆಗಿದೆ. ಶೇಕಡಾ 90ರಷ್ಟು ದರ ಹೆಚ್ಚಳ ಹಿನ್ನೆಲೆಯಲ್ಲಿ ಸಾರ್ವಜನಿಕರು ಸ್ವಂತ ವಾಹನ, ಸಾರ್ವಜನಿಕ ಸಾರಿಗೆ ಬಸ್ ಬಳಕೆ ಅವಲಂಬಿಸಿದ್ದಾರೆ.

ಸದ್ಯ ನಗರದಲ್ಲಿ ಮೆಟ್ರೋ ದರ ಏರಿಕೆ ಬಳಿಕ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ ಬಸ್‌ಗಳ ಪ್ರಯಾಣಿಕರ ಸಂಖ್ಯೆ ನಿತ್ಯ ಸರಾಸರಿ 01 ಲಕ್ಷದಷ್ಟು ಏರಿಕೆ ಆಗಿದೆ.




# ಮಂಡ್ಯ, ಮೈಸೂರು, ರಾಮನಗರ ಬೆಂಗಳೂರು ಜನರಿಗೆ ಕುಡಿಯುವ ನೀರಿಗಿಲ್ಲ ತೊಂದರೆ


**ಈ ಬಾರಿ ಜಲಾಶಯದಲ್ಲಿ 38.619 ಟಿಎಂಸಿ ನೀರು ಸಂಗ್ರಹವಾಗಿದೆ. ಇದರಲ್ಲಿ 30.240 ಟಿಎಂಸಿ ಅಡಿ ಕೃಷಿ ಬಳಕೆಗೆ ಲಭ್ಯವಿದೆ.**

• ಉದಯವಾಹಿನಿ, ಬೆಂಗಳೂರು

ನಾಲ್ಕಾರು ಜಿಲ್ಲೆಗಳ ಜೀವನಾಡಿ ಕೆಆರ್‌ಎಸ್ ಜಲಾಶಯದಲ್ಲಿ ಫೆಬ್ರವರಿಯಲ್ಲೂ 38.619 ಟಿಎಂಸಿ ಅಡಿ ನೀರು ಸಂಗ್ರಹವಾಗಿದೆ. ಇದೀಗ ಈ ವರ್ಷ ಬೇಸಿಗೆಯಲ್ಲಿ ಜನರು ಕುಡಿಯುವ ನೀರಿನ ಸಮಸ್ಯೆಯಿಲ್ಲದೆ ನಿರಾತಂಕವಾಗಿರಬಹುದು. ಮಂಡ್ಯ ಮಾತ್ರವಲ್ಲ ಮೈಸೂರು, ಬೆಂಗಳೂರು ಜನರಿಗೂ ಸಮರ್ಪಕವಾಗಿ ಕುಡಿಯುವ ನೀರು ದೊರೆಯಲಿದೆ.

ಈ ವರ್ಷ ಜನವರಿ ಮಾಸಾಂತ್ಯದಲ್ಲೇ ಬಿಸಿಲಿನ ಬೇಗೆ ಹೆಚ್ಚಾಗಿದೆ. ಇದು ಫೆಬ್ರವರಿಯಲ್ಲಿಇನ್ನಷ್ಟು ಸುಡುತ್ತಿದ್ದು, ಸೋಮವಾರ(ಫೆ.17) ಕನಿಷ್ಠ 17 ಡಿಗ್ರಿ, ಗರಿಷ್ಠ 33 ಡಿಗ್ರಿ ಸೆಲ್ಸಿಯಷ್ ಉಷ್ಣಂಶ ದಾಖಲಾಗಿದೆ. ಇದರಿಂದ ಬೇಸಿಗೆ ಆರಂಭವಾಗುವ ಹೊತ್ತಿಗೆ ಕುಡಿಯುವ ನೀರಿನ ಸಮಸ್ಯೆ ಎದುರಾಗುವುದೇ ಎನ್ನುವ ಅನುಮಾನ ಶುರುವಾಗಿದೆ.

ಪ್ರತಿ ಬಾರಿ ಬೇಸಿಗೆ ಸಮಯದಲ್ಲಿ ಕೆಆರ್‌ಎಸ್ ಜಲಾಶಯದ ನೀರಿನ ಪ್ರಮಾಣ ಕಡಿಮೆಯಾಗುತ್ತಿದ್ದ ಹಿನ್ನೆಲೆಯಲ್ಲಿ ಕುಡಿಯುವ ನೀರಿಗೆ ಸಮಸ್ಯೆಯಾಗುತ್ತಿತ್ತು. ಆದರೆ, ಈ ಬಾರಿ ಜಲಾಶಯದಲ್ಲಿ 38.619 ಟಿಎಂಸಿ ನೀರು ಸಂಗ್ರಹವಾಗಿದೆ. ಇದರಲ್ಲಿ 30.240 ಟಿಎಂಸಿ ಅಡಿ ಕೃಷಿ ಬಳಕೆಗೆ ಲಭ್ಯವಿದೆ. ಸದ್ಯಕ್ಕೆ ಬೆಳೆದು ನಿಂತಿರುವ ಬೆಳೆಗಳ ರಕ್ಷಣೆಗಾಗಿ ನಾಲೆಗಳಲ್ಲಿ ನೀರು ಹರಿಸಲಾಗುತ್ತಿದೆ. ಇದರಿಂದ ಬೇಸಿಗೆ ಬೆಳೆಗೂ ನೀರು ಸಿಗುತ್ತಿದೆ.



**ಕೆಆರ್‌ಎಸ್ ಜಲಾಶಯದಲ್ಲಿ 38 ಟಿಎಂಸಿ ಅಡಿ ನೀರು ಸಂಗ್ರಹವಾಗಿದೆ. ಹೀಗಾಗಿ ಬೆಳೆದು ನಿಂತಿರುವ ಬೆಳೆಗಳ ರಕ್ಷಣೆ ಮತ್ತು ಕುಡಿಯುವ ನೀರಿಗೆ ಯಾವುದೇ ಸಮಸ್ಯೆಯಾಗದು. ಅಗತ್ಯ ಪ್ರಮಾಣದಲ್ಲಿ ಕುಡಿಯಲು ನೀರು ಸಿಗಲಿದೆ**

**-ಕೆ.ರಘುರಾಮ್, ಅಧೀಕ್ಷಕ ಎಂಜಿನಿಯರ್**

ಗರಿಷ್ಠ 124.80 ಅಡಿ ಎತ್ತರದ ಜಲಾಶಯದ ನೀರಿನ ಮಟ್ಟ ಪ್ರಸ್ತುತ 116.36 ಅಡಿಗಳಷ್ಟು ದಾಖಲಾಗಿದೆ. ಹೀಗಾಗಿ ಗರಿಷ್ಟ ಪ್ರಮಾಣದ ನೀರು ಈಗಲೂ ಜಲಾಶಯದಲ್ಲಿಸಂಗ್ರಹವಾಗಿರುವುದರಿಂದ ಕುಡಿಯುವ ನೀರಿಗೆ ಯಾವುದೇ ಆತಂಕ ಪಡುವ ಅಗತ್ಯವಿಲ್ಲ. ಈ ವರ್ಷ ಬೇಸಿಗೆಯಲ್ಲಿ ಕುಡಿಯುವ ನೀರಿಗೆ ಅಷ್ಟೇನೂ ಸಮಸ್ಯೆಯಾಗಿದೆ.

ಮಂಡ್ಯ, ಮೈಸೂರು, ರಾಮನಗರ ಹಾಗೂ ಬೆಂಗಳೂರು ಜಿಲ್ಲೆಗಳ ಜನರಿಗೆ ಕುಡಿಯುವ ನೀರಿಗಾಗಿ ಕೆಆರ್‌ಎಸ್ ಜಲಾಶಯದಿಂದ ಪ್ರತಿ ತಿಂಗಳು 1.920 ಟಿಎಂಸಿ ಅಡಿ ನೀರನ್ನು ಪಡೆಯಲಾಗುತ್ತಿದೆ. ಬೇಸಿಗೆಯಲ್ಲಿಈ ಪ್ರಮಾಣ 2 ಟಿಎಂಸಿ ಅಡಿ ದಾಟಬಹುದು. ಆದರೆ, ಜಲಾಶಯದಲ್ಲಿ 38.619 ಟಿಎಂಸಿ ಅಡಿ ಇರುವುದರಿಂದ ಬೆಳೆದು ನಿಂತಿರುವ ಬೆಳೆಗಳ ರಕ್ಷಣೆಗೂ ಅಗತ್ಯ ಪ್ರಮಾಣದಲ್ಲಿ ನೀರು ಹರಿಸಿ, ಕುಡಿಯುವ ಸಲುವಾಗಿಯೂ ನೀರು ಪೂರೈಸಬಹುದಾಗಿದೆ.

**ದಾಖಲೆ ಅವಧಿವರೆಗೆ ನೀರು ಸಂಗ್ರಹ**

**2024-25ನೇ ಸಾಲಿನಲ್ಲಿ ಕೆಆರ್‌ಎಸ್ ಜಲಾಶಯದಲ್ಲಿ ದಾಖಲೆ ಅವಧಿವರೆಗೆ ನೀರು ಸಂಗ್ರಹವಾಗಿತ್ತು. 2024ರ ಜುಲೈ 25ರಂದು ಸಂಪೂರ್ಣ ಕನ್ನಂಬಾಡಿ ಕಟ್ಟೆಯು ಸಂಪೂರ್ಣ ಭರ್ತಿಯಾಗಿತ್ತು. ಆ ಬಳಿಕ ಡಿ.25ರವರೆಗೆ(154 ದಿನಗಳು) ಜಲಾಶಯದ ನೀರು ಸಂಗ್ರಹ ಪ್ರಮಾಣವನ್ನು ಗರಿಷ್ಠ ಮಟ್ಟದಲ್ಲಿ ಕಾಯ್ದುಕೊಳ್ಳಲಾಗಿತ್ತು. ಇದು 30 ವರ್ಷಗಳಲ್ಲೇ ಮೊದಲು.**

### ಕೃಷಿ ಬಳಕೆಗೆ 30 ಟಿಎಂಸಿ ಅಡಿ ಲಭ್ಯ

**ಕೆಆರ್‌ಎಸ್ ಜಲಾಶಯದಲ್ಲಿ 38.619 ಟಿಎಂಸಿ ಅಡಿ ನೀರು ಸಂಗ್ರಹವಾಗಿದ್ದು, ಇದರಲ್ಲಿ30.240 ಅಡಿ ನೀರು ಕೃಷಿ ಬಳಕೆಗೆ ಲಭ್ಯವಿದೆ. ಉಳಿಕೆ 8.370 ಟಿಎಂಸಿ ಅಡಿಯನ್ನು ಡೆಡ್‌ಸ್ಟೋರೇಜ್ ಎಂದು ಪರಿಗಣಿಸಲಾಗುತ್ತಿದೆ. ಇದರಲ್ಲಿ3.979 ಟಿಎಂಸಿ ಅಡಿ ಕುಡಿಯುವ ನೀರಿಗೆ ಮೀಸಲು. ಬಾಕಿ 4.400 ಟಿಎಂಸಿ ಅಡಿ ನೀರು ಯಾವುದಕ್ಕೂ ಬಳಕೆಗೆ ಬಾರದ ಸಂಪೂರ್ಣ ಡೆಡ್‌ಸ್ಟೋರೇಜ್.**

ಪ್ರಸ್ತುತ ಸೋಮವಾರ ಬೆಳಗ್ಗೆ 170ಕ್ಯೂಸೆಕ್ ಒಳ ಹರಿವು, 4342 ಕ್ಯೂಸೆಕ್ ಹೊರ ಹರಿವಿನೊಂದಿಗೆ ಜಲಾಶಯದ ನೀರಿನ ಮಟ್ಟವು 116.36 ಅಡಿ ದಾಖಲಾಗಿತ್ತು. ಕಳೆದ ವರ್ಷ ಇದೇ ಅವಧಿಯಲ್ಲಿ ಜಲಾಶಯದ ನೀರಿನ ಮಟ್ಟವು 91 ಅಡಿಗೆ ಕುಸಿದಿತ್ತು. ಬೆಳೆಗಳ ರಕ್ಷಣೆಗೂ ಜಲಾಶಯದಿಂದ ನಾಲೆಗಳಿಗೆ ನೀರು ಬಿಟ್ಟಿರಲಿಲ್ಲ.

**ಕಟ್ಟು ನೀರು ಪದ್ಧತಿ:** ಬೆಳೆದು ನಿಂತಿರುವ ಕಬ್ಬು ಬೆಳೆ ರಕ್ಷಣೆ ಮತ್ತು ಅರೆ ಖುಷ್ಕಿ ಬೆಳೆಗಳಿಗಾಗಿ ಪ್ರಸ್ತುತ ಕಟ್ಟು ನೀರು ಪದ್ಧತಿಯಲ್ಲಿ ಬೆಳೆಗಳಿಗೆ ನೀರು ಪೂರೈಸಲಾಗುತ್ತಿದೆ. ಈಗಾಗಲೇ ಒಂದು ಕಟ್ಟು ಪೂರ್ಣಗೊಂಡಿದ್ದು, 2ನೇ ಕಟ್ಟಿನಲ್ಲಿ ನೀರು ಕೊಡಲಾಗುತ್ತಿದೆ. ಇನ್ನೂ ಮೂರು ಕಟ್ಟುಗಳಲ್ಲಿ ನೀರು ಕೊಡಲಾಗುತ್ತದೆ. ಹೀಗಾಗಿ ಪ್ರಸ್ತುತ ಜಲಾಶಯದಲ್ಲಿಸಂಗ್ರಹವಾಗಿರುವ ನೀರಿನಲ್ಲಿ ಬಾಕಿ ಮೂರು ಕಟ್ಟುಗಳಿಗೂ ಅಗತ್ಯ ಪ್ರಮಾಣದಲ್ಲಿನೀರನ್ನು ಪೂರೈಸಬಹುದಾಗಿದೆ.

**ಈ ದಿನದ ದರ** ಪೆಟ್ರೋಲ್: 103.50 ₹/L | ಡೀಸೆಲ್ : 90.03 ₹/L | ಬಂಗಾರ: ₹8,695 /Gram24ct ₹7,970/Gram22ct | ಬೆಳ್ಳಿ: ₹100.50/Gram



## ಸಿದ್ಧಸೂಕ್ತಿ

ಡಾ ಆರೂಢಭಾರತೀ ಸ್ವಾಮೀಜಿ
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

## ಬ್ರಾಹ್ಮೀಯಂ ಕ್ರಿಯತೇ ತನುಃ

ಮನುಸ್ಮೃತಿಯ ಎರಡನೇ ಅಧ್ಯಾಯದ ಶ್ಲೋಕ. ಮನುಷ್ಯನನ್ನು ಸುಸಂಸ್ಕೃತನನ್ನಾಗಿಸುವ ವಿಧಾನ ಇಲ್ಲಿದೆ. ಉತ್ತಮ ಸಂಸ್ಕಾರ ಸುಮ್ಮನೇ ಬಾರದು. ಬಹಳ ಕಷ್ಟಪಟ್ಟು ಅದನ್ನು ನೀಡಬೇಕಾಗುತ್ತದೆ. ಇದು ಎಲ್ಲ ಹಿರಿಯರು ಎಲ್ಲ ಕಿರಿಯರಿಗೆ ನೀಡಲೇಬೇಕಾದ ಬಹು ಮುಖ್ಯ ತರಬೇತಿ. ನಾವು ಕೊಡುವ ತರಬೇತಿಗಿಂತ ಹೊರಗಿನವರು ಕೊಡುವ ತರಬೇತಿ ಪ್ರಬಲವಾದರೆ ನಮ್ಮ ತರಬೇತಿ ಉಲ್ಟಾ. ಬುದ್ಧಿಮಾತಿಗೆ ಆತ್ಮಹತ್ಯೆಯಂತೆ. ಹೊರಗಿನ ಅನಪೇಕ್ಷಿತ ಸಂಸ್ಕಾರ ಬಡಿಯದಂತೆ, ಅಪೇಕ್ಷಿತ ಉತ್ತಮ ಸಂಸ್ಕಾರ ಅಂಟುವಂತೆ ತರಬೇತಿ ಇರಲಿ. ಸ್ವಾಧ್ಯಾಯ = ಸ್ವಂತ ಆಸಕ್ತಿಯಿಂದ ಓದುವಿಕೆ ಬೇಕು. ಇನ್ನೊಬ್ಬರ ಒತ್ತಾಯಕ್ಕೆ ಮಣಿದು ಓದುವುದು ಆರಂಭಿಕ. ಯಾವಾಗಲೂ ಇದೇ ಮುಂದುವರಿದರೆ ಸರಿಯಾದ ಪ್ರಯೋಜನ ಸಿಗುವುದಿಲ್ಲ. ಉತ್ತಮ ಗ್ರಂಥಗಳನ್ನು ಸ್ವಯಂ ಆಸಕ್ತಿಯಿಂದ ಓದಿದರೆ ಉತ್ತಮ ಅಭಿಪ್ರಾಯಗಳು ಮನಸ್ಸಿನ ಮೇಲೆ ಪರಿಣಾಮ ಬೀರಿ ಉತ್ತಮ ಸಂಸ್ಕಾರಗಳನ್ನು ಉಂಟುಮಾಡುತ್ತವೆ. ವ್ರತ = ನಿಯತ ನಿರಂತರವಾದ ನಿಯಮ. ಮನ ಬಂದಂತೆ ವರ್ತಿಸದೇ, ಇರಬೇಕಾದ ಜೀವನ ವಿಧಾನಕ್ಕಾಗಿ ಕಠಿಣ ನಿಯಮಗಳನ್ನು ನಿರಂತರ ಪಾಲಿಸುವುದು. ಹೋಮ ಯಜ್ಞ ಮಹಾಯಜ್ಞ = ವೇದಗಳಲ್ಲಿ ಅನೇಕ ರೀತಿಯ ಅಗ್ನಿಕಾರ್ಯಗಳನ್ನು ಹೇಳಿದೆ. ಪ್ರತಿ ದಿನ ಬೆಳಿಗ್ಗೆ ಮಧ್ಯಾಹ್ನ ಸಂಜೆ ಮಾಡುವಂಥ, ವಿಶೇಷ ಸಂದರ್ಭಗಳಲ್ಲಿ ಮಾಡುವಂಥ ಸಣ್ಣ ಅತಿ ಸಣ್ಣ ದೊಡ್ಡ ಅತಿ ದೊಡ್ಡ ಹೋಮ ಹವನಾದಿಗಳನ್ನು ಹೇಳಿದೆ. ಪುಣ್ಯ ಸ್ವರ್ಗ ಸಂತಾನ ಜಯ ರಾಜ್ಯಪ್ರಾಪ್ತಿ ಮುಂತಾದ ಫಲ ಹೇಳಿದೆ. ಭಗವಂತನಿಂದ ಪಡೆದಿದ್ದಕ್ಕಾಗಿ ಭಗವಂತನಿಗೆ ತೋರುವ ಕೃತಜ್ಞತೆ, ಬದುಕ ಕೊಟ್ಟ ಭಗವಂತನಲ್ಲಿ ಬೇಕಾದ್ದನ್ನು ಬೇಡುವುದು ಯಜ್ಞದ ಉದ್ದೇಶ. ದಾನ ಧರ್ಮಗಳೂ ಯಜ್ಞವೇ. ಗೃಹಸ್ಥರಾಗಿ ಸಂತಾನ ಪಡೆಯುವುದು. ಇವುಗಳಿಂದ ವ್ಯಕ್ತಿ ಶುದ್ಧ ಸುಸಂಸ್ಕೃತನಾಗುತ್ತಾನೆ

## ರಾಜ್ಯಕ್ಕಾಗಿರುವ ನೀರಾವರಿ ಅನ್ಯಾಯದ ಬಗ್ಗೆ ಪ್ರಸ್ತಾವ: ಡಿ.ಕೆ ಶಿವಕುಮಾರ್

• ಉದಯವಾಹಿನಿ, ಬೆಂಗಳೂರು,

**ರಾಜ್ಯಗಳ ನೀರಾವರಿ ಸಚಿವರ ಸಭೆ**

ರಾಜಸ್ತಾನದಲ್ಲಿ ಎಲ್ಲಾ ರಾಜ್ಯಗಳ ನೀರಾವರಿ ಸಚಿವರ ಸಭೆಯನ್ನು ಕೇಂದ್ರ ಸರ್ಕಾರ ಕರೆದಿದ್ದು, ಈ ಸಭೆಯಲ್ಲಿ ನಮ್ಮ ರಾಜ್ಯಕ್ಕೆ ನೀರಾವರಿ ವಿಚಾರದಲ್ಲಿ ಆಗಿರುವ ಅನ್ಯಾಯದ ಬಗ್ಗೆ ಪ್ರಸ್ತಾಪ ಮಾಡುತ್ತೇನೆ ಎಂದು ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಹೇಳಿದರು.

ರಾಜಸ್ಥಾನಕ್ಕೆ ಪ್ರಯಾಣ ಬೆಳೆಸುವ ಮುನ್ನ ರಾಜ್ಯದ ಜಲಸಂಪನ್ಮೂಲ ಸಚಿವರೂ ಆಗಿರುವ ಉಪಮುಖ್ಯಮಂತ್ರಿ ಡಿಕೆಶಿ ಬೆಳಿಗ್ಗೆ ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ,''ರಾಜಸ್ಥಾನದ ಉದಯಪುರದಲ್ಲಿ ನಡೆಯಲಿರುವ ದೇಶದ ಎಲ್ಲಾ ನೀರಾವರಿ ಸಚಿವರುಗಳ ಸಭೆಯಲ್ಲಿ ಮೇಕೆದಾಟು, ಮಹದಾಯಿ, ನವಲಿ ಹಾಗೂ ಅಣೆಕಟ್ಟು ದುರಸ್ತಿ ಸೇರಿದಂತೆ ರಾಜ್ಯದ ಪ್ರಮುಖ ನೀರಾವರಿ ಯೋಜನೆಗಳ ಬಗ್ಗೆ ಚರ್ಚೆ ಮಾಡಲಾಗುವುದು'' ಎಂದರು.

''ಮೇಕೆದಾಟು, ಮಹದಾಯಿ ಯೋಜನೆ ಅನುಮತಿ, ಭದ್ರಾ ಮೇಲ್ದಂಡೆ ಯೋಜನೆಯಲ್ಲಿ ಆಗಿರುವ ಅನ್ಯಾಯಗಳ ಬಗ್ಗೆ ಚರ್ಚೆ ಮಾಡುತ್ತೇನೆ. ಇದರ ಜತೆಗೆ ಈ ವರ್ಷ ನಾವು ಅನೇಕ ಇತರೆ ನೀರಾವರಿ ಯೋಜನೆಗಳನ್ನು ತಯಾರು ಮಾಡಿ ಕೇಂದ್ರಕ್ಕೆ ಕಳುಹಿಸಿದ್ದೇವೆ'' ಎಂದು ಹೇಳಿದರು.

''ತುಂಗ ಭದ್ರಾ ಅಣೆಕಟ್ಟು ಕ್ರೆಸ್ಟ್ ಗೇಟ್ ದುರಸ್ತಿ ಬಳಿಕ ರಾಜ್ಯದ ಎಲ್ಲಾ ಅಣೆಕಟ್ಟುಗಳ ಸುರಕ್ಷತೆಗಾಗಿ ಅವುಗಳ ರಿಪೇರಿಗೆ ಯೋಜನೆಯನ್ನು ಸಿದ್ಧಪಡಿಸಿ ಕೇಂದ್ರಕ್ಕೆ ಪ್ರಸ್ತಾವನೆ ಸಲ್ಲಿಸಿದ್ದೇವೆ. ಇನ್ನು ಈ ಜಲಾಶಯಕ್ಕೆ ನವಲಿಯಲ್ಲಿ ಸಮಾನಾಂತರ ಜಲಾಶಯ ನಿರ್ಮಾಣ ಮಾಡುವ ವಿಚಾರವಾಗಿ ತೆಲಂಗಾಣ ಆಂಧ್ರ ಪ್ರದೇಶ ರಾಜ್ಯಗಳ ಸಚಿವರ ಜೊತೆ ಚರ್ಚೆ ಮಾಡಲಾಗುವುದು. ಈ ವಿಚಾರವಾಗಿ ಪ್ರತ್ಯೇಕ ಸಭೆ ಮಾಡಲು ಈಗಾಗಲೇ ಎರಡೂ ರಾಜ್ಯಗಳ ಮುಖ್ಯಮಂತ್ರಿಗಳಿಗೆ ಪತ್ರ ಬರೆದಿದ್ದೇನೆ'' ಎಂದರು.



### ಜನರಿಗೆ ಸರ್ಕಾರದ ಮೇಲೆ ನಂಬಿಕೆ ಇದೆ

**ಅನ್ನಭಾಗ್ಯ ಹಾಗೂ ಗೃಹಲಕ್ಷ್ಮಿ ಹಣ ಫಲಾನುಭವಿಗಳಿಗೆ ತಲುಪಿಲ್ಲ, ಸರ್ಕಾರದ ಬೊಕ್ಕಸ ಖಾಲಿಯಾಗಿದೆ ಎಂಬ ಬಿಜೆಪಿ ಟೀಕೆ ಬಗ್ಗೆ ಕೇಳಿದಾಗ, ಇದೆಲ್ಲವೂ ಸುಳ್ಳು, ಸರ್ಕಾರಕ್ಕೆ ಸಂಪನ್ಮೂಲ ಕ್ರೂಢೀಕರಣ ಒಂದೇ ದಿನಕ್ಕೆ ಆಗುವುದಿಲ್ಲ. ಹಂತ ಹಂತವಾಗಿ ಬರುತ್ತದೆ. ಆರ್ಥಿಕ ವರ್ಷಾಂತ್ಯದ ವೇಳೆಗೆ ಎಲ್ಲವೂ ಸರಿಯಾಗುತ್ತದೆ.**

ಸರ್ಕಾರಕ್ಕೆ ಹಣದ ಸಮಸ್ಯೆ ಇಲ್ಲ. ಆರ್ಥಿಕವಾಗಿ ನಾವು ಬಲಿಷ್ಠವಾಗಿದ್ದೇವೆ. ಅನ್ನಭಾಗ್ಯದಲ್ಲಿ ಜನರಿಗೆ ತಲುಪಬೇಕಾದ ಅಕ್ಕಿ ತಲುಪುತ್ತಿದೆ. ಮಾಧ್ಯಮಗಳು, ವಿರೋಧ ಪಕ್ಷಗಳ ಹೊರತಾಗಿ, ಈ ವಿಚಾರದಲ್ಲಿ ಜನಸಾಮಾನ್ಯರಿಗೆ ಅಸಮಾಧಾನ ಇಲ್ಲ. ಜನರು ಈ ವಿಚಾರದಲ್ಲಿ ಸಂತೋಷವಾಗಿದ್ದಾರೆ. ಜನರಿಗೆ ನಮ್ಮ ಮೇಲೆ ನಂಬಿಕೆ ಇದೆ. ಎರಡು, ಮೂರು ತಿಂಗಳು ಹಣ ಬಾಕಿ ಇದ್ದು, ಈ ತಿಂಗಳು ಬಿಡುಗಡೆಯಾಗಲಿದೆ'' ಎಂದು ತಿಳಿಸಿದರು.

## ಅನಧಿಕೃತ ಬಡಾವಣೆಗಳಿಗೆ ಕಡಿವಾಣ






• ಉದಯವಾಹಿನಿ, ಬೆಂಗಳೂರು,

ಇನ್ನು ಮುಂದೆ ಅನಧಿಕೃತ ಬಡಾವಣೆಗಳಿಗೆ ಅವಕಾಶವಿಲ್ಲದಂತೆ ಬಿ-ಖಾತಾ ನೀಡಲಾಗುವುದು. ಮುಂದಿನ 3 ತಿಂಗಳ ಒಳಗಾಗಿ ಅಭಿಯಾನದ ಮೂಲಕ ಖಾತಾ ವಿತರಣೆ ಕಾರ್ಯವನ್ನು ಪೂರ್ಣಗೊಳಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚನೆ ನೀಡಿದ್ದಾರೆ.

ರಾಜ್ಯಾದ್ಯಂತ ಮಹಾನಗರ ಪಾಲಿಕೆಗಳು, ನಗರ ಸಭೆ, ಪಟ್ಟಣ ಪಂಚಾಯಿತಿಯ ಆಯುಕ್ತರು, ಪೌರಾಯುಕ್ತರು, ಮುಖ್ಯಾಧಿಕಾರಿಗಳು, ಜಿಲ್ಲಾಧಿಕಾರಿಗಳು, ಯೋಜನಾ ನಿರ್ದೇಶಕರ ಜೊತೆ ವಿಡಿಯೋ ಕಾನ್ಸರೆನ್ಸ್ ನಡೆಸಿದ ಸಿದ್ದರಾಮಯ್ಯನವರು ನಗರ, ಪಟ್ಟಣ, ಪಾಲಿಕೆ ಮತ್ತು ಹಳ್ಳಿಗಳಲ್ಲಿರುವ ಅನಧಿಕೃತ ಬಡಾವಣೆಗಳಿಗೆ ಅಂತ್ಯ ಹಾಡುವುದಾಗಿ ತಿಳಿಸಿದರು. ಕಾಯ್ದೆ ಮೂಲಕ ಅನಧಿಕೃತ ಬಡಾವಣೆಗಳಿಗೆ ಅಂತ್ಯ ಹಾಡಿದ್ದೇವೆ. ಇದನ್ನು ಅಧಿಕಾರಿಗಳು ಸ್ಪಷ್ಟವಾಗಿ ಅರ್ಥ ಮಾಡಿಕೊಂಡು ಕೆಲಸ ಮಾಡಬೇಕು. ಅನಧಿಕೃತ ಬಡಾವಣೆಗಳಿಂದ ಕಂದಾಯ ಬರುತ್ತಿಲ್ಲ, ಪರಿಣಾಮ ಜನರಿಗೆ ನಾಗರಿಕ ಸವಲತ್ತುಗಳೂ ಸಿಗುತ್ತಿಲ್ಲ, ಸ್ಥಳೀಯ ಸಂಸ್ಥೆಗಳಿಗೆ ಆದಾಯವೂ ಬಂದ್ ಆಗಿದೆ. ಇವೆಲ್ಲಾ ಅನಾನುಕೂಲಗಳಿಗೂ ಅಂತ್ಯ ಹಾಡಬೇಕಿದೆ ಎಂದು ಹೇಳಿದ್ದಾರೆ.

**ಎಲ್ಲಾ ಅಧಿಕಾರಿಗಳಿಗೂ 3 ತಿಂಗಳು ಮಾತ್ರ ಸಮಯ ನೀಡಲಾಗುವುದು. ಅಷ್ಟರೊಳಗೆ ಅಭಿಯಾನ ನಡೆಸಿ ಖಾತಾ ವಿತರಣೆಯನ್ನು ಪೂರ್ಣಗೊಳಿಸಬೇಕು. ಇದರಲ್ಲಿ ಯಾವುದೇ ರಾಜಿ ಇಲ್ಲ. ಒಂದು ವೇಳೆ ಅಧಿಕಾರಿಗಳು ರಾಜಿ ಮಾಡಿಕೊಂಡರೂ ಸಹಿಸುವುದಿಲ್ಲ ಎಂದು ಸ್ಪಷ್ಟವಾಗಿ ಎಚ್ಚರಿಕೆ ನೀಡಿದರು.**

ಕಂದಾಯ ಕಟ್ಟದೇ ಇರುವುದರಿಂದ ಸಮಸ್ಯೆಗಳು ಹೆಚ್ಚಾಗುತ್ತಿವೆ. ಒಂದು ಬಾರಿ, ಇದೊಂದು ಬಾರಿ ಬಿ ಖಾತಾ ಕೊಟ್ಟು ಅನಧಿಕೃತ ಬಡಾವಣೆಗಳಿಗೆ ಅಂತ್ಯ ಹಾಡಲಾಗುವುದು ಎಂದ ಮುಖ್ಯಮಂತ್ರಿಯವರು ಇದು ಒಂದು ಬಾರಿ ಮಾತ್ರ ಅವಕಾಶ ಕಲ್ಪಿಸುವುದಾಗಿ ಸ್ಪಷ್ಟವಾಗಿ ಉಲ್ಲೇಖಿಸಿದರು.

ಅನಧಿಕೃತ ಬಡಾವಣೆಗಳು ಮತ್ತೆ ತಲೆ ಎತ್ತಿದರೆ ಜಿಲ್ಲಾಧಿಕಾರಿ, ಮುಖ್ಯ ಅಧಿಕಾರಿ, ನಗರ ಯೋಜನಾ ಅಧಿಕಾರಿಗಳನ್ನು ಜವಾಬ್ದಾರಿ ಮಾಡಲಾಗುವುದು ಮತ್ತು ಮುಲಾಜಿಲ್ಲದೆ ಕ್ರಮ ಕೈಗೊಳ್ಳುವುದಾಗಿ ಆದೇಶ ನೀಡಿದರು. ಮಧ್ಯವರ್ತಿಗಳಿಗೆ, ಬ್ರೋಕರ್‌ಗಳಿಗೆ ತಕ್ಷಣವೇ ಗೇಟ್ ಪಾಸ್ ನೀಡಬೇಕು. ಕಾಯ್ದೆಯ ದೂರದೃಷ್ಟಿಯನ್ನು ಎಲ್ಲಾ ಅಧಿಕಾರಿಗಳು ಸ್ಪಷ್ಟವಾಗಿ, ಖಚಿತವಾಗಿ ಅರ್ಥ ಮಾಡಿಕೊಳ್ಳಬೇಕು.

ರಾಜ್ಯದಲ್ಲಿ ಇನ್ನು ಮುಂದೆ ಎಲ್ಲಿಯೂ ಅನಧಿಕೃತ ಬಡಾವಣೆಗಳು, ರೆವಿನ್ಯೂ ಬಡಾವಣೆಗಳು ತಲೆ ಎತ್ತಬಾರದು ಎಂದು ತಾಕೀತು ಮಾಡಿದರು.

ಅನಧಿಕೃತ, ರೆವಿನ್ಯೂ ಬಡಾವಣೆಗಳಲ್ಲಿ ಸೈಟು, ಮನೆ ಕಟ್ಟಿರುವವರಿಗೆ ತೊಂದರೆ ಆಗಬಾರದು. ಒಟ್ಟಾರೆಯಾಗಿ ಬಡವರು, ಮಧ್ಯಮ ವರ್ಗದವರಿಗೆ ಅನುಕೂಲ ಮಾಡಿಕೊಡಲು ಏಕಕಾಲಿಕ ಪರಿಹಾರ ನೀಡಲಾಗುತ್ತಿದೆ. ಗೊಂದಲಗಳಿಗೆ ಅವಕಾಶ ಮಾಡಿಕೊಡದಂತೆ ಇಂದಿನಿಂದಲೇ ಬಿ ಖಾತಾ ಅಭಿಯಾನವನ್ನು ಆರಂಭ ಮಾಡಿ 3 ತಿಂಗಳೊಳಗಾಗಿ ಪೂರ್ಣಗೊಳಿಸಿ ಎಂದು ಮುಖ್ಯಮಂತ್ರಿ ಆದೇಶ ಹೊರಡಿಸಿದ್ದಾರೆ. ಕಂದಾಯ ಸಚಿವ ಕೃಷ್ಣ ಭೈರೇಗೌಡ, ನಗರಾಭಿವೃದ್ಧಿ ಸಚಿವ ಭೈರತಿ ಸುರೇಶ್, ಅರಣ್ಯ ಮತ್ತು ಪರಿಸರ ಸಚಿವ ಈಶ್ವರ ಖಂಡ್ರೆ, ಪೌರಾಡಳಿತ ಸಚಿವ ರಹೀಂಖಾನ್, ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಮತ್ತಿತರರು ಉಪಸ್ಥಿತರಿದ್ದರು.

## ಇದೇ ತಿಂಗಳ 20ರೊಳಗೆ ಬಿಜೆಪಿಯೊಳಗಿನ ಸಮಸ್ಯೆಗಳು ಪರಿಹಾರವಾಗಲಿವೆ

• ಉದಯವಾಹಿನಿ, ಬೆಂಗಳೂರು

ರಾಜ್ಯ ಬಿಜೆಪಿಯಲ್ಲಿ ಉಂಟಾಗಿರುವ ಸಮಸ್ಯೆ ಇದೇ ತಿಂಗಳ 20ರೊಳಗೆ ಬಗೆಹರಿಯಲಿದೆ ಎಂಬ ವಿಶ್ವಾಸ ವ್ಯಕ್ತಪಡಿಸಿರುವ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ಎಲ್ಲಾ ಮಾಹಿತಿಯನ್ನು ನೀಡಲಿದ್ದೇನೆ ಎನ್ನುವ ಮೂಲಕ ಕುತೂಹಲ ಕೆರಳಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಫೆ.20ರೊಳಗೆ ಎಲ್ಲ ಸರಿಯಾಗಲಿದೆ ಎಂಬ ಸ್ಪಷ್ಟನೆ ನೀಡಿ, ಎಲ್ಲಾ ಪ್ರಶ್ನೆಗಳಿಗೂ ಉತ್ತರ ಕೊಡುತ್ತೇನೆ ಎಂದು ತಿಳಿಸಿದರು. ರಾಜಕೀಯ ವಿಚಾರವಾಗಿಯೂ ಮಾತನಾಡುತ್ತೇನೆ. ಅನ್ನಭಾಗ್ಯ ಹಣ, ಗೃಹ ಲಕ್ಷ್ಮಿ ನಿಧಿ ವಿಳಂಬ ವಿಚಾರ ನಾಳೆ ಸುದ್ದಿಗೋಷ್ಠಿ ನಡೆಸುತ್ತಿದ್ದೇನೆ. ಕಾಂಗ್ರೆಸ್‌ನ ಗ್ಯಾರಂಟಿ, ರಾಜಕೀಯ ಬೆಳವಣಿಗಳ ಬಗ್ಗೆ ಮಾಹಿತಿ ನೀಡಲಿದ್ದೇನೆ ಎಂದು ಹೇಳಿದರು.

## ಕುಖ್ಯಾತ ಹಳೆ ಕಳ್ಳನ ಬಂಧನ 14.26 ಲಕ್ಷ ಮೌಲ್ಯದ ಮಾಲು ಜಪ್ತಿ

• ಉದಯವಾಹಿನಿ, ಬೆಂಗಳೂರು,

ದ್ವಿ-ಚಕ್ರ ವಾಹನ ಮತ್ತು ಮನೆ ಕಳವು ಮಾಡುತ್ತಿದ್ದ ಹಳೆ ಕಳ್ಳನನ್ನು ಬಂಧಿಸಿರುವ ಬೇಗೂರು ಪೊಲೀಸರು 14.26 ಲಕ್ಷ ಮೌಲ್ಯದ ಮಾಲುಗಳನ್ನು ಜಪ್ತಿ ಮಾಡಿದ್ದಾರೆ.

ಬೊಮ್ಮನಹಳ್ಳಿಯ ಹೊಂಗಸಂದ್ರದ ಮೂರ್ತಿ(27) ಬಂಧಿತ ಹಳೆ ಕಳ್ಳನಾಗಿದ್ದು, ಆತನಿಂದ 14.26 ಲಕ್ಷ ಮೌಲ್ಯದ 179 ಗ್ರಾಂ ಚಿನ್ನಾಭರಣ, ದ್ವಿ-ಚಕ್ರ ವಾಹನ ವಶಪಡಿಸಿಕೊಳ್ಳಲಾಗಿದೆ ಎಂದು ನಗರ ಪೊಲೀಸ್ ಆಯುಕ್ತ ದಯಾನಂದ ತಿಳಿಸಿದರು. ಬೇಗೂರಿನ ದೇವರ ಚಿಕ್ಕಹಳ್ಳಿಯ ನ್ಯಾನಪ್ಪನಹಳ್ಳಿಯ ಮನೆಯೊಂದರ ಮುಂಭಾಗ ನಿಲ್ಲಿಸಿದ್ದ ದ್ವಿ-ಚಕ್ರ ವಾಹನವನ್ನು ಕಳವು ಮಾಡಿದ ಪ್ರಕರಣ ದಾಖಲಿಸಿ ವಿವಿಧ ಆಯಾಮಗಳಲ್ಲಿ ತನಿಖೆಯನ್ನು ಕೈಗೊಂಡು, ಖಚಿತ ಮಾಹಿತಿಯನ್ನು ಕಲೆ ಹಾಕಿ, ಬೇಗೂರಿನ ಕೊಡಿಚಿಕ್ಕನಹಳ್ಳಿ ಬಳಿ ಕಳುವಾಗಿದ್ದ ದ್ವಿ-ಚಕ್ರ ವಾಹನ ಸಮೇತ ವಶಕ್ಕೆ ಆರೋಪಿಯನ್ನು


ಉದಯವಾಹಿನಿ ಚಿತ್ರ

ಬಂಧಿಸಲಾಗಿದೆ ಎಂದು ಹೇಳಿದರು. ಆರೋಪಿಯನ್ನು ಸುದೀರ್ಘ ವಿಚಾರಣೆಗೊಳಪಡಿಸಲಾಗಿ, ದ್ವಿ-ಚಕ್ರ ವಾಹನ ಕಳವು ಪ್ರಕರಣವಲ್ಲದೆ ಬೇಗೂರು ಪೊಲೀಸ್ ಠಾಣಾ ಸರಹದ್ದಿನ ಎರಡು ಮನೆಗಳಲ್ಲಿ ಹಾಗೂ ಕೆ.ಆರ್ ಪುರ ಪೊಲೀಸ್ ಠಾಣಾ ಸರಹದ್ದಿನ ಒಂದು ಮನೆಯಲ್ಲಿ ಚಿನ್ನಾಭರಣ ಕಳವು ಮಾಡಿರುವುದಾಗಿ ಬಾಯ್ಬಿಟ್ಟಿದ್ದಾನೆ. ಕಳವು ಮಾಡಿದ ಚಿನ್ನಾಭರಣಗಳನ್ನು ಮಲ್ಲೇಶ್ವರಂ, ಬಸವನಗುಡಿ ಹಾಗೂ ಕೆಂಗೇರಿಯ ಗೋಲ್ಡ್ ಕಂಪನಿಗಳಲ್ಲಿ ಮಾರಾಟ ಮಾಡಿರುವುದಾಗಿ ತಿಳಿಸಿದ್ದು, ಅದನ್ನು ಆಧರಿಸಿ ಕೆಂಗೇರಿಯ ಗೋಲ್ಡ್ ಕಂಪನಿಯಿಂದ 100 ಗ್ರಾಂ ಬಸವನಗುಡಿಯ ಗೋಲ್ಡ್ ಕಂಪನಿಯಿಂದ 34 ಗ್ರಾಂ ಚಿನ್ನಾಭರಣವನ್ನು ವಶಪಡಿಸಿಕೊಳ್ಳ ಲಾಯಿತು.

**ಸೇರಿ ಇತರೆಡೆಗಳಲ್ಲಿಟ್ಟಿಧದ್ದ 179 ಗ್ರಾಂ ಚಿನ್ನಾಭರಣ ಗಳನ್ನು ಜಪ್ತಿ ಮಾಡಲಾಗಿದೆ ಎಂದರು. ಆರೋಪಿಯ ಬಂಧನದಿಂದ ಬೇಗೂರಿನ ಮನೆಗಳವು,ವಾಹನಗಳವು, ಕೆ.ಆರ್ ಪುರಂ ಮನೆ ಕಳವು ಪ್ರಕರಣ ಸೇರಿ 4 ಪ್ರಕರಣಗಳನ್ನು ಪತ್ತೆಹಚ್ಚಲಾಗಿದೆ ಎಂದು ತಿಳಿಸಿದರು.**

ಆಗ್ನೇಯ ವಿಭಾಗದ ಉಪ ಪೊಲೀಸ್ ಆಯುಕ್ತೆ ಸಾರಾ ಫಾತಿಮಾ ಮಾರ್ಗದರ್ಶನದಲ್ಲ ಬೇಗೂರು ಪೊಲೀಸ್ ಇನ್ಸ್‌ಪೆಕ್ಟರ್ ಕೃಷ್ಣಕುಮಾರ್ ಪಿ.ಎಸ್ ಮತ್ತವರ ತಂಡ ಪ್ರಕರಣವನ್ನು ಪತ್ತೆ ಮಾಡುವಲ್ಲಿ ಯಶಸ್ವಿಯಾಗಿದೆ.

## 2.2. ಪುರ ತಿಂಡಿ ಬೀದಿಗೆ ಹೊಸ ಸ್ವರೂಪ

• ಉದಯವಾಹಿನಿ, ಬೆಂಗಳೂರು,

'ಸಿಲಿಕಾನ್ ಸಿಟಿ'ಯ ತಿಂಡಿಯ ಪ್ರಿಯರ ಅಚ್ಚುಮೆಚ್ಚಿನ ಪ್ರದೇಶಗಳಲ್ಲಿ ಒಂದಾಗಿರುವ ವಿಶ್ವೇಶ್ವರಪುರ ತಿಂಡಿ ಬೀದಿಗೆ ಆಧುನಿಕ ಸ್ಪರ್ಶ ನೀಡಲಾಗುತ್ತಿದೆ. ದಶಕಗಳ ಇತಿಹಾಸವಿರುವ ಈ ಆಹಾರ ತಾಣದಲ್ಲಿ ವ್ಯಾಪಾರಿಗಳು ಮತ್ತು ಗ್ರಾಹಕರ ಅನುಕೂಲಕ್ಕೆ ಬೇಕಾದ ಹಲವು ಮೂಲಸೌಕರ್ಯಗಳ ಅಭಿವೃದ್ಧಿ ಭರದಿಂದ ಸಾಗಿದೆ. ಎಲ್ಲಾ ಕೆಲಸಗಳೂ ಪೂರ್ಣಗೊಂಡರೆ ತಿಂಡಿ ಬೀದಿ ನವ ಸ್ವರೂಪದೊಂದಿಗೆ ಕಂಗೊಳಿಸಲಿದೆ. ಇಲ್ಲಿ ಪ್ರತಿನಿತ್ಯ ಜಾತ್ರೆಯ ವಾತಾವರಣ ನಿರ್ಮಾಣವಾಗುತ್ತದೆ. ಇದು ಹತ್ತಾರು ಬಗೆಯ ದೋಸೆಗಳು, ಚೈನೀಸ್ ಕುರುಕಲು ತಿನಿಸುಗಳು, ಬಗೆ ಬಗೆಯ ಪಾನಿಪೂರಿ, ಮಂಚೂರಿಯನ್



ರೋಲ್, ಪಾವ್ ಬಾಜಿ, ಮಿರ್ಚಿ ಬಜ್ಜಿ ಹೀಗೆ ನೂರಾರು ಬಗೆಯ ತಿಂಡಿಗಳು ಒಂದೇ ಸೂರಿನಡಿಯಲ್ಲಿ ಸಿಗುವ ತಾಣ. ವಿ.ವಿ.ಪುರದ ಸಜ್ಜನ್ ರಾವ್ ವೃತ್ತದಿಂದ ಮಿನರ್ವ ವೃತ್ತದ ಮಾರ್ಗದಲ್ಲಿ ಎಲ್ಲಿ ನೋಡಿದರೂ ತಿಂಡಿ ತಿನಿಸುಗಳು ರಾರಾಜಿಸುತ್ತವೆ. ಇಲ್ಲಿನ ಬಹುತೇಕ ಅಂಗಡಿ, ಬೇಕರಿಗಳು ನೂರಾರು ವರ್ಷಗಳ ಇತಿಹಾಸ ಹೊಂದಿದ್ದು, ಶುಚಿ ರುಚಿಯಾದ ತಿಂಡಿಗೆ ಹೆಸರುವಾಸಿಯಾಗಿವೆ. ದೇಶ ವಿದೇಶಗಳಿಂದ ಜನ ಇಲ್ಲಿನ ತಿಂಡಿ ಸವಿಯಲು ಬರುತ್ತಾರೆ.

## ಸುಳ್ಳು ದೂರು ನೀಡಿದರೆ ಶಿಕ್ಷೆ ದಯಾನಂದ ಎಚ್ಚರಿಕೆ

• ಉದಯವಾಹಿನಿ, ಬೆಂಗಳೂರು

ಯಾರಾದರೂ ಪೊಲೀಸ್ ಠಾಣೆಗಳಿಗೆ ಸುಳ್ಳು ದೂರು ನೀಡಿದರೆ ಅಂತವರ ವಿರುದ್ಧ ಪ್ರಕರಣ ದಾಖಲಿಸಿಕೊಂಡು ಶಿಕ್ಷೆಗೆ ಗುರಿಪಡಿಸಲಾಗುವುದು ಎಂದು ನಗರ ಪೊಲೀಸ್ ಆಯುಕ್ತ ಬಿ.ದಯಾನಂದ್ ಅವರು ಎಚ್ಚರಿಕೆ ನೀಡಿದ್ದಾರೆ.

ಪತ್ರಿಕಾಗೋಷ್ಠಿಯಲ್ಲಿಂದು ಮಾತನಾಡಿದ ಅವರು, ನಗರದ ಪೊಲೀಸ್ ಆಯುಕ್ತರ ವ್ಯಾಪ್ತಿಯಲ್ಲಿ ಕಳೆದ ಐದು ವರ್ಷಗಳಲ್ಲಿ ಸುಳ್ಳು ದೂರು ದಾಖಲಿಸಲಾಗಿದ್ದ ಆರು ಪ್ರಕರಣಗಳಲ್ಲಿ ಸುಳ್ಳು ದೂರು ನೀಡಿದವರ ವಿರುದ್ಧ ಪ್ರಕರಣ ದಾಖಲಿಸಿಕೊಳ್ಳಲಾಗಿದೆ ಎಂದು ವಿವರಿಸಿದರು. ನಾಲ್ಕು ಪ್ರಕರಣಗಳಲ್ಲಿ ದೋಷಾರೋಪಣಾ ಪಟ್ಟಿ ಸಲ್ಲಿಸಲಾಗಿದೆ. ಎರಡು ಪ್ರಕರಣಗಳಲ್ಲಿ ವಿಚಾರಣೆ ಪೂರ್ಣಗೊಳಿಸಿ ಶಿಕ್ಷೆ ಘೋಷಿಸಲಾಗಿದೆ, ಉಳಿದ ಎರಡು ಪ್ರಕರಣಗಳಲ್ಲಿ ಆರೋಪಿಗಳ ವಿರುದ್ಧ ಕ್ರಮಕ್ಕೆಗೊಳ್ಳಲು ನ್ಯಾಯಾಲಯಕ್ಕೆ ಮನವಿ ಸಲ್ಲಿಸಲಾಗಿದೆ ಎಂದರು. ಸಂಪಿಗೇಹಳ್ಳಿ ಪೊಲೀಸ್ ಠಾಣೆಯಲ್ಲಿ ದಾಖಲಾಗಿದ್ದ ಹಲ್ಲೆ ಪ್ರಕರಣದಲ್ಲಿ ತನಿಖಾ ಸಮಯದಲ್ಲಿ ದೂರುದಾರರು ಸುಳ್ಳು ದೂರು ನೀಡಿದ್ದು ಅದು ಸಾಬೀತಾದ ಕಾರಣ, ಅವರ ವಿರುದ್ಧ ಅದೇ ಠಾಣೆಯಲ್ಲಿ ಪ್ರಕರಣವನ್ನು ದಾಖಲಿಸಿ ನ್ಯಾಯಾಲಯಕ್ಕೆ ದೋಷಾರೋಪ ಪಟ್ಟಿ ಸಲ್ಲಿಸಲಾಗಿದ್ದು, ಪ್ರಕರಣದಲ್ಲಿ ಆರೋಪಿಯು ನ್ಯಾಯಾಲಯದಲ್ಲಿ ತಪ್ಪೊಪ್ಪಿಕೊಂಡ ಕಾರಣ 500 ರೂ. ದಂಡ ವಿಧಿಸಿದ್ದು, ದಂಡ ಕಟ್ಟಲು ತಪ್ಪಿದಲ್ಲಿ ಐದು ದಿನ ಸಾದಾ ಶಿಕ್ಷೆ ಘೋಷಿಸಲಾಗಿದೆ ಎಂದು ಅವರು ಹೇಳಿದರು.

## ಖರ್ಗೆ ಭೇಟಿ ಮಾಡಿದ ಜಮೀರ್, ನಜೀರ್, ಸುರೇಶ್

• ಉದಯವಾಹಿನಿ, ಬೆಂಗಳೂರು

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಸಚಿವ ಜಮೀರ್ ಅಹಮ್ಮದ್ ಖಾನ್, ಮಾಜಿ ಸಂಸದ ಡಿ.ಕೆ.ಸುರೇಶ್ ಮತ್ತಿತರ ನಾಯಕರು ಭೇಟಿ ಮಾಡಿ ಸಮಾಲೋಚನೆ ನಡೆಸಿದ್ದಾರೆ. ಬೆಳಿಗ್ಗೆ ಮಲ್ಲಿಕಾರ್ಜುನ ಖರ್ಗೆಯವರ ಮನೆಗೆ ಮುಖ್ಯಮಂತ್ರಿಯವರ ರಾಜಕೀಯ ಕಾರ್ಯದರ್ಶಿ ನಜೀರ್ ಅಹಮ್ಮದ್ ಅವರೊಂದಿಗೆ ತೆರಳಿದ ಸಚಿವ ಜಮೀರ್ ಅಹಮ್ಮದ್ ಖಾನ್ ರಾಜ್ಯ ರಾಜಕೀಯದ ಬಗ್ಗೆ ಸುದೀರ್ಘ ಚರ್ಚೆ ನಡೆಸಿದರು. ಇತ್ತೀಚಿನ ದಿನಗಳಲ್ಲಿ ರಾಜ್ಯದಲ್ಲಿ ನಡೆಯುತ್ತಿರುವ ಬೆಳವಣಿಗೆಗಳ ಬಗ್ಗೆ ಇಬ್ಬರು ನಾಯಕರು ಖರ್ಗೆಯವರಿಗೆ ಸುದೀರ್ಘ ವಿವರಣೆ ನೀಡಿದ್ದಾರೆ ಎಂದು ತಿಳಿದುಬಂದಿದೆ. ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಅವರ ಬದಲಾವಣೆ ಕುರಿತಂತೆ ಕೆಲವು ಸಚಿವರು ನೀಡುತ್ತಿರುವ ಹೇಳಿಕೆ ಮುಖ್ಯಮಂತ್ರಿ ಬದಲಾವಣೆ ಬಗ್ಗೆ ಅಲ್ಲಲ್ಲಿ ನಡೆಯುತ್ತಿರುವ ಚರ್ಚೆಗಳ ಕುರಿತಂತೆ ಈ ವೇಳೆ ವಿಚಾರ ವಿನಿಮಯ ನಡೆದಿದೆ ಎಂದು ಮೂಲಗಳು ತಿಳಿಸಿದೆ ಮುಂದಿನ ದಿನಗಳಲ್ಲಿ ನಗರ ಗ್ರಾಮೀಣ ಸ್ಥಳೀಯ ಸಂಸ್ಥೆಗಳ ಚುನಾವಣೆ ನಡೆಯಲಿದ್ದು, ಆ ವೇಳೆ ಕಾಂಗ್ರೆಸ್‌ಗೆ ಅನುಕೂಲವಾಗಬೇಕಾದರೆ ಸಿದ್ದರಾಮಯ್ಯ ಅವರನ್ನು ಮುಂದುವರೆಸುವ ಅಗತ್ಯವಿದೆ ಎಂದು ಈ ವೇಳೆ ಜಮೀರ್ ಅಹಮ್ಮದ್ ಖಾನ್ ಪ್ರತಿಪಾದಿಸಿರುವುದಾಗಿ ತಿಳಿದುಬಂದಿದೆ. ಪಕ್ಷದಲ್ಲಿ ಪದೇಪದೇ ಉಂಟಾಗುತ್ತಿರುವ ಗೊಂದಲಗಳಿಗೆ ಹೈಕಮಾಂಡ್ ಮಧ್ಯ ಪ್ರವೇಶ ಮಾಡಿ ಕಡಿವಾಣ ಹಾಕಬೇಕು.

## ಬೇಡಿಕೆ ಈಡೇರಿಸಲು ಒತ್ತಾಯಿಸಿ ಖೋ ಖೋ ಸಂಸ್ಥೆ ಪ್ರತಿಭಟನೆ

• ಉದಯವಾಹಿನಿ, ಬೆಂಗಳೂರು

ರಾಜ್ಯ ಒಲಂಪಿಕ್ ಅಸೋಸಿಯೇಷನ್ ಅಧ್ಯಕ್ಷ ಗೋವಿಂದ ರಾಜು ಅವರ ಸರ್ವಾಧಿಕಾರಿ ಧೋರಣೆ ಮತ್ತು ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಕರ್ನಾಟಕ ಖೋ-ಖೋ ಸಂಸ್ಥೆ ವತಿಯಿಂದ ಫ್ರಿಡಂ ಪಾರ್ಕ್‌ನಲ್ಲಿ ಬೃಹತ್ ಪ್ರತಿಭಟನೆ ನಡೆಸಲಾಯಿತು.


ಉದಯವಾಹಿನಿ ಚಿತ್ರ

**ಫ್ರಿಡಂ ಪಾರ್ಕ್‌ನಲ್ಲಿ ಬೃಹತ್ ಪ್ರತಿಭಟನೆ**

ವಿಶ್ವಮಟ್ಟದ ಸ್ಪರ್ಧೆಯಲ್ಲಿ ವಿಜೇತರಾದಂತಹ ಮಕ್ಕಳಿಗೆ ಪಕ್ಕದ ರಾಜ್ಯಗಳಲ್ಲಿ ನೀಡುತ್ತಿರುವಂತೆ 'ಎ' ಗ್ರೇಡ್ ಮತ್ತು 'ಬಿ' ಗ್ರೇಡ್ ಹುದ್ದೆಯನ್ನು ನೀಡುವುದು ಮತ್ತು ಕನಿಷ್ಠ 80 ಲಕ್ಷ ರೂಪಾಯಿಗಳನ್ನಾದರು ಬಹುಮಾನದ ಹಣವಾಗಿ ಪ್ರತಿಯೊಬ್ಬ ಕ್ರೀಡಾಪಟುಗಳಿಗೆ ಕೊಡುವಂತಹ ನಿಯಮ ರೂಪಿಸಬೇಕು, ಅಧಿಕೃತ ರಾಜ್ಯ ಕ್ರೀಡಾ ಸಂಸ್ಥೆಗಳಿಗೆ ಈ ಹಿಂದೆ ನೀಡುತ್ತಿದ್ದಂತೆ ನೇರವಾಗಿ ಮನವಿಯನ್ನು ಪಡೆದು ಅನುದಾನವನ್ನು ನೀಡುವ ಪದ್ಧತಿಯನ್ನು ಜಾರಿಗೊಳಿಸಬೇಕು. ಈಗ ಇರುವ ರಾಜ್ಯ ಒಲಂಪಿಕ್ ಸಂಸ್ಥೆಯ ಮೂಲಕ ಅನುದಾನ ಕೇಳುವ ಪದ್ಧತಿಯನ್ನು ರದ್ದುಗೊಳಿಸಬೇಕು, ಎಲ್ಲಾ ಅಧಿಕೃತ (ರಾಷ್ಟ್ರೀಯ ಫೆಡರೇಷನ್‌ಗೆ ನೋಂದಣಿಯಾದ) ರಾಜ್ಯ ಕ್ರೀಡಾ ಸಂಸ್ಥೆಗಳನ್ನು ಕಡ್ಡಾಯವಾಗಿ ಕರ್ನಾಟಕ ಒಲಂಪಿಕ್ ಅಸೋಸಿಯೇಷನ್ ಸದಸ್ಯರಾಗಿ ನೇಮಿಸುವಂತೆ ಕ್ರಮ ಕೈಗೊಳ್ಳಬೇಕು. ಕರ್ನಾಟಕ ರಾಜ್ಯ ಒಲಂಪಿಕ್ ಅಸೋಸಿಯೇಷನ್ ಮೂಲಕ ಯಾವುದೇ ರಾಜ್ಯ ಕ್ರೀಡಾ ಸಂಸ್ಥೆಗಳಿಗೆ ತೊಂದರೆ ಕೊಡದಂತೆ ಕ್ರಮ ಕೈಗೊಳ್ಳಬೇಕು,

**ಕರ್ನಾಟಕ ಒಲಂಪಿಕ್ ಅಸೋಸಿಯೇಷನ್ ಸಂಸ್ಥೆಗೆ ನೀಡಿರುವ ಅನುದಾನ ದುರುಪಯೋಗಪಡಿಸಿಕೊಂಡಿರುವ ಆರೋಪಗಳಿದ್ದು, ಅದನ್ನು ತನಿಖೆಗೊಳಪಡಿಸಬೇಕು, ರಾಜ್ಯದ ಎಲ್ಲಾ ಕ್ರೀಡಾ ಸಂಸ್ಥೆಗಳನ್ನು ಆಹ್ವಾನಿಸಿ ಅವುಗಳ ಸಮಸ್ಯೆಗಳನ್ನು ಆಲಿಸುವುದು ಸೇರಿದಂತೆ ಇತರೆ ಬೇಡಿಕೆಗಳನ್ನು ಈಡೇರಿಸುವಂತೆ ಸರ್ಕಾರವನ್ನು ಒತ್ತಾಯಿಸಲಾಯಿತು. ಪ್ರತಿಭಟನೆಯಲ್ಲಿ ಕರ್ನಾಟಕ ರಾಜ್ಯ ಖೋ-ಖೋ ಸಂಸ್ಥೆ ಅಧ್ಯಕ್ಷರು ಲೋಕೇಶ್ವರ , ಇತರರು ಇದ್ದರು**

ರಾಷ್ಟ್ರೀಯ ಒಲಂಪಿಕ್ ಸಂಸ್ಥೆಯಲ್ಲಿರುವ ಕಾನೂನುಗಳನ್ನು ರಾಜ್ಯ ಒಲಂಪಿಕ್ ಸಂಸ್ಥೆಯು ಬದಲಿಸಿದ್ದರೆ ಅದನ್ನು ಸರಿಪಡಿಸಬೇಕು ಮತ್ತು ಮುಂದಿನ ದಿನಗಳಲ್ಲಿ ರಾಷ್ಟ್ರೀಯ ಒಲಂಪಿಕ್ ಸಂಸ್ಥೆಯ ಅನುಮತಿ ಇಲ್ಲದೇ ಯಾವುದೇ ಬದಲಾವಣೆಗಳನ್ನು ಮಾಡದಂತೆ ಕ್ರಮ ಕೈಗೊಳ್ಳಬೇಕು.

## ಐಸಿಎಐಗೆ ಪದಾಧಿಕಾರಿಗಳ ಆಯ್ಕೆ

• ಉದಯವಾಹಿನಿ, ಬೆಂಗಳೂರು

ಐಸಿಎಐ ಬೆಂಗಳೂರು ಶಾಖೆಯ ನೂತನ ಅಧ್ಯಕ್ಷರಾಗಿ ಸಿಎ.ಮಂಜುನಾಥ್ ಎಂ.ಹಳ್ಳೂರ್ ಹಾಗೂ ಉಪಾಧ್ಯಕ್ಷ ರಾಗಿ ಸಿಎ.ಕವಿತಾ ಪರಮೇಶ ಆಯ್ಕೆಯಾಗಿದ್ದಾರೆ.

ಭಾರತೀಯ ಚಾರ್ಟಡ್ ಅಕೌಂಟೆಂಟ್ಸ್ ಸಂಸ್ಥೆಯ ಬೆಂಗಳೂರು ಶಾಖೆಯ ಅಧ್ಯಕ್ಷ ಹಾಗೂ ಇತರ ಪದಾಧಿಕಾರಿಗಳ ಚುನಾವಣೆ ಇತ್ತೀಚೆಗೆ ನಡೆದಿದ್ದು 56ನೇ ಅಧ್ಯಕ್ಷರಾಗಿ ಸಿಎ.ಮಂಜುನಾಥ್ ಎಂ.ಹಳ್ಳೂರ್ ಹಾಗೂ ಉಪಾಧ್ಯಕ್ಷರಾಗಿ ಸಿಎ.ಕವಿತಾ ಪರಮೇಶ ಆಯ್ಕೆಯಾಗಿದ್ದಾರೆ.

ಜತೆಗೆ ಕಾರ್ಯದರ್ಶಿಯಾಗಿ ಸಿಎ. ತುಪ್ಪದ್ ವಿರುಪಾಕ್ಷಾ ಮುಪ್ಪಣ್ಣ, ಖಜಾಂಜಿ ಯಾಗಿ ಸಿಎ. ಶ್ರೀಪಾದ್ ಎಚ್.ನಾರಾಯಣ್, ಸಿಕಾಸಾ ಅಧ್ಯಕ್ಷರಾಗಿ ಸಿಎ.ನಿಶ್ಚಲ್ ಆರ್.ಬದ್ರಿನಾಥ್, ವ್ಯವಸ್ಥಾಪಕ ಸಮಿತಿ ಸದಸ್ಯರಾಗಿ ಸಿಎ.ಚಂದ್ರ ಪ್ರಕಾಶ್ ಜೈನ್, ಸಿಎ. ವಿನೋದ್ ಗಾರ್ಗ್, ಸಿಎ.ರಾಘವೇಂದ್ರ ಹೆಗ್ಡೆ, ಸಿಎ.ಶ್ರೀರಕ್ಷಾ. ಕೆ.ಎನ್., ಕೌನ್ಸಿಲ್ ಸದಸ್ಯ ಸಿಎ.ಮಧುಕರ್ ಎನ್.ಹಿರೆಗಂಗೆ, ಪ್ರಾದೇಶಿಕ ಕೌನ್ಸಿಲ್ ಸದಸ್ಯರಾಗಿ ಸಿಎ. ಪ್ರಮೋದ್ ಆರ್.ಹೆಗ್ಡೆ, ಸಿಎ. ಪಂಪಣ್ಣಬಿ.ಇ ಆಯ್ಕೆಯಾಗಿದ್ದಾರೆ.

## ಕೇಂದ್ರ ಚುನಾವಣಾ ಶಿಸ್ತು ಸಮಿತಿಯಿಂದ ಶೋಕಾಸ್ ನೋಟಿಸ್

### ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರು 9 ಪುಟಗಳ ಸುಧೀರ್ಘ ಉತ್ತರ

• ಉದಯವಾಹಿನಿ, ಬೆಂಗಳೂರು


ಪಕ್ಷ ವಿರೋಧಿ ಚಟುವಟಿಕೆ ಆರೋಪದ ಮೇಲೆ ಕೇಂದ್ರ ಚುನಾವಣಾ ಶಿಸ್ತು ಸಮಿತಿಯಿಂದ ಶೋಕಾಸ್ ನೋಟಿಸ್ ಪಡೆದಿದ್ದ ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರು 9 ಪುಟಗಳ ಸುಧೀರ್ಘ ಉತ್ತರ ನೀಡಿದ್ದಾರೆ. ನೋಟಿಸ್‌ಗೆ ಯತ್ನಾಳ್ ಕೇಂದ್ರ ಶಿಸ್ತು ಸಮಿತಿಯ ಕಾರ್ಯಕಾರಿ ಸದಸ್ಯ ಓ ಪಾಠಕ್ ಅವರಿಗೆ 9 ಪುಟಗಳ ಉತ್ತರವನ್ನು ಯತ್ನಾಳ್ ಇ-ಮೇಲ್ ಮೂಲಕ ನೀಡಿದ್ದಾರೆ.

**ಯತ್ನಾಳ್ ವಿಚಾರದಲ್ಲಿ ಹೈಕಮಾಂಡ್ ನಿರ್ಧಾರ**

72 ಗಂಟೆಯೊಳಗೆ ಉತ್ತರ ನೀಡಿದಿದ್ದರೆ ಶಿಸ್ತು ಕ್ರಮ ಫಿಕ್ಸ್ ಎಂದು ಹೇಳುತ್ತಿದ್ದಂತೆ ಆತಂಕದಲ್ಲಿ ಯತ್ನಾಳ್ ಅವರು ಆರ್ ಎಸ್ ಎಸ್ ಪ್ರಮುಖರ ಮೊರೆಹೋಗಿದ್ದರು. ಅವರ ಸಲಹೆ ಪಡೆದುಕೊಂಡು ವಿವರವಾದ ಉತ್ತರ ಕೊಟ್ಟಿದ್ದಾರೆ ಎಂದು ಹೇಳಲಾಗಿದೆ. ಬಿಜೆಪಿ ಕೇಂದ್ರ ಶಿಸ್ತು ಸಮಿತಿಗೆ ಯತ್ನಾಳ್ ನೀಡಿರುವ ಉತ್ತರವೇನು ಎಂಬುದರ ವಿವರ ಸದ್ಯ ಬಹಿರಂಗವಾಗಿಲ್ಲ. ಆದಾಗ್ಯೂ, ವಿಜಯೇಂದ್ರ ವಿರುದ್ಧ ದೂರುಗಳ ಸರಮಾಲೆಯನ್ನೇ ಮಾಡಿದ್ದಾರೆ ಎಂದು ಮೂಲಗಳು ತಿಳಿಸಿವೆ. 'ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಬಣ ರಾಜಕೀಯ ಮಾಡುತ್ತಿದೆ. ನಾನು ಯಾವುದೇ ಬಣ ರಾಜಕೀಯ ಮಾಡಿಲ್ಲ. ಪಕ್ಷದ ಶಿಸ್ತನ್ನು ನಾನು ಉಲ್ಲಂಘಿಸಿಲ್ಲ' ಎಂದು ಉತ್ತರದಲ್ಲಿ ತಿಳಿಸಿದ್ದಾರೆ.

ಪಕ್ಷದ ಚೌಕಟ್ಟಿನಲ್ಲಿ ವಕ್ಫ್ ವಿರುದ್ಧ ಹೋರಾಟ ಮಾಡಿದ್ದೇವೆ. ತಂಡವಾಗಿ ಹೋರಾಟ ಮಾಡಿ ನಾವು ಯಶಸ್ವಿಯಾಗಿದ್ದೇವೆ. ವಕ್ಫ್ ಕುರಿತ ಹೋರಾಟವನ್ನು ಉನ್ನತ ನಾಯಕರು ಸಮರ್ಥಿಸಿದ್ದಾರೆ. ಬಿ.ವೈ.ವಿಜಯೇಂದ್ರ ಏಕಪಕ್ಷೀಯ ನಿರ್ಧಾರ ಕೈಗೊಳ್ಳುತ್ತಿದ್ದಾರೆ. ಕಾರ್ಯಕರ್ತರು, ನಾಯಕರ ಭಾವನೆಯನ್ನು ವ್ಯಕ್ತಪಡಿಸಿದ್ದೇನೆ ಎಂದು ಯತ್ನಾಳ್ ಉತ್ತರಿಸಿದ್ದಾರೆ. ಶಿಸ್ತು ಸಮಿತಿ ನೋಟಿಸ್ ಬಳಿಕ ಯತ್ನಾಳ್ ಬಣ ಮೌನಕ್ಕೆ ಶರಣಾಗಿತ್ತು. ಕಳೆದ ಕೆಲವು ದಿನಗಳಿಂದ ಬಹಿರಂಗ ಹೇಳಿಕೆಗಳಿಗೆ ಬ್ರೇಕ್ ಬಿದ್ದಿತ್ತು. ಯತ್ನಾಳ್ ಬಣದ ನಾಯಕ ರಮೇಶ್ ಜಾರಕಿಹೊಳಿ ಕೂಡ ಮಾಧ್ಯಮಗಳಿಂದ ಅಂತರ ಕಾಯ್ದುಕೊಂಡಿದ್ದಾರೆ. ಯತ್ನಾಳ್ ವಿಚಾರದಲ್ಲಿ ಹೈಕಮಾಂಡ್ ಯಾವ ನಿರ್ಧಾರ ತೆಗೆದುಕೊಳ್ಳುತ್ತದೆ ಎಂಬುದನ್ನು ಕಾದುನೋಡುವ ತಂತ್ರವನ್ನು ಬಣ ಅನುಸರಿಸುತ್ತಿದೆ ಎನ್ನಲಾಗಿದೆ.

ಮತ್ತೊಂದೆಡೆ ಯತ್ನಾಳ್ ವಿಚಾರ ಕುರಿತು ಪ್ರತಿಕ್ರಿಯಿಸಿರುವ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ, ಅದನ್ನೆಲ್ಲ ನಮ್ಮ ರಾಷ್ಟ್ರೀಯ ನಾಯಕರು ನೋಡಿಕೊಳ್ಳುತ್ತಾರೆ ಎಂದಿದ್ದಾರೆ.ಯತ್ನಾಳ್‌ಗೆ ಶಿಸ್ತು ಸಮಿತಿ ನೋಟಿಸ್ ಬಳಿಕ ಭಿನ್ನಮತೀಯರ ಬಣ ಮೌನಕ್ಕೆ ಶರಣಾಗಿದೆ. ಆದರೆ ಈಗ ಮತ್ತೆ ವಿಜಯೇಂದ್ರ ಬದಲಾವಣೆಗೆ ಒತ್ತಾಯಿಸಿ ಸಭೆ ಸೇರಲು ಮುಂದಾಗಿದೆ. 20 ರಂದು ಬೆಂಗಳೂರಿನ ಕುಮಾರ್ ಬಂಗಾರಪ್ಪ ನಿವಾಸದಲ್ಲೇ ಸಭೆ ನಡೆಸಲಿದ್ದಾರೆ. ನೋಟಿಸ್ ದೊರೆತ 72 ಗಂಟೆಗಳ ಒಳಗಾಗಿಯೇ ಅವರು ಉತ್ತರ ನೀಡಿದಂತಾಗಿದೆ.



### ವಿಜಯೇಂದ್ರ ಮಾತಿನ ಮರ್ಮವೇನು

**ಮತ್ತೊಂದೆಡೆ ರಾಜ್ಯ ಬಿಜೆಪಿ ಅಧ್ಯಕ್ಷ ವಿಜಯೇಂದ್ರ ಅವರು, ಫೆಬ್ರವರಿ 20ರೊಳಗೆ ಎಲ್ಲವೂ ತೀರ್ಮಾನ ಆಗಲಿದೆ ಎಂದು ಸ್ಫೋಟಕ ಹೇಳಿಕೆ ನೀಡಿದ್ದಾರೆ. ಈ ಮಾತಿನ ಮರ್ಮವೇನು ಎಂಬುದು ಸಾಕಷ್ಟು ಕುತೂಹಲಕ್ಕೆ ಕಾರಣವಾಗಿದೆ. 20ರೊಳಗೆ ಎಲ್ಲಾ ಪಕ್ಷದೊಳಗಿನ ಗೊಂದಲಗಳೆಲ್ಲ ಸರಿಯಾಗಲಿದೆ ಎಂಬ ತಮ್ಮ ಹೇಳಿಕೆಗೆ ಸ್ಪಷ್ಟನೆ ನೀಡಿದ ವಿಜಯೇಂದ್ರ ಅವರು, ನಿಮ್ಮ ಎಲ್ಲಾ ಪ್ರಶ್ನೆಗಳಿಗೂ ನಾಳೆಯೇ ಉತ್ತರ ಕೊಡ್ತೇನೆ. ರಾಜಕೀಯ ವಿಚಾರವೂ ನಾಳೆಯೇ ಮಾತಾಡ್ತೇನೆ ಎಂದು ಹೇಳಿದರು.**

ಶಿಸ್ತು ಸಮಿತಿಯ ನೋಟಿಸ್‌ಗೆ ಉತ್ತರ ನೀಡುವುದಕ್ಕೆ ಏನೂ ಇಲ್ಲ ಎಂದು ಯತ್ನಾಳ್ ಕೆಲವು ದಿನಗಳ ಹಿಂದೆ ಹೇಳಿದ್ದರು. ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಹಾಗೂ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಬಣಗಳ ನಡುವಣ ಸಂಘರ್ಷ ತೀವ್ರಗೊಂಡ ಬೆನ್ನಲ್ಲೇ ಪಕ್ಷಕ್ಕೆ ಮುಜುಗರ ತರುವಂಥ ಹೇಳಿಕೆಗಳನ್ನು ನೀಡುತ್ತಿರುವುದಕ್ಕಾಗಿ ಯತ್ನಾಳ್‌ಗೆ ಬಿಜೆಪಿ ಕೇಂದ್ರ ಶಿಸ್ತು ಸಮಿತಿ ನೋಟಿಸ್ ನೀಡಿತ್ತು. 72 ಗಂಟೆ ಒಳಗೆ ಉತ್ತರಿಸುವಂತೆ ಖಡ್ ಸೂಚನೆ ನೀಡಿತ್ತು. ಈ ನೋಟಿಸ್‌ಗೆ ಯತ್ನಾಳ್ ಉತ್ತರವನ್ನೇ ನೀಡಿಲ್ಲ, ಅವರ ವಿರುದ್ಧ ಹೈಕಮಾಂಡ್ ಕ್ರಮ ಕೈಗೊಳ್ಳುತ್ತದೆಯೇ ಎಂಬುದು ಈವರೆಗಿನ ಪ್ರಶ್ನೆಯಾಗಿತ್ತು. ಹಿರಿಯ ನಾಯಕರನ್ನು ವಿಶ್ವಾಸಕ್ಕೆ ಪಡೆದಿಲ್ಲ. ಹೊಂದಾಣಿಕೆ ರಾಜಕೀಯದಿಂದ ಪಕ್ಷ ಸಂಘಟನೆಯಲ್ಲಿ ಬಲಹೀನವಾಗಬಾರದು. ಕಾರ್ಯಕರ್ತರು ಭಾವನೆಗಳನ್ನು ನಾನು ಬಹಿರಂಗವಾಗಿ ವ್ಯಕ್ತಪಡಿಸುತ್ತಿದ್ದೇನೆ. ನನ್ನ ಹೇಳಿಕೆ ಪಕ್ಷದ ಅನೇಕ ಹಿರಿಯ ನಾಯಕರು ಹಾಗೂ ಕಾರ್ಯಕರ್ತರು ಅಭಿಪ್ರಾಯವಾಗಿದೆ. ಹೀಗಾಗಿ, ಬಿ.ವೈ ವಿಜಯೇಂದ್ರ ಅವರನ್ನು ಕೆಳಗಿಳಿಸಿ, ಸಮರ್ಥ ನಾಯಕರಿಗೆ ಜವಬ್ದಾರಿ ನೀಡಬೇಕು ಎಂದು ಮನವಿ ಮಾಡಿದ್ದಾರೆ. ವಕ್ಫ್ ಹೋರಾಟವನ್ನು ನಾವು ಪಕ್ಷದ ವೇದಿಕೆಯಲ್ಲೇ ಮಾಡಿದ್ದೇವೆ. ಈ ಹೋರಾಟಕ್ಕೆ ಕೇಂದ್ರದ ನಾಯಕರೇ ಖುದ್ದು ಶ್ಲಾಘಿಸಿದ್ದಾರೆ. ಪಕ್ಷದ ಹಿತಕ್ಕೆ ನಾವು ಕೆಲಸ ಮಾಡುತ್ತಿದ್ದೇವೆ. ಈ ಹಿಂದೆ ನೀಡಿದ ಉತ್ತರವನ್ನು ನೀವು ಪರಿಗಣಿಸಬಹುದು. ನಾನು ಶಿಸ್ತು ಉಲ್ಲಂಘಿಸಿಲ್ಲ. ಪಕ್ಷದ ಚೌಕಟ್ಟಿನಲ್ಲಿ ಕೆಲಸ ಮಾಡುತ್ತಿದ್ದೇನೆ ಎಂದು ಸ್ಪಷ್ಟಪಡಿಸಿದ್ದಾರೆ. ಬಸನಗೌಡ ಪಾಟೀಲ್ ಯತ್ನಾಳ್ಗೆ ಬಿಜೆಪಿ ಕೇಂದ್ರ ಶಿಸ್ತು ಸಮಿತಿ ಈ ಹಿಂದೆ ಕೂಡ ನೋಟಿಸ್ ನೀಡಿತ್ತು. ವಿಜಯೇಂದ್ರ ಅವರನ್ನು ಪಕ್ಷದ ರಾಜ್ಯಾಧ್ಯಕ್ಷರನ್ನಾಗಿ ಮಾಡಿರುವುದಕ್ಕೆ ಯತ್ನಾಳ್ ಸಿಡಿದೆದ್ದಿದ್ದು, ಬಹಿರಂಗವಾಗಿಯೇ ಮಾಜಿ ಸಿಎಂ ಯಡಿಯೂರಪ್ಪ ಹಾಗೂ ವಿಜಯೇಂದ್ರ ವಿರುದ್ಧ ಟೀಕೆಗಳನ್ನು ಮಾಡುತ್ತಲೇ ಬಂದಿದ್ದಾರೆ. ಹೀಗಾಗಿ ಕಳೆದ ಡಿಸೆಂಬರ್‌ನಲ್ಲಿ ಅವರಿಗೆ ನೋಟಿಸ್ ನೀಡಲಾಗಿತ್ತು.

### ಉತ್ತರದಲ್ಲಿ ಏನಿದೆ

**ಪಕ್ಷದಲ್ಲಿ ಕುಟುಂಬ ರಾಜಕೀಯ ಮೀತಿ ಮೀರಿದೆ. ಭವಿಷ್ಯ ದೃಷ್ಟಿಯಿಂದ ಇದಕ್ಕೆ ಬ್ರೇಕ್ ಹಾಕಬೇಕು. ಕುಟುಂಬ ರಾಜಕೀಯದಿಂದ ಪಕ್ಷ ವ್ಯಕ್ತಿಗತವಾಗಿ ಗುರುತಿಸಿಕೊಳ್ಳಬಾರದು. ಬಿ.ವೈ ವಿಜಯೇಂದ್ರ ಅವರು ವ್ಯಕ್ತಿಗತ ಹಾಗೂ ಗುಂಪುಗಾರಿಕೆ ಮಾಡ್ತಿದ್ದಾರೆ. ಇದರಿಂದ ಸಂಘಟನೆಗೆ ತೊಡಕಾಗುತ್ತಿದೆ ಎಂದು ಯತ್ನಾಳ್ ಉತ್ತರದಲ್ಲಿ ದೂರಿದ್ದಾರೆ.**

ನೋಟಿಸ್‌ಗೆ ಖುದ್ದು ಶಿಸ್ತು ಸಮಿತಿ ಮುಂದೆ ಹಾಜರಾಗಿ ವಿವರಣೆ ನೀಡಿದ್ದ ಯತ್ನಾಳ್, ಆ ನಂತರದಲ್ಲಿ ವಿಜಯೇಂದ್ರ ವಿರುದ್ಧ ವಾಗ್ದಾಳಿ ತೀವ್ರಗೊಳಿಸಿದ್ದರು. ಅಲ್ಲದೆ, ಯತ್ನಾಳ್ ಬಣದ ಇತರ ನಾಯಕರೂ ಬಹಿರಂಗವಾಗಿ ಹೇಳಿಕೆಗಳನ್ನು ನೀಡುತ್ತಾ ಬಂದಿದ್ದರು. ಬಣ ಜಗಳ ತೀವ್ರಗೊಂಡ ಬೆನ್ನಲ್ಲೇ ಶಿಸ್ತು ಸಮಿತಿ ಮತ್ತೆ ಶೋಕಾಸ್ ನೀಡಿತ್ತು.

20ರಂದು ಯತ್ನಾಳ್ ತಂಡದಿಂದ ಮತ್ತೆ ಸಭೆ ವಿಚಾರಕ್ಕೆ ಪ್ರತಿಕ್ರಿಯಿಸಿದ ಬಿವೈವಿ, ಅವರು ಹಿರಿಯರು ಇದ್ದಾರೆ. ಸಭೆ ಕರೆದು ಪಕ್ಷ ಬಲಪಡಿಸುವ ಚರ್ಚೆ ಮಾಡ್ತಾರೆ. ಅದಕ್ಕೆ ನಾನು ಯಾಕೆ ಬೇಡ ಅನ್ನಲಿ ನಾನು ಅದರ ಬಗ್ಗೆ ತಲೆ ಕೆಡಿಸಿಕೊಂಡಿಲ್ಲ. ಯಾರೇನೇ ಮಾಡಿದರೂ ಪಕ್ಷಕ್ಕೆ ಪೂರಕವಾಗಿ ಮಾಡ್ತಾರೆ ಅನ್ನೋದು ನನ್ನ ಅಭಿಲಾಷೆ ಎಂದು ವಿಜಯೇಂದ್ರ ಹೇಳಿದ್ದಾರೆ.

# ಅರ್ಜಿ ಸಲ್ಲಿಸಿರುವವರಿಗೆ ವರ್ಷದಲ್ಲಿ ಸೂರು

## ಶಾಸಕ ಕೆ.ಹರೀಶ್ ಗೌಡ ಪಾದಯಾತ್ರೆ, ನಡೆಸಿ ಸಮಸ್ಯೆಗಳನ್ನು ಆಲಿಸಿ ಬಗೆಹರಿಕೆಗೆ ಕ್ರಮ

• ಉದಯವಾಹಿನಿ, ಮೈಸೂರು


ಉದಯವಾಹಿನಿ ಚಿತ್ರ

ಸರ್ಕಾರದ ಮಟ್ಟದಲ್ಲಿ ಚರ್ಚಿಸಿ ಅನುಕೂಲ

ನಗರದ ವಾರ್ಡ್ ನಂಬರ್ 23ರ ಸುಬ್ಬರಾಯನ ಕೆರೆ ವ್ಯಾಪ್ತಿಯ ಪ್ರದೇಶಗಳಲ್ಲಿ ಶಾಸಕ ಕೆ.ಹರೀಶ್ ಗೌಡ ಪಾದಯಾತ್ರೆ ನಡೆಸಿ ಸಮಸ್ಯೆಗಳನ್ನು ಆಲಿಸಿ ಬಗೆಹರಿಸಲು ಕ್ರಮ ಕೈಗೊಳ್ಳಲು ಅಧಿಕಾರಿಗಳಿಗೆ ಸೂಚನೆ ನೀಡಿದರು. ಸುಬ್ಬರಾಯನಕೆರೆ ವ್ಯಾಪ್ತಿಯ ಕುರುಬಗೇರಿ, ಗೊಲ್ಲಗೇರಿ, ಅಗಸಗೇರಿ, ಮಡಿವಾಳರ ಬೀದಿ, ಎಂ.ಎನ್. ಜೋಯಿಸ್ ರಸ್ತೆ, ಸೋನಾರ್ ಬೀದಿ, ಗಾಣಿಗರ ಬೀದಿ, ಹಳೇ ಬಂಡಿಕೇರಿ, ರಮವಿಲಾಸ ರಸ್ತೆ ಪ್ರದೇಶದಲ್ಲಿ ಎಲ್ಲಾ ಇಲಾಖೆಯ ಅಧಿಕಾರಿಗಳೊಂದಿಗೆ, ಸ್ಥಳೀಯ ಮುಖಂಡರೊಂದಿಗೆ ಪಾದಯಾತ್ರೆ ನಡೆಸಿ ಸಮಸ್ಯೆಗಳ ಪರಿಹಾರಕ್ಕೆ ಸೂಚಿಸಿದರು.

ಶಾಂತಲಾ ಟಾಕೀಸ್ ಪಕ್ಕದಲ್ಲಿ ಹಾದು ಹೋಗಿರುವ ರಾಜ ಕಾಲುವೆ ಸ್ವಚ್ಛಗೊಳಿಸಬೇಕು. ಹಲವೆಡೆ ಕುಡಿಯುವ ನೀರು ಸಮರ್ಪಕವಾಗಿ ದೊರೆಯದೆ ಇರುವುದರಿಂದ ನೀರು ಸರಬರಾಜು ಸಮಯ ಹೆಚ್ಚಿಸಬೇಕು ಎಂದು ಮನವಿ ಮಾಡಿದರು.

ಮೊಹಲ್ಲಾದ ಒಳ ಭಾಗದಲ್ಲಿರುವ ಸಣ್ಣ ರಸ್ತೆಗಳ ದುರಸ್ತಿ, ಹಲವೆಡೆ ಮೋರಿಗೆ ಸ್ಲಾಬ್ ಇಲ್ಲದೆ ಇರುವುದು, ಹಲವೆಡೆ ಒಳ ಚರಂಡಿ ಕಾಮಗಾರಿ ಬಾಕಿ ಇರುವುದು ಹಾಗೂ ವಸತಿ ಪ್ರದೇಶದಲ್ಲಿ ಕೆಲವು ಮನೆಗಳು ಪಾಳು ಬಿದ್ದು ಗಿಡ ಗಂಟೆಗಳು ಬೆಳದು ಸಾರ್ವಜನಿಕರಿಗೆ ತೊಂದರೆ ಆಗುತ್ತಿರುವುದನ್ನು ಗಮನಿಸಿದ ಶಾಸಕರು ತಕ್ಷಣ ಮನೆ ವಾಲೀಕರಿಗೆ ನೋಟಿಸ್ ನೀಡಿ ಸ್ವಚ್ಛಗೊಳಿಸುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ತಾಕೀತು ಮಾಡಿದರು. ನಂತರ ಶ್ರೀ ಮಹಾಲಕ್ಷ್ಮೀ ಕೊಲ್ಲಾಪುರದಮ್ಮ ದೇವಿ ದೇವಸ್ಥಾನದ ಆವರಣದಲ್ಲಿ ಜನ ಸಂಪರ್ಕ ಸಭೆ ನಡೆಸಿ ಸಾರ್ವಜನಿಕರ ಕುಂದು ಕೊರತೆ ಆಲಿಸಿ ಶೀಘ್ರ ಪರಿಹರಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ಇದೇ ಸಂದರ್ಭದಲ್ಲಿ ಮುಖಂಡರಾದ ಮಹದೇವ್ ಅವರು ಮುತುವರ್ಜಿ ವಹಿಸಿ ಮಾಡಿಸಿದ್ದ ವಿವಿಧ ಪಿಂಚಣಿಗಳ ಫಲಾನುಭವಿಗಳಿಗೆ ಮಂಜೂರಾತಿ ಪತ್ರ ವಿತರಿಸಲಾಯಿತು. ದೇವರಾಜ ಬ್ಲಾಕ್ ಅಧ್ಯಕ್ಷ ರಮೇಶ್ ರಾಂಪುರ, ವಾರ್ಡ್ ಅಧ್ಯಕ್ಷ ಆನಂದ್, ನಗರ ಪಾಲಿಕೆ ಸದಸ್ಯ ಡಿ.ನಾಗಭೂಷಣ್, ಮುಖಂಡ ಮಹದೇವ್, ಜ್ಞಾನೇಶ್, ಲೋಕೇಶ್ವರ, ಮಂಜುಣ್ಣ, ಶ್ರೀನಿವಾಸ್, ಮಂಜುನಾಥ್, ಲೋಕೇಶ್, ಮಂಜುಳ, ಮಂಗಳಾ, ಶಾಂತಿ, ಲೀಲಾ, ಪವನ್, ರವಿಚಂದ್ರ, ನಾಗಣ್ಣ, ನವೀನ್, ಹೇಮಂತ್, ಚೆಲುವ ಅಧಿಕಾರಿಗಳಾದ ಸಿಂಧು, ಪ್ರತಿಭಾ, ವೆಂಕಟೇಶ್, ಮುಸ್ತಫಾ, ಸಂದೇಶ್ ಇನ್ನಿತರರು ಹಾಜರಿದ್ದರು.

**ಬಾಡಿಗೆ ಮನೆಯಲ್ಲಿ ವಾಸಿಸುತ್ತಿರುವ ನಿವಾಸಿಗಳು ಸ್ವಂತ ಸೂರಿಗಾಗಿ ಶಾಸಕರ ಬಳಿ ಮನವಿ ಮಾಡಿದರು. ಇದಕ್ಕೆ ಪ್ರತಿಕ್ರಿಯಿಸಿದ ಶಾಸಕರು, ಇನ್ನೊಂದು ವರ್ಷದಲ್ಲಿ ಹಾಲಿ ಅರ್ಜಿ ಸಲ್ಲಿಸಿರುವ ಆಶ್ರಯ ಆಕಾಂಕ್ಷಿಗಳಿಗೆ ಸೂರು ನೀಡಲಾಗುವುದು. ನಂತರದ ದಿನಗಳಲ್ಲಿ ಹೊಸ ಅರ್ಜಿ ಪಡೆಯುವ ಬಗ್ಗೆ ಸರ್ಕಾರದ ಮಟ್ಟದಲ್ಲಿ ಚರ್ಚಿಸಿ ಅನುಕೂಲ ಮಾಡಿಕೊಡುವುದಾಗಿ ಭರವಸೆ ನೀಡಿದರು.**

# ಮಿನಿ ನ್ಯೂಸ್

## ಮ.ಬೆಟ್ಟದಲ್ಲಿ ಮಹಾಶಿವರಾತ್ರಿ, ಯುಗಾದಿ ಜಾತ್ರೆ

• ಉದಯವಾಹಿನಿ, ಚಾಮರಾಜನಗರ,

ಜಿಲ್ಲೆಯ ಪ್ರಸಿದ್ಧ ಯಾತ್ರಾಕ್ಷೇತ್ರ ಮಹದೇಶ್ವರ ಬೆಟ್ಟದಲ್ಲಿ ನಡೆಯಲಿರುವ ಮಹಾಶಿವರಾತ್ರಿ ಹಾಗೂ ಯುಗಾದಿ ಜಾತ್ರಾ ಮಹೋತ್ಸವಕ್ಕೆ ಆಗಮಿಸುವ ಭಕ್ತಾದಿಗಳ ಸೌಲಭ್ಯಕ್ಕೆ ಅಗತ್ಯ ಸಿದ್ಧತೆಯನ್ನು ಸಮರ್ಪಕವಾಗಿ ಕೈಗೊಳ್ಳಬೇಕೆಂದು ಶಾಸಕ ಎಂ.ಆರ್. ಮಂಜುನಾಥ್, ಜಿಲ್ಲಾಧಿಕಾರಿ ಶಿಲ್ಪಾನಾಗ್ ಅವರು ಸೂಚಿಸಿದರು. ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿಂದು ಮಹದೇಶ್ವರ ಬೆಟ್ಟದಲ್ಲಿ ನಡೆಯಲಿರುವ ಮಹಾಶಿವರಾತ್ರಿ, ಯುಗಾದಿ ಜಾತ್ರಾ ಮಹೋತ್ಸವ ಸಂಬಂಧ ನಡೆದ ಪೂರ್ವ ಸಿದ್ಧತಾ ಸಭೆಯಲ್ಲಿ ಶಾಸಕರಾದ ಎಂ.ಆರ್. ಮಂಜುನಾಥ್ ಅವರು ವರ್ಚುವಲ್ ಮೂಲಕ ಹಾಗೂ ಜಿಲ್ಲಾಧಿಕಾರಿ ಶಿಲ್ಪಾನಾಗ್ ಅವರು ಭಾಗವಹಿಸಿದ ಮೂಲಕ ಸಭೆ ನಡೆಸಿದರು. ಮಲೆ ಮಹದೇಶ್ವರ ಕ್ಷೇತ್ರಕ್ಕೆ ನಾಡಿನ ನಾನಾ ಭಾಗಗಳಲ್ಲದೇ ಹೊರ ರಾಜ್ಯಗಳಿಂದಲೂ ಲಕ್ಷಾಂತರ ಮಂದಿ ಜಾತ್ರೆಗೆ ಆಗಮಿಸಲಿದ್ದಾರೆ. ಭಕ್ತಾದಿಗಳಿಗೆ ಕುಡಿಯುವ ನೀರು, ನೆರಳಿನ ವ್ಯವಸ್ಥೆ, ವಾಸ್ತವ್ಯ, ದಾಸೋಹ, ದೇವರ ದರ್ಶನಕ್ಕೆ ಅಗತ್ಯ ಸೌಕರ್ಯಗಳನ್ನು ಯಾವುದೇ ತೊಂದರೆಯಿಲ್ಲದೆ ಕಲ್ಪಿಸಬೇಕು. ಹೀಗಾಗಿ ಎಲ್ಲಾ ಸಿದ್ಧತೆಗಳನ್ನು ಅಚ್ಚುಕಟ್ಟಾಗಿ ನಿರ್ವಹಿಸಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಕ್ಷೇತ್ರದಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳಿವೆ. ಹೆಚ್ಚು ಸಂಖ್ಯೆಯಲ್ಲಿ ಭಕ್ತಾದಿಗಳು ಬರಲಿರುವುದರಿಂದ ಕುಡಿಯುವ ನೀರಿನ ಮಾದರಿಗಳನ್ನು ಪರೀಕ್ಷಿಸಬೇಕು. ಪಾದಯಾತ್ರೆಯಲ್ಲಿ ಸಹ ಸಾಕಷ್ಟು ಮಂದಿ ಕ್ಷೇತ್ರಕ್ಕೆ ಆಗಮಿಸುವುದರಿಂದ ಮಾರ್ಗ ಮಧ್ಯೆ ಕುಡಿಯುವ ನೀರಿನ ವ್ಯವಸ್ಥೆ ಇರಬೇಕು. ಮಹದೇಶ್ವರ ಬೆಟ್ಟದಲ್ಲಿ ಪ್ಲಾಸ್ಟಿಕ್ ನಿಷೇಧ ಇರುವುದರಿಂದ ಪ್ಲಾಸ್ಟಿಕ್ ಬಾಟಲ್, ಪ್ಲಾಸ್ಟಿಕ್ ವಸ್ತುಗಳನ್ನು, ಇತರೆ ತ್ಯಾಜ್ಯಗಳನ್ನು ಕೊಂಡೊಯ್ಯದಂತೆ ಸಾರ್ವಜನಿಕರಿಗೆ ಮನವರಿಕೆ ಮಾಡಿಕೊಡಬೇಕು ಎಂದರು.

# ಶ್ರೀ ಕಾತಳಿ ಬಸವೇಶ್ವರ ಸ್ವಾಮಿ ಕೊಂಡೋತ್ಸವ

• ಉದಯವಾಹಿನಿ, ಹನೂರು


ಉದಯವಾಹಿನಿ ಚಿತ್ರ

ಭಕ್ತರ ಸಮ್ಮುಖದಲ್ಲಿ ವಿಜೃಂಭಣೆ

ತಾಲ್ಲೂಕಿನ ಸೂಳೆರಿಪಾಳ್ಯ ಗ್ರಾ. ಪಂ ವ್ಯಾಪ್ತಿಯ ಕೆ.ಗುಂಡಾಪುರ ಹೊರ ವಲಯದ ಆವರಣ ದಲ್ಲಿ ಇರುವ ಶ್ರೀ ಕಾತಳಿ ಬಸವೇಶ್ವರ ಸ್ವಾಮಿ ಕೊಂಡೋತ್ಸವ ಆಚರಣೆ ಸಾವಿರಾರು ಭಕ್ತರ ಸಮ್ಮುಖದಲ್ಲಿ ಬಹಳ ವಿಜೃಂಭಣೆಯಿಂದ ಅದ್ದೂರಿಯಿಂದ ಜರುಗಿತು.

ಕಳೆದ ಬಾರಿ 2003ರಲ್ಲಿ ಕೊಂಡ ಮಹೋತ್ಸವವನ್ನ ನಡೆಸಲಾಯಿತು. ಅದಾದ ನಂತರ ಕೊಂಡೋತ್ಸವ ಆಚರಣೆ ನಡೆದಿರಲಿಲ್ಲ. ಇದೀಗ 23 ವರ್ಷಗಳ ನಂತರ ಬಸಪ್ಪನದೊಡ್ಡಿ ಹಾಗೂ ಸುತ್ತಮುತ್ತಲಿನ ಗ್ರಾಮಸ್ಥರು ಸೇರಿದಂತೆ ಶ್ರೀ ಕಾತಳಿ ಬಸವೇಶ್ವರ ಸ್ವಾಮಿ ಕೊಂಡೋತ್ಸವ ಆಚರಣೆಯನ್ನು ಸಾಂಪ್ರದಾಯಿಕವಾಗಿ ನೇರವೇರಿಸಿದರು.

ಸೋಮವಾರ ಬೆಳಿಗ್ಗೆ 10 ಗಂಟೆ ವೇಳೆಯಲ್ಲಿ ಉಡು ತೋರೆ ಹಳ್ಳದಲ್ಲಿ ಚೆನ್ನಯ್ಯ, ಹುಚ್ಚಯ್ಯ ದೇವರುಗಳು, ಸತ್ತಿಗೆ, ಸೂರಪಾನಿಗಳಿಗೆ ಹೂಗಳಿಂದ ಅಲಂಕರಿಸಿ ವಿಧಿ ವಿಧಾನಗಳೊಂದಿಗೆ ಪೂಜೆ ಸಲ್ಲಿಸಿದರು. ಮೆರವಣಿಗೆಯಲ್ಲಿ ತಮಟೆ ವಾದ್ಯ ಮೇಲಾಗಳೊಂದಿಗೆ ಚೆನ್ನಯ್ಯ, ಹುಚ್ಚಯ್ಯ ದೇವರುಗಳು, ಸತ್ತಿಗೆ, ಸೂರಪನಿ ಹಾಲಾರವಿ ತರಲಾಯಿತು. ಶ್ರೀ ಕಾತಳಿ ಬಸವೇಶ್ವರ ಸ್ವಾಮಿ ದೇವಸ್ಥಾನದಲ್ಲಿ ಚೆನ್ನಯ್ಯ, ಹುಚ್ಚಯ್ಯ ದೇವರುಗಳು, ಸತ್ತಿಗೆ, ಸೂರಪನಿ, ಬಸವನಿಗೆ ವಿವಿಧ ಪೂಜಾ ಕೈಂಕರ್ಯಗಳು ಸಹಸ್ರಾರು ಭಕ್ತಾದಿಗಳ ಸಮ್ಮುಖದಲ್ಲಿ ಜರುಗಿತು. ನಂತರ 5 –35ರ ವೇಳೆಯಲ್ಲಿ ಕೊಂಡ ಮಹೋತ್ಸವವನ್ನ ಸಾವಿರಾರು ಭಕ್ತರ ಸಮ್ಮುಖದಲ್ಲಿ ಬಹಳ ವಿಜೃಂಭಣೆಯಿಂದ ನಡೆಯಿತು. ಕೊಂಡೋತ್ಸವ ಹಬ್ಬದ ವಿಶೇಷ ಆಚರಣೆ ಹಿನ್ನೆಲೆಯಲ್ಲಿ ಎರಡು ದಿನಗಳಿಂದ ಬರುವಂತಹ ಭಕ್ತಾದಿಗಳಿಗೆ ಅನ್ನ ಸಂತರ್ಪಣೆ ಏರ್ಪಡಿಸಲಾಗಿತ್ತು. ಕೊಂಡ ಮಹೋತ್ಸವ ವೇಳೆಯಲ್ಲಿ ಯಾವುದೇ ರೀತಿಯ ಅವಘಡ ಸಂಭವಿಸುವ ಮುನ್ನೆಚ್ಚರಿಕೆ ಹಿನ್ನೆಲೆಯಲ್ಲಿ ರಾಮಾಪುರ ಪೊಲೀಸ್ ಇನ್ಸ್‌ಪೆಕ್ಟರ್ ಶೇಷಾದ್ರಿ ನೇತೃತ್ವದಲ್ಲಿ ಪೊಲೀಸ್ ಬಂದೋ ಬಸ್ತ್ ನಿಯೋಜಿಸಲಾಗಿತ್ತು.

# ಮೂಲ ಸೌಕರ್ಯಕ್ಕೆ ಆಗ್ರಹಿಸಿ ಗ್ರಾ.ಪಂ ಕಚೇರಿಗೆ ಬೀಗ

• ಉದಯವಾಹಿನಿ, ಮಧುಗಿರಿ


ಉದಯವಾಹಿನಿ ಚಿತ್ರ

ಮೂಲಸೌಕರ್ಯಗಳನ್ನು ಒದಗಿಸಬೇಕೆಂದು ಆಗ್ರಹಿಸಿ ತಾಲ್ಲೂಕಿನ ಭಟ್ಟಗೆರೆ ಗ್ರಾಮಸ್ಥರು ಕೊಂಡವಾಡಿ ಗ್ರಾಮ ಪಂಚಾಯಿತಿ ಕಚೇರಿಗೆ ಬೀಗ ಜಡಿದು ಪ್ರತಿಭಟನೆ ನಡೆಸಿದರು.

ಭಟ್ಟಗೆರೆ ಗ್ರಾಮದ ದಲಿತರ ಕಾಲೊನಿಯಲ್ಲಿ ಹಲವು ವರ್ಷಗಳಿಂದ ಮೂಲ ಸೌಕರ್ಯಗಳು ಮರೀಚಿಕೆಯಾಗಿದೆ ಎಂದು ಗ್ರಾಮಸ್ಥರು ದೂರಿದರು. ಕಾಲೊನಿಯ ಮನೆಗಳಿಗೆ ತೆರಳಲು ಸರಿಯಾದ ರಸ್ತೆ ಇಲ್ಲದಂತಾಗಿದೆ. ಇದರಿಂದ ನಿವಾಸಿಗಳಿಗೆ ಸಾಕಷ್ಟು ತೊಂದರೆಯಾಗುತ್ತಿದೆ. ವಿದ್ಯುತ್, ರಸ್ತೆ, ಚರಂಡಿ, ಕುಡಿಯುವ ನೀರಿನ ವ್ಯವಸ್ಥೆ ಇಲ್ಲದೆ ನಿವಾಸಿಗಳು ಪರದಾಡುವ ಸ್ಥಿತಿ ಇದೆ. ಮಳೆಗಾಲದಲ್ಲಿ ರಸ್ತೆ ಮೇಲೆ ಬಿದ್ದ ನೀರು ಮನೆಯೊಳಗೆ ಬರುತ್ತಿವೆ. ರಸ್ತೆ ಮೇಲೆ ಸಂಚಾರ ಮಾಡುವುದಕ್ಕೆ ಸಾಕಷ್ಟು ತೊಂದರೆಯಾಗುತ್ತಿದೆ. ಈ ಸಮಸ್ಯೆ ಬಗ್ಗೆ ಅಧಿಕಾರಿಗಳು ಗಮನ ಹರಿಸಿ ಪರಿಹರಿಸಬೇಕು ಎಂದು ಹಲವು ಬಾರಿ ತಿಳಿಸಿದರೂ ಯಾವುದೇ ಪ್ರಯೋಜನವಾಗಿಲ್ಲ ಎಂದು ಗ್ರಾಮಸ್ಥರು ಆರೋಪಿಸಿದರು. ಗ್ರಾಮದ ಲಕ್ಷ್ಮಮ್ಮ ಮಾತನಾಡಿ, ಗ್ರಾಮದಲ್ಲಿ ರಸ್ತೆ ವ್ಯವಸ್ಥೆ ಇಲ್ಲದೇ ಇರುವುದರಿಂದ ಬಸ್ ಗ್ರಾಮಕ್ಕೆ ಬರುತ್ತಿಲ್ಲ. ವಿದ್ಯಾರ್ಥಿಗಳ ವಿದ್ಯಾಭ್ಯಾಸಕ್ಕೆ ತೊಂದರೆಯಾಗುತ್ತಿದೆ. ರಸ್ತೆ, ಚರಂಡಿ ಮತ್ತು ಬೀದಿ ದೀಪದ ವ್ಯವಸ್ಥೆ ಮಾಡಿಕೊಡಬೇಕು ಎಂದು ಒತ್ತಾಯಿಸಿದರು.

**ಗ್ರಾ.ಪಂ ಪಿಡಿಒ ರವಿಚಂದ್ರ ಮಾತನಾಡಿ, ಗ್ರಾಮದಲ್ಲಿ ರಸ್ತೆ ನಿರ್ಮಾಣಕ್ಕೆ ಲೋಕೋಪಯೋಗಿ ಇಲಾಖೆಗೆ ಪ್ರಸ್ತಾವ ಸಲ್ಲಿಸಲಾಗಿದೆ. ಈಗಾಗಲೇ ಎಂಜಿನಿಯರ್ ಭೇಟಿ ನೀಡಿ ಪರಿಶೀಲನೆ ಮಾಡಿದ್ದಾರೆ. ನರೇಗ ಯೋಜನೆಯಡಿ ಎರಡು ಚರಂಡಿ ನಿರ್ಮಾಣ ಮಾಡಲಾಗಿದೆ. ದಲಿತರ ಕಾಲೊನಿಯ ಮನೆಗಳಿಗೆ ತೆರಳಲು ದಾರಿ ವ್ಯವಸ್ಥೆ ಕಲ್ಪಿಸಲಾಗುವುದು ಎಂದರು.**

# ಸಿದ್ಧಗಂಗೆ ಕೃಷಿ-ಕೈಗಾರಿಕಾ ವಸ್ತುಪ್ರದರ್ಶನಕ್ಕೆ ಚಾಲನೆ

• ಉದಯವಾಹಿನಿ, ತುಮಕೂರು


ಉದಯವಾಹಿನಿ ಚಿತ್ರ

ಸಿದ್ಧಲಿಂಗೇಶ್ವರ ಸ್ವಾಮಿ ಜಾತ್ರಾ ಮಹೋತ್ಸವ

ಸಿದ್ಧಗಂಗೆಯ ಲಿಂಗೈಕ್ಯ ಡಾ. ಶ್ರೀ ಶಿವಕುಮಾರ ಸ್ವಾಮೀಜಿಯವರ ದೂರದೃಷ್ಟಿಯ ಫಲವಾದ ಕೃಷಿ ಮತ್ತು ಕೈಗಾರಿಕಾ ವಸ್ತುಪ್ರದರ್ಶನ, ರೈತರಿಗೆ, ಕೈಗಾರಿಕೋದ್ಯಮಿಗಳಿಗೆ ಮಾಹಿತಿ ಒದಗಿಸುವ ಒಂದು ವೇದಿಕೆಯಾಗಿದೆ ಎಂದು ಶಾಸಕ ಜಿ.ಬಿ. ಜ್ಯೋತಿಗಣೇಶ್ ತಿಳಿಸಿದರು.

ನಗರದ ಇತಿಹಾಸ ಪ್ರಸಿದ್ಧ ಸಿದ್ದಗಂಗಾ ಮಠದಲ್ಲಿ ಶ್ರೀ ಸಿದ್ದಲಿಂಗೇಶ್ವರ ಸ್ವಾಮಿ ಜಾತ್ರಾ ಮಹೋತ್ಸವದ ಅಂಗವಾಗಿ ಏರ್ಪಡಿಸಲಾಗಿರುವ ಕೃಷಿ ಮತ್ತು ಕೈಗಾರಿಕಾ ವಸ್ತುಪ್ರದರ್ಶನಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಸುಮಾರು 61 ವರ್ಷಗಳ ಹಿಂದೆ ಡಾ. ಶ್ರೀ ಶಿವಕುಮಾರಸ್ವಾಮೀಜಿಗಳು ಶ್ರೀಮಠಕ್ಕೆ ಬರುವ ಭಕ್ತರಿಗೆ ಧಾರ್ಮಿಕ ಉತ್ಸವ, ಆಚರಣೆಗಳ ಜತೆಗೆ ಕೃಷಿ ಮತ್ತು ಕೃಷಿಗೆ ಪೂರಕವಾದ ಅಂಶಗಳ ಕುರಿತು ಜಾಗೃತಿ ಮೂಡಿಸುವ ಸಲುವಾಗಿ ಈ ವಸ್ತು ಪ್ರದರ್ಶನವನ್ನು ಆಯೋಜಿಸಿದ್ದು, ಶ್ರೀ ಸಿದ್ದಲಿಂಗ ಸ್ವಾಮೀಜಿಗಳು ಅದನ್ನು ಮುಂದುವರೆಸಿಕೊಂಡು ಬರುತ್ತಿದ್ದಾರೆ ಎಂದರು. ಸಿದ್ಧಗಂಗಾ ಮಠದ ಭಕ್ತರು, ಇಲ್ಲಿಗೆ ಬರುವ ರೈತರು, ಉದ್ಯಮಿದಾರರಿಗೆ ದೇಶದಲ್ಲಿ ನಡೆಯುವ ಹೊಸ ಅವಿಷ್ಕಾರದ ಬಗ್ಗೆ ತಿಳುವಳಿಕೆ ನೀಡುವ ಉದ್ದೇಶದಿಂದ ಆರಂಭಿಸಿದವಸ್ತು ಪ್ರದರ್ಶನವನ್ನು ಜಿಲ್ಲಾಡಳಿತದ ಸಹಕಾರದೊಂದಿಗೆ ಯಾವುದೇ ರೀತಿಯ ಲೋಪದೋಷಗಳು ಬಾರದಂತೆ ಹಲ ವಾರು ವರ್ಷ ಗಳಿಂದ ಸುಸೂತ್ರವಾಗಿ ನಡೆಸಿಕೊಂಡು ಬರಲಾಗುತ್ತಿದೆ. ಪ್ರತಿ ವರ್ಷ ಹೊಸತನವನ್ನು ಈ ವಸ್ತು ಪ್ರದರ್ಶನದಲ್ಲಿ ಕಾಣ ಬಹುದು. ಇದರಿಂದ ಶ್ರೀ ಶಿವಕುಮಾರ ಸ್ವಾಮೀಜಿಗಳ ಆಶಯ ಈಡೇರಿದಂತಾಗಿದೆ ಎಂದರು. ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿದ್ದ ಸಿದ್ದಗಂಗಾ ಮಠಾಧ್ಯಕ್ಷರಾದ ಶ್ರೀ ಸಿದ್ದಲಿಂಗ ಸ್ವಾಮೀಜಿ ಆಶೀರ್ವಚನ ನೀಡಿ, ಸಿದ್ಧಗಂಗಾ ಜಾತ್ರೆಯ ವಿಶೇಷತೆ ಎಂದರೆ ಅದು ವಸ್ತು ಪ್ರದರ್ಶನ, ಖಾಸಗಿ ಸಂಸ್ಥೆಯೊಂದು ಸರ್ಕಾರದ ಸಹಕಾರದೊಂದಿಗೆ ಇಷ್ಟೊಂದು ಸುದೀರ್ಘ ಕಾಲದವರೆಗೆ ವಸ್ತು ಪ್ರದರ್ಶನವನ್ನು ನಡೆಸಿಕೊಂಡು ಬರಲಾಗುತ್ತಿದೆ. ಸಿದ್ಧಗಂಗಾ ಮಠ ಶ್ರೀಸಾಮಾನ್ಯನಿಗೆ ಕೇವಲ ಧಾರ್ಮಿಕ ಉತ್ಸವಗಳನ್ನೇ ನೀಡದೆ, ಕೃಷಿ, ಕೈಗಾರಿಕೆಗೆ ಪೂರಕ ಮಾಹಿತಿಗಳನ್ನು ಒದಗಿಸುವ ಒಂದು ವೇದಿಕೆಯಾಗಿ ಪರಿವರ್ತನೆಯಾಗಿದೆ ಎಂದರು.

ವೇದಿಕೆಯಲ್ಲಿ ಉದ್ಯಮಿಗಳಾದ ಮಲ್ಲಿಕಾರ್ಜುನ್, ಶೇಖರ್, ಶ್ರೀ ನಿವಾಸ್, ರಾಜಶೇಖರ್, ವಿಶ್ವಣ್ಣ,ವಸ್ತು ಪ್ರದರ್ಶನ ಆಯೋಜನಾ ಸಮಿತಿಯ ಕಾರ್ಯದರ್ಶಿ ಪ್ರೊ. ಗಂಗಾಧರಯ್ಯ ಬಿ., ಜಂಟಿ ಕಾರ್ಯ ದರ್ಶಿಗಳಾದ ಕೆಂ.ಬ.ರೇಣುಕಯ್ಯ, ಎಸ್. ಶಿವಕುಮಾರ್, ಸಾಂಸ್ಕೃತಿಕ ಸಮಿತಿಯ ಉಮಾಮಹೇಶ್, ಮೈದಾಳ ಮಂಜಣ್ಣ ಮತ್ತಿತರರು ಪಾಲ್ಗೊಂಡಿದ್ದರು. ಕಾರ್ಯಕ್ರಮಕ್ಕೂ ಮುನ್ನ ವಿವಿಧ ಇಲಾಖೆಗಳಿಂದ ತೆರೆದಿರುವ ಮಳಿಗೆಗಳನ್ನು ಶಾಸಕರು ವೀಕ್ಷಿಸಿ ಮಾಹಿತಿ ಪಡೆದರು.


**ಕೃಷಿ ನಮ್ಮ ದೇಶದ ಬೆನ್ನೆಲುಬು. ಹಾಗಾಗಿ ಕೃಷಿಕರಿಗೆ ಈ ಕ್ಷೇತ್ರದಲ್ಲಿನ ಹೊಸ ಬೆಳವಣಿಗೆಗಳ ಮಾಹಿತಿ ನೀಡುವುದು, ಹೊಸದಾಗಿ ಉದ್ಯಮ ಆರಂಭಿಸುವವರಿಗೆ ಅಗತ್ಯ ಮಾಹಿತಿ ನೀಡುವುದರ ಜತೆಗೆ, ಸರ್ಕಾರದ ವಿವಿಧ ಇಲಾಖೆಗಳ ಮೂಲಕ ಸರ್ಕಾರದ ಸವಲತ್ತುಗಳನ್ನು ಜನರು ಹೇಗೆ ಪಡೆದುಕೊಳ್ಳಬೇಕು ಎಂಬುದು ಪ್ರತಿ ಇಲಾಖೆ ತಮ್ಮ ಮಳಿಗೆ ತೆರೆದು ಮಾಹಿತಿ ನೀಡುತ್ತಿದ್ದಾರೆ. ಇಂದಿನಿಂದ 15 ದಿನಗಳ ಕಾಲ ನಡೆಯುವ ಈ ವಸ್ತುಪ್ರದರ್ಶನದ ಪ್ರಯೋಜನವನ್ನು ರೈತರು ಪಡೆದುಕೊಳ್ಳಬೇಕು ಎಂದು ಅವರು ಮನವಿ ಮಾಡಿದರು.**

## ಉದಯಗಿರಿ ಠಾಣೆ ಪಿಎಸ್ಐ ವರ್ಗಾವಣೆ

• ಉದಯವಾಹಿನಿ, ಮೈಸೂರು,

ಉದಯಗಿರಿ ಪೊಲೀಸ್ ಠಾಣೆ ಮೇಲೆ ಕಲ್ಲು ತೂರಾಟ ಪ್ರಕಣಕ್ಕೆ ಸಂಬಂಧ ಠಾಣೆಯ ಸಬ್ ಇನ್ಸ್‌ಪೆಕ್ಟರ್ ರೂಪೇಶ್ ಅವರನ್ನು ವರ್ಗಾವಣೆ ಮಾಡಲಾಗಿದೆ. ನಗರ ಪೊಲೀಸ್ ಆಯುಕ್ತರ ಕಚೇರಿಯ ಆಟೋಮೇಷನ್ ಸೆಂಟರ್‌ಗೆ ವರ್ಗಾವಣೆ ಮಾಡಿ ಪೊಲೀಸ್ ಆಯುಕ್ತೆ ಸೀಮಾ ಲಾಟ್ಕರ್ ಆದೇಶ ಪ್ರಕಟಿಸಿದ್ದಾರೆ. ಗಲಾಟೆ ತಡೆಯಲು ಅವಕಾಶ ಇದ್ದರೂ ಕೂಡ ನಿರ್ಲಕ್ಷ್ಯ ವಹಿಸಿದ್ದರಿಂದ ಗಲಭೆ ನಡೆದಿದೆ ಎಂಬ ಮಾತುಗಳು ಕೇಳಿ ಬಂದ ಬೆನ್ನಲ್ಲೇ ರೂಪೇಶ್ ಅವರನ್ನು ವರ್ಗಾವಣೆ ಮಾಡಲಾಗಿದೆ. ಸೋಷಿಯಲ್ ಮೀಡಿಯಾದಲ್ಲಿ ಪೋಟೋ ವೈರಲ್ ಆದ ನಂತರ ಸ್ಟೇಟಸ್ ಹಾಕಿದ್ದ ಆರೋಪಿ ಸತೀಶ್ ಅಲಿಯಾಸ್ ಪಾಂಡುರಂಗನನ್ನ ರೂಪೇಶ್ ಠಾಣೆಗೆ ಕರೆತಂದಿದ್ದರು. ಬೆಳಿಗ್ಗೆಯಿಂದ ಸಂಜೆಯವರೆಗೂ ಸತೀಶ್ ಮೇಲೆ ಕ್ರಮ ಕೈಗೊಳ್ಳಲು ಹಿಂದೇಟು ಹಾಕಿದ್ದಕ್ಕೆ ಠಾಣೆ ಮುಂದೆ ಮುಸ್ಲಿಂ ಯುವಕರ ಗುಂಪು ಜಮಾಯಿಸಿ ಗಲಾಟೆ ನಡೆಸಿತ್ತು.

# ಚಿರತೆ ದಾಳಿಗೆ ಕರು ಬಲಿ



• ಉದಯವಾಹಿನಿ, ಕೊರಟಗೆರೆ

ಜಮೀನಿನಲ್ಲಿ ಕಟ್ಟಿದ್ದ ಕರುವಿನ ಮೇಲೆ ಚಿರತೆ ಏಕಾಏಕಿ ದಾಳಿ ನಡೆಸಿದ ಪರಿಣಾಮ ಕರು ಮೃತಪಟ್ಟಿದ್ದು, ಕೂಡಲೇ ರೈತ ಅರಣ್ಯಾಧಿಕಾರಿಗಳ ಗಮನಕ್ಕೆ ತಂದಿದ್ದಾರೆ. ಪಟ್ಟಣದ ಊರ್ಡಿಗೆರೆ ಕ್ರಾಸ್ ಬಳಿ ವಿಜಯ್ ಸರ್ವೀಸ್ ಸ್ಟೇಷನ್ ಹಿಂಭಾಗದಲ್ಲಿನ ಇಮ್ರಾನ್. ಪಾಷ ಎಂಬವರ ರೈತರ ಜಮೀನಿನಲ್ಲಿ ಫೆ. 17ರ ತಡರಾತ್ರಿ ಈ ಘಟನೆ ನಡೆದಿದೆ. ಪ್ರತಿನಿತ್ಯದಂತೆ ಕರುವಿಗೆ ಮೇವು ಹಾಕಲು ಹೋದ ಸಂದರ್ಭ ರಾತ್ರಿ ವೇಳೆ ಚಿರತೆ ದಾಳಿ ನಡೆಸಿ ಕರುವನ್ನು ಬಲಿ ತೆಗೆದುಕೊಂಡಿರುವುದು ಗಮನಕ್ಕೆ ಬಂದಿತ್ತು. ಕೂಡಲೇ ಅರಣ್ಯಾಧಿಕಾರಿಗಳ ಗಮನಕ್ಕೆ ತರಲಾಗಿದೆ. ಅರಣ್ಯಾಧಿಕಾರಿಗಳು ಸಹ ಸ್ಥಳಕ್ಕೆ ಧಾವಿಸಿ ಪರಿಶೀಲನೆ ನಡೆಸಿ ಘಟನೆಯ ವಿವರದ ಬಗ್ಗೆ ರೈತ ಇಮ್ರಾನ್ ಪಾಷನಿಂದ ಮಾಹಿತಿ ಪಡೆದಿದ್ದಾರೆ.

**10 ಸಾವಿರ ಪರಿಹಾರ:** ಚಿರತೆ ದಾಳಿ ನಡೆಸಿ ಕರುವನ್ನು ಬಲಿ ತೆಗೆದುಕೊಂಡಿರುವ ವಿಚಾರವನ್ನು ಇಮ್ರಾನ್ ಪಾಷ ಎಂಬ ರೈತ ಮಾಹಿತಿ ಹಂಚಿಕೊಂಡಿದ್ದು, ಸುಮಾರು 1 ವರ್ಷದ ಕರು ಎಂದು ಅಂದಾಜಿಸಲಾಗಿದ್ದು, ಅರಣ್ಯ ಇಲಾಖೆಯಿಂದ 10 ಸಾವಿರ ಪರಿಹಾರವನ್ನು ರೈತನಿಗೆ ನೀಡಲಾಗುವುದು ಎಂದು ವಲಯ ಅರಣ್ಯಾಧಿಕಾರಿ ಸುರೇಶ್ ತಿಳಿಸಿದ್ದಾರೆ. ಸಾರ್ವಜನಿಕರು ಚಿರತೆಗೆ ಭಯಪಡದೆ ಜಾಗೃತರಾಗಿ ರಾತ್ರಿ ವೇಳೆ ಜಮೀನಿನ ಕಡೆ ಒಬ್ಬಂಟಿಯಾಗಿ ಓಡಾಡುವುದನ್ನು ನಿಲ್ಲಿಸಿ. ಮತ್ತೆ ಮತ್ತೆ ಚಿರತೆ ಕಾಣಿಸಿಕೊಂಡಲ್ಲಿ ಅರಣ್ಯ ಇಲಾಖೆಗೆ ಮಾಹಿತಿ ನೀಡುವಂತೆ ಅರಣ್ಯಾಧಿಕಾರಿಗಳು ಸಲಹೆ ನೀಡಿದರು.

# ಮೈಸೂರಿಗೆ ತಡೆರಹಿತ ಬಸ್‌ಗಳ ಹೆಚ್ಚಳ

• ಉದಯವಾಹಿನಿ, ಚಾಮರಾಜನಗರ


ಉದಯವಾಹಿನಿ ಚಿತ್ರ

ಒಂದು ಕಾಲಕ್ಕೆ ನಗರದಿಂದ ಮೈಸೂರಿಗೆ ಕೆಎಸ್‌ಆರ್‌ಟಿಸಿ ಬಸ್‌ಗಳಲ್ಲಿ ಹೊರಟರೆ ಒಂದೂವರೆಯಿಂದ ಒಂದು ಮುಕ್ಕಾಲು ಗಂಟೆ ಪ್ರಯಾಣದಿಂದ ಪ್ರಯಾಸ ತಪ್ಪಿದ್ದಲ್ಲ ಎಂಬಂತಹ ಸ್ಥಿತಿ ಇತ್ತು. ಆದರೀಗ ತಡೆರಹಿತ ಬಸ್‌ಗಳ ಸಂಚಾರದಿಂದ ಮೈಸೂರು ಪ್ರಯಾಣ ಸುಲಲಿತವಾಗಿದೆ. ಚಾಮರಾಜನಗರ ಜಿಲ್ಲಾಕೇಂದ್ರದಿಂದ ಹೊರಟರೆ ಮೈಸೂರಿನಲ್ಲಿ ಮಾತ್ರ ನಿಲುಗಡೆಯಾಗುವ ಬಸ್‌ಗಳು 60 ಟ್ರಿಪ್‌ಗಳು ಸಂಚರಿಸುತ್ತಿವೆ. ಇನ್ನು ನಗರ ಬಿಟ್ಟರೆ ಕವಲಂದೆ, ನಂಜನಗೂಡಿನಲ್ಲಿ ಮಾತ್ರ ನಿಲುಗಡೆ ಮಾಡಿ, ಮೈಸೂರು ತಲುಪುವ ಅಶ್ವಮೇಧ ಬಸ್‌ಗಳು 52 ಟ್ರಿಪ್‌ಗಳಲ್ಲಿ ಸಂಚರಿಸುತ್ತಿವೆ. ಇದರಿಂದ ಮೈಸೂರಿಗೆ ನಿತ್ಯ ಸಂಚರಿಸುವ ಮಂದಿಗೆ ಸಾಕಷ್ಟು ಅನುಕೂಲವಾಗಿದ್ದು, ಪ್ರಯಾಸ ರಹಿತ ಪಯಣ ಸಾಧ್ಯವಾಗಿದೆ.

ಮೈಸೂರಿನಿಂದ ಪ್ರತ್ಯೇಕಗೊಂಡು ಚಾ.ನಗರ ಜಿಲ್ಲಾ ಕೇಂದ್ರವಾಗಿ 27 ವರ್ಷಗಳೇ ಉರುಳಿವೆ. ಆದರೆ, ನಗರದ ಜನತೆಗೆ ಮೈಸೂರಿನ ನಂಟು ದೂರವಾಗಿಲ್ಲ. ಚಾ.ನಗರದ ಜನತೆಗೆ ಮೈಸೂರು ಸಹ ಇಷ್ಟದ ನಗರ . ನಮ್ಮೂರಿನಷ್ಟೇ ಮೋಹ ಮೈಸೂರಿನ ಮೇಲೆ. ಇನ್ನು ಕೆಲವರು ಕಾಯಕದ ದೃಷ್ಟಿಯಿಂದ 62 ಕಿ.ಮೀ. ದೂರದ ಮೈಸೂರಿಗೆ ಪಯಣಿಸಲೇ ಬೇಕು. ಮೈಸೂರಿನಿಂದ ಸಹ ಚಾ.ನಗರಕ್ಕೆ ಕೆಲಸದ ನಿಮಿತ್ತ ನಿತ್ಯ ನೂರಾರು ಸಂಖ್ಯೆಯಲ್ಲಿ ಬರುವವರು ಸಹ ಇದ್ದಾರೆ.

ಹೀಗಾಗಿ ಬಹಳ ವರ್ಷಗಳಿಂದ ಇಂಥ ನಾನ್ ಸ್ಟಾಪ್ ಬಸ್‌ಗಳಿಗಾಗಿ ಬೇಡಿಕೆ ಇತ್ತು. ಆದರೆ, ಕಳೆದ ಒಂದೆರಡು ತಿಂಗಳಿಂದ ನಾನ್ ಸ್ಟಾಪ್ ಸೇವೆಯನ್ನು ಕೆಎಸ್‌ಆರ್‌ಟಿಸಿ ಚಾ.ನಗರ ವಿಭಾಗ ಆರಂಭಿಸಿದೆ. ಚಾ.ನಗರದಲ್ಲಿ ಟಿಕೆಟ್ ಪಡೆದು ಹತ್ತಿ ಕುಳಿತರೆ ಮೈಸೂರಿನಲ್ಲಿ ಮಾತ್ರ ನಿಲುಗಡೆ ಎಂಬಂತಹ 10 ಬಸ್‌ಗಳನ್ನು ಇದೀಗ ಬಿಡಲಾಗಿದ್ದು, 85 ರೂ. ಪ್ರಯಾಣ ದರ ನಿಗದಿ ಮಾಡಲಾಗಿದೆ. ಈ 10 ಬಸ್‌ಗಳು ಒಟ್ಟು 60 ಟ್ರಿಪ್‌ಗಳಲ್ಲಿ ಸಂಚರಿಸಲಿವೆ. ಇನ್ನು ಕವಲಂದೆ, ನಂಜನಗೂಡಿನಲ್ಲಿಮಾತ್ರ ನಿಲುಗಡೆ ಮಾಡಿ ಮೈಸೂರು ತಲುಪುವ ಅಶ್ವಮೇಧ ಬಸ್‌ಗಳಲ್ಲಿನ ಪ್ರಯಾಣ ದರ 82 ರೂ. ಇದೆ. ಆರಂಭದಲ್ಲಿ ಒಂದೆರಡು ಬಸ್‌ಗಳು ಮಾತ್ರ ನಾನ್‌ಸ್ಟಾಪ್ ಇದ್ದವು. ಅದಕ್ಕೆ ಸಿಕ್ಕ ಬೇಡಿಕೆ ಗಮನಿಸಿ ತಡೆ ರಹಿತ ಬಸ್‌ಗಳ ಸಂಖ್ಯೆಯನ್ನು ಹೆಚ್ಚಳ ಮಾಡಲಾಗಿದೆ ಎನ್ನುತ್ತಾರೆ ಕೆಎಸ್‌ಆರ್‌ಟಿಸಿ ಅಧಿಕಾರಿಗಳು.

### ಸರಾಸರಿ 7 ಸಾವಿರ ಪ್ರಯಾಣಿಕರು

**ನಗರದಿಂದ ಮೈಸೂರಿಗೆ ಹಾಗೂ ಮೈಸೂರಿನಿಂದ ನಗರಕ್ಕೆ ಈ ನಾನ್‌ಸ್ಟಾಪ್ ಬಸ್‌ಗಳಲ್ಲೇ ನಿತ್ಯ 6500 ಯಿಂದ 7 ಸಾವಿರ ಮಂದಿ ಪ್ರಯಾಣಿಸುತ್ತಿದ್ದಾರೆ. ಈ ಸ್ಪಂದನೆಯಿಂದ ಕೆಎಸ್ ಆರ್‌ಟಿಸಿಗೆ ಉತ್ತಮ ಆದಾಯವೂ ಬರುತ್ತಿದೆ. ಇತರೆ ಬಸ್ ಗಳಿಗಿಂತ ನಾನ್‌ಸ್ಟಾಪ್‌ಗಳಲ್ಲಿನ ಪ್ರಯಾಣ ದರ ಸ್ವಲ್ಪ ಹೆಚ್ಚಿದೆ. ಹೀಗಾಗಿ ಲಾಭಾಂಶವೂ ಇದೆ. ಪ್ರತಿ ಕಿ.ಮೀ.ಗೆ 55 ರಿಂದ 60 ರೂಪಾಯಿ ಆದಾಯವನ್ನು ನಿತ್ಯ ಈ ನಾನ್ ಸ್ಟಾಪ್ ಬಸ್‌ಗಳು ಕೆಎಸ್‌ಆರ್‌ಟಿಸಿಯ ಚಾ.ನಗರ ವಿಭಾಗಕ್ಕೆ ತಂದುಕೊಡುತ್ತಿವೆ. ಮೈಸೂರಿಗೆ ಪ್ರಯಾಣ ಮಾಡುವ ಬಹುತೇಕ ಎಲ್ಲರೂ ಈ ನಾನ್‌ಸ್ಟಾಪ್ ಬಸ್‌ಗಳನ್ನೇ ಇಷ್ಟ ಪಡುತ್ತಿದ್ದಾರೆ. ಹೀಗಾಗಿ ಪ್ರತಿ ಅರ್ಧ ತಾಸಿಗೊಂದು ನಾನ್‌ಸ್ಟಾಪ್‌ಗಳು ಸಂಚರಿಸುವ ವ್ಯವಸ್ಥೆಯನ್ನು ಅಧಿಕಾರಿಗಳು ಮಾಡಿದ್ದಾರೆ.**

# ಅನ್ನಭಾಗ್ಯ, ಗೃಹಲಕ್ಷ್ಮಿ ಹಣ ಶೀಘ್ರ ಬಿಡುಗಡೆ

• ಉದಯವಾಹಿನಿ, ಚಿಂತಾಮಣಿ


ಉದಯವಾಹಿನಿ ಚಿತ್ರ

ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಗಳಾದ ಗೃಹಲಕ್ಷ್ಮಿ ಮತ್ತು ಅನ್ನಭಾಗ್ಯ ಯೋಜನೆಯ ಹಣವನ್ನು ಶೀಘ್ರವೇ ಬಿಡುಗಡೆ ಮಾಡಲಾಗುವುದು ತಾಂತ್ರಿಕ ಕಾರಣದಿಂದ ಹಣ ಬಿಡುಗಡೆಯು ಒಂದು ತಿಂಗಳು ವಿಳಂಬವಾಗಿದೆ ಎಂದು ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ. ಸುಧಾಕರ್ ತಿಳಿಸಿದರು.

ನಗರದ ಹೊರವಲಯದ ಕರಿಯಪ್ಪಲ್ಲಿಯಲ್ಲಿ ಮಂಗಳವಾರ 13 ಲಕ್ಷ ವೆಚ್ಚದ ಅಂಗನವಾಡಿ ಕಟ್ಟಡದ ಕಾಮಗಾರಿ ಉದ್ಘಾಟಿಸಿ ಮಾತನಾಡಿದರು. ಕಾಂಗ್ರೆಸ್ ಸರ್ಕಾರ ಜಾರಿ ಮಾಡಿದ ಐದು ಗ್ಯಾರಂಟಿಗಳನ್ನು ಯಾವುದೇ ಕಾರಣಕ್ಕೂ ನಿಲ್ಲಿಸುವುದಿಲ್ಲ ಎಂದು ಈಗಾಗಲೇ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸ್ಪಷ್ಟಪಡಿಸಿದ್ದಾರೆ. ವಿರೋಧ ಪಕ್ಷಗಳ ಸುಳ್ಳು ಅಪಪ್ರಚಾರಗಳಿಗೆ ಜನರು ಕಿವಿಗೊಡಬಾರದು. ಬಾಕಿ ಹಣವನ್ನು ಶೀಘ್ರವಾಗಿ ಫಲಾನುಭವಿಗಳ ಖಾತೆಗೆ ಜಮೆ ಮಾಡಲಾಗುವುದು ಎಂದರು. ಕರಿಯಪ್ಪಲ್ಲಿ ಪ್ರದೇಶವು ನಗರಕ್ಕೆ ಹೊಂದಿಕೊಂಡಿದ್ದರೂ ಕಾಗತಿ ಗ್ರಾಮ ಪಂಚಾಯಿತಿ ವ್ಯಾಪ್ತಿಗೆ ಸೇರಿದೆ. ಈ ಸ್ಥಳವು ಭವಿಷ್ಯದಲ್ಲಿ ನಗರಕ್ಕೆ ಸೇರುತ್ತದೆ ಎಂಬುದನ್ನು ಗಮನಿಸಿ ಒಳಚರಂಡಿ ಯೋಜನೆ ಅನುಷ್ಠಾನಗೊಳಿಸಲಾಗಿದೆ. ಆದರೆ, ಕಳೆದ 10 ವರ್ಷಗಳಿಂದ ಯಾವುದೇ ಅಭಿವೃದ್ಧಿ ಕಂಡಿಲ್ಲ ಎಂಬ ಆರೋಪವಿದೆ. ಹೀಗಾಗಿ, ಒಳಚರಂಡಿ ವ್ಯವಸ್ಥೆ ಸರಿಪಡಿಸಲು 40 ಲಕ್ಷ ವೆಚ್ಚದಲ್ಲಿ ಸೆಪ್ಟಿಕ್ ಟ್ಯಾಂಕ್ ನಿರ್ಮಾಣಕ್ಕೆ ಕ್ರಮ ಕೈಗೊಳ್ಳಲಾಗಿದೆ. ರಸ್ತೆ ನಿರ್ಮಾಣಕ್ಕೆ 30 ಲಕ್ಷ ಮಂಜೂರಾಗಿದ್ದು, ಟೆಂಡರ್ ಪ್ರಕ್ರಿಯೆ ನಡೆಯುತ್ತಿದೆ. ಸರ್ಕಾರಿ ವ್ಯವಸ್ಥೆಯಲ್ಲಿ ಯೋಜನೆಗಳ ಮಂಜೂರಾತಿ, ಅನುಮೋದನೆ, ಟೆಂಡರ್ ಪ್ರಕ್ರಿಯೆ ಹಂತಗಳನ್ನು ದಾಟಿ ಬರಬೇಕಾದರೆ ಸಮಯ ಬೇಕಾಗುತ್ತದೆ ಎಂದರು. ಕರಿಯಪ್ಪಲ್ಲಿ ಖಂಡಿತ ನಗರ ಭಾಗಕ್ಕೆ ಸೇರುತ್ತದೆ. ಜೋಡಿ ರಸ್ತೆಯೂ ಆಗುತ್ತದೆ. ಅಕ್ಕಪಕ್ಕದ ಕೆಲವರ 3–4 ಅಡಿ ಜಮೀನು ರಸ್ತೆಗೆ ಹೋಗಬಹುದು. ಸಾರ್ವಜನಿಕ ಹಿತದೃಷ್ಟಿಯಿಂದ ಸಹಕಾರ ನೀಡಬೇಕು. 3–4 ಅಡಿ ಹೋದರೂ ತಮ್ಮ ಜಮೀನುಗಳ ಬೆಲೆ 5–6 ಪಟ್ಟು ಹೆಚ್ಚಾಗುತ್ತದೆ ಎಂದು ತಿಳಿಸಿದರು. ತಾಲ್ಲೂಕಿನ ಜನರಿಗೆ ಉದ್ಯೋಗ ಒದಗಿಸಲು 10 ವರ್ಷಗಳ ಹಿಂದೆ 792 ಎಕರೆ ಜಾಗ ಗುರುತಿಸಿದ್ದೆ. ನಾನು ಸೋತ ನಂತರ ಯಾರೂ ಆ ಕುರಿತು ಗಮನ ಹರಿಸಲಿಲ್ಲ. ಕೈಗಾರಿಕಾ ಪ್ರಾಂಗಣಕ್ಕಾಗಿ ಗುರುತಿಸಲಾಗಿದ್ದ ಸೋಮಯಾಜಲಹಳ್ಳಿ ಸರ್ವೆ ನಂ 88ರಲ್ಲಿ 288 ಎಕರೆ ಸಾಧ್ಯವಾಗಲಿಲ್ಲ. ಮ್ಯಾಕಲಸೊನಹಳ್ಳಿ ಮತ್ತು ಸೇರಿಸಲಾಗಿದೆ. ಎಷ್ಟೇ ಪ್ರಯತ್ನ ಪಟ್ಟರೂ ಅದನ್ನು ತೆಗೆಸಲು ಕೊಂಗತಿಮ್ಮನಹಳ್ಳಿಯಲ್ಲಿ 400 ಎಕರೆ ಸರ್ಕಾರಿ ಜಾಗ ಸೇರಿ 550 ಎಕರೆ ಗುರುತಿಸಿದ್ದೇವೆ. ರೈತರ 150 ಎಕರೆಗೆ ಉತ್ತಮ ಬೆಲೆ ಕೊಡಿಸಲು ಪ್ರಯತ್ನಿಸಲಾಗುತ್ತಿದೆ ಎಂದರು.

# 1 ಕೋಟಿ ವೆಚ್ಚದಲ್ಲಿ ಹಂದಿ ಜೋಗಿ ಬಡಾವಣೆ ನಿರ್ಮಾಣಕ್ಕೆ ಶಂಕು ಸ್ಥಾಪನೆ

## ಸಿಸಿ ರಸ್ತೆ ನಿರ್ಮಾಣ ಮತ್ತು ಸಮುದಾಯ ಭವನ ನಿರ್ಮಾಣ ಕಾಮಗಾರಿ, ಸಿಂಧುವಳ್ಳಿ ಗೇಟ್ ಬಳಿ ಹಂದಿ ಜೋಗಿ ಸಮುದಾಯಕ್ಕೆ ಬಡಾವಣೆ ನಿರ್ಮಾಣ

• ಉದಯವಾಹಿನಿ, ನಂಜನಗೂಡು


ಉದಯವಾಹಿನಿ ಚಿತ್ರ

ಕ್ಷೇತ್ರವನ್ನು ಸಮಗ್ರವಾಗಿ ಅಭಿವೃದಿ

ತಾಲ್ಲೂಕಿನ ನಿರಾಶ್ರಿತ ಹಂದಿ ಜೋಗಿ ಸಮುದಾಯಕ್ಕೆ ಶಾಶ್ವತ ಸೂರು ಕಲ್ಪಿಸುವ ಸಲುವಾಗಿ 1 ಕೋಟಿ ವೆಚ್ಚದಲ್ಲಿ ತಾಲ್ಲೂಕಿನ ಸಿಂಧುವಳ್ಳಿ ಗೇಟ್ ಬಳಿ ಬಡಾವಣೆ ನಿರ್ಮಾಣ ಕಾಮಗಾರಿಗೆ ಚಾಲನೆ ನೀಡಲಾಗಿದೆ ಎಂದು ಶಾಸಕ ದರ್ಶನ್ ದ್ರುವ ನಾರಾಯಣ ಹೇಳಿದರು.

ಅವರು ತಾಲ್ಲೂಕಿನ ಕರಳಪುರ, ಕೂಗಲೂರು, ಕೃಷ್ಣಾಪುರ, ಲಕ್ಷ್ಮಣಪುರ, ಕಸುವಿನಹಳ್ಳಿ, ಕುರಹಟ್ಟಿ, ಗ್ರಾಮಗಳಲ್ಲಿ ಸಿಸಿ ರಸ್ತೆ ನಿರ್ಮಾಣ ಮತ್ತು ಸಮುದಾಯ ಭವನ ನಿರ್ಮಾಣ ಕಾಮಗಾರಿ, ಸಿಂಧುವಳ್ಳಿ ಗೇಟ್ ಬಳಿ ಹಂದಿ ಜೋಗಿ ಸಮುದಾಯಕ್ಕೆ ಬಡಾವಣೆ ನಿರ್ಮಾಣ ಕಾಮಗಾರಿ ಸೇರಿದಂತೆ 3 ಕೋಟಿ 45 ಲಕ್ಷ ವೆಚ್ಚದ ವಿವಿಧ ಕಾಮಗಾರಿಗಳಿಗೆ ಗುದ್ದಲಿ ಪೂಜೆ ನೆರವೇರಿಸಿ ಚಾಲನೆ ನೀಡಿ ಮಾತನಾಡಿದರು.

ಹಂದಿ ಜೋಗಿ ಸಮುದಾಯ ಶೈಕ್ಷಣಿಕವಾಗಿ ಸಾಮಾಜಿಕವಾಗಿ ಅತ್ಯಂತ ಹಿಂದುಳಿದ ಸಮಾಜವಾಗಿದ್ದು, ಅವರಿಗೆ ಶೈಕ್ಷಣಿಕ ವ್ಯವಸ್ಥೆ ಮತ್ತು ಮೂಲ ಸೌಕರ್ಯಗಳು ಸೇರಿದಂತೆ ವಿವಿಧ ಸೌಲಭ್ಯಗಳನ್ನು ಕಲ್ಪಿಸಿ ಸಮಾಜದ ಮುಖ್ಯವಾಹಿನಿಗೆ ತರಬೇಕೆಂಬ ಸಂಕಲ್ಪದಿಂದ ನಗರಕ್ಕೆ ಅತ್ಯಂತ ಸಮೀಪದಲ್ಲಿರುವ ಹಾಗೂ ಅತ್ಯಂತ ಬೆಲೆ ಬಾಳುವ ಜಾಗದಲ್ಲಿ ಬಡಾವಣೆ ನಿರ್ಮಿಸಿ ನಿವೇಶನ ಹಂಚಿಕೆ ಮಾಡಿ, ಸರ್ಕಾರದ ವತಿಯಿಂದ ಅನುದಾನವನ್ನು ನೀಡಿ ಮನೆ ನಿರ್ಮಿಸುವ ಮೂಲಕ ಶಾಶ್ವತವಾಗಿ ಸೂರು ಕಲ್ಪಿಸಲಾಗುವುದು. ಜೊತೆಗೆ ಹಂದಿ ಜೋಗಿ ಸಮುದಾಯ ಸಮಾಜದ ಮುಖ್ಯವಾಹಿನಿಗೆ ಬರಲು ಸಕಲ ಸೌಲಭ್ಯಗಳನ್ನು ಒದಗಿಸಲಾಗುವುದು, ಈ ನಿಟ್ಟಿನಲ್ಲಿ 1 ಕೋಟಿ ವೆಚ್ಚದಲ್ಲಿ ಹಂದಿ ಜೋಗಿ ಬಡಾವಣೆ ನಿರ್ಮಾಣ ಕಾಮಗಾರಿಗೆ ಚಾಲನೆ ನೀಡಲಾಗಿದ್ದು ಶೀಘ್ರದಲ್ಲೇ ಬಡಾವಣೆ ನಿರ್ಮಾಣಗೊಂಡು ನಿವೇಶನ ಹಂಚಿಕೆಯಾಗಲಿದೆ ಎಂದರು.

ತಾಲ್ಲೂಕಿನ ಕರಳಪುರ ಗ್ರಾಮದಲ್ಲಿ 15 ಲಕ್ಷ, ಕೂಗಲೂರು ಗ್ರಾಮದಲ್ಲಿ 15 ಲಕ್ಷ, ಕೃಷ್ಣಾಪುರ ಗ್ರಾಮದಲ್ಲಿ 10 ಲಕ್ಷ, ಲಕ್ಷ್ಮಣಪುರ ಗ್ರಾಮದಲ್ಲಿ 20 ಲಕ್ಷ, ಕಸುವಿನಹಳ್ಳಿ ಗ್ರಾಮದಲ್ಲಿ 20 ಲಕ್ಷ, ಮಾಕನಪುರ ಗ್ರಾಮದಲ್ಲಿ 10 ಲಕ್ಷ, ಕುರಹಟ್ಟಿ ಗ್ರಾಮದಲ್ಲಿ 20 ಲಕ್ಷ ವೆಚ್ಚದಲ್ಲಿ ಸಾಮಾನ್ಯ ವರ್ಗದ ಜನರು ವಾಸಿಸುವ ಬೀದಿಯಲ್ಲಿ ಸಿಸಿ ರಸ್ತೆ ಮತ್ತು ಚರಂಡಿ ನಿರ್ಮಾಣ ಕಾಮಗಾರಿಗೆ ಚಾಲನೆ ನೀಡಲಾಗಿದೆ, ಮತ್ತು ಕುರಹಟ್ಟಿ ಗ್ರಾಮದಲ್ಲಿ ಎಸ್‌ಇಪಿ ಯೋಜನೆಯಲ್ಲಿ 1 ಕೋಟಿ ವೆಚ್ಚದಲ್ಲಿ ಸಿಸಿ ರಸ್ತೆ ನಿರ್ಮಾಣ ಕಾಮಗಾರಿಗೆ ಚಾಲನೆ ನೀಡಲಾಗಿದೆ, ಅಲ್ಲದೆ ಕೂಗಲೂರು ಗ್ರಾಮದಲ್ಲಿ 5 ಲಕ್ಷ ವೆಚ್ಚದಲ್ಲಿ ದೇವಾಲಯ ನಿರ್ಮಾಣ, ಕಸುವಿನಹಳ್ಳಿ ಗ್ರಾಮದಲ್ಲಿ ಬಸವ ಭವನದ ಮುಂದುವರಿದ ಕಾಮಗಾರಿಗಳಿಗೆ 20 ಲಕ್ಷ, ಶಾಸಕರ ಅನುದಾನದಿಂದ 5 ಲಕ್ಷ ಸೇರಿದಂತೆ 25 ಲಕ್ಷ ಅನುದಾನ ನೀಡಲಾಗಿದ್ದು, ಒಟ್ಟಾರೆ ಎಂದು 3 ಕೋಟಿ 45 ಲಕ್ಷ ವೆಚ್ಚದ ವಿವಿಧ ಕಾಮಗಾರಿಗಳಿಗೆ ಗುದ್ದಲಿ ಪೂಜೆ ನೆರವೇರಿಸಿ ಚಾಲನೆ ನೀಡಲಾಗಿದ್ದು ಕಾಮಗಾರಿಗಳು ಶೀಘ್ರದಲ್ಲಿ ಮುಕ್ತಾಯಗೊಂಡು ಸಾರ್ವಜನಿಕರಿಗೆ ಅನುಕೂಲವಾಗಲಿದೆ ಎಂದರು.

ಇದೇ ಸಂದರ್ಭದಲ್ಲಿ ಮಾಜಿ ಶಾಸಕ ಕಳಲೆ ಕೇಶವಮೂರ್ತಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಕುರಹಟ್ಟಿ ಮಹೇಶ್, ಸಿ.ಎಂ. ಶಂಕರ್, ಶ್ರೀಕಂಠನಾಯಕ, ಕಾಂಗ್ರೆಸ್ ಉಸ್ತುವಾರಿ ಸೋಮೇಶ್, ಅಕ್ರಮ ಸಕ್ರಮ ಸಮಿತಿ ಸದಸ್ಯ ಹಾಡ್ಯ ಜಯರಾಮ್, ಎಸ್ ಸಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಉಪ್ಪಿನಹಳ್ಳಿ ಶಿವಣ್ಣ, ಮುಖಂಡರಾದ ರವಿಕುಮಾರ್, ಶಿವಮೂರ್ತಿ, ಕಗ್ಗಲಿಪುರ ಮಹದೇವ, ದಸಂಸ ಸಂಚಾಲಕರಾದ ಮಲ್ಲಹಳ್ಳಿ ನಾರಾಯಣ, ಹಂದಿ ಜೋಗಿ ಸಮುದಾಯದ ರಾಜ್ಯಾಧ್ಯಕ್ಷ ವೆಂಕಟರಮಣ, ಕೆಆರ್ ಐ ಡಿಎಲ್ ಎಇಇ ಶೋಭಾ, ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ಸಿದ್ದಲಿಂಗ ಸೇರಿದಂತೆ ಹಲವಾರು ಪ್ರಮುಖರು ಉಪಸ್ಥಿತರಿದ್ದರು.

**ನಮ್ಮ ಕಾಂಗ್ರೆಸ್ ಸರ್ಕಾರ ಗ್ಯಾರಂಟಿ ಯೋಜನೆಗಳ ತ್ವರಿತ ಅನುಷ್ಠಾನದ ಜೊತೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯರವರು ಕ್ಷೇತ್ರದ ಅಭಿವೃದ್ಧಿಗೂ ಹೆಚ್ಚು ಒತ್ತು ನೀಡಿ ಸುಮಾರು 150 ಕೋಟಿಗೂ ಹೆಚ್ಚು ಅನುದಾನವನ್ನು ನೀಡಿದ್ದಾರೆ, ಹಾಗೂ ಗ್ಯಾರಂಟಿ ಯೋಜನೆಗಳಿಂದ ಬಡವರು ತಮ್ಮ ಬದುಕು ಕಟ್ಟಿಕೊಳ್ಳಲು ಆಸರೆಯಾಗಿದೆ, ಮುಂದಿನ ದಿನಗಳಲ್ಲಿ ಅತಿ ಹೆಚ್ಚು ಅನುದಾನವನ್ನು ತಂದು ಕ್ಷೇತ್ರದ ಎಲ್ಲಾ ಗ್ರಾಮಗಳಲ್ಲಿ ಮೂಲಸೌಕರ್ಯ ಕಲ್ಪಿಸುವ ಮೂಲಕ ಅಭಿವೃದ್ಧಿ ಕೆಲಸಗಳು ಬಾಕಿ ಇಲ್ಲದಂತೆ ಕ್ಷೇತ್ರವನ್ನು ಸಮಗ್ರವಾಗಿ ಅಭಿವೃದ್ಧಿಪಡಿಸಿ ಮಾದರಿ ಕ್ಷೇತ್ರವನ್ನಾಗಿ ರೂಪಿಸಲಾಗುವುದು ಎಂದರು.**

ಅಂತರಾಳದಿಂದ.. EDITORIAL

## ಜಾಗತಿಕ ಹೂಡಿಕೆದಾರರ ಸಮಾವೇಶ

# ಒಪ್ಪಂದಗಳು ಉದ್ಯಮ ರೂಪ ತಳೆಯಲಿ



ಒಟ್ಟು ಮೊತ್ತದಲ್ಲಿ ಉತ್ತರ ಕರ್ನಾಟಕದಲ್ಲಿ ರೇಕದ 45ರಷ್ಟು ಹೂಡಿಕೆ ಮಾಡುವ ಪ್ರಸ್ತಾವಗಳು ಇವೆ. ಮುಕ್ಕಾಲು ಪಾಲು ಹೂಡಿಕೆಯು ಬೆಂಗಳೂರಿನಿಂದ ಆಚೆಗೆ ಆಗಲಿದೆ' ಎಂದು ಬೃಹತ್ ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ ಅವರು ಸಮಾವೇಶದ ಕೊನೆಯ ದಿನ ಹೇಳಿದ್ದಾರೆ.

ಹೂಡಿಕೆದಾರರನ್ನು ಆಕರ್ಷಿಸಲು ರಾಜ್ಯಗಳ ನಡುವೆ ಸ್ಪರ್ಧೆ ಏರ್ಪಟ್ಟಿದೆ. ಇಂತಹ ಸನ್ನಿವೇಶದಲ್ಲಿ ಉದ್ಯಮ ಸ್ಥಾಪನೆ ಹಾಗೂ ಉದ್ಯೋಗ ಅವಕಾಶಗಳ ಸೃಷ್ಟಿಯು ಯಾವುದೇ ರಾಜ್ಯಕ್ಕೆ ಸವಾಲು ಇದ್ದಂತೆ, ಕರ್ನಾಟಕದ ಮಟ್ಟಿಗೆ ಈ ರೀತಿಯ ಸಮಾವೇಶಗಳು ಹೊಸತೇನಲ್ಲ, ಎಸ್.ಎಂ. ಕೃಷ್ಣ ಮುಖ್ಯಮಂತ್ರಿಯಾಗಿದ್ದ ಅವಧಿಯಲ್ಲಿ ಹೂಡಿಕೆದಾರರನ್ನು ಸೆಳೆಯುವ ಇಂತಹ ಪ್ರಯತ್ನಗಳು ಶುರುವಾದವು. ಇದು, ಆರನೆಯ ಸಮಾವೇಶ 25 ವರ್ಷಗಳಲ್ಲಿ ನಡೆದ ಇಂತಹ ಸಮಾವೇಶಗಳಲ್ಲಿ ಹೂಡಿಕೆಯಾಗಲಿದೆ ಎಂದು ಘೋಷಿಸಲಾದ ಒಟ್ಟು ಮೊತ್ತವೇ ಅಂದಾಜು 235 ಲಕ್ಷ ಕೋಟಿ ದಾಟುತ್ತದೆ. ಆದರೆ, ನಿಜವಾಗಿ ಅನುಷ್ಠಾನಗೊಂಡ ಯೋಜನೆಗಳ ಒಟ್ಟು ಮೊತ್ತ 5 ಲಕ್ಷ ಕೋಟಿ ಮೀರಿಲ್ಲ ಎಂಬ ಮಾತಿದೆ. ಆ ಪರಿಪಾಟ ಪುನರಾವರ್ತನೆ ಆಗಬಾರದು, ಹೂಡಿಕೆ ಒಪ್ಪಂದಗಳು ಕಾಲಮಿತಿಯಲ್ಲಿ ಅನುಷ್ಠಾನಕ್ಕೆ ಬರುವಂತೆ ಮಾಡಲು ದಕ್ಷ ಅಧಿಕಾರಿಗಳ ನೇತೃತ್ವದಲ್ಲಿ ಮೇಲುಸ್ತುವಾರಿ ಸಮಿತಿ ರಚಿಸಿ, ಕಾಲಕಾಲಕ್ಕೆ ಯೋಜನೆಯ ಪ್ರಗತಿಯ ಮೇಲೆ ನಿಗಾ ಇಡುವಂತೆ ನೋಡಿಕೊಳ್ಳಬೇಕು. ಮೂರು ತಿಂಗಳಿಗೊಮ್ಮೆಯಾದರೂ ಸಚಿವರೇ ಪ್ರಗತಿ ಪರಿಶೀಲನೆ ನಡೆಸಬೇಕು. ಯೋಜನೆಗಳ ಅನುಷ್ಠಾನದಲ್ಲಿ ಏನಾದರೂ ತೊಡಕುಗಳು ಎದುರಾದರೆ ಅವುಗಳನ್ನು ನಿವಾರಿಸಬೇಕು. ಸಮಾವೇಶದಲ್ಲಿ ಉದ್ಯಮಿಗಳ ಜತೆ ಒಪ್ಪಂದ ಮಾಡಿಕೊಳ್ಳುವ ಹಂತದಲ್ಲೇ ಬೆಂಗಳೂರು ಮಹಾನಗರದಿಂದ ಹೊರಗೆ ಹೂಡಿಕೆ ಮಾಡಿದರೆ ಹೆಚ್ಚಿನ ಉತ್ತೇಜನ ನೀಡುವಂತಹ ಪ್ರಸ್ತಾವವನ್ನು ಮುಂದಿಡಲಾಗಿತ್ತು. ಎರಡು ಮತ್ತು ಮೂರನೇ ಹಂತದ ನಗರಗಳ ಅಭಿವೃದ್ಧಿಗೆ ಈ ನಡೆ ಪೂರಕ. ಇದು ಕಾರ್ಯಗತಗೊಂಡರೆ, ಒಂದೇ ಪ್ರದೇಶದ ಮೇಲಿನ ಒತ್ತಡ ತಪ್ಪುತ್ತದೆ. ಹಿಂದುಳಿದ ಪ್ರದೇಶಗಳು ಆರ್ಥಿಕವಾಗಿ ಸಬಲೀಕರಣಗೊಂಡು, ಪ್ರಾದೇಶಿಕ ಅಸಮತೋಲನ ನಿವಾರಣೆಗೂ ದಾರಿಯಾಗುತ್ತದೆ. ಈ ಬಾರಿಯ ಸಮಾವೇಶದಲ್ಲಿ ನೂತನ ಕೈಗಾರಿಕಾ ನೀತಿಯನ್ನು ಘೋಷಿಸಿದ ಸರ್ಕಾರ, ಅದಕ್ಕೆ ಪೂರಕವಾಗಿ ಹಲವು ಉಪಕ್ರಮಗಳನ್ನು ಕೈಗೊಳ್ಳುವುದಾಗಿ ಹೇಳಿದೆ. ಮುಂದಿನ ಐದು ವರ್ಷಗಳಲ್ಲಿ ರಾಜ್ಯದಾದ್ಯಂತ 27.5 ಲಕ್ಷ ಕೋಟಿ ಹೂಡಿಕೆ ಹಾಗೂ 20 ಲಕ್ಷ ಉದ್ಯೋಗ ಸೃಷ್ಟಿಯ ಗುರಿಯನ್ನು ನೀತಿಯಲ್ಲಿ ಪ್ರಸ್ತಾಪಿಸಲಾಗಿದೆ.

**ರಾಜ್ಯ ಸರ್ಕಾರ ಆಯೋಜಿಸಿದ್ದ ಜಾಗತಿಕ ಹೂಡಿಕೆದಾರರ ಸಮಾವೇಶವು ರೋ ರೂ.10.27 ಲಕ್ಷ ಕೋಟಿ ಹೂಡಿಕೆ ಒಪ್ಪಂದ ಹಾಗೂ ಆರು ಲಕ್ಷ ಉದ್ಯೋಗ ಸೃಷ್ಟಿಯ ಭರವಸೆಯೊಂದಿಗೆ ಸಮಾಪ್ತಿಗೊಂಡಿದೆ. '76.23 ಲಕ್ಷ ಕೋಟಿ ಮೊತ್ತದ ಹೂಡಿಕೆಯ ಒಪ್ಪಂದಗಳಾಗಿವೆ. 74.03 ಲಕ್ಷ ಕೋಟಿ ಹೂಡಿಕೆ ಮಾಡುವುದಾಗಿ ಪ್ರತಿಷ್ಠಿತ ಕಂಪನಿಗಳು ಘೋಷಿಸಿದ್ದು, ಈ ಸಂಬಂಧದ ಒಪ್ಪಂದಗಳಿಗೆ ಶೀಘ್ರ ಸಹಿಬೀಳಲಿದೆ.**

ಇದರ ಜತೆಗೆ, ಕೈಗಾರಿಕೆಗಳ ಸ್ಥಾಪನೆ ಮತ್ತು ಕಾರ್ಯನಿರ್ವಹಣೆಗೆ ಸಂಬಂಧಿಸಿದ 150ಕ್ಕೂ ಹೆಚ್ಚು ಅನುಮೋದನೆ ಹಾಗೂ ಅನುಮತಿಗಳಿಗೆ ಒಂದೇ ಕಡೆ ಅರ್ಜಿ ಸಲ್ಲಿಸಲು ಅವಕಾಶವಿರುವ ಏಕಗವಾಕ್ಷಿ ವ್ಯವಸ್ಥೆಯನ್ನು ಜಾರಿಗೊಳಿಸಿದೆ. ರಾಷ್ಟ್ರ ಮಟ್ಟದ ಏಕಗವಾಕ್ಷಿ ವ್ಯವಸ್ಥೆಯೊಂದಿಗೆ ಕರ್ನಾಟಕದ ವ್ಯವಸ್ಥೆಯನ್ನು ಬೆಸೆಯಲಾಗಿದೆ. ಉದ್ಯಮಸ್ನೇಹಿ ವಾತಾವರಣ ಸೃಷ್ಟಿಗೆ ಈ ನಡೆ ಪೂರಕವಾಗಿದೆ.

ಈ ಸಮಾವೇಶಕ್ಕೆ ಕೇಂದ್ರದ ಸಚಿವರನ್ನು ಆಮಂತ್ರಿಸಿ, ಆ ಮೂಲಕ ಅಭಿವೃದ್ಧಿ ವಿಷಯದಲ್ಲಿ ಪಕ್ಷ ರಾಜಕೀಯ ಸಲ್ಲದು ಎಂಬ ಸಂದೇಶವನ್ನು ರಾಜ್ಯ ಸರ್ಕಾರ ನೀಡಿರುವುದು ಸರಿಯಾದ ನಡೆ. ಕೇಂದ್ರ ಸಚಿವರಾದ ರಾಜನಾಥ ಸಿಂಗ್, ಪೀಯೂಷ್ ಗೋಯಲ್, ಪ್ರಹ್ಲಾದ ಜೋಶಿ. ವಿ. ಸೋಮಣ್ಣ, ಶೋಭಾ ಕರಂದ್ಲಾಜೆ ಸಮಾವೇಶದಲ್ಲಿ ಭಾಗಿಯಾಗಿದ್ದುದು ಸಕಾರಾತ್ಮಕ ಬೆಳವಣಿಗೆ, ಎಲ್ಲಾ ಅನುಕೂಲಗಳನ್ನೂ ಬಳಸಿಕೊಂಡು ಸಮಾವೇಶದ ಗರಿಷ್ಠ ಪ್ರಯೋಜನ ನಾಡಿಗೆ ದಕ್ಕುವಂತೆ ರಾಜ್ಯ ಸರ್ಕಾರ ನೋಡಿಕೊಳ್ಳಬೇಕು. ಸ್ಥಳೀಯರಿಗೆ ಹೆಚ್ಚು ಉದ್ಯೋಗ ಕೂಡಿಸಲು ಮುತುವರ್ಜಿ ವಹಿಸಬೇಕು. ಕೈಗಾರಿಕೆಗಳಿಗೆ ಫಲವತ್ತಾದ ಕೃಷಿ ಜಮೀನು ಸ್ವಾಧೀನಪಡಿಸಿಕೊಂಡು ರೈತರಿಗೆ ತೊಂದರೆ ಕೊಟ್ಟಿರುವ ಕೆಲವು ಪ್ರಕರಣಗಳು ವರದಿಯಾಗಿವೆ. ಉದ್ಯಮಿ-ಕಾರ್ಮಿಕರ ಹಿತ ಕಾಪಾಡುವುದರ ಜತೆಗೆ ರೈತರ ಹಿತಕ್ಕೂ ಧಕ್ಕೆ ಆಗದಂತೆ ಎಚ್ಚರ ವಹಿಸಬೇಕಾದುದು ಸರ್ಕಾರದ ಕರ್ತವ್ಯ.




• ಹಿಂದಿನ ಸಂಚಿಕೆಯಿಂದ 78 ನೆಯ ಅಧ್ಯಾಯ

ಅದನ್ನು ಕಂಡ ನನಗೆ ಮರಣವೇ ಪ್ರಾಪ್ತಿಯಲ್ಲದೆ ಮತ್ತೇನಿಲ್ಲ! ಈ ವಿಷಯದಲ್ಲಿ ನನ್ನ ಕುಮಾರನಾದ ಭರತನ ಆಣೆ, ನಿನ್ನ ಮತ್ತು ನನ್ನ ಆಣೆ. ನನಗೆ ಶ್ರೀರಾಮನನ್ನು ವನವಾಸಕ್ಕೆ ಕಳುಹಿಸುವುದಕ್ಕಿಂತ ಬೇರೆ ಯಾವುದರಿಂದಲೂ ತೃಪ್ತಿಯಿಲ್ಲ ಎಂದು ನುಡಿದಳು. ಆ ಮಾತನ್ನು ಕೇಳಿ ದಶರಥರಾಯನು ದುಃಖಪಡುತ್ತ ಕೈಕೇಯಿಯು ಶ್ರೀರಾಮನಿಗೆ ವನವಾಸವೂ ಭರತನಿಗೆ ಪಟ್ಟಾಭಿಷೇಕವೂ ಆಗಬೇಕೆಂಬ ಎರಡು ವರಗಳನ್ನು ಬೇಡಿಕೊಳ್ಳುವಳೆಂದು ಮನಸ್ಸಿನಲ್ಲಿ ಚಿಂತಿಸಿ ಕಂಗೆಟ್ಟನು. ನಿಷ್ಠುರವಾಕ್ಯವನ್ನು ನುಡಿದಂಥ ತನ್ನ ಪತ್ನಿಯನ್ನು ಕೋಪದಿಂದ ಕ್ಷಣಮಾತ್ರ ಕ್ರೂರದೃಷ್ಟಿಯಿಂದ ನೋಡಿ ನಿಟ್ಟುಸಿರುಬಿಡಲಾರಂಭಿಸಿದನು. ಕೈಕೇಯಾದೇವಿಯು ಅಂಥ ಪಾಪಬುದ್ಧಿ ಯನ್ನು ಮಾಡಬಹುದೆ ಎಂದು ತಲೆಯೆತ್ತಿ ಮೂಗಿನಮೇಲೆ ಬರಳಿಟ್ಟನು. ಸಿಡಿಲಿನಂತೆ ಹೃದಯಚ್ಛೇದಕವಾದ ಆ ಮಾತನ್ನು ನೆನೆದು ತಾನು ಮಾಡಿದ ಶವಧವನ್ನು ಚಿಂತಿಸಿ ಒಂದು ಮುಹೂರ್ತದವರೆಗೆ ಧ್ಯಾನಮಾಡಿ ಛೇದಿಸಲ್ಪಟ್ಟ ಮರದೋಪಾದಿಯಲ್ಲಿ ನೆಲದಮೇಲೆ ಬಿದ್ದನು. ಆಮೇಲೆ ಬುದ್ಧಿಗೆಟ್ಟ ಉನ್ಮತ್ತನಂತೆಯೂ ಸನ್ನಿ ವಾತವ್ಯಾಧಿತನಂತೆಯೂ ವಿಷದ ಹಲ್ಲನ್ನು ಕೀಳಿಸಿಕೊಂಡ ಸರ್ಪದಂತೆಯೂ ದೈನೋಕ್ತಿಯಿಂದ ಕೈಕೇಯಿಯನ್ನು ಕುರಿತು ಮಾತನಾಡಿದನು: ಎಲೇ ಕೈಕೇಯಿ, ಅನರ್ಥಕ ವಾದ ಈ ಕಾರ್ಯವನ್ನು ನಿನಗೆ ಹೇಳಿದವರಾರು ಭೂತಹಿಡಿದವಳಂತೆ ಲಜ್ಜೆಯಿಲ್ಲದೆ ನುಡಿಯುತ್ತಿದ್ದೀಯೆ. ಬಾಲ್ಯದಿಂದಲೂ ನಿನ್ನಲ್ಲಿ ಇಂಥ ದುರಾಚಾರವನ್ನು ನಾನು ಕಂಡಿರಲಿಲ್ಲ. ಈಗ ಪ್ರೌಢಿಯಾದಮೇಲೆ ಬುದ್ಧಿಭ್ರಂಶವಾಯಿತಂದೆಣಿಸುತೇನೆ. ಶ್ರೀರಾಮನಿಂದ ನಿನಗೆ ಏನು ಭಯವು ಸಂಭವಿಸಿತು ಭರತನಿಗೆ ಪಟ್ಟಾಭಿಷೇಕವಾಗಿ ಶ್ರೀರಾಮನು ವನವಾಸಕ್ಕೆ ಹೋಗಬೇಕೆಂಬ ಈ ದುರ್ಬುದ್ಧಿಯನ್ನು ಬಿಡು ! ಎಲೈ ಪಾತಕಿ-ಕ್ಷುದ್ರ ಬುದ್ಧಿಯುಳ್ಳವಳೆ, ನಿನ್ನ ಪತಿಯಾದ ನನಗೂ ಸಮಸ್ತಲೋಕಗಳಿಗೂ ಭರತನಿಗೂ ಹಿತವನ್ನು ಬಯಸುವ ಪಕ್ಷದಲ್ಲಿ ಈ ದುರ್ಬುದ್ಧಿಯನ್ನು ಬಿಡು. ನನ್ನನ್ನು ದುಃಖಕ್ಕೊಳಪಡಿಸಿ ಶ್ರೀರಾಮನನ್ನೂ ದುಃಖಪಡಿಸಿ ದೇಶತ್ಯಾಗವನ್ನು ಮಾಡಿಸುವುದಕ್ಕೆ ನಮ್ಮಿಬ್ಬರಲ್ಲಿ ಏನು ದ್ರೋಹವನ್ನು ಕಂಡೆ ನಿನ್ನ ಮಗನಾದ ಭರತನಿಗೆ ಪಟ್ಟಾಭಿಷೇಕವನ್ನು ಮಾಡುವ ಪಕ್ಷದಲ್ಲಿ ಶ್ರೀರಾಮನನ್ನು ಬಿಟ್ಟು ಆತನು ರಾಜ್ಯಭಾರವನ್ನು ವಹಿಸಿಕೊಳ್ಳಲಾರನು.

**ಶ್ರೀರಾಮನು ಧರ್ಮಮಾರ್ಗಪ್ರವರ್ತಕನು :** ಲೋಕೋ ಇರವಾದ ಸದ್ಗುಣಗಳುಳ್ಳವನು. ಅಂಥವನನ್ನು ವನವಾಸಕ್ಕೆ ಕಳುಹಿಸಹೇಳಿದರೆ ಕೇಳುವವರು ಹೇಗೆ ಸಹಿಸುವರು ಈ ಮಾತನ್ನು ಕೇಳಿ ರಾಮನ ಸುಂದರವಾದ ಮುಖವು ರಾಹುತುಡುಕಿದ ಚಂದ್ರಮಂಡಲದಂತೆ ಕಾಂತಿಗುಂದಿದರೆ ಆ ಮುಖವನ್ನು ಹೇಗೆ ನೋಡಲಿ ಅದಲ್ಲದೆ ಮಹಾತ್ಮರಾದ ವಸಿಷ್ಠಾದಿಗಳೊಡನೆಯೂ ಪ್ರಧಾನಿಗಳೊಡನೆಯೂ ಮಂತ್ರಾಲೋಚನೆಯನ್ನು ಮಾಡಿ ಶ್ರೀರಾಮನಿಗೆ ಪಟ್ಟಾಭಿಷೇಕವನ್ನು ನಿಶ್ಚಯಿಸಿ ಆ ಯತ್ನವು ವೈರಿಗಳಿಂದ ಮುರಿಯಲ್ಪಟ್ಟ ಸೇನೆಯ ಹಾಗೆ ಕೆಟ್ಟರೆ ಹೇಗೆ ಸಹಿಸಲಿ ಪಟ್ಟಾಭಿಷೇಕಾರ್ಥವಾಗಿ ನಾನಾದಿಕ್ಕುಗಳಿಂದ ಬಂದಿರುವ ಅರಸರು ನನ್ನನ್ನು ಏನನ್ನುವರು

ಮುಂದುವರಿಯುವುದು...

# ಬಾಳು ಬಂಗಾರ, ಇತರ ಕಥೆಗಳು ಕೃತಿ ಪರಿಚಯ




ಸಾಮಾಜಿಕ ಕಳಕಳಿ

ಹೆಚ್.ಎಸ್.ಪ್ರತಿಮಾ ಹಾಸನ್
ಸಾಹಿತಿ,ಶಿಕ್ಷಕಿ,ಸಾಮಾಜಿಕ ಚಿಂತಕಿ.ಹಾಸನ

• ಉದಯವಾಹಿನಿ, ವಿಶೇಷ

**ಬಾಳದುವೆ ಬಂಗಾರ ಆಗಿರಲು ಸಂತಸವು**
**ಮಾಳಿಗೆಯ ಮನೆಯಿಹುದು ತಿಳಿಯುತಿರಲು**
**ಕೋಳಿಯದು ಕೂಗುತಿರೆ ಮುಂಜಾನೆ**
**ಸೂಚನೆಯು**
**ಗಾಳವನು ಹಾಕುವರು ಲಕ್ಷ್ಮಿ ದೇವಿ......**

**ಭಾವಾರ್ಥ :** ಬದುಕೆಂಬ ಸಾರದಲ್ಲಿ ಬಾಳು ಬಂಗಾರವಾದರೆ ಸಂತಸವು ತುಂಬಿರುತ್ತದೆ. ಮಾಳಿಗೆಯ ಮನೆಯಂತೆ ಎಲ್ಲವನ್ನು ತಿಳಿಯಬೇಕಾಗುತ್ತದೆ. ಕೋಳಿ ಕೂಗಿದಾಗ ಮುಂಜಾನೆ ಎಂಬುದು ಎಲ್ಲರಿಗೂ ತಿಳಿದಂತಹ ವಿಚಾರವೇ. ಯಾವುದೇ ವಿಚಾರದಲ್ಲೂ ಜೀವನದಲ್ಲಿ ಕಾಳವನ್ನ ಹಾಕುವವರನ್ನು ನಂಬಬಾರದು. ಅವರನ್ನು ಜೀವನದಿಂದಲೇ ದೂರ ಬಿಡಿಸಬೇಕು. ಬುದ್ಧಿ ಓಡಿಸುತ್ತಾ ಜೀವನದಲ್ಲಿ ಸಾಗುತಿರಬೇಕು. ಆಗ ಬದುಕಿಗೊಂದು ಅರ್ಥ ಸಿಗುತ್ತದೆ. ಅಂತಹ ನಿಟ್ಟಿನಲ್ಲಿ ಸಾಗುತ್ತಿರುವ ಸಾಹಿತ್ಯದಲ್ಲಿ ಸಿ.ವೈ. ಮೆಣಸಿನಕಾಯಿರವರು 'ಬಾಳ ಬಂಗಾರ ಮತ್ತು ಇತರ ಕಥೆಗಳು' ಎಂಬ ಕೃತಿಯಲ್ಲಿ ಹಲವಾರು ಕಥೆಗಳನ್ನು ಬರೆದು ಓದುಗರ ಮನ ಮಿಡಿದಂತೆ ಮಾಡಿದ್ದಾರೆ. ಇವರು ವೃತ್ತಿಯಲ್ಲಿ ಪತ್ರಕರ್ತರಾಗಿ ಕಾರ್ಯನಿರ್ವಹಿಸುತ್ತಿದ್ದು ಬೆಳಗಾವಿ ಜಿಲ್ಲೆಯ ಬೈಲಹೊಂಗಲ ತಾಲ್ಲೂಕಿನ ನೇಸರಗಿ ಗ್ರಾಮದವರಾಗಿದ್ದಾರೆ. ಈ ಕೃತಿಯಲ್ಲಿ ಲೇಖಕರು 15




ಕಥೆಗಳನ್ನು ಒಳಗೊಂಡಿದ್ದು 2023ರ ಆವೃತ್ತಿಯಾಗಿದೆ . ರೂ ಆಗಿದೆ.ಒಟ್ಟು 128 ಪುಟಗಳನ್ನು ಒಳಗೊಂಡಿರುವ ಈ ಕಥಾ ಸಂಕಲನವು ಭಾವನಾತ್ಮಕತೆಯನ್ನು ತೋರುತ್ತ ವಿಚಾರ ಗಳನ್ನು ತಿಳಿಸುವುದರಲ್ಲಿ ಸಂಪೂರ್ಣ ತೆಯನ್ನು ಒಳಗೊಂಡ ಕಥೆಗಳನ್ನು ರೂಪಿಸಿದ್ದಾರೆ. ಇದು ಲೇಖಕರ ಮೂರನೇ ಕೃತಿಯಾಗಿದೆ.

ಇದರಲ್ಲಿ ಮೊದಲನೇ ಕಥೆಯಾದ 'ಮಮತಾ ಮಯಿ ಕಾಶವ್ವ' ಈ ಕಥೆಯಲ್ಲಿ ತಾಯಿ ಮಗುವಿನ ಬಾಂಧವ್ಯದ ಬಗ್ಗೆ ತಾಯಿ ಕಾಶವ್ವ ಮಗ ಸರಿ ಹೋದ್ದರಿಂದ ಎಷ್ಟು ಖುಷಿ ಪಡುತ್ತಾಳೆ ಎಂಬುದರ ಬಗ್ಗೆ ವಿಭಿನ್ನ ಕಥಾ ಎಳೆಯನ್ನು ಹೇಳಿದ್ದಾರೆ. ಮಗ ಕುಡುಕನಾಗಿ ಸಾರಾಯಿಯನ್ನು ಕುಡಿಯುವುದರಿಂದ ಬಹಳಷ್ಟು ಕಷ್ಟವನ್ನು ಅನುಭವಿಸಿದ್ದ ಕಾಶವ್ವ ಸರಿಯಾದ್ದರಿಂದ ಮಗ ಸುಖವಾಗಿ ಬಾಳುವುದನ್ನು ಕಂಡು ಖುಷಿ ಪಡುತ್ತಾಳೆ ಎಂಬ ಕಥೆ ಇದೆ . ಮಗ ಒಳ್ಳೆಯವನಾಗಿ ಆತನ ಉಜ್ವಲ ಭವಿಷ್ಯದ ದಿನಗಳಿಗೆ ಕಾಯುತ್ತಾ ಒಳಿತನ್ನು ಬಯಸುವುದನ್ನು ಕಾಣಬಹುದಾಗಿದೆ. ಎರಡನೇ ಕಥೆಯಾದ 'ಬದುಕು ಕಟ್ಟಿಕೊಂಡ ಪಕೀರಪ್ಪ' ಕಥೆಯಲ್ಲಿ ಈ ಕಥೆಯಲ್ಲಿ ಗ್ರಾಮೀಣ ಸೊಗಡನ್ನು ಕಾಣಬಹುದು. ಆತ ಬದುಕನ್ನು ಕಟ್ಟಿಕೊಳ್ಳುವ ಪ್ರೀತಿ-ನೀತಿಗಳ ವಿಚಾರಗಳನ್ನು ವಿಶ್ಲೇಷಿಸಿದ್ದಾರೆ. ಮೂರನೇ ಕಥೆಯಲ್ಲಿ 'ಪ್ರಾಮಾಣಿಕ ಬಸಪ್ಪ' ಎಂಬುದರಲ್ಲಿ ಬಸಪ್ಪನ ಪ್ರಾಮಾಣಿಕತೆಯನ್ನು ಕಾಣಬಹುದಾಗಿದೆ. 'ಆಸರೆಯಾದ ಸಚಿನ 'ಎಂಬ ಕಥೆಯಲ್ಲಿ ಬರುವ ವಾಕ್ಯ, ಹೌದ ಬೇಕಾರೆ ಐತಿ ಆದರೆ ಏನು ಮಾಡುವುದು ನನಗೆ ಮದುವೆ ಇಷ್ಟ ಇಲ್ಲ ಇನ್ನಷ್ಟು ದಿನ ತಡಿರಿ ಒಂದು ರೀತಿ ಗ್ರಾಮೀಣ ಶಬ್ದ ಇನ್ನೊಂದು ರೀತಿ ಗ್ರಂಥ ಭಾಷೆ ಇದೆ. ಎಂಬುದನ್ನು ತುಲನಾತ್ಮಕವಾಗಿ ಗಮನಿಸಬಹುದಾಗಿದೆ. 'ಕುತಂತ್ರ' ಎಂಬ ಕಥೆಯಲ್ಲಿ ಇಲ್ಲಿ ಅರುಣನ ಪ್ರೀತಿ ಕೇವಲ ಆರ್ಥಿಕಾಗಿ ಮಾತ್ರ ಎಂಬುದನ್ನು ತಿಳಿದ ರೂಪ ದಂಗಾದ ಬಗ್ಗೆ ಹಾಗೂ ಹಲವಾರು ಪಾತ್ರಗಳ ಸಾರದೊಂದಿಗೆ ಲೋಕೇಶನ ಕಾಳಜಿಯನ್ನು ಧನ್ಯವಾದಗಳು ತಿಳಿಸುವ ಬಗ್ಗೆ ಬಹಳ ಸೊಗಸಾಗಿ ವರ್ಣಿಸಿದ್ದಾರೆ. ಹೀಗೆ ಹಲವಾರು ಕಥೆಗಳನ್ನು ಓದುಗರಿಗೆ 'ಬಾಳು ಬಂಗಾರ ಮತ್ತು ಇತರ ಕಥೆಗಳು' ಎಂಬ ಕೃತಿಯ ಮನಮುಟ್ಟುವಂತೆ ಬರೆದಿದ್ದು ಇನ್ನು ಉತ್ತಮ ಶೈಲಿಯಲ್ಲಿ ಕಥೆಗಳನ್ನು ಬರೆದು ಓದುಗರ ಮನ ಮುಟ್ಟುವಂತಾಗಲಿ ಎಲ್ಲೆಡೆ ಇವರ ಕೀರ್ತಿ ಹೆಚ್ಚುವಂತಾಗಲಿ. ಹೀಗೆ ಸಾಹಿತ್ಯ ಸೇವೆ ಮುಂದುವರೆಯಲೆಂದು ಆಶಿಸುತ್ತೇನೆ.

ಶುಭವಾಗಲಿ, ಜೈ ಹಿಂದ್ ಜೈ ಕರ್ನಾಟಕ ಮಾತೆ.

**3ನೇ ಕಥೆಯಲ್ಲಿ 'ಪ್ರಾಮಾಣಿಕ ಬಸಪ್ಪ'**

**ಪ್ರೀತಿ ತೋರಿದ ಶೋಭಾ**


**'ವಂಶೋದ್ಧಾರಕರು',ಬಾಳು ಬಂಗಾರ , ಶೀರ್ಷಿಕೆಗಳ ಕಥಾ ಸಾರವನ್ನು ತಿಳಿಸುತ್ತವೆ. ಹಾಗೆಯೇ 'ಸ್ನೇಹಿತರು' ಎಂಬ ಕಥೆಯಲ್ಲಿ ಮುಸ್ಲಿಂ ಯುವಕ ತನ್ನ ಗೆಳೆಯ ರಕ್ತದಾನ ಮಾಡುವುದು ಭಾವೈಕ್ಯತೆ ಸಂಕೇತವಾಗುವುದನ್ನು ಕಾಣಬಹುದಾಗಿದೆ. ನೆಮ್ಮದಿ ಕಸಿದಾ ಸುಮಂತ ಕಥೆ ಕೂಡ ಆದರ್ಶದ ಕಥೆಯಾಗಿದ್ದು ಸುರೇಶನ ಪಾತ್ರ ಇಲ್ಲಿ ಆದರ್ಶಮಯವಾಗಿದೆ. ಹೀಗೆ ಕಥಾ ಹತ್ತಿರದಲ್ಲಿ ವಿವಿಧ ವ್ಯಕ್ತಿಗಳ, ಪ್ರದೇಶಗಳ ವೈವಿಧ್ಯಮಯ ಪಾತ್ರಗಳನ್ನು ಅನಾವರಣಗೊಳಿಸಿರುವುದರಲ್ಲಿ ಲೇಖಕರು ಯಶಸ್ವಿಯಾಗಿದ್ದಾರೆ. 'ಪ್ರೀತಿ ತೋರಿದ ಶೋಭಾ ' ಪ್ರೀತಿಯ ಬಗೆಗಿನ ಸಾರವನ್ನು ತೋರಿದರೆ, 'ಪರಿವರ್ತನೆ'ಎಂಬ ಕಥೆಯು ಬದಲಾವಣೆಯ ಬಗ್ಗೆ ತಿಳಿಸುತ್ತದೆ. 'ಚಮತ್ಕಾರ' 'ಎಂಬ ಕಥೆಯಲ್ಲಿ ಇಲ್ಲಿ ದೇವರ ಮೇಲಿನ ನಂಬಿಕೆ, ದೆವ್ವದಿಂದ ಅಪಾಯಕ್ಕೆ ಸಿಲುಕದೆ ಪಾರದ ಬಗ್ಗೆ ಬಾಳ ಸೊಗಸಾಗಿ ತಿಳಿಸಿದ್ದಾರೆ**

## ಶ್ರೀ ಗುರು ರಾಘವೇಂದ್ರ, ಗುರುಸಾರ್ವಭೌಮರ 404ನೇ ಪಟ್ಟಾಭಿಷೇಕೋತ್ಸವ, 430ನೇ ಜನ್ಮ ದಿನೋತ್ಸವ

• ಉದಯವಾಹಿನಿ, ಬೆಂಗಳೂರು

ಜಯನಗರ ಐದನೇ ಬಡಾವಣೆಯಲ್ಲಿರುವ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮಪೂಜ್ಯ ಶ್ರೀ 1008 ಶ್ರೀ ಸುಬುಧೇಂದ್ರ ತೀರ್ಥ ಶ್ರೀಪಾದಂಗಳವರ ಆದೇಶದಂತೆ ಶ್ರೀಮಠದ ಹಿರಿಯ ವ್ಯವಸ್ಥಾಪಕರಾದ ಶ್ರೀ ಆರ್. ಕೆ. ವಾದೀಂದ್ರಾಚಾರ್ಯರ ನೇತೃತ್ವದಲ್ಲಿ ದಿನಾಂಕ 1-3-2025 ರಿಂದ 6-3-2025ರ ವರೆಗೆ 'ಕಲಿಯುಗ ಕಾಮಧೇನು' ಶ್ರೀ ರಾಘವೇಂದ್ರ ಸ್ವಾಮಿಗಳವರ 404ನೇ ಪಟ್ಟಾಭಿಷೇಕೋತ್ಸವ ಮತ್ತು 430ನೇ ಜನ್ಮದಿನೋತ್ಸವ ಸಮಾರಂಭಗಳು ಜರುಗಲಿದೆ.

ಮಾರ್ಚ್ 1, ಶನಿವಾರ : ಗುರುಗಳ ಪಟ್ಟಾಭಿಷೇಕದ ಪ್ರಯುಕ್ತ ಬೆಳಗ್ಗೆ 8-00ಕ್ಕೆ ಶ್ರೀ ಬಾಳಗಾರು ಮಠದ ಮೂಲ ಮಹಾ ಸಂಸ್ಥಾನದ ಪೀಠಾಧಿಪತಿಗಳಾದ ಪರಮಪೂಜ್ಯ ಶ್ರೀ 1008 ಶ್ರೀ ಅಕ್ಷೋಭ್ಯ ರಾಮತೀರ್ಥ ಶ್ರೀಪಾದಂಗಳವರ ಅಮೃತ ಹಸ್ತದಿಂದ ಶ್ರೀ ರಾಘವೇಂದ್ರ ಸ್ವಾಮಿಗಳವರ ಬೃಂದಾವನಕ್ಕೆ ಅಷ್ಟೋತ್ತರ ಸಹಿತ ಸಹಸ್ರ ಕಳಶ ಕ್ಷೀರಾಭಿಷೇಕ. ಬೆಳಗ್ಗೆ 9-00ಕ್ಕೆ ಶ್ರೀ ರಾಘವೇಂದ್ರ ಸ್ವಾಮಿಗಳ ಪಟ್ಟಾಭಿಷೇಕೋತ್ಸವದ ಅಂಗವಾಗಿ ಸ್ವರ್ಣ ಸಿಂಹಾಸನದಲ್ಲಿ ಶ್ರೀ ರಾಘವೇಂದ್ರ ಸ್ವಾಮಿಗಳ ಪಾದುಕೆಯನ್ನು ಇರಿಸಿ, ಪುಷ್ಪವೃಷ್ಟಿಯನ್ನು ಶ್ರೀಗಳ ಅಮೃತ ಹಸ್ತದಿಂದ ನೆರವೇರಲಿದ್ದು, ಕಾರ್ಯಕ್ರಮ ಉದ್ಘಾಟನೆ ಆಗಲಿದೆ. ಹಾಗೂ ಸಂಜೆ 7-00ಕ್ಕೆ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಶ್ರೀ ಹೃದ್ಯಾ ಅಕಾಡೆಮಿಯ ವಿದ್ಯಾರ್ಥಿಗಳಿಂದ ಭರತನಾಟ್ಯ ಪ್ರದರ್ಶನ ನಿರ್ದೇಶನ : ವಿದುಷಿ ಶ್ರೀಮತಿ ರೂಪ ಶ್ರೀ ಕೆ.ಎಸ್. ಮಾರ್ಚ್ 6, ಗುರುವಾರ : ರಾಯರ ವರ್ಧಂತ್ಯೋತ್ಸವದ ಪ್ರಯುಕ್ತ ಬೆಳಗ್ಗೆ 8-00ಕ್ಕೆ ಶ್ರೀ ರಾಘವೇಂದ್ರ ಸ್ವಾಮಿಗಳವರ ಬೃಂದಾವನಕ್ಕೆ ಲಕ್ಷ ಪುಷ್ಪಾರ್ಚನೆ. ಸಂಜೆ 7-00ಕ್ಕೆ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಶ್ರೀಮತಿ ಚಾಂದಿನಿ ಗರ್ತಿಕೆರೆ ಮತ್ತು ಸಂಗಡಿಗರಿಂದ ದಾಸವಾಣಿ. ವಿಶೇಷವಾಗಿ ಪ್ರತಿನಿತ್ಯ ಹೋಮಗಳು ಹಾಗೂ ಉತ್ಸವಗಳು ಅನ್ನಸಂಪರ್ಪಣೆ ಇತ್ಯಾದಿ ವಿಶೇಷ ಸೇವೆಗಳನ್ನು ಹಮ್ಮಿಕೊಳ್ಳಲಾಗಿದೆ ಸೇವೆಯನ್ನು ಮಾಡಿಸುವಂತಹ ಭಕ್ತರು ಶ್ರೀಮಠದ ಈ ನಂಬರ್ ವಾಟ್ಸಾಪ್ 9449133929 ಆನ್ಲೈನ್ ಮುಖಾಂತರ ಗುರುಗಳಿಗೆ ಸೇವೆ ಸಲ್ಲಿಸಿ ಗುರುರಾಯರ ಅನುಗ್ರಹಕ್ಕೆ ಪಾತ್ರಾಗಬಹುದು ಸೇವೆ ಸಲ್ಲಿಸಿದ ಸೇವ ಕರ್ತೃಗಳಿಗೆ ಪ್ರಸಾದ ಫಲ ಮಂತ್ರಾಕ್ಷತೆ ಕೊಡಲಾಗುವುದು ಹೆಚ್ಚಿನ ಮಾಹಿತಿಗಾಗಿ-08022443962 9945429129-8660349906



☛ ಉದಯವಾಹಿನಿ ಚಿತ್ರ

**ವಿದ್ಯಾರ್ಥಿಗಳಿಂದ ಭರತನಾಟ್ಯ ಪ್ರದರ್ಶನ**

### ಭಜನೆ ಮತ್ತು ಉಪನ್ಯಾಸ

**ಮಾರ್ಚ್ 1 ರಿಂದ 6ರ ವರೆಗೆ ಪ್ರತಿದಿನ ಸಂಜೆ 5 ರಿಂದ 6 ವಿವಿಧ ಭಜನಾ ಮಂಡಳಿ ಹರಿ ಭಜನೆ ನಂತರ ವಿದ್ವಾನ್ ವೆಂಕಟ ನರಸಿಂಹಾಚಾರ್ಯ ರಾಜಪುರೋಹಿತ ಇವರಿಂದ ಶ್ರೀ ಗುರು ರಾಘವೇಂದ್ರ ವೈಭವ (ಶ್ರೀ ರಾಯರ ಚರಿತ್ರೆ) ವಿಷಯವಾಗಿ ಧಾರ್ಮಿಕ ಪ್ರವಚನ ಏರ್ಪಡಿಸಲಾಗಿದ್ದು ಈ ಎಲ್ಲಾ ಕಾರ್ಯಕ್ರಮಗಳಲ್ಲೂ ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ರಾಯರ ಕೃಪೆಗೆ ಪಾತ್ರರಾಗಬೇಕೆಂದು ಶ್ರೀ ನಂದಕಿಶೋರ್ ಆಚಾರ್ ತಿಳಿಸಿದ್ದಾರೆ,**

## ಭರತನಾಟ್ಯ ಪ್ರದರ್ಶನ

• ಉದಯವಾಹಿನಿ, ಬೆಂಗಳೂರು



☛ ಉದಯವಾಹಿನಿ ಚಿತ್ರ

ಜಯನಗರ 5ನೇ ಬಡಾವಣೆಯ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮಪೂಜ್ಯ ಶ್ರೀ ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಆದೇಶದಂತೆ ಶ್ರೀಮಠದ ಹಿರಿಯ ವ್ಯವಸ್ಥಾಪಕರಾದ ಶ್ರೀ ಆರ್. ಕೆ. ವಾದೀಂದ್ರಾಚಾರ್ಯರ ನೇತೃತ್ವದಲ್ಲಿ ಫೆಬ್ರವರಿ 20, ಗುರುವಾರ ಸಂಜೆ 5-30ಕ್ಕೆ 'ನಾಟ್ಯಾಚಾರ್ಯ'

ವಿದುಷಿ ಶ್ರೀಮತಿ ಗೀತಾ ಅನಂತನಾರಾಯಣನ್ ಅವರ ನಿರ್ದೇಶನದಲ್ಲಿ ಗೀತಾಂಜಲಿ ಸ್ಕೂಲ್ ಆಫ್ ನಾಟ್ಯಂ ವಿದ್ಯಾರ್ಥಿಗಳಿಂದ ಭರತನಾಟ್ಯ ಪ್ರದರ್ಶನ ಕಾರ್ಯಕ್ರಮ ಏರ್ಪಡಿಸಲಾಗಿದೆ ಎಂದು ಶ್ರೀ ನಂದಕಿಶೋರ್ ಆಚಾರ್ ತಿಳಿಸಿದ್ದಾರೆ. ಸ್ಥಳ : ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠ, 11ನೇ ಅಡ್ಡರಸ್ತೆ, 45ನೇ ಅಡ್ಡರಸ್ತೆ, ಜಯನಗರ 5ನೇ ಬಡಾವಣೆ, ಬೆಂಗಳೂರು-41

# ಮುದ ನೀಡಿದ ಮೇಘಳ

## ಮನಮೋಹಕ ನೃತ್ಯಮಂಜರಿ



☛ ವೈ.ಕೆ. ಸಂಧ್ಯಾಶರ್ಮ

• ಉದಯವಾಹಿನಿ, ವಿಶೇಷ

ಆತ್ಮವಿಶ್ವಾಸದ ದೃಢ ಹೆಜ್ಜೆಗಳಲ್ಲಿ ನಗುಮುಖದಿಂದ ವೇದಿಕೆ ಪ್ರವೇಶಿಸಿದ ನೃತ್ಯಗಾರ್ತಿ ಮೇಘಾ ಬಿದರಕೋಟಿಯ ನೃತ್ಯದ ಚೆಲುವು ಮೊದಲನೋಟದಲ್ಲೇ ಸೆಳೆಯಿತು. ಅಂದವಳ ವಿದ್ಯುಕ್ತ ರಂಗಪ್ರವೇಶ. ಶ್ರೀ ಕೃಷ್ಣದೇವರಾಯ ಕಲಾಮಂದಿರದಲ್ಲಿ ಕಲಾಭಿಮಾನಿಗಳ ಸಮ್ಮುಖ ಅವಳು ನಿರೂಪಿಸಿದ ಎಲ್ಲಾ ದೈವೀಕ ಕೃತಿಗಳೂ ಕಣ್ಮನ ಸೆಳೆದವು, ಹೃದಯಸ್ಪರ್ಶಿಯಾಗಿದ್ದವು.

ಹೆಸರಾಂತ ಅಂಜಲಿ ಇನ್ಸ್ಟಿಟ್ಯೂಟ್ ಆಫ್ ಪರ್ಫಾರ್ಮಿಂಗ್ ಆರ್ಟ್ಸ್ ಭರತನಾಟ್ಯ ಶಾಲೆಯ ನೃತ್ಯಗುರು ಡಾ. ಸ್ವರೂಪಲಕ್ಷ್ಮಿ ಕೃಷ್ಣಮೂರ್ತಿ ಅವರ ಶಿಷ್ಯೆ ಮೇಘಾ, ಗುರುಗಳ ಸುಮನೋಹರ ನೃತ್ಯ ಸಂಯೋಜನೆಯನ್ನು ಮನಮೋಹಕವಾಗಿ ಸಾಕ್ಷಾತ್ಕರಿಸಿದಳು. ಶುಭಾರಂಭ- ಸಕಲ ದೇವಾನುದೇವತೆಗಳಿಗೆ, ಗುರು ಹಿರಿಯರಿಗೆ ಪುಷ್ಪಾಂಜಲಿ ( ರಚನೆ- ಮಧುರೆ ಮುರಳೀಧರನ್, ರಾಗ- ಜೋಗ್, ಆದಿತಾಳ)ಯ ಮೂಲಕ ಸಲ್ಲಿಸಿದ ಹೊಸವಿನ್ಯಾಸದ ನೃತ್ತಗಳ ನಮನ ಸೊಗಸೆನಿಸಿತು. ತನ್ನ ಪದಾಘಾತವನ್ನು ಮನ್ನಿಸೆಂದು ಭೂದೇವಿಯನ್ನು ವಿನಮ್ರವಾಗಿ ಪ್ರಾರ್ಥಿಸಿದ ಕಲಾವಿದೆ, ನಂತರ ಆನಂದ ನರ್ತನ ಗಣಪತಿಯ ಆಶೀರ್ವಾದವನ್ನು ಬೇಡಿದ ವಿನಾಯಕ ಸ್ತುತಿಯಲ್ಲಿ ಆತನ ಹಲವು ನಾಮಗಳ ಅರ್ಚನೆ ಮಾಡಿ, ಗುಣ-ಮಹಿಮೆಗಳನ್ನು ತನ್ನ ಸುಂದರ ಭಂಗಿ-ಅಭಿನಯಗಳಿಂದ, ಲೀಲಾಜಾಲ ನೃತ್ತ ಸಲಿಲದಿಂದ ರಮ್ಯವಾಗಿ ಕಟ್ಟಿಕೊಟ್ಟಳು. ಮುಂದೆ- ಕರ್ನಾಟಕ ಶಾಸ್ತ್ರೀಯ ಸಂಗೀತದ 'ಸ್ವರಜತಿ'ಗೆ ಸಂವಾದಿಯಾದ 'ಜತಿಸ್ವರ'ದಲ್ಲಿ ಮೇಘಾ ತನ್ನ ಖಚಿತವಾದ ಅಡವುಗಳ ಸೌಂದರ್ಯದಲ್ಲಿ, ಅಂಗಶುದ್ಧವಾದ ಆಂಗಿಕಾಭಿನಯ, ಆಕಾಶಚಾರಿ, ಬಾಗು-ಬಳಕುಗಳ ಆಕರ್ಷಕ ಭಂಗಿಗಳಲ್ಲಿ ನಿರೂಪಿಸಿದ್ದು ವಿಶೇಷವಾಗಿತ್ತು. ಅವಳ ನೃತ್ಯದ ಹೆಜ್ಜೆಗಳಿಗೆ ಪ್ರೇರಕವಾಗಿ ಗುರು ಸ್ವರೂಪರ ಸ್ಫುಟವಾದ-ಖಚಿತ ನಟುವಾಂಗ ಪೂರಕವಾಗಿತ್ತು. ವರ್ಣ- ಮಾರ್ಗಂ ಸಂಪ್ರದಾಯದ ನೃತ್ಯಪ್ರಸ್ತುತಿಯಲ್ಲಿ ಪ್ರಧಾನವಾದ ಘಟ್ಟ. ಮೇಘಾ ಅಂದು ಮಧುರೈ ಆರ್. ಕೃಷ್ಣನ್ ರಚಿಸಿದ ಭಕ್ತಿಪ್ರಧಾನ 'ವರ್ಣ'ವನ್ನು ಬಹು ಸಮರ್ಥವಾಗಿ ನಿಭಾಯಿಸಿದಳು. ಇದು ಅಭಿರಾಮಿರೂಪಿ ದೇವಿಯ ವರ್ಣನೆ-ಮಹಿಮೆ ಚಿತ್ರಿಸುವ 'ಮಾಯೆ ಮಾಯನ್ ಸೋದರಿಯೇ' ಕೃತಿ. ಅಮ್ಮನವರ ಮಹಾಭಕ್ತ ಶಿವರಾಮಿ ಭಟ್ಟರ್ ಎಂದೇ ಜನಜನಿತರಾದ ಸುಬ್ರಹ್ಮಣ್ಯಂ ಅಯ್ಯರ್ ಪವಾಡದ ಕಥೆಯನ್ನು ಕಟ್ಟಿಕೊಟ್ಟ ಭಕ್ತಿಪ್ರಧಾನ ವರ್ಣ ಚೇತೋಹಾರಿಯಾಗಿತ್ತು. ದೇವಿಯ ಆರಾಧನೆಯ ಭಕ್ತಿ ತಾದಾತ್ಮ್ಯತೆಯಲ್ಲಿ ಮೈಮರೆತಿದ್ದ ಶಿವರಾಮಿ ಭಟ್ಟರ್ ಅಲ್ಲಿನ ಸರ್ಫೋಜಿ ಮಹಾರಾಜನ ಆಗಮನವನ್ನು ಗಮನಿಸದ ಕಾರಣ, ಅವರ ಕೋಪಕ್ಕೆ ತುತ್ತಾದ. 'ಇಂದು ಯಾವ ದಿನ' ಎಂಬ ಮಹಾರಾಜನ ಪ್ರಶ್ನೆಗೆ, ಭಕ್ತ, ಅಭಿರಾಮಿಯ ಹೊಳೆಯುವ ಕಿವಿಯೋಲೆಯನ್ನು ದಿಟ್ಟಿಸುತ್ತಿದ್ದವನು, 'ಹುಣ್ಣಿಮೆ' ಎಂದುಬಿಟ್ಟ. ಇಂದು ಹುಣ್ಣಿಮೆ ಎಂಬ ತನ್ನ ಮಾತನ್ನು ಅವನು ಸಾಬೀತುಪಡಿಸದೆ ಹೋದರೆ ಸಾವಿನ ಶಿಕ್ಷೆ ಕೊಡಲಾಯಿತು. ಆಗ ಭಕ್ತನ ರಕ್ಷಣೆಗೆ, ದೇವಿ ಆ ಸಂಜೆ ತನ್ನ ಕಿವಿಯೋಲೆಯನ್ನು ಆಕಾಶಕ್ಕೆ ಎಸೆದಾಗ, ಅದು ಹುಣ್ಣಿಮೆಯ ಚಂದಿರನಂತೆ ಕಂಡುಬಂದು, ಅವನಿಗೆ ಜೀವದಾನ ನೀಡಿದ ಪವಾಡದ ಕಥೆಯನ್ನು ಕಲಾವಿದೆ, ಕಣ್ಣಮುಂದೆ ಸನ್ನಿವೇಶ ನಡೆದಂತೆ ಸೊಗಸಾದ ಸಂಚಾರಿ ಕಥಾನಕವನ್ನು ಪ್ರಬುದ್ಧತೆಯಿಂದ ಅಭಿನಯಿಸಿ ನೋಡುಗರ ಮೆಚ್ಚುಗೆ ಪಡೆದಳು. ಶಕ್ತಿಶಾಲಿ ನೃತ್ತಮಾಲೆ, ರಂಗಾಕ್ರಮಣ ನೃತ್ತ ಅಪೂರ್ವತೆಯಿಂದ ಮನಾಕರ್ಷಿಸಿ, ಭರವಸೆಯ ಕಲಾವಿದೆಯಾಗಿ ಹೊರಹೊಮ್ಮಿದಳು. ನಡುನಡುವೆ ಮಿಂಚಿನ ಸಂಚಾರದ ನೃತ್ತಗಳು, ಆಕರ್ಷಕ ಭಂಗಿಗಳಿಂದ, ನವರಸಾಭಿನಯದಿಂದ ಕಣ್ಮನ ಸೆಳೆದರೆ ಗುರು ಸ್ವರೂಪಲಕ್ಷ್ಮಿ ಅವರ ಲಯಾತ್ಮಕ, ನಟುವಾಂಗದ ಝೇಂಕಾರ ನೃತ್ಯದ ಆಕರ್ಷಕ ಭಾಗವಾಗಿತ್ತು. ಅನಂತರ ಶ್ರೀ ನಾರಾಯಣ ತೀರ್ಥರ ರಚನೆಯ 'ರುಕ್ಮಿಣಿ ಕಲ್ಯಾಣ' ಅತ್ಯಂತ ಮನಮೋಹಕವಾಗಿ ಒಡ ಮೂಡಿತು. ರುಕ್ಮಿಣಿಯ ಲಜ್ಜಾನ್ವಿತ ಶೃಂಗಾರ ಭಾವಗಳನ್ನು ಮೇಘಾ ನಾಟಕೀಯ ಆಯಾಮದಲ್ಲಿ ತುಂಬಾ ಚೆನ್ನಾಗಿ ಅಭಿನಯಿಸಿ ಮೆಚ್ಚುಗೆ ಪಡೆದಳು.

ನಂತರ- ಶ್ರೀಹರಿ ಹಲವು ಸಂದರ್ಭಗಳಲ್ಲಿ ಹೆಣ್ಣಿನ ವೇಷಗಳನ್ನು ಧರಿಸಿ ಮಾಡಿದ ವಿಸ್ಮಯಗಳನ್ನು ಆಕರ್ಷಕ ಸಂಚಾರಿಯಲ್ಲಿ ಕಲಾವಿದೆ ಕುಸುಮನಾಭ ಕನ್ನಿಕೆಯಾಗಿ ಜಾಗವನ್ನು ಉದ್ಧರಿಸಿದ ಪ್ರಸಂಗಗಳನ್ನು ಪುರಂದರದಾಸರ ರಚನೆಯ 'ಇಂಥ ಹೆಣ್ಣನು ನಾನೆಲ್ಲೂ ಕಾಣೆನೋ' ಕೃತಿಯಲ್ಲಿ ಪ್ರಸ್ತುತಪಡಿಸಿದಳು. ಲಯಾತ್ಮಕ ಸೊಲ್ಲುಕಟ್ಟುಗಳ ಸೌಂದರ್ಯವನ್ನು ಎತ್ತಿ ಹಿಡಿವ ಆಕರ್ಷಕ ನೃತ್ತಗಳ ಸಂಭ್ರಮವನ್ನು ಚೆಲ್ಲಿದ ಮೇಘಾ, 'ತಿಲ್ಲಾನ'ದ ಮೂಲಕ ಪ್ರಸ್ತುತಿಯನ್ನು ಸಂಪನ್ನಗೊಳಿಸಿದಳು. ತುಳಜಾ ಭವಾನಿಯ ಮಂಗಳ ಸ್ತುತಿ ಮನಸೆಳೆಯಿತು.



**ಮನಮೋಹಕ ನೃತ್ಯ ಸಾಕ್ಷಾತ್ಕಾರ**

# ಲಿಟ್ಲ್ ಫ್ಲವರ್ ಪ್ರೌಢಶಾಲೆ ವತಿಯಿಂದ ಸೃಷ್ಟಿ ಮಕ್ಕಳಿಂದ ಸಾಂಸ್ಕೃತಿಕ ಉತ್ಸವ

## ಮಕ್ಕಳು ದೇವರ ಸಮಾನ, ಪ್ರೀತಿ ವಿಶ್ವಾಸ ನಂಬಿಕೆಯಿಂದ ಪಾಠ ಮಾಡಬೇಕು: ಡಾ ಮಧುಸೂದನ್ ಬಾಬು

• ಉದಯವಾಹಿನಿ, ಬೆಂಗಳೂರು

ರಾಜಾಜಿನಗರ: ಶ್ರೀರಾಮಪುರ ಆರ್.ಜಿ.ಕ್ರೀಡಾಂಗಣದಲ್ಲಿ ಲಿಟ್ಟಲ್ ಫ್ಲವರ್ ಪ್ರೌಢಶಾಲೆಯಲ್ಲಿ ಸೃಷ್ಟಿ ಶಾಲೆಯ ಮಕ್ಕಳ ವಾರ್ಷಿಕೋತ್ಸವ ಕಾರ್ಯಕ್ರಮ. ಮಹಾತ್ಮ ಗಾಂಧಿಜೀ ಮತ್ತು ಸಂವಿಧಾನ ಶಿಲ್ಪಿ ಡಾ, ಬಿ.ಆರ್.ಅಂಬೇಡ್ಕರ್, ಗಾಂಧಿವಾದಿ ಎಂ.ಪೆರುಮಾಳ್ ರವರ ಬಾವಚಿತ್ರ ಸಂಸ್ಥಾಪಕ ಡಾ, ಮಧುಸೂದನ್ ಬಾಬು, ಬಿ.ಇ.ಓ.ಅಂಜನಪ್ಪ ಮತ್ತು ಆರ್.ಜಿ.ಸ್ಕೂಲ್ ಕಾರ್ಯದರ್ಶಿ ದ್ವಾರಕನಾಥ್, ಬಿಜೆಪಿ ಮಂಡಲ ಅಧ್ಯಕ್ಷರಾದ ಸುದರ್ಶನ್ ರವರು ಪುಷ್ಪನಮನ ಸಲ್ಲಿಸಿ ಸೃಷ್ಟಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಮಾಜಿ ಮಹಾನಗರ ಪಾಲಿಕೆ ಸದಸ್ಯರುಗಳಾದ ಹೆಚ್. ಆರ್.ಕೃಷ್ಣಪ್ಪ, ಹೆಚ್.ವಿಜಯಕುಮಾರ್, ನ್ಯೂ ಪ್ರೆಸಿಡೆನ್ಸಿ ಶಾಲೆಯ ಸಂಸ್ಥಾಪಕ ವಿಶ್ವನಾಥರವರು ಉಪಸ್ಥಿತರಿದ್ದರು. ಅಂಜನಪ್ಪರವರು ಮಾತನಾಡಿ ತಾಯಿ ಮಕ್ಕಳಿಗೆ ಮೊದಲ ಪಾಠ ಶಾಲೆ, ನಾವು ಏನು ಹೇಳಿಕೊಡುತ್ತೇವೆ ಮಕ್ಕಳು ಅದನ್ನ ಕಲಿಯುತ್ತಾರೆ.

ಮಕ್ಕಳು ಬಿಳಿಹಾಳೆ ಅದರಲ್ಲಿ ಉತ್ತಮ ಅಂಶಗಳು ಇದ್ದಾರೆ ದೇಶಕ್ಕೆ ಉತ್ತಮ ಪ್ರಜೆಯಾಗುತ್ತಾನೆ. ಟಿ.ವಿ.ಮತ್ತು ಮೊಬೈಲ್ ಚಟದಿಂದ ಮಕ್ಕಳು ಹಾಳಾಗುತ್ತಿದ್ದಾರೆ. ಅದರಿಂದ ಮಕ್ಕಳಿಗೆ ಟಿ.ವಿ.ಮೊಬೈಲ್ ಗಳಿಂದ ದೂರವಿಡಿ ಮತ್ತು ಮಕ್ಕಳಿಗೆ ಪ್ರತಿದಿನ ಒಂದು ಗಂಟೆ ಕ್ರೀಡಾ ಚಟುವಟಿಕೆ ಭಾಗವಹಿಸುವಂತೆ ಮಾಡಬೇಕು ಆಗ ಮಕ್ಕಳು ಮಾನಸಿಕ, ದೈಹಿಕವಾಗಿ ಆರೋಗ್ಯವಂತರಾಗಿ ಬದುಕುತ್ತಾರೆ. ಮಕ್ಕಳು ಎಷ್ಟೆ ದೊಡ್ಡವಾದರು ತಂದೆ, ತಾಯಂದಿರಿಗೆ ಮಕ್ಕಳು ಚಿಕ್ಕವರೆ ಆಗಿರುತ್ತಾರೆ. ಮಕ್ಕಳು ದೊಡ್ಡವಾಗರಿ ಬೆಳದ ಮೇಲೆ ತಂದೆ, ತಾಯಿಯನ್ನು ಪ್ರೀತಿಯಿಂದ ಸಾಕಬೇಕು. ಮಕ್ಕಳು ಉತ್ತಮ ಪ್ರಜೆಯಾಗಿ ದೇಶ ಸೇವೆ ಮಾಡಿದಾಗ ಸಾರ್ಥಕ ಜೀವನವಾಗುತ್ತದೆ. ಶಿಕ್ಷಣ ಜೊತೆಯಲ್ಲಿ ಮಕ್ಕಳಿಗೆ ಉತ್ತಮ ಸಂಸ್ಕಾರ ಬೆಳಸಲು ಶಿಕ್ಷಣ ಒತ್ತು ನೀಡಬೇಕು ಎಂದು ಹೇಳಿದರು. ಶಾಲೆಯ ಮಕ್ಕಳಿಂದ ಹಾಡು ಗೀತೆಗಾಯನ ಮತ್ತು ನೃತ್ಯ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮ ಏರ್ಪಡಿಸಲಾಗಿತ್ತು.



☛ ಉದಯವಾಹಿನಿ ಚಿತ್ರ



**ಶಾಲೆಯ ಮಕ್ಕಳ ವಾರ್ಷಿಕೋತ್ಸವ**

**ಮಕ್ಕಳು ದೇವರ ಸಮಾನ ಅವರನ್ನ ಪ್ರೀತಿ, ವಿಶ್ವಾಸ ಹಾಗೂ ನಂಬಿಕೆ ಅವರ ಮೇಲಿಟ್ಟು ವಿದ್ಯೆ ಕಲಿಸಿದರೆ ವಿದ್ಯಾವಂತರಾಗುತ್ತಾರೆ. ನಮ್ಮ ಶಾಲೆಯಲ್ಲಿ ಶಿಕ್ಷಣರು ಮತ್ತು ಮಕ್ಕಳು ಒಂದೇ ಕುಟುಂಬದಂತೆ ಇರುತ್ತಾರೆ ಇದರಿಂದ ಮಕ್ಕಳು ಯಾವುದೇ ಒತ್ತಡಕ್ಕೆ ಒಳಗಾಗದೆ ಶಿಕ್ಷಣ ಕಲಿಯುತ್ತಾರೆ.**
**ದೇಶಕ್ಕೆ ಸೇವೆ ಸಲ್ಲಿಸಿದ ಮಹನೀಯರುಗಳ ಸಾಧನೆಗಳನ್ನು ಮಕ್ಕಳಿಗೆ ಹೇಳಿಕೊಡಬೇಕು ಅವರಂತೆ ಜೀವನದಲ್ಲಿ ಸಾಗಬೇಕು ಎಂದು ಹೇಳಿದಾಗ ಮಕ್ಕಳು ಉತ್ತಮ ಪ್ರಜೆಗಳಾಗುತ್ತಾರೆ ಎಂದು ಹೇಳಿದರು.**

**ಲಿಟ್ಟಲ್ ಫ್ಲವರ್ ಪ್ರೌಢಶಾಲೆಯ ಸಂಸ್ಥಾಪಕ ಡಾ-ಮಧುಸೂದನ್ ಬಾಬು**


ಮಿನಿ ನ್ಯೂಸ್

# ವಿದ್ಯುತ್ ಪವ್ವರ ಘಟಕ ಪರಿಸರ ಮಾಲಿನ್ಯ ನಿಯಮಗಳ ಉಲ್ಲಂಘನೆ

• ಉದಯವಾಹಿನಿ,ಚಿಂಚೋಳಿ

ಪಟ್ಟಣದ ಹೊರವಲಯದಲ್ಲಿರುವ ಮೆಟ್ರಿಕ್ ಆಗ್ರೋ ಪವ್ವರ ಲಿ.ಕಂಪನಿಯು ಸ್ಥಾಪನೆಗೊಂಡು ಅನೇಕ ವರ್ಷಗಳಾಗಿವೆ ಆದರೆ ಕಾರ್ಖಾನೆಯ ಒಂದೇ ಒಂದು ನಿಯಮವನ್ನು ಪಾಲನೆ ಮಾಡದೆ ಪರಿಸರ ಮಾಲಿನ್ಯವನ್ನು ಉಲ್ಲಂಘಿಸಿ ಕಾರ್ಖಾನೆಯ ಹೊರ ಸೊಸುತ್ತಿರುವ ವಿಷಕಾರಿ ಹೊಗೆಯನ್ನು ಅನೇಕ ಪ್ರಾಣಿಪಕ್ಷಿ ಮತ್ತು ಜನರ ಜೀವನಕ್ಕೆ ಹಾನಿ ಹೀಗಾಗಿ ಸಂಬಂಧಪಟ್ಟ ಅಧಿಕಾರಿಗಳು ಪರಿಶೀಲಿಸಿ ತಡೆಗಟ್ಟುವಂತೆ ಆಗ್ರಹಿಸಿ ತಾಲ್ಲೂಕಾ ಮಾಹಿತಿ ಹಕ್ಕು, ಸಾಮಾಜಿಕ ಕಾರ್ಯಕರ್ತರ ವೇದಿಕೆ ವತಿಯಿಂದ ತಹಶೀಲ್ದಾರ್ ಮೂಲಕ ಜಿಲ್ಲಾಧಿಕಾರಿಗಳಿಗೆ ಮನವಿಪತ್ರ ಸಲ್ಲಿಸಿದರು.

ತಾಲ್ಲೂಕಾ ಮಾಹಿತಿ ಹಕ್ಕು, ಸಾಮಾಜಿಕ ಕಾರ್ಯಕರ್ತರ ವೇದಿಕೆ ಅಧ್ಯಕ್ಷ ಅನೀಲಕುಮಾರ ಬೀರಾದಾರ ಮಾತನಾಡಿ ಮೆಟ್ರಿಕ್ ಆಗ್ರೋ ಪವ್ವರ ಲಿ.ಕಂಪನಿ ವಿದ್ಯುತ್ ಘಟಕವು ಪರಿಸರ ಮಾಲಿನ್ಯ ಕಾಯ್ದೆ ನಿಯಮಗಳನ್ನು ಮಾರ್ಗಸೂಚಿಗಳು ಪಾಲನೆ ಮಾಡದೆ ಕಾರ್ಖಾನೆಯಿಂದ ಅತ್ಯಧಿಕ ಕಪ್ಪು ವಿಷಕಾರಿ ಹೊಗೆಯೂ ಹೊರಸೊಸುತ್ತಿರುವುದರಿಂದ ಕಾರ್ಖಾನೆ ಒಳಗೆ ಕೆಲಸ ಮಾಡುವ ಕಾರ್ಮಿಕರಿಗೆ ಮತ್ತು ಕಾರ್ಖಾನೆ ಪಕ್ಕದಲ್ಲಿಯೆ ಆದರ್ಶ ವಿದ್ಯಾಲಯ ಮತ್ತು ಮಹಿಳೆಯರ ವಸತಿ ನಿಲಯ ಮತ್ತು ತಾಲ್ಲೂಕಾ ಕ್ರೀಡಾಂಗಣವು ಇರುವುದರಿಂದ ವಿಷಕಾರಿ ಹೊಗೆಯಿಂದ ಅನೇಕ ವಿವಿಧ ತರಹದ ರೋಗ ರುಜಿನಗಳು ಬರುವ ಸಾಧ್ಯತೆ ಹೆಚ್ಚಿರುತ್ತದೆ ಮತ್ತು ಗರ್ಭಿಣಿಯರಿಗೆ, ಕಿಶೋರಿಯರಿಗೆ, ಕ್ರೀಡಾಪಟುಗಳಿಗೆ, ಶಾಲಾಮಕ್ಕಳ ಮೇಲೆ ದುಷ್ಪರಿಣಾಮ ಬೀರುತ್ತದೆ. ಕಾರಣ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿಯವರು ಕಾರ್ಖಾನೆಗೆ ಆಗಮಿಸಿ ಸ್ಥಳದ ಕೂಲಂಕುಷವಾಗಿ ಪರಿಶೀಲಿಸಿ ಇಂಥಹ ವಿಷಕಾರಿ ಹೊಗೆಯನ್ನು ತಡೆಗಟ್ಟುವಂತೆ ಆಗ್ರಹಿಸಿದರು.


ಉದಯವಾಹಿನಿ ಚಿತ್ರ


ಉದಯವಾಹಿನಿ ಚಿತ್ರ

**ಕ್ರಮಕ್ಕೆ ಆರ್‌ಟಿಐ ಸಂಘಟನೆ ಆಗ್ರಹ**

ಈ ಸಂದರ್ಭದಲ್ಲಿ ರಾಜ್ಯ ಮಾಹಿತಿ ಹಕ್ಕು ಹಾಗೂ ಸಾಮಾಜಿಕ ಕಾರ್ಯಕರ್ತರ ವೇದಿಕೆಯ ಜಿಲ್ಲಾಧ್ಯಕ್ಷ ರಾಜೇಂದ್ರ ಪ್ರಸಾದ್, ಚೇತನ್ ನಿರಾಳಕರ್, ಅಶ್ವತ್ಥ್ ಕಟ್ಟಿಮನಿ, ಮಂಜೂರು ಅಹೇಮದ್, ಗೋಪಾಲ ಗಾರಂಪಳ್ಳಿ, ಸಾಗರ್ ಆನಂದಿ, ಹಣಮಂತ ಪೂಜಾರಿ ಅನೇಕರಿದ್ದರು.

# ಮೈಕ್ರೋ ಫೈನಾನ್ಸ್, ಲೇವಾದೇವಿಗಾರರ ಪ್ರಗತಿ ಪರಿಶೀಲನೆ

## ● ಆಧ್ಯಾದೇಶ ಜಿಲ್ಲೆಯಲ್ಲಿ ಕಟ್ಟುನಿಟ್ಟಾಗಿ ಅನುಷ್ಠಾನಕ್ಕೆ ಸೂಚನೆ: ಜಿಲ್ಲಾಧಿಕಾರಿ ಡಾ.ಸುಶೀಲಾ ಬಿ

• ಉದಯವಾಹಿನಿ, ಯಾದಗಿರಿ

ಮೈಕ್ರೋ ಫೈನಾನ್ಸ್ ಕಿರುಕುಳಕ್ಕೆ ಬ್ರೇಕ್ ಹಾಕುವ ನಿಟ್ಟಿನಲ್ಲಿ ಕರ್ನಾಟಕ ಕಿರು ಸಾಲ ಮತ್ತು ಸಣ್ಣ ಆಧ್ಯಾದೇಶ 2025ಅನ್ನು ರಾಜ್ಯ ಸರ್ಕಾರ ಜಾರಿಗೆ ತಂದಿದ್ದು, ಅದನ್ನು ಜಿಲ್ಲೆಯಲ್ಲಿ ಕಟ್ಟುನಿಟ್ಟಾಗಿ ಅನುಷ್ಠಾನಗೊಳ್ಳಿಸಬೇಕೆಂದು ಜಿಲ್ಲಾಧಿಕಾರಿ ಡಾ.ಸುಶೀಲಾ ಬಿ. ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು. ನಗರದ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಮೈಕ್ರೋ ಫೈನಾನ್ಸ್ ಮತ್ತು ಲೇವಾದೇವಿಗಾರರಗಳ ಪ್ರಗತಿ ಪರಿಶಿಲನೆ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಜಿಲ್ಲೆಯಲ್ಲಿ ವ್ಯವಹರಿಸುತ್ತಿರುವ ಮೈಕ್ರೋ ಫೈನಾನ್ಸ್ ಸಂಸ್ಥೆಗಳು ಕಡ್ಡಾಯವಾಗಿ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ನೋಂದಣಿ ಮಾಡಿಸಿಕೊಳ್ಳಬೇಕು. ಸದರಿ ಸಂಸ್ಥೆಗಳು ತಾವು ವಿಧಿಸುವ ಬಡ್ಡಿದರ, ಸಾಲಗಾರರ ಮಾಹಿತಿ, ಸುಸ್ಥಿ ಸಾಲಗಳ ವಿವರ ಮುಂತಾದವುಗಳನ್ನು ಜಿಲ್ಲಾಧಿಕಾರಿಗಳಿಗೆ ನೀಡಬೇಕಾಗಿ ರುತ್ತದೆ ಎಂದು ಸಂಬಂದ ಪಟ್ಟವರಿಗೆ ನಿರ್ದೇಶನ ನೀಡಿದರು.

ಈ ವೇಳೆ ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿಗಳಾದ ಶ್ರೀ ಪೃಥ್ವಿಕ್ ಶಂಕರ ಅವರು ಮಾತನಾಡಿ, ಸಾಲ ವಸೂಲಾತಿ ವೇಳೆ ಆರ್‌ಬಿಐ ನಿಯಮದಂತೆ ನಡೆದುಕೊಳ್ಳಬೇಕು.

ಕಾನೂನು ಬಾಹಿರವಾಗಿ ಸಾಲ ವಸೂಲಾತಿಗೆ ಮುಂದಾದರೆ ಮುಲಾಜಿಲ್ಲದೆ ಕಠಿಣ ಕ್ರಮಕ್ಕೆಗೊಳ್ಳುತ್ತೇವೆ. ಸಾಲ ವಸೂಲಿ ಮಾಡುವಾಗ ನೀವು ಜನರನ್ನು ಹಿಂಸಿಸಬಾರದು ಮತ್ತು ಕಿರುಕುಳ ನೀಡಬಾರದು. ಮೈಕ್ರೋ ಫೈನಾನ ಮತ್ತು ಲೇವಾದೇವಿಗಾರರಿಂದ ಆಧ್ಯಾದೇಶದ ಉಲ್ಲಂಘನೆಯಾದಲ್ಲಿ ಸಂಬಂಧ ಪಟ್ಟ ಪೋಲಿಸ ಠಾಣೆಯಲ್ಲಿ ಪ್ರಕರಣ ದಾಖಲಿಸಿಕೊಳ್ಳುಲಾಗುತ್ತದೆ ಎಂದು ಹೇಳಿದರು. ಈ ವೇಳೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಗಳಾದ ಲವೀಶ್ ಒರಡಿಯಾ ಅವರು ಮಾತನಾಡಿ, ಮೈಕ್ರೋ ಫೈನಾನ್ಸ್ ಮತ್ತು ಲೇವಾದೇವಿಗಾರರು ಕಡ್ಡಾಯವಾಗಿ ಆರ್.ಬಿ.ಐ ಮಾರ್ಗಸೂಚಿಗಳನ್ನು ಹಾಗೂ ಈ ಅಧ್ಯಾದೇಶದ ಕ್ರಮಗಳನ್ನು ಚಾಚು ತಪ್ಪದೆ ಪಾಲಿಸಬೇಕೆಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು. ಇದೇ ಸಂದರ್ಭದಲ್ಲಿ ಸಹಕಾರ ಸಂಘಗಳ ಉಪ ನಿಬಂಧಕರು ಪವನ್ ಕುಮಾರ್, ಲೀಡ್ ಬ್ಯಾಂಕಿನ ಅಧಿಕಾರಿಗಳು ಸೇರಿದಂತೆ ಸುರಪೂರ ಮತ್ತು ಯಾದಗಿರಿಯ 23 ಮೈಕ್ರೋ ಫೈನಾನ್ಸ್ ಹಾಗೂ 10 ಶಾಖೆಯ ಅಧಿಕಾರಿಗಳು ಸಭೆಯಲ್ಲಿ ಇದ್ದರು.


ಉದಯವಾಹಿನಿ ಚಿತ್ರ



### ಲೇವಾದೇವಿಗಾರರು ಬಡ್ಡಿದರದಲ್ಲಿ ಪಾರದರ್ಶಕತೆಯನ್ನು ಕಾಪಾಡಿಕೊಳ್ಳಿ

**ಸಾಲ ವಸೂಲಾತಿ ಹಾಗೂ ಸಾಲ ನೀಡಿಕೆಗೆ ಇರುವ ಮಾನದಂಡಗಳ ಕುರಿತು ವಿವರಿಸಿ, ಗ್ರಾಮ ಅಥವಾ ಪಟ್ಟಣ ಗಳಲ್ಲಿ ಸಾಲ ವಸೂಲಾತಿಗೆ ನಿರ್ವಹಿಸಿರುವ ಅಧಿಕಾರಿಗಳ ಪಟ್ಟಿ ಹಾಗೂ ಸಾಲಗಾರರ ಹೆಸರು ಮತ್ತು ವಿಳಾಸದೊಂದಿಗೆ ಲಿಖಿತ ಮುಚ್ಚಳಿಕೆಯೊಂದಿಗೆ ಜಿಲ್ಲಾಧಿಕಾರಿ ಕಚೇರಿಯಲ್ಲಿ ನೊಂದಣಿಯನ್ನು ಕಡ್ಡಾಯವಾಗಿ ಮಾಡಕೊಳ್ಳಬೇಕು. ಅಲ್ಲದೆ ಜಿಲ್ಲೆಯಲ್ಲಿರುವ ಮೈಕ್ರೋ ಫೈನಾನ್ಸ್ ಹಾಗೂ ನೀಡಿಕೆ ಎಜೆನ್ಸಿ ಮತ್ತು ಲೇವಾದೇವಿಗಾರರು ಬಡ್ಡಿದರದಲ್ಲಿ ಪಾರದರ್ಶಕತೆಯನ್ನು ಕಾಪಾಡಿಕೊಳ್ಳುವಂತೆ ತಿಳಿಸಿದರು. ಹಾಗೂ ಬಡ್ಡಿಯ ದರಗಳನ್ನು ತಮ್ಮ ಕಚೇರಿಯ ಸೂಚನಾ ಫಲಕದಲ್ಲಿ ಅಳವಡಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.**

# ಮನೆ ಬೀಗ ಮುರಿದು 2.80 ಲಕ್ಷ ರೂ.ಕಳವು

• ಉದಯವಾಹಿನಿ, ಕಲಬುರಗಿ

ಮನೆ ಬೀಗ ಮುರಿದು 2.80 ಲಕ್ಷ ರೂ. ಮೌಲ್ಯದ ನಗನಾಣ್ಯ ಕಳವು ಮಾಡಿರುವ ಘಟನೆ ಉದನೂರ ರಸ್ತೆಯ ಚಂದ್ರಕಾಂತ ಲೇಔಟ್‌ನಲ್ಲಿ ನಡೆದಿದೆ. ವಿಠ್ಠಲ ಶಂಕರರಾವ ಮುಚ್ಚಟ್ಟಿ ಎಂಬುವವರ ಮನೆ ಬೀಗ ಮುರಿದು ಕಳ್ಳರು 1.20 ಲಕ್ಷ ರೂ.ಮೌಲ್ಯದ 20 ಗ್ರಾಂ. ಬಂಗಾರದ ಎರಡು ಸುತ್ತುಂಗುರ, 60 ಸಾವಿರ ರೂ.ಮೌಲ್ಯದ 10 ಗ್ರಾಂ.ಬಂಗಾರದ ಚೈನ್, 1 ಲಕ್ಷ ರೂ.ನಗದು ಹಣ ಸೇರಿ 2.80 ಲಕ್ಷ ರೂ.ಮೌಲ್ಯದ ನಗನಾಣ್ಯವನ್ನು ಕಳವು ಮಾಡಿದ್ದಾರೆ. ಮೂರ್ನಾಲ್ಕು ದಿನಗಳ ಹಿಂದೆ ಅತ್ತೆ-ಮಾವ ಕುಂಭಮೇಳಕ್ಕೆ ಹೋದ ಪ್ರಯುಕ್ತ ಇವರು ಮನೆಗೆ ಬೀಗ ಹಾಕಿಕೊಂಡು ಪತ್ನಿ ಮತ್ತು ಮಕ್ಕಳೊಂದಿಗೆ ಅಶೋಕನಗರದಲ್ಲಿರುವ ಮಾವನ ಮನೆಗೆ ಹೋಗಿ ವಾಸವಾಗಿದ್ದರು. ಈ ವೇಳೆ ಕಳ್ಳರು ಮನೆ ಬೀಗ ಮುರಿದು ನಗನಾಣ್ಯ ದೋಚಿಕೊಂಡು ಹೋಗಿದ್ದಾರೆ ಎಂದು ತಿಳಿದುಬಂದಿದೆ. ಈ ಸಂಬಂಧ ಅಶೋಕನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ನಡೆದಿದೆ.



# ಕಾಲುವೆಗಳ ಹೂಳೆತ್ತುವ ಕಾರ್ಯ ಆರಂಭ ನಮ್ಮ ಹೋರಾಟಕ್ಕೆ ಸಿಕ್ಕ ಜಯ: ಜಾಕಾ


• ಉದಯವಾಹಿನಿ, ವಡಗೇರಾ


ಉದಯವಾಹಿನಿ ಚಿತ್ರ

ತಾಲ್ಲೂಕಿನ ಕೊನೆ ಭಾಗದ ಕಾಲುವೆಗಳ ಹೂಳು ತೇಗೆಸುವಂತೆ ಒತ್ತಾಯಿಸಿ ಹಸಿರು ಸೇನೆ ವಡಗೇರಾ ತಾಲ್ಲೂಕು ಘಟಕದ ಅಧ್ಯಕ್ಷ ವಿದ್ಯಾಧರ್ ಜಾಕಾ ನೇತೃತ್ವದಲ್ಲಿ ಕಾಲುವೆ ಬಳಿ ಪ್ರತಿಭಟನೆ ಮಾಡಿ ಎಚ್ಚರಿಸಿದ್ದರು. ಬಳಿಕ ಅಧಿಕಾರಿಗಳು ಎಚ್ಚೆತ್ತುಕೊಂಡು ವಡಗೇರಾ ತಾಲ್ಲೂಕಿನ ಕೊನೆ ಭಾಗದ ಗ್ರಾಮಗಳ ಕಾಲುವೇಗಳ ಹೂಳೆತ್ತಿಸಿ ಜಾಲಿ ಗಿಡಗಂಟಿ ಮುಳ್ಳುಗಳನ್ನು ಸ್ವಚ್ಛಗೊಳಿಸುವ ಕಾರ್ಯಕ್ಕೆ ಮುಂದಾಗಿದ್ದು. ರೈತ ಸಂಘದ ತಾಲ್ಲೂಕು ಅಧ್ಯಕ್ಷ ವಿದ್ಯಾಧರ್ ಜಾಕ ಹರ್ಷ ವ್ಯಕ್ತಪಡಿಸಿ ಅಭಿನಂದನೆ ತಿಳಿಸಿ ಅವರು ಮಾತನಾಡಿದರು. ನಮ್ಮ ಮನ ವಿಗೆ ಸ್ಪಂದಿಸಿ ಕಾಲುವೆಗಳ ಸ್ವಚ್ಛಗೊಳಿಸುವ ಕಾರ್ಯಕ್ಕೆ ಮುಂದಾಗಿರುವುದು ಸ್ವಾಗತಾರ್ಹ ನಮ್ಮ ಹೋರಾಟಕ್ಕೆ ಸಿಕ್ಕ ಜಯ ಇದಾಗಿದೆ ಈಗಾಗಲೇ ಜೋಳ ಸಜ್ಜಿ ಕಡಲೆ ಶೇಂಗಾ ಮೆಣಸಿನಕಾಯಿ ಬಿತ್ತನೆ ಮಾಡಿದ್ದು ಕೊನೆ ಭಾಗದ ರೈತರಿಗೆ ನೀರಿನ ಅವಶ್ಯಕತೆ ಇದ್ದು ಹಂತ ಹಂತವಾಗಿ ಸಮರ್ಪಕವಾಗಿ ಕಾಲುವೆಗಳಿಗೆ ನೀರು ಹರಿಸಲು ಅಧಿಕಾರಿಗಳು ಮುಂದಾಗಬೇಕು ಎಂದು ಅವರು ಒತ್ತಾಯಿಸಿದ್ದಾರೆ.

ಈ ಸಂದರ್ಭದಲ್ಲಿ ತಾಲ್ಲೂಕು ಗೌರವಾಧ್ಯಕ್ಷ ಶರಣು ಜಡಿ, ತಾಲ್ಲೂಕು ಕಾರ್ಯದರ್ಶಿ ಸತೀಶ್ ಪೂಜಾರಿ, ಮಲ್ಲು ನಾಟೇಕಾರ, ತಿರುಮಲ ಕಲಾಲ, ನಿಂಗು ಕುರ್ಕಳಿ, ದರ್ಶನ್ ಗುತ್ತೇದಾರ್ ,ಮರೇಪ್ಪ ಬಾಡದ, ಯಲ್ಲಪ್ಪ ಕರಿಕಳ್ಳಿ, ಇನ್ನಿತರರು ಇದ್ದರು.

# ಪಿಎಸಿಎಸ್ ಕೆಂಭಾವಿ-2 ರಲ್ಲಿ ತೊಗರಿ ಖರೀದಿ ಕೇಂದ್ರ ಉದ್ಘಾಟನೆ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಕೆಂಭಾವಿ

**ರೈತರ ಹಿತ ದೃಷ್ಟಿ**


ಪಟ್ಟಣದ ಕೃಷಿ ಉತ್ಪನ್ನ ಮಾರುಕಟ್ಟೆಯಲ್ಲಿ ಮಂಗಳವಾರ ಪಿಎಸಿಎಸ್ ಕೆಂಭಾವಿ-2 ಸಹಕಾರ ಸಂಘದ ವತಿಯಿಂದ ಕೇಂದ್ರ ಸರ್ಕಾರದ ಬೆಂಬಲ ಬೆಲೆ ಹಾಗೂ ರಾಜ್ಯ ಸರ್ಕಾರದ ಪ್ರೋತ್ಸಾಹ ಧನ ಯೋಜನೆ ಅಡಿಯಲ್ಲಿ ತೊಗರಿ ಖರೀದಿ ಕೇಂದ್ರ ಪುರಸಭೆ ಅಧ್ಯಕ್ಷ ರಹೀಮಾನ ಪಟೇಲ್ ಯಲಗೋಡ ಉದ್ಘಾಟಿಸಿದರು.

ನಂತರ ತೊಗರಿ ಖರೀದಿ ಕೇಂದ್ರಕ್ಕೆ ಚಾಲನೆ ನೀಡಿ ಮಾತನಾಡಿದ ಸಂಘದ ಅಧ್ಯಕ್ಷ ಮಡಿವಾಳಪ್ಪಗೌಡ ಪಾಟೀಲ ಅವರು ಕರ್ನಾಟಕ ರಾಜ್ಯ ಸಹಕಾರಿ ಮಾರಾಟ ಮಹಾಮಂಡಳಿ ನಿಯಮಿತದ ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆ, ರಾಜ್ಯ ಸರ್ಕಾರದ ಪ್ರೋತ್ಸಾಹ ಧನದೊಂದಿಗೆ ಪಟ್ಟಣದಲ್ಲಿ ಆರಂಭಿಸಲಾಗಿದೆ ರೈತರು ಇದರ ಸದುಪ ಯೋಗ ಪಡಿಸಿಕೊಳ್ಳಿ ಎಂದರು. ರೈತರು ದಲ್ಲಾಳಿಗಳಿಗೆ ಮಾರಾಟ ಮಾಡಿ ಮೋಸ ಹೋಗದಂತೆ ರೈತರಿಗೆ ಕಿವಿಮಾತು ಹೇಳಿದರು. ಕೇಂದ್ರ ಹಾಗೂ ರಾಜ್ಯ ಸರ್ಕಾರದ ರೈತರ ಹಿತ ದೃಷ್ಟಿಯಿಂದ ಬೆಂಬಲ ಬೆಲೆ ಯೋಜನೆಯಡಿ ರೈತರ ತೊಗರಿ ಯನ್ನು ಖರೀದಿಸುತ್ತಿದ್ದು. ತೊಗರಿ ಬೆಳೆದ ರೈತರು ಮುಂಚಿತವಾಗಿ ಬಂದು ನೋಂದಣಿ ಮಾಡಿಸಿಕೊಂಡು ಸರ್ಕಾರಿ ತೊಗರಿ ಖರೀದಿ ಕೇಂದ್ರದಲ್ಲಿ ಮಾರಾಟ ಮಾಡುವಂತೆ ತಿಳಿಸಿದರು. ಉಪಾಧ್ಯಕ್ಷ ತಿಪ್ಪಣ್ಣ.ಡಿ ಯಾಳಗಿ ಮಾತನಾಡಿ ರೈತರು ತಮ್ಮ ಹತ್ತಿರದ ಪಿಎಸಿಎಸ್, ಎಫ್ ಪಿಒ, ಟಿಎಪಿಸಿಎಂಎಸ್ ಗಳಿಗೆ ಭೇಟಿ ನೀಡಿ ನೋಂದಣಿ ಮಾಡಿಸಿಕೊಂಡು ಪ್ರತಿ ಎಕರೆಗೆ 4 ಕ್ವಿಂಟಾಲ್ ನಂತೆ ಗರಿಷ್ಠ 40 ಕ್ವಿಂಟಾಲ್ ವರೆಗೆ ಪ್ರತಿ ರೈತರಿಂದ ನೇರವಾಗಿ ಖರೀದಿಸಿ ಕೇಂದ್ರ ಸರ್ಕಾರದ ಬೆಂಬಲ ಬೆಲೆ ರೂ7.550 ಜೊತೆಗೆ ರಾಜ್ಯ ಸರ್ಕಾರದ ಪ್ರೋತ್ಸಾಹ ಧನ ರೂ450 ಪ್ರತಿ ಕ್ವಿಂಟಾಲ್‌ಗೆ ಸೇರಿ ಒಟ್ಟು ರೂ.8.000 ಪ್ರತಿ ಕ್ವಿಂಟಾಲ್ ಲೆಕ್ಕದಲ್ಲಿ ತೊಗರಿ ಖರೀದಿಸಲು ರೈತರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಬಾಪುಗೌಡ ಪೋ ಪಾಟೀಲ, ಖಾಜಾಪಟೇಲ್ ಕಾಚೂರ, ಸೋಮಲಿಂಗಪ್ಪ ದೊಡ್ಡಮನಿ, ದೇವಪ್ಪ ಮ್ಯಾಗೇರಿ, ಶಿವಶಂಕರ ಖಾನಾಪುರ, ರಾಮನಗೌಡ ಗೊಗಲ್ ಆಲ್ಹಾಳ, ರಾಘವೇಂದ್ರ ಡಿಗ್ಗಾವಿ, ಚನ್ನಯ್ಯ ಸ್ವಾಮಿ ಹಿರೇಮಠ, ಅರ್ಚಕ ಪ್ರಶಾಂತ್ ಹಿರೇಮಠ ಹಣಮಂತರಾಯ ಯಲಗೋಡ ಕುಮಾರ ಆರ್ ಭೋವಿ,ಸಂಘದ ಕಾರ್ಯದರ್ಶಿ ರಂಗಪ್ಪ ವಡ್ಡರ, ಶರಣು ಅರಕೇರಾ, ಮಾರುತಿ ಆರ್ ಭೋವಿಸೇರಿದಂತೆ ರೈತರು, ಹಮಾಲರು ಇದ್ದರು.

# ಯಡ್ರಾಮಿ ತಾಲ್ಲೂಕಿನಲ್ಲಿ ಮಹಿಳಾ ಕಾಲೇಜು

• ಉದಯವಾಹಿನಿ, ಜೇವರಗಿ


ಉದಯವಾಹಿನಿ ಚಿತ್ರ

ಕಲ್ಯಾಣ ಕರ್ನಾಟಕ ಭಾಗದಲ್ಲಿ ಕೆಕೆಆರ್‌ಡಿಬಿ ವತಿಯಿಂದ 541 ಅಂಗನವಾಡಿ ಕಟ್ಟಡಗಳಿಗೆ ಹಾಗೂ 7ಕಡೆ 5 ಕೋಟಿ ವೆಚ್ಚದಲ್ಲಿ ಮಾದರಿ ಶಾಲೆಗಳಿಗೆ ಮಂಜೂರಾತಿ ಸಿಕ್ಕಿದೆ . ಅತಿ ಶೀಘ್ರದಲ್ಲೇ ಯಡ್ರಾಮಿ ತಾಲ್ಲೂಕಿನಲ್ಲಿ ಮಹಿಳಾ ಕಾಲೇಜು ಆರಂಭವಾಗಲಿದೆಎಂದು ಕೆಕೆಆರ್‌ಡಿಬಿ ಅಧ್ಯಕ್ಷ ಹಾಗೂ ಶಾಸಕ ಡಾ.ಅಜಯ್ ಧರ್ಮಸಿಂಗ್ ಹೇಳಿದರು.

ಪಟ್ಟಣದ ಡಾ.ಬಿ ಆರ್ ಅಂಬೇಡ್ಕರ್ ಭವನದಲ್ಲಿ ಸೋಮವಾರ ತಾಲ್ಲೂಕು ಆಡಳಿತ, ತಾಲ್ಲೂಕು ಪಂಚಾಯತ ಆರೋಗ್ಯ ಇಲಾಖೆ ಹಾಗೂ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ವತಿಯಿಂದ ಹಮ್ಮಿಕೊಂಡ ಬೇಟಿ ಬಚಾವೋ, ಬೇಟಿ ಪಡಾವೋ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

**ಹೆಣ್ಣು ಮಗು ತಂದೆಯ ಗರ್ವದ ಸಂಕೇತ ಹೆಣ್ಣು ಸಮಾಜದ ಕಣ್ಣು.ಭಾರತ ದೇಶಕ್ಕೆ ಮಾತೆಯೆಂದು ಹೆಣ್ಣಿಗೆ ಹೋಲಿಸಲಾಗಿದೆ. ಹೆಣ್ಣು ಮಗು ಹುಟ್ಟಿದರೇ, ಪ್ರತಿ ತಂದೆ ಗರ್ವ ಪಡಬೇಕು. ಹೆಣ್ಣು ಮಗುವಿಗೆ ರಕ್ಷಿಸಿ ಹಾಗೂ ಶಿಕ್ಷಣ ಕೊಡಿಸಿ.**

**-ಸಂಗಣ್ಣಗೌಡ. ಪಾಟೀಲ್**
**ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು**

ಪಂಚ ಗ್ಯಾರಂಟಿಗಳು ಮಹಿಳಾ ಸಬಲೀಕರಣಕ್ಕೆ ನಾಂದಿ.. ಬೇಟಿ ಬಚಾವೋ ಬೇಟಿ ಪಡಾವೋ ಕಾರ್ಯಕ್ರಮ ಅತ್ಯುತ್ತಮ ಯೋಜನೆ ಎಂದು ಅವರು ನುಡಿದರು.

ಕಾರ್ಯಕ್ರಮದಲ್ಲಿ ತಹಶೀಲ್ದಾರ ಮಲ್ಲಣ್ಣ ಯಲಗೋಡ, ಕಾರ್ಯನಿರ್ವಾಹಕ ಅಧಿಕಾರಿಗಳಾದ ರವಿಂದ್ರ ರೆಡ್ಡಿ,ನಾಗಮೂರ್ತಿ ಆರೋಗ್ಯ ಅಧಿಕಾರಿ ಡಾ.ವಿಶ್ವನಾಥ ಬಿರಾದಾರ, ಅಂಗನವಾಡಿ ಮೇಲ್ವಿಚಾರಕರು, ಕಾರ್ಯಕರ್ತೆಯರು, ವಿದ್ಯಾರ್ಥಿನಿಯರು ನೂರಾರು ಸಂಖ್ಯೆಯಲ್ಲಿ ಇದ್ದರು.

# ಎಸ್‌ಎಸ್‌ಎಲ್‌ಸಿ ಫಲಿತಾಂಶ ಹೆಚ್ಚಳಕ್ಕೆ ಕ್ರಮ ವಹಿಸಿ

• ಉದಯವಾಹಿನಿ, ಚಿತ್ರದುರ್ಗ

ಜಿಲ್ಲೆಯಲ್ಲಿ ಈ ಬಾರಿಯ ಎಸ್‌ಎಸ್‌ಎಲ್‌ಸಿ ಫಲಿತಾಂಶವನ್ನು ಗಣನೀಯವಾಗಿ ಹೆಚ್ಚಳ ಮಾಡಲು ಅಗತ್ಯ ಪೂರ್ವಸಿದ್ಧತೆ ಹಾಗೂ ಕ್ರಮವಹಿಸಬೇಕು ಎಂದು ಶಾಲಾ ಶಿಕ್ಷಣ ಇಲಾಖೆ ಅಧಿಕಾರಿಗಳಿಗೆ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ. ಸೋಮಶೇಖರ್ ಸೂಚನೆ ನೀಡಿದರು. ನಗರದ ಜಿಲ್ಲಾ ಪಂಚಾಯಿತಿ ಕಾರ್ಯಾಲಯದಲ್ಲಿ ಸೋಮವಾರ ಎಸ್‌ಎಸ್‌ಎಲ್‌ಸಿ ಶೈಕ್ಷಣಿಕ ಪ್ರಗತಿ ಹಾಗೂ ಪೂರ್ವ ಸಿದ್ಧತೆ ಕುರಿತು ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಕಳೆದ ಸಾಲಿಗಿಂತ ಪ್ರಸಕ್ತ ಸಾಲಿನಲ್ಲಿ ಶೇ.100ರಷ್ಟು ಫಲಿತಾಂಶ ಹೆಚ್ಚಳಕ್ಕೆ ಅಗತ್ಯ ಕ್ರಮ ಕೈಗೊಳ್ಳಬೇಕು. ಉತ್ತಮ ಫಲಿತಾಂಶ ಪಡೆದ ಶೇಕಡಾವಾರು ನೋಡಿಕೊಂಡು ಅಂತಹ ಅಧಿಕಾರಿಗಳಿಗೆ, ಮುಖ್ಯ ಶಿಕ್ಷಕರಿಗೆ ಮತ್ತು ಶಿಕ್ಷಕರಿಗೆ ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯತ್ ವತಿಯಿಂದ ಸನ್ಮಾನಿಸಿ, ಗೌರವಿಸಲಾಗುವುದು. ಪರೀಕ್ಷಾ ಫಲಿತಾಂಶದ ಹೆಚ್ಚಳದಲ್ಲಿ ನಿರ್ಲಕ್ಷ್ಯ ವಹಿಸುವ ಅಧಿಕಾರಿಗಳು ಮತ್ತು ಶಿಕ್ಷಕರಿಗೆ ನಿಯಮಾನುಸಾರ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆಯನ್ನೂ ನೀಡಿದರು. ಸಭೆಯಲ್ಲಿ ಶಾಲಾ ಶಿಕ್ಷಣ ಶಿಕ್ಷಣ ಇಲಾಖೆ ಉಪ ನಿರ್ದೇಶಕ ಮಂಜುನಾಥ್, ಡಯಟ್ ಪ್ರಾಂಶುಪಾಲ ಎಂ.ನಾಸಿರುದ್ದಿನ್, ಜಿಲ್ಲೆಯ ಆರು ತಾಲ್ಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಡಿ ವೈಪಿಸಿಗಳು, ಬಿಆರ್‌ಸಿ ಹಾಗೂ ವಿಷಯ ಪರಿವೀಕ್ಷಕರು ಮತ್ತು ಡಯಟ್‌ನ ಸಿಬ್ಬಂದಿಗಳು ಉಪಸ್ಥಿತರಿದ್ದರು.


ಉದಯವಾಹಿನಿ ಚಿತ್ರ

**ಜಿಲ್ಲಾ ಪಂಚಾಯಿತಿ ಸಿಇಒ ಸೋಮಶೇಖರ್ ಸೂಚನೆ**

### ಶಿಕ್ಷಣಾಧಿಕಾರಿಗಳಿಂದ ಮಾಹಿತಿ

**ಎಸ್‌ಎಸ್‌ಎಲ್‌ಸಿ ಪರೀಕ್ಷೆಗೆ ಇನ್ನು ಕೇವಲ 30 ದಿನಗಳು ಮಾತ್ರ ಬಾಕಿ ಉಳಿದಿದ್ದು, ಪರೀಕ್ಷಾ ಸಿದ್ಧತೆಗೆ ಅಮೂಲ್ಯವಾದ ಸಮಯವಾಗಿದ್ದು, ಶಿಕ್ಷಣ ಇಲಾಖೆ ಅಧಿಕಾರಿಗಳು, ಮುಖ್ಯ ಶಿಕ್ಷಕರು ಹಾಗೂ ಶಿಕ್ಷಕರು ಶ್ರಮವಹಿಸಿ, ವಿದ್ಯಾರ್ಥಿಗಳ ಕಲಿಕಾ ಪ್ರಗತಿಗೆ ಬಹಳ ಎಚ್ಚರಿಕೆಯಿಂದ ಕಲಿಕಾ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಬೇಕು. ಜಿಲ್ಲೆಗೆ ಉತ್ತಮ ಹಾಗೂ ಹೆಚ್ಚಿನ ಫಲಿತಾಂಶ ತರುವಲ್ಲಿ ತಮ್ಮಗಳ ಜವಾಬ್ದಾರಿ ಬಹಳವಿದೆ. ಆದ್ದರಿಂದ ಬಹಳ ಎಚ್ಚರಿಕೆಯಿಂದ ಕೆಲಸ ನಿರ್ವಹಿಸಿ ಎಂದು ಸೂಚಿಸಿದ ಅವರು, ಫಲಿತಾಂಶ ಹೆಚ್ಚಳಕ್ಕೆ ಜಿಲ್ಲೆಯ ಆರು ತಾಲ್ಲೂಕುಗಳಲ್ಲಿ ಸಿದ್ಧತೆ ಮಾಡಿಕೊಂಡ ಬಗ್ಗೆ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮಾಹಿತಿ ಪಡೆದುಕೊಂಡರು.**

# ವಸ್ತು ಸಂಗ್ರಹಾಲಯಕ್ಕೆ ಹಂಸಲೇಖ ಭೇಟಿ

• ಉದಯವಾಹಿನಿ, ಬಳ್ಳಾರಿ

ಖ್ಯಾತ ಸಂಗೀತ ನಿರ್ದೇಶಕ, ಚಿತ್ರ ಸಾಹಿತಿ ಹಂಸಲೇಖ ಬಳ್ಳಾರಿ ನಗರದ ಸಾಂಸ್ಕೃತಿಕ ಸಮುಚ್ಚಯದಲ್ಲಿರುವ ರಾಬರ್ಟ್ ಬ್ರೂಸ್ ಫೂಟ್ ಸಂಗನಕಲ್ಲು ಪ್ರಾಗೈತಿಹಾಸಿಕ ವಸ್ತು ಸಂಗ್ರಹಾಲಯಕ್ಕೆ ಭೇಟಿ ನೀಡಿ ಸುಮಾರು ಮೂರುವರೆ ಗಂಟೆಗಳ ಕಾಲ ವಸ್ತುಸಂಗ್ರಹಾಲಯವನ್ನು ವೀಕ್ಷಿಸಿದರು. ಪತ್ನಿ ಶ್ರೀಮತಿ ಲತಾ ಅವರೊಂದಿಗೆ ಆಗಮಿಸಿದ ಹಂಸಲೇಖ ಅವರನ್ನು ವಸ್ತು ಸಂಗ್ರಹಾಲಯದ ರೂವಾರಿ ಪ್ರೊ. ರವಿ ಕೋರಿಶೆಟ್ಟರ್ ಹಾಗೂ ಪದಾಧಿಕಾರಿ ಸಂತೋಷ್ ಮಾರ್ಟಿನ್ ಸ್ವಾಗತಿಸಿದರು. ಹಂಸಲೇಖ ಅವರಿಗೆ ಪ್ರೊ. ಕೋರಿಶೆಟ್ಟರ್ ವಸ್ತು ಸಂಗ್ರಹಾಲಯ ಆರಂಭವಾದ ಇತಿಹಾಸವನ್ನು ವಿವರಿಸಿ ನಂತರ ವ್ಯವಸ್ಥಿತವಾಗಿ ಜೋಡಿಸಿರುವ ದೇಶದ, ವಿದೇಶಗಳ ಪ್ರಾಗೈತಿಹಾಸಿಕ ನೆಲೆಗಳಿಂದ ಸಂಗ್ರಹಿಸಿದ ಪ್ರಾಗೈತಿಹಾಸಿಕ ವಸ್ತುಗಳ ಬಗ್ಗೆ ಮಾಹಿತಿ ನೀಡಿದರು.

ಇದರೊಂದಿಗೆ ಪ್ರೊ. ಕೋರಿಶೆಟ್ಟರ್ ಲಕ್ಷಾಂತರ ವರ್ಷಗಳ ಹಿಂದೆ ಜರುಗಿದ ಮತ್ತು ಇಂದಿಗೂ ಜರುಗುತ್ತಿರುವ ಮಾನವ ವಿಕಾಸದ ವಿವಿಧ ಹಂತಗಳು, ಪ್ರಾಗೈತಿಹಾಸಿಕ ಮಾನವನ ಖಂಡಾಂತರ ವಲಸೆ, ಆ ಸಂದರ್ಭದಲ್ಲಿ ಅವನು ತನ್ನ ಸುತ್ತಮುತ್ತಲಿನ ಪರಿಸರಕ್ಕೆ ಹೊಂದಿಕೊಂಡು ಬದುಕಿದ ರೀತಿಗಳನ್ನು ವೈಜ್ಞಾನಿಕವಾಗಿ ವಿವರಿಸಿದರು.

ಈ ಸಂದರ್ಭದಲ್ಲಿ ಪ್ರೊ. ಕೋರಿಶೆಟ್ಟರ್, ಇದು ಪ್ರಾಗೈತಿಹಾಸಿಕ ವಸ್ತು ಸಂಗ್ರಹಾಲಯವಾಗಿದ್ದು ಈ ಕ್ಷೇತ್ರದಲ್ಲಿ ಅಧ್ಯಯನಕ್ಕೆ ಸಾಕಷ್ಟು ಅವಕಾಶಗಳಿವೆ. ಜೊತೆಗೆ, ಪ್ರಾಗೈತಿಹಾಸಿಕ ಸಂಶೋಧನೆ ಮತ್ತು ಅಧ್ಯಯನ ಕ್ಷೇತ್ರ ನಿಂತ ನೀರಾಗಿರದೇ ಜ್ಞಾನದ ನೂತನ ಶಿಸ್ತುಗಳಿಗೆ ವ್ಯಾಪಿಸುತ್ತಾ ತನ್ನ ಕ್ಷೇತ್ರವನ್ನು ವಿಸ್ತರಿಸುತ್ತಿದೆ ಎಂದು ವಿವರಿಸಿದರು.

ಕಳೆದ ಐದು ವರ್ಷಗಳಿಂದ ಕಾರ್ಯಾಚರಣೆ ಮಾಡುತ್ತಿರುವ ಈ ವಿಶಿಷ್ಟ ಸಂಗ್ರಹಾಲಯ ದೇಶ ವಿದೇಶಗಳ ಸಂಶೋಧಕರನ್ನು, ಅಧ್ಯಯನಶೀಲರನ್ನು, ಮಾನವನ ವಿಕಾಸದ ಬಗ್ಗೆ ಕುತೂಹಲ ಇರಿಸಿಕೊಂಡ ಜನ ಸಾಮಾನ್ಯರನ್ನು, ವಿದ್ಯಾರ್ಥಿಗಳನ್ನು ಆಕರ್ಷಿಸುತ್ತಿದೆ. ಇಲ್ಲಿ ಈಗಾಗಲೇ ಹಲವಾರು ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಮಟ್ಟದ ಕಾರ್ಯಾಗಾರ, ಉಪನ್ಯಾಸ ಕಾರ್ಯಕ್ರಮಗಳನ್ನು ಜರುಗಿಸಲಾಗಿದ್ದು ದೇಶದ ಪ್ರಮುಖ ಶೈಕ್ಷಣಿಕ ಸಂಸ್ಥೆಗಳಾದ ಐಐಟಿಗಳು ನಮ್ಮೊಂದಿಗೆ ವಿವಿಧ ಯೋಜನೆಗಳಲ್ಲಿ ಸಹಭಾಗಿಯಾಗಲು ಉತ್ಸುಕತೆಯನ್ನು ತೋರಿವೆ ಎಂಬ ಸಂತಸ ವ್ಯಕ್ತಪಡಿಸಿದರು. ಈ ವಸ್ತು ಸಂಗ್ರಹಾಲಯದಲ್ಲಿ ಪ್ರಾಗೈತಿಹಾಸಿಕ ವಸ್ತು ವಿಷಯಗಳನ್ನು ವೈಜ್ಞಾನಿಕವಾಗಿ ಜೋಡಿಸಲಾಗಿದ್ದು ಇಲ್ಲಿನ ವಿಷಯಗಳನ್ನು ವಿವರಿಸಲು ತಾಂತ್ರಿಕವಾಗಿ ತರಬೇತಿ ಪಡೆದಿರುವ ಸಂಪನ್ಮೂಲ ವ್ಯಕ್ತಿ ಶ್ರೀಮತಿ ಗೌರಿ ಇದ್ದಾರೆ ಎಂದು ಹಂಸಲೇಖ ಅವರಿಗೆ ವಿವರಿಸಿದರು. ಎರಡು ಅಂತಸ್ತುಗಳ ಈ ವಸ್ತು ಸಂಗ್ರಹಾಲಯದ ಮೇಲಿನ ಭಾಗದಲ್ಲಿ ನವ ಶಿಲಾಯುಗ ಕಾಲದಲ್ಲಿ ಬಳ್ಳಾರಿ ಜಿಲ್ಲೆಯ ಸಂಗನಕಲ್ಲು ಗ್ರಾಮದ ಸುತ್ತಲಿನ ಕಲ್ಲು ಬೆಟ್ಟಗಳಲ್ಲಿ ಶಿಲಾ ಪರಿಕರಗಳನ್ನು ಉತ್ಪಾದಿಸುವ ಉದ್ಯಮ ವ್ಯವಸ್ಥಿತವಾಗಿ ನಡೆದಿತ್ತು ಎನ್ನುವುದರ ಬಗ್ಗೆ ಸಾಕಷ್ಟು ಪುರಾವೆಗಳು ಲಭಿಸಿವೆ. ಇಲ್ಲಿ ನಡೆದ ಉತ್ಖನನ ಕಾರ್ಯಗಳಲ್ಲಿ ಶಿಲಾಯುಗದ ಜೀವನ ಶೈಲಿ, ಮಾನವನ ನಿರಂತರ ವಿಕಾಸಗಳ ಬಗ್ಗೆ ಸಾಕಷ್ಟು ಹೊಳಹುಗಳು ದೊರೆತಿವೆ ಎಂದರು.

ವಸ್ತು ಸಂಗ್ರಹಾಲಯದ ಎಲ್ಲಾ ವಿಭಾಗಗಳನ್ನು ಆಸಕ್ತಿಯಿಂದ ವೀಕ್ಷಿಸಿದ ಹಂಸಲೇಖ, ಈ ವಸ್ತು ಸಂಗ್ರಹಾಲಯದ ವಿಶಿಷ್ಟತೆ ನನ್ನಲ್ಲಿ ಅಚ್ಚರಿ ಮೂಡಿಸಿದೆ. ಪ್ರಾಗೈತಿಹಾಸಿಕ ಕಾಲದ ವಿಷಯಗಳು ಇಷ್ಟೊಂದು ಆಸಕ್ತಿಕರವಾಗಿವೆ ಎಂದು ಪ್ರೊ. ಕೋರಿಶೆಟ್ಟರ್ ಅವರ ವೈಜ್ಞಾನಿಕ ವಿವರಣೆಗಳಿಂದ ಮನವರಿಕೆಯಾಗಿದೆ. ಇದು ನಿಜಕ್ಕೂ ನಮ್ಮ ಸಾಂಸ್ಕೃತಿಕ ಸಂಪತ್ತು. ಇದನ್ನು ಜತನದಿಂದ ಕಾಪಾಡಿಕೊಳ್ಳಬೇಕಿದೆ. ಪ್ರಾಗೈತಿಹಾಸಿಕ ಸಂಶೋಧನಾ ಕ್ಷೇತ್ರದಲ್ಲಿ ಹೊಸ ಸಂಶೋಧನೆಗಳಾಗಬೇಕಿದೆ. ಇಷ್ಟೊಂದು ವ್ಯವಸ್ಥಿತವಾದ ವಿಶೇಷ ವಸ್ತು ಸಂಗ್ರಹಾಲಯ ಬಳ್ಳಾರಿಯಂತಹ ಊರಲ್ಲಿರುವುದು ಹೆಮ್ಮೆಯ ವಿಷಯ ಎಂದರು.


ಉದಯವಾಹಿನಿ ಚಿತ್ರ

### ಶತ ಪ್ರಯತ್ನ ಮಾಡುತ್ತೇನೆ

**ಈ ವಸ್ತು ಸಂಗ್ರಹಾಲಯ ಹೆಚ್ಚು ಜನರನ್ನು ಆಕರ್ಷಿಸಬೇಕು. ಹೆಚ್ಚು ಜನ ಇತಿಹಾಸ ಪ್ರಿಯರು ಈ ವಸ್ತು ಸಂಗ್ರಹಾಲಯ ವೀಕ್ಷಿಸಿ ಪ್ರೇರಣೆ ಪಡೆದುಕೊಳ್ಳಬೇಕು. ವಸ್ತು ಸಂಗ್ರಹಾಲಯಕ್ಕೆ ಅಗತ್ಯವಿರುವ ಸೌಲಭ್ಯಗಳನ್ನು ಒದಗಿಸಿಕೊಡಲು ನಾನು ಶತ ಪ್ರಯತ್ನ ಮಾಡುತ್ತೇನೆ. ಈ ಪ್ರಾಗೈತಿಹಾಸಿಕ ವಸ್ತು ಸಂಗ್ರಹಾಲಯ ವೀಕ್ಷಿಸಿ ನಿಜಕ್ಕೂ ಸಂತೋಷವಾಗಿದೆ. ವಸ್ತು ಸಂಗ್ರಹಾಲಯದ ಅಭಿವೃದ್ಧಿಗೆ ನನ್ನ ಶಕ್ತಿ ಮೀರಿ ಶ್ರಮಿಸುತ್ತೇನೆ ಎಂದರು.**

## ಐಎನ್‌ಎಸ್ ಕದಂಬ ನೌಕಾನೆಲೆಯ ಸೂಕ್ಷ್ಮ ಮಾಹಿತಿ ಸೋರಿಕೆ ಮಾಡಿದ ಇಬ್ಬರು ಗುತ್ತಿಗೆ ನೌಕರರ ಬಂಧನ


# ಪ್ರಕರಣದಲ್ಲಿ ಇನ್ನಷ್ಟು ಜನರು ಶಾಮೀಲಾಗಿರುವ ಅನುಮಾನ

• ಉದಯವಾಹಿನಿ, ಕಾರವಾರ

ವಿದೇಶಿ ಗೂಢಚಾರರಿಗೆ ಸೂಕ್ಷ್ಮ ಚಿತ್ರಗಳು ಹಾಗೂ ಮಾಹಿತಿ ರವಾನಿಸಿದ ಆರೋಪದ ಮೇಲೆ ಕಾರವಾರದ ಐಎನ್‌ಎಸ್ ಕದಂಬ ನೌಕಾನೆಲೆಯ ಇಬ್ಬರು ಗುತ್ತಿಗೆ ನೌಕರರನ್ನು ರಾಷ್ಟ್ರೀಯ ತನಿಖಾ ಸಂಸ್ಥೆ (ಎನ್‌ಐಎ) ವಶಕ್ಕೆ ಪಡೆದಿದೆ. ಬಂಧಿತರನ್ನು ಅಂಕೋಲಾದ ಅಕ್ಷಯ್ ನಾಯ್ಡ್ ಮತ್ತು ಕಾರವಾರದ ಮುದಗಾ ಮೂಲದ ವೇತನ್ ತಾಂಡೇಲ್ ಎಂದು ಗುರುತಿಸಲಾಗಿದೆ. ಎನ್‌ಐಎ ತಂಡಗಳು ಎರಡೂ ಸ್ಥಳಗಳಲ್ಲಿ ಏಕಕಾಲದಲ್ಲಿ ದಾಳಿ ನಡೆಸಿ ಅವರನ್ನು ವಶಕ್ಕೆ ಪಡೆಯಲಾಗಿದೆ. ಮೂಲಗಳ ಪ್ರಕಾರ, ವಿದೇಶಿ ಗೂಢಚಾರರು ಶಂಕಿತರನ್ನು ಸಾಮಾಜಿಕ ಮಾಧ್ಯಮದಲ್ಲಿ ಸಂಪರ್ಕಿಸಿ, ಯುವತಿಯರಂತೆ ನಟಿಸಿ ಹಣದ ವಿನಿಮಯಕ್ಕಾಗಿ ನೌಕಾ ನೆಲೆಯ ಚಿತ್ರಗಳನ್ನು ಹಂಚಿಕೊಳ್ಳುವ ಮೂಲಕ ಬಲೆ ಬೀಸಿದ್ದಾರೆ.

ನೌಕಾ ನೆಲೆಯ ಚಿತ್ರಗಳನ್ನು ಪಾಕಿಸ್ತಾನಿ ಗುಪ್ತಚರ ಸಂಸ್ಥೆಗಳಿಗೆ ಕಳುಹಿಸಲಾಗಿದೆ ಎಂದು ಹೇಳಲಾದ 202 ರಿಂದ ಹಿಂದಿನ ತನಿಖೆಗೆ ಈ ಪ್ರಕರಣವನ್ನು ಲಿಂಕ್ ಮಾಡಲಾಗಿದೆ. ಆ ಸಮಯದಲ್ಲಿ, ಎನ್‌ಐಎಯ ಹೈದರಾಬಾದ್ ಘಟಕವು ಹಲವಾರು ನೌಕಾ ಅಧಿಕಾರಿಗಳು, ಸಿಬ್ಬಂದಿಯನ್ನು ಕಸ್ಟಡಿಗೆ ತೆಗೆದುಕೊಂಡಿತ್ತು. ಸೋಮವಾರ, ಆರು ಸದಸ್ಯರ ಎನ್‌ಐಎ ತಂಡವು ಹೆಚ್ಚಿನ ತನಿಖೆಗಾಗಿ ಇಬ್ಬರನ್ನು ಕಸ್ಟಡಿಗೆ ತೆಗೆದು ಕೊಳ್ಳುವ ಮೊದಲು ಕಾರವಾರ ನಗರ ಪೊಲೀಸ್ ಠಾಣೆಯಿಂದ ಹೆಚ್ಚಿನ ಮಾಹಿತಿ ಸಂಗ್ರಹಿಸಿದೆ. ಈ ಹಿಂದೆ ಕಾರವಾರದ ಚೆಂಡ್ಯಾದಲ್ಲಿರುವ ಮಕ್ಯುರಿ ಹಾಗೂ ಅಲ್ಪಾ ಮರೈನ್ ಕಂಪೆನಿಯಲ್ಲಿ ವೇತನ್ ಹಾಗೂ ಅಕ್ಷಯ್ ಗುತ್ತಿಗೆ ಆಧಾರದಲ್ಲಿ ಕೆಲಸ ಮಾಡುತ್ತಿದ್ದರು. ತೋಡೂರಿನ ಸುನೀಲ್ ಮಾತ್ರ ಹಿಂದೆ ಸೀಬರ್ಡ್ ಕ್ಯಾಂಟೀನ್‌ನಲ್ಲಿ ಗುತ್ತಿಗೆ ಆಧಾರದಲ್ಲಿ ಕೆಲಸ ಮಾಡಿ ಆಮೇಲೆ ಚಾಲಕ ವೃತ್ತಿ ಮಾಡುತ್ತಿದ್ದ. ಈ ಹಿಂದೆ ವಶಕ್ಕೆ ಪಡೆದವರನ್ನು ಇದೀಗ ಮತ್ತೆ ವಿಚಾರಣೆಗೆ ಒಳಪಡಿಸಿ, ಹೊಸ ಲಿಂಕ್‌ನ ಬಗ್ಗೆ ತನಿಖೆ ನಡೆಸಲು ಎನ್‌ಐಎ ಪೊಲೀಸರು ಮುಂದಾಗಿದ್ದಾರೆ ಎನ್ನಲಾಗಿದೆ. ನೌಕಾನೆಲೆ ಮಾಹಿತಿ ಸೋರಿಕೆ ಸಂಬಂಧಿಸಿ ಮಂಗಳವಾರ ನೌಕಾನೆಲೆ ಅಧಿಕಾರಿಗಳನ್ನು ಎನ್‌ಐಎ ಅಧಿಕಾರಿಗಳ ತಂಡ ಭೇಟಿಯಾಗಲಿದೆ. ಈ ಪ್ರಕರಣದಲ್ಲಿ ಇನ್ನಷ್ಟು ಜನರು ಶಾಮೀಲಾಗಿರುವ ಅನುಮಾನದ ಕಾರಣ ಮತ್ತಷ್ಟು ತನಿಖೆ ನಡೆಯಲಿದೆ. ಕಾರವಾರ ನೌಕಾನೆಲೆಯ ಮಾಹಿತಿ ಸೋರಿಕೆ ವಿಚಾರವಾಗಿ 2024ರ ಆಗಸ್ಟ್ ತಿಂಗಳಲ್ಲಿ ಮೂವರನ್ನು ವಿಚಾರಣೆ ನಡೆಸಿದ್ದ ಎನ್‌ಐಎ ನೋಟೀಸ್ ನೀಡಿ ಬಿಟ್ಟಿತ್ತು.

ಮುದುಗಾದ ವೇತನ್ ತಾಂಡೇಲ್, ತೋಡೂರಿನ ಸುನೀಲ್, ಹಳವಳ್ಳಿಯ ಅಕ್ಷಯ್ ನಾಯ್ಕನನ್ನು ವಿಚಾರಣೆ ನಡೆಸಿ ಬಿಡುಗಡೆ ಮಾಡಿತ್ತು. ಇದೀಗ ಮತ್ತೆ ಪ್ರಕರಣ ಸಂಬಂಧ ಮತ್ತೆ ತನಿಖೆ ನಡೆಸಲು ಬಂದಿದ್ದ ಎನ್‌ಐಎ ತಂಡ ಇಬ್ಬರನ್ನು ಬಂಧಿಸಿದೆ.


ಉದಯವಾಹಿನಿ ಚಿತ್ರ

### 2023ರಲ್ಲಿ ಫ್ರೆಂಡ್ ರಿಕ್ವೆಸ್ಟ್

**ಶಂಕಿತ ಆರೋಪಿಗಳನ್ನು ಹನಿ ಟ್ರ್ಯಾಪ್ ಮಾಡಿದ್ದ ಪಾಕಿಸ್ತಾನಿ ಏಜೆಂಟ್ ಮಾಹಿತಿ ಕಲೆ ಹಾಕಿದ್ದಳು ಎನ್ನಲಾಗಿತ್ತು. ಫೇಸ್‌ಬುಕ್ ಮೂಲಕ ತಾನು ಮರೈನ್ ಅಧಿಕಾರಿ ಎಂದು ಪರಿಚಯಿಸಿಕೊಂಡಿದ್ದ ಪಾಕಿಸ್ತಾನಿ ಏಜೆಂಟ್, ಶಂಕಿತ ಆರೋಪಿಗಳಾದ ಮುದುಗಾದ ವೇತನ್ ತಾಂಡೇಲ್, ತೋಡೂರಿನ ಸುನೀಲ್ ಹಾಗೂ ಹಳವಳ್ಳಿಯ ಅಕ್ಷಯ್ ನಾಯ್ಡ್ ಬಗ್ಗೆ ಸಂಪೂರ್ಣ ಮಾಹಿತಿ ಕಲೆಹಾಕಿದ್ದಳು. ಇದಾದ ಬಳಿಕವೇ 2023ರಲ್ಲಿ ಅವರಿಗೆ ಫ್ರೆಂಡ್ ರಿಕ್ವೆಸ್ಟ್ ಕಳುಹಿಸಿದ್ದಳು ಎಂದು ತಿಳಿದು ಬಂದಿದೆ.**

### ನೋಟಿಸ್ ಜಾರಿ

**ವೇತನ್, ಅಕ್ಷಯ್ ಅವರ ಇತ್ತೀಚಿನ ಬಂಧನಗಳು ನಡೆಯುತ್ತಿರುವ ತನಿಖೆಯ ಮುಂದು ವರೆದ ಭಾಗವಾಗಿದೆ ಎಂದು ಮೂಲಗಳು ತಿಳಿಸಿವೆ. 2024ರ ಆಗಸ್ಟ್ 28ರಂದು ಎನ್‌ಐಎ ಇತ್ತೀಚೆಗೆ ಬಂಧಿತರಾದ ಇಬ್ಬರು ಸೇರಿದಂತೆ ಮೂವರು ಶಂಕಿತ ರನ್ನು ಪ್ರಶ್ನಿಸಿತ್ತು ಮತ್ತು ಅವರಿಗೆ ನೋಟಿಸ್ ಜಾರಿ ಮಾಡಿತ್ತು.**

# ಹಾಸನ ಜೆಡಿಎಸ್ ಭದ್ರಕೋಟೆ ಎಂಬುದನ್ನು ಮತ್ತೊಮ್ಮೆ ಸಾಬೀತು


• ಉದಯವಾಹಿನಿ, ಅರಸೀಕೆರೆ

ಮುಂಬರುವ ತಾಲ್ಲೂಕು ಹಾಗೂ ಜಿಲ್ಲಾ ಪಂಚಾಯ್ತಿ ಸೇರಿ ಯಾವುದೇ ಸ್ಥಳೀಯ ಸಂಸ್ಥೆ ಚುನಾವಣೆಯಲ್ಲಿ ನಾವು ಲಘುವಾಗಿ ಪರಿಗಣಿಸದೆ ಎಲ್ಲೆಡೆ ಸಮರ್ಥ ಅಭ್ಯರ್ಥಿ ಗಳನ್ನು ಕಣಕ್ಕಿಳಿಸುವುದರ ಜೊತೆಗೆ ಹಾಸನ ಜೆಡಿಎಸ್‌ನ ಭದ್ರಕೋಟೆ ಎಂಬುದನ್ನು ಮತ್ತೊಮ್ಮೆ ಸಾಬೀತು ಮಾಡುತ್ತೇವೆ ಎಂದು ಮಾಜಿ ಸಚಿವ ಹೊಳೆನರಸೀಪುರ ಶಾಸಕ ಹೆಚ್.ಡಿ.ರೇವಣ್ಣ ಹೇಳಿದರು. ಸ್ಥಳೀಯ ಜೆಡಿಎಸ್ ಮುಖಂಡ ಗಂಗಾಧರ್ ಅವರ ಕುಟುಂಬದ ಮದುವೆಗೆಂದು ಆಗಮಿಸಿದ್ದ ವೇಳೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜಿಲ್ಲೆಯ ಅಭಿವೃದ್ಧಿಗೆ ಜೆಡಿಎಸ್ ಪಕ್ಷದ ಕೊಡುಗೆ ಏನೆಂ ಬುದು ಜನರಿಗೆ ಗೊತ್ತಿದೆ. ಅಲ್ಲದೆ ಮಾಜಿ ಪ್ರಧಾನಿ ದೇವೇ ಗೌಡರು, ಮಾಜಿ ಸಿಎಂ ಕುಮಾರಸ್ವಾಮಿ ಅವರ ಅವಧಿಯಲ್ಲಿ ಕೈಗೊಂಡಿರುವ ಶಾಶ್ವತ ಕೆಲಸ ಕಾರ್ಯಗಳು ಜಿಲ್ಲಾದಂತ ಕಾಣುತ್ತಿವೆ ಎಂದರು. ಇಷ್ಟಿದ್ದರೂ ಜೆಡಿಎಸ್ ಮುಗಿಯಿತು ಎನ್ನುವವರಿಗೆ ಸ್ಥಳೀಯ ನಮ್ಮ ಪಕ್ಷದ ಮುಖಂಡರು, ಕಾರ್ಯಕರ್ತರು ಕೃತಿಯಲ್ಲಿ ಮಾಡಿ ತೋರಿಸಲಿದ್ದಾರೆ ಎಂದರು. ದೇವೇಗೌಡರು, ಕುಮಾರಸ್ವಾಮಿ ಅವರ ನೇತೃತ್ವದಲ್ಲಿ ಜಿಲ್ಲೆಯಲ್ಲಿ ಮೊದಲು ತಾಲ್ಲೂಕು ವಾರು ಸಮ್ಮೇಳನ ನಡೆಸಲು ರೂಪುರೇಷ ಸಿದ್ದ ಮಾಡಿಕೊಳ್ಳಲಾಗುತ್ತಿದೆ. ಕಡೆಯಲ್ಲಿ ಜಿಲ್ಲಾ ಮಟ್ಟದಲ್ಲೂ ಬೃಹತ್ ಸಮ್ಮೇಳನ ನಡೆಸಲು ಚಿಂತನೆ ಮಾಡಲಾಗಿದೆ ಎಂದು ತಿಳಿಸಿದರು. ಅಧಿಕಾರ ಶಾಶ್ವತ ಅಲ್ಲ, ಅಧಿಕಾರ ಸಿಕ್ಕಾಗ ಮಾಡಿದ ಕೆಲಸಗಳೇ ಶಾಶ್ವತ ಎಂದ ಅವರು, ಅದೇ ರೀತಿ ಅಧಿಕಾರಿಗಳೂ ಸಹ ನಡೆದುಕೊಳ್ಳಬೇಕು.

ನಮ್ಮ ಪಕ್ಷದ ಮುಖಂಡರು, ಕಾರ್ಯಕರ್ತರಿಗೆ ಕಿರುಕುಳ ನೀಡುವುದಾಗಲೀ, ದಬ್ಬಾಳಿಕೆ ಮಾಡುವುದಾಗಲಿ ಮಾಡಿದರೆ ಯಾವುದೇ ಕಾರಣಕ್ಕೂ ಸಹಿಸಲ್ಲ ಎಂದು ಎಚ್ಚರಿಕೆ ನೀಡಿದರು. ಕೇಂದ್ರ ಬಜೆಟ್‌ನಲ್ಲಿ ಹಾಸನ ನಗರದ ಮೇಲ್ಸೇತುವೆ ಸೇರಿದಂತೆ ಜಿಲ್ಲೆಗೆ ಯಾವುದೇ ಹೊಸ ಯೋಜನೆ ಘೋಷಣೆ, ಅನುದಾನ ಬಿಡುಗಡೆ ಮಾಡದೇ ಇರುವ ಬಗ್ಗೆ ಕೇಂದ್ರ ಪ್ರಶ್ನೆಗೆ ಪ್ರೈ ಓವರ್ ಸೇರಿದಂತೆ ಜಿಲ್ಲೆಗೆ ಕೇಂದ್ರದಿಂದ ಏನೆಲ್ಲಾ ಕೆಲಸ ಕಾರ್ಯ ಆಗಬೇಕು ಎಂಬುದರ ಬಗ್ಗೆ ಈಗಾಗಲೇ ದೇವೇಗೌಡರು, ಕುಮಾರಸ್ವಾಮಿ ಅವರ ಗಮನಕ್ಕೆ ತಂದಿದ್ದು, ಅವರ ಶಕ್ತಿ ಬಳಸಿಕೊಂಡು ಜಿಲ್ಲೆಯನ್ನು ಮತ್ತಷ್ಟು ಅಭಿವೃದ್ಧಿ ಪಡಿಸುತ್ತೇವೆ ಎಂದರು.

ಶೀಘ್ರ ಮಂಡನೆಯಾಗುವ ರಾಜ್ಯ ಬಜೆಟ್ ಬಗ್ಗೆ ಪ್ರತಿಕ್ರಿಯಿಸಿದ ರೇವಣ್ಣ, ಕಾದು ನೋಡಿ ನಂತರ ಮಾತನಾಡುವೆ. ಜಿಲ್ಲೆಗೆ ಅನ್ಯಾಯ ಆದರೆ ಸಹಿಸುವುದಿಲ್ಲ. ಅಭಿವೃದ್ಧಿ ವಿಷಯದಲ್ಲಿ ರಾಜಕಾರಣ ಮಾಡುವುದಕ್ಕೆ ಆಸ್ಪದ ನೀಡಲ್ಲ. ಅನ್ಯಾಯ ಆದರೆ ಹೋರಾಟ ಮಾಡುತ್ತೇವೆ ಎಂದರು.

ಈ ವೇಳೆ ಜೆಡಿಎಸ್ ಮುಖಂಡರಾದ ಲಾಳನಕೆರೆ ಯೋಗೇಶ್, ಕುಡುಕುಂದಿ ಕುಮಾರ್, ರಾಜೇಶ್ ಧರ್ಮಶೇಖರ್, ನಗರಸಭೆ ಸದಸ್ಯರಾದ ಸುಜಾತ ರಮೇಶ್ ಇನ್ನಿತರರಿದ್ದರು.



# ರನ್‌ವೇನಲ್ಲಿ ಪಲ್ಟಿಯಾದ ಡೆಲ್ಟಾ ಜೆಟ್



## ಟೊರೊಂಟೋದಲ್ಲಿ ವಿಮಾನ ಅಪಘಾತ

**ಟೊರೊಂಟೋ:** ಟೊರೊಂಟೋದ ಪಿಯರ್ಸನ್ ವಿಮಾನ ನಿಲ್ದಾಣದಲ್ಲಿ ಡೆಲ್ಟಾ ವಿಮಾನ ಅಪ ಘಾತವಾಗಿದೆ. ವಿಮಾನವು ತಲೆಕೆಳಗಾಗಿ ಬಿದ್ದು ಹಿಮದಿಂದ ಆವೃತವಾದ ರನ್‌ವೇಯಲ್ಲಿ ಅಪಾಯಕಾರಿ ಲ್ಯಾಂಡಿಂಗ್ ಮಾಡಿದೆ. ಈ ವಿಮಾನದಲ್ಲಿ 80 ಪ್ರಯಾಣಿಕರಿದ್ದು, 15 ಮಂದಿ ಗಾಯಗೊಂಡಿದ್ದಾರೆ.

ಒಂದು ಮಗುವೂ ಸೇರಿದಂತೆ ಮೂವರು ಗಂಭೀರವಾಗಿ ಗಾಯಗೊಂಡಿದ್ದಾರೆ.

**ಅಪಘಾತಕ್ಕೆ ಕಾರಣ ತಿಳಿದುಬಂದಿಲ್ಲ**

**ಟೊರೊಂಟೋದ ಪಿಯರ್ಸನ್ ವಿಮಾನ ನಿಲ್ದಾಣದಲ್ಲಿ ಅಚ್ಚರಿ ರೀತಿಯಲ್ಲಿ ವಿಮಾನ ರನ್ ವೇಯಲ್ಲಿ ಪಲ್ಟಿಯಾಗಿದೆ. ಈ ವಿಮಾನ ಅಪಘಾತದಲ್ಲಿ ಅದೃಷ್ಟವಶಾತ್ 80 ಪ್ರಯಾಣಿಕರೂ ಸೇಫ್ ಆಗಿದ್ದು, ಮೂವರಿಗೆ ಮಾತ್ರ ಗಂಭೀರ ಗಾಯವಾಗಿದೆ. ಹಿಮದಿಂದ ಆವೃತವಾದ ರನ್ ವೇಯಲ್ಲಿ ಬಿದ್ದಿರುವ ವಿಮಾನದ ದೃಶ್ಯ ಗಾಬರಿ ಹುಟ್ಟಿಸುವಂತಿದೆ. ಅದೃಷ್ಟವಶಾತ್ ಯಾರ ಜೀವಕ್ಕೂ ಹಾನಿಯಾಗಿಲ್ಲ, ತಕ್ಷಣ ಎಲ್ಲಾ ಪ್ರಯಾಣಿಕರನ್ನು ರಕ್ಷಿಸಲಾಗಿದೆ, ವಿಮಾನ ಅಪಘಾತಕ್ಕೆ ಕಾರಣ ತಿಳಿದುಬಂದಿಲ್ಲ.**

ಅಚ್ಚರಿ ರೀತಿಯಲ್ಲಿ ವಿಮಾನದಲ್ಲಿದ್ದ ಎಲ್ಲಾ ಪ್ರಯಾಣಿಕರು, ಸಿಬ್ಬಂದಿ ಬದುಕುಳಿದಿದ್ದಾರೆ. ಸ್ಥಳೀಯ ಕಾಲಮಾನದ ಪ್ರಕಾರ ಈ ಘಟನೆ ಸೋಮವಾರ ಮಧ್ಯಾಹ್ನ ನಡೆದಿದೆ. ಈ ವಿಮಾನವು ಮಿನ್ನಿಯಾಪೊಲಿಸ್‌ನಿಂದ ಪಿಯರ್ಸನ್ ನಿಲ್ದಾಣಕ್ಕೆ ಬಂದಿದ್ದಾಗ ಅಪಘಾತಕ್ಕೀಡಾಗಿದೆ. ಒಂಟಾರಿಯೊದ ವೈಮಾನಿಕ ಆಂಬ್ಯುಲೆನ್ಸ್ ಪೂರೈಕೆದಾರ ಸಂಸ್ಥೆ, ಆರೆಂಜ್ ಏರ್ ಆಂಬ್ಯುಲೆನ್ಸ್ ಪ್ರಕಾರ, ಮೂವರು ರೋಗಿಗಳನ್ನು ಟೊರೊಂಟೊ ಆಸ್ಪತ್ರೆಗಳಿಗೆ ತುರ್ತು ಪರಿಸ್ಥಿತಿಯಲ್ಲಿ ಸಾಗಿಸಲಾಗಿದೆ. ಮಗುವೊಂದನ್ನು ಸಿಕ್ ಚಿಲ್ಡ್ರನ್ ಆಸ್ಪತ್ರೆಗೆ ಕರೆದೊಯ್ಯಲಾಗಿದೆ. 60ರ ಹರೆಯದ ವ್ಯಕ್ತಿ ಮತ್ತು 40ರ ಹರೆಯದ ಮಹಿಳೆಯನ್ನು ನಗರದ ಇತರ ವೈದ್ಯಕೀಯ ಸೌಲಭ್ಯಗಳಿಗೆ ಸ್ಥಳಾಂತರಿಸಲಾಗಿದೆ ಎಂದಿದ್ದಾರೆ.

**80 ಪ್ರಯಾಣಿಕರೂ ಸೇಫ್**

ವಿಮಾನ ಅಪಘಾತದಿಂದ ಬದುಕುಳಿದವ ರೊಬ್ಬರು ಅಪಘಾತವಾದ ವಿಮಾನದ ದೃಶ್ಯ ಸೆರೆಹಿಡಿದಿದ್ದು, ವಿಮಾನ ಪಲ್ಟಿಯಾದ ನಂತರ ಮಹಿಳಾ ಪ್ರಯಾಣಿಕರೊಬ್ಬರು ತಮ್ಮ ಆಸನದಲ್ಲಿ ತಲೆಕೆಳಗಾಗಿ ನೇತಾಡುತ್ತಿರುವುದು ಕಂಡುಬಂದಿದೆ. ನನ್ನ ವಿಮಾನ ಪತನ ಆಗಿದೆ, ನಾನು ತಲೆಕೆಳಗಾಗಿದ್ದೇನೆ, ಎಂದು ಅವರು ರೆಕಾರ್ಡಿಂಗ್ ವೇಳೆ ಕಿರುಚಿದ್ದಾರೆ. ಭಯಭೀತರಾದ ಪ್ರಯಾಣಿಕರು ವಿಮಾನದಿಂದ ಹೊರಬರಲು ಪ್ರಯತ್ನಿಸುತ್ತಿರುವುದು ಮತ್ತು ಸುರಕ್ಷಿತ ಸ್ಥಳಕ್ಕೆ ತೆರಳುತ್ತಿರುವುದು ಕೂಡಾ ವಿಡಿಯೋದಲ್ಲಿ ರೆಕಾರ್ಡ್ ಆಗಿದೆ. ಅಬ್ಬಾ ಈಗಷ್ಟೇ ನನ್ನ ವಿಮಾನ ಅಪಘಾತಕ್ಕೀಡಾಗಿದೆ ಓ ಮೈಗಾಡ್ ಎಂದು ಪ್ರಯಾಣಿಕರು ಚೀರಿದ್ದಾರೆ. ವಿಮಾನಯಾನ ಅಧಿಕಾರಿಗಳು ನೀಡಿದ ಮಾಹಿತಿ ಪ್ರಕಾರ, ಪಿಯರ್ಸನ್ ವಿಮಾನ ನಿಲ್ದಾಣದ ರನ್ ವೇಗಳು, ಸ್ವಲ್ಪ ಸಮಯದವರೆಗೆ ಮುಚ್ಚಿ, ನಂತರ ಪುನಃ ಕಾರ್ಯಾರಂಭ ಮಾಡಿದವು. ಸ್ಥಳೀಯ ಸಮಯ ಸುಮಾರು 3 ಗಂಟೆ ವೇಳೆಗೆ ವಿಮಾನದಲ್ಲಿದ್ದ ಎಲ್ಲಾ ಪ್ರಯಾಣಿಕರು ಮತ್ತು ಸಿಬ್ಬಂದಿಯನ್ನು ಅವರ ಸ್ಥಳಕ್ಕೆ ತಲುಪಿಸಲಾಗಿದೆ ಎಂದು Xಮೂಲಕ ವಿಮಾನ ನಿಲ್ದಾಣ ದೃಢಪಡಿಸಿದೆ. ಈ ವಿಮಾನವು ಮಿನ್ನಿಪೊಲಿಸ್ ನಿಂದ ಹೊರಡಿತ್ತು. ಬಹುತೇಕ 80 ಪ್ರಯಾಣಿಕರಲ್ಲಿ ಮೂವರನ್ನು ಹೊರತುಪಡಿಸಿ ಬಹುತೇಕ ಜನ ಸೇಫ್ ಆಗಿದ್ದಾರೆ. ಸೋಮವಾರ ಆಗಿದ್ದರಿಂದ ಹೆಚ್ಚಿನ ವಿಮಾನ ಹಾಗೂ ಪ್ರಯಾಣಿಕರು ಈ ವಿಮಾನ ನಿಲ್ದಾಣಕ್ಕೆ ಬರುವುದಿತ್ತು. ವಾರಾಂತ್ಯದಲ್ಲಿ 22 ಸೆಂಟಿ ಮೀಟರ್ ಹಿಮಪಾತ ಆಗಿತ್ತು. ಸೋಮ ವಾರ ಸುಮಾರು 1,000 ವಿಮಾನಗಳಲ್ಲಿ 130,000 ಪ್ರಯಾಣಿಕರು ಈ ನಿಲ್ದಾಣಕ್ಕೆ ಬರುವುದಿತ್ತು. ವಿಮಾನ ತಲೆಕೆಳಗಾಗಿ ಲ್ಯಾಂಡಿಂಗ್ ಆದಾಗ ರನ್ ವೇ ಸಂಪೂರ್ಣ ಹಿಮದಿಂದ ಮುಚ್ಚಿತ್ತು. ತಕ್ಷಣವೇ ತುರ್ತು ವಾಹನಗಳು ಸುತ್ತುವರೆದಿವೆ, ಹಿಂದೆ ಏರ್ ಕೆನಡಾ ಹ್ಯಾಂಗರ್ ಕೂಡಾ ಕಾಣುತ್ತಿತ್ತು. ಡೆಲ್ಟಾ ಏರ್ ಲೈನ್ಸ್ ಸೋಮವಾರ ಮಧ್ಯಾಹ್ನ ವಿಮಾನ ಅಪಘಾತದ ಸುದ್ದಿಯನ್ನು ದೃಢಪಡಿಸಿದ್ದು, ಎಂಡೀವರ್ ಏರ್ ನಿರ್ವಹಿಸುತ್ತಿದ್ದ ಫ್ಲೈಟ್ 4819 ಎಂದು ಖಚಿತಪಡಿಸಿದೆ. ಪ್ರಯಾಣಿಕರ ಸುರಕ್ಷತೆಗೆ ನಮ್ಮ ಪ್ರಾಮುಖ್ಯತೆ ಎಂದು ಹೇಳಿದೆ.

ಸಾರಿಗೆ ಸಚಿವೆ ಅನಿತಾ ಆನಂದ್ Xನಲ್ಲಿ ಇದೊಂದು ಗಂಭೀರ ಘಟನೆ ಎಂದು ಹೇಳಿದ್ದಾರೆ. ಟೊರೊಂಟೊ ಮೇಯರ್ ಒಲಿವಿಯಾ ಚೌ Xನಲ್ಲಿ ಪ್ರಯಾಣಿಕರು ಮತ್ತು ಸಿಬ್ಬಂದಿಯ ಸುರಕ್ಷತೆ ಬಗ್ಗೆ ಸಮಾಧಾನವಾಗಿದ್ದಾರೆ, ತುರ್ತು ಸ್ಪಂದನೆ ಮತ್ತು ವಿಮಾನ ನಿಲ್ದಾಣದ ಸಿಬ್ಬಂದಿಯ ತ್ವರಿತ ಪ್ರತಿಕ್ರಿಯೆಯನ್ನು ಶ್ಲಾಘಿಸಿದ್ದಾರೆ. ಈ ವಿಮಾನ ಅಪಘಾತಕ್ಕೆ ಕಾರಣ ಏನು ಎಂಬುದು ಇನ್ನೂ ತಿಳಿದುಬಂದಿಲ್ಲ. ತನಿಖೆ ಮುಂದುವರೆದಿದೆ.

- ಹಿಮದಿಂದ ಆವೃತವಾದ ರನ್‌ವೇಯಲ್ಲಿ ಅಪಾಯಕಾರಿ ಲ್ಯಾಂಡಿಂಗ್ ಮಾಡಿದೆ.
- ವಿಮಾನ ಅಪಘಾತದಿಂದ ಬದುಕುಳಿದವರೊಬ್ಬರು ಅಪಘಾತವಾದ ವಿಮಾನದ ದೃಶ್ಯ ಸೆರೆಹಿಡಿದಿದ್ದಾರೆ
- ಡೆಲ್ಟಾ ಏರ್ ಲೈನ್ಸ್ ವಿಮಾನ ಅಪಘಾತದ ಸುದ್ದಿಯನ್ನು ದೃಢಪಡಿಸಿದ್ದು, ಎಂಡೀವರ್ ಏರ್ ನಿರ್ವಹಿಸುತ್ತಿದ್ದ ಫ್ಲೈಟ್ 4819 ಎಂದು ಖಚಿತ ಪಡಿಸಿದೆ.


## ಮಿನಿ ನ್ಯೂಸ್

### ಗ್ಯಾಸ್ ಸ್ಟವ್‌ನಲ್ಲಿ ಬೀಡಿ ಹಚ್ಚಲು ಹೋಗಿ ಪ್ರಾಣ ಕಳೆದುಕೊಂಡ ವೃದ್ಧ

**ಭೋಪಾಲ್:** ಗ್ಯಾಸ್‌ಸ್ಟವ್‌ನಿಂದ ಬೀಡಿಗೆ ಬೆಂಕಿ ಹಚ್ಚಲು ಹೋಗಿದ್ದ ವ್ಯಕ್ತಿ ಬೆಂಕಿಯಲ್ಲಿ ಜೀವಂತ ದಹಿಸಿ ಹೋಗಿರುವ ಘಟನೆ ಭೋಪಾಲ್‌ನಲ್ಲಿ ನಡೆದಿದೆ. ರಾತ್ರಿ ವೇಳೆ ಬೀಡಿ ಸೇದುವ ಉದ್ದೇಶದಿಂದ ಬೀಡಿಗೆ ಬೆಂಕಿ ಹಚ್ಚಲು ವೃದ್ಧರೊಬ್ಬರು ಗ್ಯಾಸ್ ಸ್ಟವ್ ಆನ್ ಮಾಡಿ ಬೀಡಿಗೆ ಬೆಂಕಿ ಹಚ್ಚಲು ಹೋಗಿ ಪ್ರಾಣ ಕಳೆದುಕೊಂಡಿದ್ದಾರೆ. ಇನ್ನೊಂದು ಕೋಣೆಯಲ್ಲಿ ಮಲಗಿದ್ದ ಅವರ ಇಬ್ಬರು ಗಂಡು ಮಕ್ಕಳು ಸ್ಫೋಟದ ಶಬ್ದ ಕೇಳಿ ಓಡಿ ಬಂದರು, ಅವರು ಕುಟುಂಬದ ಉಳಿದವರನ್ನು ಕರೆದು ಬೆಂಕಿ ನಂದಿಸಿ ಆಸ್ಪತ್ರೆಗೆ ಕರೆದೊಯ್ದರು, ಆದರೆ ಸುಟ್ಟಗಾಯಗಳ ಪ್ರಮಾಣ ಹೆಚ್ಚಾದ ಕಾರಣ ಅವರು ಸಾವನ್ನಪ್ಪಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

# 6 ವರ್ಷಗಳ ಬಳಿಕ ಕ್ರಿಶ್ಚಿಯನ್ ಮೈಕೆಲ್‌ಗೆ ಜಾಮೀನು ಮಂಜೂರು

**ಹೊಸದಿಲ್ಲಿ:** ಅಗಸ್ಟಾ ವೆಸ್ಟ್‌ಲ್ಯಾಂಡ್ ವಿವಿಐಪಿ ಹೆಲಿಕಾಪ್ಟರ್ ಹಗರಣದ ಪ್ರಮುಖ ಆರೋಪಿ ಕ್ರಿಶ್ಚಿಯನ್ ಮೈಕೆಲ್‌ಗೆ ಸುಪ್ರೀಂಕೋರ್ಟ್ ಕೊನೆಗೂ ಜಾಮೀನು ಮಂಜೂರು ಮಾಡಿದೆ. ಸಿಬಿಐ ಆರೋಪ ಪಟ್ಟಿ ದಾಖಲಿಸಿ ವಿಚಾರಣೆ ಆರಂಭಿಸಿದ ಆರು ವರ್ಷಗಳ ಬಳಿಕ ಕ್ರಿಶ್ಚಿಯನ್ ಮೈಕೆಲ್‌ಗೆ ಜಾಮೀನು ದೊರೆತಿದೆ. ಜಾಮೀನು ಮಂಜೂರು ಮಾಡುವಂತೆ ಕೋರಿ ಕ್ರಿಶ್ಚಿಯನ್ ಮೈಕೆಲ್ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ಸುಪ್ರೀಂಕೋರ್ಟ್, ಆರೋಪಿಗೆ ಜಾಮೀನು ಮಂಜೂರು ಮಾಡಬಹುದು ಎಂದು ಹೇಳಿತು. ಜೀವನ ಮತ್ತು ಸ್ವಾತಂತ್ರ್ಯದ ಹಕ್ಕನ್ನು ಉಲ್ಲೇಖಿಸಿ, ಜೈಲಿನಿಂದ ತಕ್ಷಣ ಬಿಡುಗಡೆಗೆ ಕೋರಿ ಸುಪ್ರೀಂಕೋರ್ಟ್‌ಗೆ ಕ್ರಿಶ್ಚಿಯನ್ ಮೈಕೆಲ್ ಅರ್ಜಿ ಸಲ್ಲಿಸಿದ್ದರು. ಕಳೆದ ಆರು ವರ್ಷಗಳಿಂದ ನಾನು ಜೈಲು ಶಿಕ್ಷೆ ಅನುಭವಿಸುತ್ತಿದ್ದು, ಒಂದು ವೇಳೆ ನಾನು ಹಗರಣದಲ್ಲಿ ತಪ್ಪಿತಸ್ಥ ಎಂದು ಸಾಬೀತಾದರೆ ನನಗೆ ನೀಡುವ ಜೈಲುಶಿಕ್ಷೆಯೇ ಗರಿಷ್ಠ ಐದು ವರ್ಷಗಳದ್ದಾಗಿರಲಿದೆ. ಆದರೆ ಹಗರಣದ ತನಿಖೆ ಇನ್ನೂ ಮುಗಿದಿಲ್ಲ ಮತ್ತು ವಿಚಾರಣೆಯೂ ಆರಂಭವಾಗಿಲ್ಲ. ಹಾಗಾಗಿ ಮುಂದಿನ ನ್ಯಾಯಾಂಗ ಬಂಧನ ಅಕ್ರಮ ಎಂದು ಕ್ರಿಶ್ಚಿಯನ್ ಮೈಕೆಲ್ ಅರ್ಜಿಯಲ್ಲಿ ವಾದಿಸಿದ್ದರು.



**ಯಾರು ಕ್ರಿಶ್ಚಿಯನ್ ಮೈಕೆಲ್:** ಭಾರತೀಯ ರಕ್ಷಣಾ ವಲಯದಲ್ಲಿ ಸಕ್ರಿಯರಾಗಿದ್ದ ಬ್ರಿಟಿಷ್ ಉದ್ಯಮಿ ಕ್ರಿಶ್ಚಿಯನ್ ಮೈಕೆಲ್ ಅವರ ಹೆಸರು, ಅಗಸ್ಟಾ ವೆಸ್ಟ್‌ಲ್ಯಾಂಡ್ ವಿವಿಐಪಿ ಹೆಲಿಕಾಪ್ಟರ್ ಹಗರಣದಲ್ಲಿ ಕೇಳಿಬಂದಿತ್ತು. ಗೈಡೋ ಹಾಸ್ಕೆ, ಕಾರ್ಲೊ ಗೆರೋಸಾ ಜೊತೆಗೆ ಮೈಕೆಲ್ ಅವರು, ಅಗಸ್ಟಾ ವೆಸ್ಟ್‌ಲ್ಯಾಂಡ್ ಹೆಲಿಕಾಪ್ಟರ್‌ಗಳ ಒಪ್ಪಂದವನ್ನು ಪಡೆಯಲು ಭಾರತದ ಪ್ರಭಾವಿ ವ್ಯಕ್ತಿಗಳಿಗೆ ಲಂಚ ನೀಡಿದ ಆರೋಪ ಹೊತ್ತಿದ್ದಾರೆ.

ಹೆಲಿಕಾಪ್ಟರ್ ಒಪ್ಪಂದಕ್ಕೆ ಅಗಸ್ಟಾ ವೆಸ್ಟ್‌ಲ್ಯಾಂಡ್‌ನಿಂದ ಕ್ರಿಶ್ಚಿಯನ್ ಮೈಕೆಲ್ 42 ಮಿಲಿಯನ್ ರೂಪಾಯಿ ಕಿಕ್‌ಬ್ಯಾಕ್ ಪಡೆದಿದ್ದಾರೆ ಎಂದು ಜೂನ್ 2016ರಲ್ಲಿ ಜಾರಿ ನಿರ್ದೇಶನಾಲಯ ಆರೋಪಿಸಿತ್ತು. ಈ ಪಾವತಿಗಳನ್ನು ಕಾನೂನುಬದ್ಧ ವಹಿವಾಟುಗಳಂತೆ ಮರೆಮಾಚಲಾಗಿತ್ತು. ಫೆಬ್ರವರಿ 2017ರಲ್ಲಿ ದುಬೈನಲ್ಲಿ ಕ್ರಿಶ್ಚಿಯನ್ ಮೈಕೆಲ್‌ರನ್ನು ಬಂಧಿಸಲಾಯಿತು. ಡಿಸೆಂಬರ್ 2018ರಲ್ಲಿ ಭಾರತಕ್ಕೆ ಹಸ್ತಾಂತರಗೊಂಡ ಕ್ರಿಶ್ಚಿಯನ್ ಮೈಕೆಲ್ ಅಂದಿನಿಂದ ಜೈಲುವಾಸ ಅನುಭವಿಸುತ್ತಿದ್ದಾರೆ.

ಮುಂದೆ, 2013ರ ಆರಂಭದಲ್ಲಿ ಒಪ್ಪಂದವನ್ನು ಖಚಿತಪಡಿಸಿಕೊಳ್ಳಲು ಮಧ್ಯವರ್ತಿಗಳು ಮತ್ತು ಭಾರತೀಯ ಅಧಿಕಾರಿಗಳಿಗೆ ಲಂಚ ನೀಡಲಾಗಿದೆ ಎಂಬ ಆರೋಪಗಳು ಕೇಳಿಬಂದವು. ಅಲ್ಲದೇ ತನಿಖೆಯಿಂದ ಅಗಸ್ಟಾ ವೆಸ್ಟ್ ಲ್ಯಾಂಡ್‌ಗೆ ಅನುಕೂಲವಾಗುವಂತೆ ಒಪ್ಪಂದವನ್ನು ಕುಶಲತೆಯಿಂದ ನಿರ್ವಹಿಸಲಾಗಿದೆ ಎಂಬ ಅಂಶ ತನಿಖೆಯಿಂದ ಬಯಲಾಯಿತು.

ಕ್ರಿಶ್ಚಿಯನ್ ಮೈಕೆಲ್ ಅವರು ಲಂಚ ಪ್ರಕ್ರಿಯೆಯನ್ನು ಸುಗಮಗೊಳಿಸಿದ್ದು, ಸುಮಾರು 61 ಮಿಲಿಯನ್ ರೂ.ಗಳನ್ನು ವಿವಿಧ ಭಾರತೀಯ ಅಧಿಕಾರಿಗಳು ಮತ್ತು ರಾಜಕಾರಣಿಗಳಿಗೆ ವರ್ಗಾಯಿಸುವಲ್ಲಿ ಪ್ರಮುಖ ಪಾತ್ರ ನಿರ್ವಹಿಸಿದ್ದಾರೆ ಎಂಬುದು ಸಿಬಿಐ ತನಿಖೆಯಲ್ಲಿ ದೃಢಪಟ್ಟಿತ್ತು. ಅಗಸ್ಟಾ ವೆಸ್ಟ್‌ಲ್ಯಾಂಡ್ ಪ್ರಕರಣವು ರಕ್ಷಣಾ ಖರೀದಿಯಲ್ಲಿ ರಾಜಕೀಯ ಹೊಣೆಗಾರಿಕೆಯ ಮೇಲೆ ನಕಾರಾತ್ಮಕ ಪರಿಣಾಮ ಬೀರಿದೆ.

**ಏನಿದು ಹಗಣ?**

**2010ರಲ್ಲಿ ಆಗಿನ ಯುಪಿಎ ನೇತೃತ್ವದ ಕೇಂದ್ರ ಸರ್ಕಾರವು ಅತಿಗಣ್ಯ ವ್ಯಕ್ತಿಗಳ ಸಾರಿಗೆಗಾಗಿ 12 ಅಗಸ್ಟಾ ವೆಸ್ಟ್‌ಲ್ಯಾಂಡ್ 101 ಹೆಲಿಕಾಪ್ಟರ್‌ಗಳನ್ನು ಖರೀದಿಸುವ ಒಪ್ಪಂದಕ್ಕೆ ಸಹಿ ಹಾಕಿತ್ತು. ಒಟ್ಟು 3,600 ಕೋಟಿ ರೂ. ಮೌಲ್ಯದ ಈ ಒಪ್ಪಂದದನ್ವಯ ಇಟಲಿಯ ರಕ್ಷಣಾ ಗುತ್ತಿಗೆದಾರ ಫಿನ್ಮೆಕ್ಕಾನಿಕಾ ಕಂಪನಿಯ ಅಂಗಸಂಸ್ಥೆಯಾದ ಅಗಸ್ಟಾ ವೆಸ್ಟ್‌ಲ್ಯಾಂಡ್ ನಿಂದ 12 ಎಫ಼101 ಹೆಲಿಕಾಪ್ಟರ್‌ಗಳನ್ನು ಭಾರತ ಖರೀದಿಸಲಿತ್ತು. ಭಾರತದ ರಾಷ್ಟ್ರಪತಿ, ಪ್ರಧಾನಮಂತ್ರಿ ಸೇರಿದಂತೆ ಅತಿಗಣ್ಯ ವ್ಯಕ್ತಿಗಳ ಪ್ರಯಾಣಕ್ಕಾಗಿ ಈ ಹೆಲಿಕಾಪ್ಟರ್‌ಗಳನ್ನು ಬಳಸುವ ಉದ್ದೇಶ ಹೊಂದಲಾಗಿತ್ತು.**

# ಉಕ್ರೇನ್ ಶಾಂತಿ ಒಪ್ಪಂದಕ್ಕೆ ಅಮೆರಿಕ ಸಹಕಾರ ಅಗತ್ಯ

**ಪ್ಯಾರೀಸ್:** ರಷ್ಯಾ ತನ್ನ ನೆರೆಹೊರೆಯವರ ಮೇಲೆ ಮತ್ತೆ ದಾಳಿ ಮಾಡುವುದನ್ನು ತಡೆಯಲು ಮತ್ತು ಉಕ್ರೇನ್ ಜೊತೆ ಶಾಂತಿ ಒಪ್ಪಂದಕ್ಕೆ ಅಮೇರಿಕಾದ ಸಹಕಾರ ಅಗತ್ಯವಿದೆ ಎಂದು ಇಂಗ್ಲೆಂಡ್ ಪ್ರಧಾನಿ ಸರ್ ಕೀರ್ ಸ್ಟಾರ್ಮರ್ ಹೇಳಿದ್ದಾರೆ. ಪ್ಯಾರಿಸ್‌ನಲ್ಲಿ ಯುರೋಪಿಯನ್ ನಾಯಕರೊಂದಿಗೆ ನಡೆದ ತುರ್ತು ಸಭೆಯಲ್ಲಿ ಮಾತನಾಡಿದ ಅವರು ಶಾಶ್ವತ ಶಾಂತಿ ಒಪ್ಪಂ ದದ ಸಂದರ್ಭದಲ್ಲಿ ಉಕ್ರೇನ್‌ಗೆ ಇಂಗ್ಲೆಂಡ್ ಪಡೆಗಳನ್ನು ನಿಯೋಜಿಸುವುದನ್ನು ಪರಿಗಣಿಸುವುದಾಗಿ ಮತ್ತೆ ಪುನರುಚ್ಚರಿಸಿದ್ದಾರೆ. ರಷ್ಯಾದೊಂದಿಗೆ ಶಾಂತಿ ಮಾತುಕತೆಗಳ ಕುರಿತು ಯುರೋಪಿಯನ್ ರಾಷ್ಟ್ರಗಳೊಂದಿಗೆ ಸಮಾಲೋ ಚಿಸಲಾಗುವುದು, ಆದರೆ ಅವುಗಳಲ್ಲಿ ನೇರವಾಗಿ ಭಾಗಿಯಾಗುವುದಿಲ್ಲ ಎಂದು ಅಮೆರಿಕದ ಅಧಿಕಾರಿಗಳು ಸೂಚಿಸಿದ್ದಾರೆ.

ಯುರೋಪ್ ಮುಂದೆ ತನ್ನದೇ ಆದ ಭದ್ರತೆ ಖಾತರಿಪಡಿಸಿಕೊಳ್ಳುವ ಪ್ರಾಥಮಿಕ ಜವಾಬ್ದಾರಿಯನ್ನು ಹೊಂದಿರಬೇಕು ಎಂದು ಅಮೆರಿಕದ ರಕ್ಷಣಾ ಕಾರ್ಯ ದರ್ಶಿ ಪೀಟ್ ಹೆಗ್ಸೆತ್ ಹೇಳಿದ್ದಾರೆ. ಪೊಲೆಂಡ್ ಪ್ರಧಾನಿ ಡೊನಾಲ್ಡ್ ಟಸ್ಕ್ ಅವರು ಅಟ್ಲಾಂಟಿಕ್ ಸಾಗರ ಸಂಬಂಧಗಳು ಹೊಸ ಹಂತದಲ್ಲಿವೆ ಮತ್ತು ಯುರೋಪ್ ತನ್ನನ್ನು ತಾನು ರಕ್ಷಿಸಿಕೊಳ್ಳಲು ಹೆಚ್ಚಿನ ಸಾಮರ್ಥ್ಯ ದ ಸಮಯ ಬಂದಿದೆ ಎಂದು ಸಭೆ ದೃಢಪಡಿಸಿದೆ ಎಂದು ಹೇಳಿದ್ದಾರೆ. ಯುರೋಪಿಯನ್ ಒಕ್ಕೂಟದ ನಾಯಕರಾದ ಇಟಾಲಿ ಪ್ರಧಾನಿ ಜಾರ್ಜಿಯಾ ಮೆಲೋನಿ, ಡಚ್ ಪ್ರಧಾನಿ ಡಿಕ್ ಸ್ಕೂಫ್, ಡ್ಯಾನಿಶ್ ಪ್ರಧಾನಿ ಮೆಟ್ಟೆ ಫ್ರೆಡೆರಿಕ್ಸೆನ್, ಜರ್ಮನ್ ಚಾನ್ಸೆಲರ್ ಓಲಾಫ್ ಸ್ಕೋಲ್ಜ್, ಫ್ರೆಂಚ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರನ್, ಸ್ಪ್ಯಾನಿಷ್ ಪ್ರಧಾನಿ ಪೆಡ್ರೊ ಸ್ಯಾಂಚೆಜ್, ಯುಕೆ ಪ್ರಧಾನಿ ಕೀರ್ ಸ್ಟಾರ್ಮರ್, ಪೋಲಿಷ್ ಪ್ರಧಾನಿ ಡೊನಾಲ್ಡ್ ಟಸ್ಕ್ ಮತ್ತು ನ್ಯಾಟೋ ಪ್ರಧಾನ ಕಾರ್ಯದರ್ಶಿ ಮಾರ್ಕ್ ರುಟ್ಟೆ ಮತ್ತಿತರರು ಉಪಸ್ಥಿತರಿದ್ದರು.



**ಯಾವುದೇ ಒಪ್ಪಂದವನ್ನು ಗುರುತಿಸುವುದಿಲ್ಲ**

**ರಷ್ಯಾದ ಆಕ್ರಮ ನೀತಿ ತಡೆಯುವ ಉದ್ದೇಶದಿಂದ ಅಮೇರಿಕಾ ಖಾತರಿ ಮಾತ್ರ ಮಾರ್ಗ'' ಅಗತ್ಯವಿದೆ. ಮುಂದಿನ ವಾರ ವಾಷಿಂಗ್ಟನ್‌ನಲ್ಲಿ ಅಮೇರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರನ್ನು ಭೇಟಿ ಮಾಡಿದ ವೇಳೆ ಈ ವಿಷಯ ಚರ್ಚೆ ನಡೆಸಲಾಗುವುದು ಎಂದಿದ್ದಾರೆ. ರಷ್ಯಾ ಒಡ್ಡುವ ಪೀಳಿಗೆಯ ಭದ್ರತಾ ಸವಾಲು ಎದುರಿಸುವಾಗ ಯುರೋಪಿಯನ್ ಖಂಡವನ್ನು ರಕ್ಷಿಸಲು ಯುರೋಪ್ ಇನ್ನಷ್ಟು ಮಾಡಬೇಕಾಗುತ್ತದೆ . ಮಿತ್ರರಾಷ್ಟ್ರಗಳು ಇದು ವಾಯು ಬೆಂಬಲ, ಲಾಜಿಸ್ಟಿಕ್ಸ್ ಮತ್ತು ಗುಪ್ತಚರ ಸಾಮರ್ಥ್ಯ ಸೇರಿದಂತೆ ವಿವಿಧ ವಿಷಯಗಳ ಕುರಿತು ಚರ್ಚೆ ನಡೆಸಲಾಗುವುದು ಎಂದಿದ್ದಾರೆ. ಉಕ್ರೇನಿಯನ್ ಅಧ್ಯಕ್ಷ ವೊಲೊಡಿಮಿರ್ ಝೆಲೆನ್ಸ್ಕಿ ಅವರು ಕೈವ್‌ಗೆ ಮಾತುಕತೆಗಳ ಬಗ್ಗೆ ತಿಳಿದಿಲ್ಲ ಮತ್ತು ಅದರ ಒಳಗೊಳ್ಳುವಿಕೆ ಇಲ್ಲದೆ ಮಾಡಲಾದ ಯಾವುದೇ ಒಪ್ಪಂದವನ್ನು ಗುರುತಿಸುವುದಿಲ್ಲ**




# ಅಪರಿಚಿತ ಡ್ರೋನ್ ಹೊಡೆದುರುಳಿಸಿದ ಭದ್ರತಾ ಪಡೆಗಳು

**ಅಯೋಧ್ಯೆ:** ಆಯೋಧ್ಯೆಯ ಶ್ರೀ ರಾಮ ಮಂದಿರದ ಬಳಿ ಹಾರಾಟ ನಡೆಸುತ್ತಿದ್ದ ಅಪರಿಚಿತ ಡ್ರೋಣ್ ಕ್ಯಾಮೆರಾವನ್ನು ಭದ್ರತಾ ಪಡೆಗಳು ಹೊಡೆದುರುಳಿಸಿದ್ದು ಈ ಸಂಬಂಧ ಅಪರಿಚಿತ ವ್ಯಕ್ತಿಯ ವಿರುದ್ಧ ಸ್ಥಳೀಯ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಅಯೋಧ್ಯೆ ದೇವಸ್ಥಾನದ ರಾಮ ಜನ್ಮಭೂಮಿ ಸಂಕೀರ್ಣದ ದರ್ಶನ ಮಾರ್ಗದಲ್ಲಿ ಡ್ರೋನ್ ಅನ್ನು ಹಾರಿಸಲಾಗುತ್ತಿದೆ ರಾಮಮಂದಿರದ ಆ್ಯಂಟಿ ಡ್ರೋನ್ ವ್ಯವಸ್ಥೆಯು ದರ್ಶನ್ ಮಾರ್ಗದಲ್ಲಿ ಕ್ಯಾಮರಾ ಹಾರಿಸುವುದನ್ನು ಗಮನಿಸಿದ ನಂತರ ಅದನ್ನು ಶೂಟ್ ಮಾಡಿದೆ. ಡ್ರೋನ್ ಹಾರಾಟಕ್ಕೆ ಕಾರಣವಾದ ವ್ಯಕ್ತಿಯನ್ನು ಗುರುತಿಸಲು ಪೊಲೀಸರು ತನಿಖೆ ಪ್ರಾರಂಭಿಸಿದ್ದಾರೆ ಬಾಂಬ್ ನಿಷ್ಕ್ರಿಯ ದಳವೂ ಕ್ಯಾಮೆರಾವನ್ನು ಕೂಲಂಕುಷವಾಗಿ ಪರಿಶೀಲಿಸಿದೆ. ಪ್ರಯಾಗ್ ರಾಜ್‌ನಲ್ಲಿ ನಡೆಯುತ್ತಿರುವ ಮಹಾ ಕುಂಭಮೇಳದಲ್ಲಿ ತ್ರಿವೇಣಿ ಸಂಗಮದಲ್ಲಿ ಪುಣ್ಯಸ್ನಾನ ಮಾಡಿದ ಭಕ್ತರು ಈಗ ರಾಮಲಲ್ಲಾ ದರ್ಶನಕ್ಕಾಗಿ ಅಯೋಧ್ಯೆ ಮತ್ತು ವಾರಣಾಸಿ ಕಡೆಗೆ ತೆರಳುತ್ತಿದ್ದು, ಇಡೀ ನಗರ ಭಕ್ತರಿಂದ ತುಂಬಿ ತುಳುಕುತ್ತಿರುವ ಹಿನ್ನೆಲೆಯಲ್ಲಿ ಈ ಬೆಳವಣಿಗೆ ನಡೆದಿದೆ. ಅಯೋಧ್ಯೆಯಲ್ಲಿ ಭಕ್ತರ ಅಭೂತಪೂರ್ವ ಉಲ್ಬಣವನ್ನು ನಿಭಾಯಿಸಲು ಆಡಳಿತವು ಬ್ಯಾರಿಕೇಡ್‌ಗಳನ್ನು ಸ್ಥಾಪಿಸುವುದು ಸೇರಿದಂತೆ ಕಟ್ಟುನಿಟ್ಟಾದ ಭದ್ರತಾ ವ್ಯವಸ್ಥೆಯನ್ನು ಜಾರಿಗೆ ತಂದಿದೆ. ಭಕ್ತರಿಗೆ ಯಾವುದೇ ತೊಂದರೆಯಾಗದಂತೆ ಸಾಕಷ್ಟು ಸಂಖ್ಯೆಯಲ್ಲಿ ಪಡೆಗಳನ್ನು ನಿಯೋಜಿಸಲಾಗಿದೆ. ಅಯೋಧ್ಯೆ ಎಸ್ಪಿ ಮಧುವನ್ ಕುಮಾರ್‌ಸಿಂಗ್ ಮಾತನಾಡಿ, ನಡೆಯುತ್ತಿರುವ ಮಹಾಕುಂಭದ ಸಮಯದಲ್ಲಿ ಭಕ್ತರ ಸಂಖ್ಯೆ ಹೆಚ್ಚಾದ ಕಾರಣ ನಗರವನ್ನು ಆರು ವಲಯಗಳು, 11 ವಲಯಗಳಾಗಿ ವಿಂಗಡಿಸಲಾಗಿದೆ. ಸರಯೂ ನದಿಯಲ್ಲಿ ಸ್ನಾನ ಮಾಡಲು ಮತ್ತು ದರ್ಶನ ಪಡೆಯಲು ಬೆಳಗ್ಗೆಯಿಂದ ಲಕ್ಷಾಂತರ ಭಕ್ತರು ಇಲ್ಲಿಗೆ ಬರುತ್ತಿದ್ದಾರೆ ಎಂದು ತಿಳಿಸಿದ್ದಾರೆ.



## ಸುಡಾನ್ ಸಂಘರ್ಷ: 200ಕ್ಕೂ ಹೆಚ್ಚು ಸಾವು

**ಪೋರ್ಟ್ ಸುಡಾನ್:** ದೇಶದ ದಕ್ಷಿಣ ಭಾಗದ ಹಳ್ಳಿಗಳ ಮೇಲೆ ಮೂರು ದಿನ ದಾಳಿ ನಡೆಸಿದ ಅರೆಸೇನಾ ಪಡೆಯು, ಮಹಿಳೆಯರು- ಮಕ್ಕಳು ಸೇರಿದಂತೆ 200ಕ್ಕೂ ಹೆಚ್ಚು ಜನರನ್ನು ಕೊಂದಿದೆ. ಸೇನೆಯೊಂದಿಗೆ ಎರಡು ವರ್ಷಗಳಿಂದಲೂ ಸಂಘರ್ಷಕ್ಕಿಳಿದಿರುವ ಅರೆಸೇನಾ ಪಡೆಯ ಕ್ಷಿಪ್ರ ಬೆಂಬಲ ಪಡೆಯ (ಆರ್‌ಎಸ್‌ಎಫ್) ಯೋಧರು, ವೈಟ್ ನೈಲ್ ರಾಜ್ಯದ ಅಲ್- ಕದರಿಸ್ ಮತ್ತು ಅಲ್ ಖೆಲ್ವಾತ್ ಗ್ರಾಮಗಳಲ್ಲಿ ನಿರಾಯುಧ ಗ್ರಾಮಸ್ಥರ ಮೇಲೆ ದಾಳಿ ನಡೆಸಿದ್ದಾರೆ ಎಂದು ಆಂತರಿಕ ಸಂಘರ್ಷದ ಮೇಲ್ವಿಚಾರಣೆ ನಡೆಸುತ್ತಿರುವ ವಕೀಲರ ಗುಂಪು ಮಂಗಳವಾರ ತಿಳಿಸಿದೆ. ಸೇನೆಯ ಉಪಸ್ಥಿತಿ ಇಲ್ಲದ ಕಡೆ ಶನಿವಾರದಿಂದಲೂ ಆರ್‌ಎಸ್‌ಎಫ್ ದಾಳಿ ನಡೆಸಿದ್ದು, ನಾಗರಿಕರ ಹತ್ಯೆ, ಅಪಹರಣ, ಲೂಟಿ ನಡೆಸುವ ಮೂಲಕ ಮಾನವ ಹಕ್ಕುಗಳನ್ನು ಉಲ್ಲಂಘಿಸಿದೆ ಎಂದು ದೂರಿದೆ. ಕೆಲವು ಗ್ರಾಮಸ್ಥರು ಸುರಕ್ಷಿತ ಸ್ಥಳಕ್ಕೆ ತೆರಳಲು ನೈಲ್ ನದಿ ದಾಟುವಾಗ ಆರ್‌ಎಸ್‌ಎಫ್ ಸಿಬ್ಬಂದಿ ಗುಂಡಿನ ಸುರಿಮಳೆಗರೆದಿದ್ದಾರೆ. ದಾಳಿಯಿಂದ ತಪ್ಪಿಸಿಕೊಳ್ಳಲು ಕೆಲವರು ನದಿಗೆ ಹಾರಿದ್ದು, ಮುಳುಗಿ ಮೃತಪಟ್ಟಿದ್ದಾರೆ. ಹಳ್ಳಿಗರ ಮೇಲಿನ ದಾಳಿಯನ್ನು ವಕೀಲರ ಗುಂಪು ನರಮೇಧ ಎಂದಿದೆ. ಸುಡಾನ್‌ನಲ್ಲಿ 2023ರ ಏಪ್ರಿಲ್‌ನಿಂದಲೂ ಸೇನೆ ಮತ್ತು ಅರೆಸೇನಾಪಡೆ ನಡುವೆ ಸಂಘರ್ಷ ನಡೆಯುತ್ತಿದೆ.

# ಸುಪಾರಿ ನೀಡಿ ಪತ್ನಿ ಹತ್ಯೆ ಮಾಡಿಸಿದ ಎಎಪಿ ನಾಯಕ

**ಚಂಡಿಘಡ:** ಪತ್ನಿ ಹತ್ಯೆಗೆ ಸುಫಾರಿ ನೀಡಿದ್ದೇ ಎಎಪಿ ನಾಯಕ ಅನೋಖ್ ಮಿತ್ತಲ್ ಎಂಬುದು ಪೊಲೀಸರ ತನಿಖೆಯಿಂದ ಬಯಲಾಗಿದೆ. ಇತ್ತೀಚೆಗಷ್ಟೇ ಪಂಜಾಬ್‌ನ ಆಮ್ ಆದ್ಮಿ ಪಕ್ಷದ ನಾಯಕ ಅನೋಖ್ ಮಿತ್ತಲ್ ಅವರ ಪತ್ನಿಯನ್ನು ದುಷ್ಕರ್ಮಿಗಳು ಬರ್ಬರವಾಗಿ ಹತ್ಯೆಗೈದಿದ್ದರು, ಜತೆಗೆ ದರೋಡೆ ಮಾಡಲಾಗಿದೆ ಎಂದು ದೂರು ದಾಖಲಿಸಲಾಗಿತ್ತು. ಆದರೆ ಅಸಲಿಗೆ ಆಕೆಯ ಪತಿ ಅನೋಖ್ ಮಿತ್ತಲ್ ಕೊಲೆಗೆ ಸುಪಾರಿ ಕೊಟ್ಟಿದ್ದ ಎನ್ನುವ ನಿಜಾಂಶ ಬೆಳಕಿಗೆ ಬಂದಿದೆ. ಲುಧಿಯಾನಾ ಪೊಲೀಸರು ಅನೋಖ್ ಮಿತ್ತಲ್ ಹಾಗೂ ಆತನ ಗೆಳತಿಯನ್ನು ಬಂಧಿಸಿದ್ದಾರೆ. ಕೊಲೆ ಮಾಡಲು ಕೆಲವರನ್ನು ನೇಮಿಸಿಕೊಂಡಿದ್ದ ಮಿತ್ತಲ್, ಸ್ನೇಹಿತೆ ಸೇರಿ 6 ಜನರನ್ನು ಬಂಧಿಸಿರುವುದಾಗಿ ಪೊಲೀಸರು ಹೇಳಿದ್ದಾರೆ. ಒಬ್ಬ ಆರೋಪಿ ತಲೆ ಮರೆಸಿಕೊಂಡಿದ್ದಾನೆ ಆತನನ್ನು ಬಂಧಿಸಲು ಕ್ರಮ ಕೈಗೊಳ್ಳಲಾಗಿದೆ ಎಂದು ಲುಧಿಯಾನಾ ಪೊಲೀಸ್ ಆಯುಕ್ತ ಕುಲದೀಪ್ ಸಿಂಗ್ ತಿಳಿಸಿದ್ದಾರೆ. ಮಿತ್ತಲ್ ಹಂತಕರಿಗೆ 2.5 ಲಕ್ಷ ರೂ.ಗಳನ್ನು ನೀಡಲು ಒಪ್ಪಿಕೊಂಡಿದ್ದ, ಈಗಾಗಲೇ 50 ಸಾವಿರ ರೂ. ಮುಂಗಡವಾಗಿ ನೀಡಿದ್ದ, ಉಳಿದ 2 ಲಕ್ಷ ರೂ. ಕೊಲೆಯ ಬಳಿಕ ನೀಡುತ್ತೇನೆ ಎಂದು ಹೇಳಿದ್ದ ಎಂದು ಅವರು ಮಾಹಿತಿ ನೀಡಿದ್ದಾರೆ. ಮಿತ್ತಲ್ ಈ ಹಿಂದೆ ಎರಡು ಬಾರಿ ಪತ್ನಿ ಕೊಲೆಗೆ ಯತ್ನಿಸಿದ್ದ. ಅಪರಾಧದ ಹಿಂದಿನ ಉದ್ದೇಶ ಆತನ ವಿವಾಹೇತರ ಸಂಬಂಧ ವಾಗಿದ್ದು, ಅದು ಪತ್ನಿಗೆ ತಿಳಿದಿತ್ತು. ಈ ವಿಷಯವನ್ನು ಆಕೆ ಎಲ್ಲಾರಿಗೂ ಹೇಳಬಹುದು ಎಂಬ ಭಯದಿಂದ ಆತ ಪತ್ನಿ ಹತ್ಯೆಗೆ ಸುಪಾರಿ ನೀಡಿದ್ದ ಎನ್ನಲಾಗಿದೆ. ಅಪರಾಧಕ್ಕೆ ಬಳಸಲಾದ ವಾಹನವನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ. ಸಾಕ್ಷ್ಯಗಳನ್ನು ಸಂಗ್ರಹಿಸುತ್ತಿದ್ದಾರೆ.



ಅಪರಾಧ ನಡೆದ ಸ್ಥಳದಲ್ಲಿ ಮಿತ್ತಲ್ ಪ್ರೇಯಸಿ ಅಲ್ಲಿಲ್ಲದಿದ್ದರೂ, ಯೋಜನೆ, ಪಿತೂರಿಯಲ್ಲಿ ಸಕ್ರಿಯವಾಗಿ ಭಾಗಿಯಾಗಿದ್ದಾರೆಂದು ನಂಬಲಾಗಿದೆ ಎಂದು ಆಯುಕ್ತರು ಹೇಳಿದರು. ಮಿತ್ತಲ್ ಪೊಲೀಸರಿಗೆ ಈ ವಿಚಾರ ತಿಳಿಸಿದ್ದು, ಫೆಬ್ರವರಿ 15ರ ಮಧ್ಯರಾತ್ರಿ ಸುಮಾರಿಗೆ ತಾನು ತನ್ನ ಪತ್ನಿ ಜತೆ ರೆಸ್ಟೋರೆಂಟ್‌ನಲ್ಲಿ ಊಟ ಮುಗಿಸಿ ಮನೆಗೆ ಹಿಂದಿರುಗುತ್ತಿದ್ದೆವು, ರೂರ್ಕಾ ರಸ್ತೆಯ ಬಳಿ ಕಾರನ್ನು ನಿಲ್ಲಿಸಿದಾಗ ಇನ್ನೊಂದು ವಾಹನದಲ್ಲಿ ಬಂದ ಐದಾರು ಮಂದಿ ಕಬ್ಬಿಣದ ರಾಡ್‌ನಿಂದ ಹಲ್ಲೆ ನಡೆಸಿದ್ದರು, ಬಳಿಕ ಯಾವುದೋ ವಸ್ತುವಿನಿಂದ ನಾನು ಪ್ರಜ್ಞೆ ಕಳೆದುಕೊಂಡಿದ್ದೆ ಎಂದು ಹೇಳಿದ್ದ. ಮೂರು ತಿಂಗಳ ಹಿಂದೆ ಆಮ್ ಆದ್ಮಿ ಪಕ್ಷಕ್ಕೆ ಸೇರಿದ ಮಿತ್ತಲ್, ಸುಮಾರು 20 ನಿಮಿಷಗಳ ನಂತರ ಪ್ರಜ್ಞೆ ಬಂದಾಗ, ತನ್ನ ಪತ್ನಿ ಗಂಭೀರ ಗಾಯಗಳೊಂದಿಗೆ ರಸ್ತೆಯಲ್ಲಿ ಬಿದ್ದಿರುವುದನ್ನು ನೋಡಿದೆ ಎಂದು ಹೇಳಿಕೊಂಡಿದ್ದಾನೆ. ಆಸ್ಪತ್ರೆಗೆ ಕರೆದೊಯ್ಯುವ ಮೂಲಕ ಆಕೆ ಮೃತಪಟ್ಟಿದ್ದಾಳೆ ಎಂದ್ದರು.


# 26ನೇ ಮುಖ್ಯ ಚುನಾವಣಾ ಆಯುಕ್ತರಾಗಿ ಜ್ಞಾನೇಶ್ ಕುಮಾರ್ ನೇಮಕ

**ಭಾರತ ಸರ್ಕಾರದಲ್ಲಿ, ಅವರು ರಕ್ಷಣಾ ಸಚಿವಾಲಯದಲ್ಲಿ ಜಂಟಿ ಕಾರ್ಯದರ್ಶಿಯಾಗಿ, ಗೃಹ ಸಚಿವಾಲಯದಲ್ಲಿ ಜಂಟಿ ಕಾರ್ಯದರ್ಶಿ ಮತ್ತು ಹೆಚ್ಚುವರಿ ಕಾರ್ಯದರ್ಶಿಯಾಗಿ, ಸಂಸದೀಯ ವ್ಯವಹಾರಗಳ ಸಚಿವಾಲಯದಲ್ಲಿ ಕಾರ್ಯದರ್ಶಿ ಮತ್ತು ಸಹಕಾರ ಸಚಿವಾಲಯದಲ್ಲಿ ಕಾರ್ಯದರ್ಶಿಯಾಗಿ ಕೆಲಸ ಮಾಡಿದ ಶ್ರೀಮಂತ ಅನುಭವವನ್ನು ಹೊಂದಿದ್ದಾರೆ. ಅವರು 2024ರ ಜನವರಿ 31ರಂದು ನಿವೃತ್ತರಾಗಿದ್ದರು.**

**61 ವರ್ಷದ ಜ್ಞಾನೇಶ್ ಕುಮಾರ್**

**ನವದೆಹಲಿ:** ದೇಶದ 26ನೇ ಮುಖ್ಯ ಚುನಾವಣಾ ಆಯುಕ್ತರಾಗಿ ಹಿರಿಯ ನಿವೃತ್ತ ಐಎಎಸ್ ಅಧಿಕಾರಿ ಜ್ಞಾನೇಶ್ ಕುಮಾರ್ ಅವರ ನೇಮಕಕ್ಕೆ ರಾಷ್ಟ್ರಪತಿ ದೌಪತಿ ಮುರ್ಮು ಸಹಿ ಹಾಕಿದ್ದಾರೆ. ಇದೇ ವೇಳೆ ಚುನಾವಣಾ ಆಯೋಗದ ಆಯುಕ್ತರಾಗಿ 1989ರ ಹರಿಯಾಣ ಬ್ಯಾಚ್‌ನ ಐಎಎಸ್ ಅಧಿಕಾರಿ, ನಿವೃತ್ತ ಮುಖ್ಯ ಕಾರ್ಯದರ್ಶಿಯಾಗಿ ಸೇವೆ ಸಲ್ಲಿಸಿದ್ದ ವಿವೇಕ್ ಜೋಶಿ ಅವರನ್ನು ನೇಮಕ ಮಾಡಲಾಗಿದೆ. ರಾಷ್ಟ್ರಪತಿ ದೌಪದಿ ಮುರ್ಮು ಸಹಿ ಹಾಕಿದ್ದು, ಈ ಸಂಬಂಧ ರಾಷ್ಟ್ರಪತಿ ಭವನ ಅಧಿಸೂಚನೆ ಹೊರಡಿಸಿದೆ. ಜ್ಞಾನೇಶ್ ಕುಮಾರ್, ವಿವೇಕ್ ಜೋಶಿ ಅವರು ಮಂಗಳವಾರ ಅಧಿಕಾರ ಸ್ವೀಕಾರ ಮಾಡಲಿದ್ದಾರೆ. ರಾಷ್ಟ್ರಪತಿಗಳು ಇಬ್ಬರಿಗೂ ಅಧಿಕಾರ ಗೌಪ್ಯತೆ ಬೋಧಿಸಲಿದ್ದಾರೆ. ಹಾಲಿ ಮುಖ್ಯ ಚುನಾವಣಾ ಆಯುಕ್ತ ರಾಜೀವ್ ಕುಮಾರ್ ಅವರು, ಸೇವೆಯಿಂದ ಇಂದು ನಿವೃತ್ತರಾ ಗಲಿದ್ದು, ತೆರವಾಗಲಿರುವ ಈ ಸ್ಥಾನಕ್ಕೆ ಜ್ಞಾನೇಶ್ ಕುಮಾರ್ ಅವರನ್ನು ಕೇಂದ್ರ ಸರ್ಕಾರ ನೇಮಕ ಮಾಡಿತ್ತು. 61 ವರ್ಷದ ಜ್ಞಾನೇಶ್‌ಕುಮಾರ್ ಕಳೆದ ವರ್ಷ ಮಾರ್ಚ್ 15 ರಿಂದ ಚುನಾವಣಾ ಆಯುಕ್ತರಾಗಿ ಸೇವೆ ಸಲ್ಲಿಸುತ್ತಿದ್ದರು. ಚುನಾ ವಣಾ ಆಯೋಗದ ಸದಸ್ಯರ ನೇಮಕಾತಿ ಕುರಿತು ಹೊಸ ಕಾನೂನಿನಡಿ ನೇಮಕಗೊಂಡ ಮೊದಲ ಸಿಇಸಿ ಆಗಿದ್ದಾರೆ. ಕಾನೂನಿನ ಪ್ರಕಾರ ಮುಖ್ಯ ಚುನಾವಣಾ ಆಯುಕ್ತರು ಅಥವಾ ಚುನಾವಣಾ ಆಯುಕ್ತರು 65ನೇ ವಯಸ್ಸಿನಲ್ಲಿ ನಿವೃತ್ತರಾಗುತ್ತಾರೆ ಅಥವಾ ಆರು ವರ್ಷಗಳ ಕಾಲ ಚುನಾವಣಾ ಸಮಿತಿಯಲ್ಲಿ ಅಧಿಕಾರಾವಧಿಯನ್ನು ಹೊಂದಬಹುದು. 1988 -ನೇ ಬ್ಯಾಜ್ ಕೇರಳ ಕೇಡರ್ ಐಎಎಸ್ ಅಧಿಕಾರಿ ಜ್ಞಾನೇಶ್ ಕುಮಾರ್ ಅವರ ಅಧಿಕಾರಾವಧಿಯು ಜನ ವರಿ 26, 2029ರವರೆಗೆ ಇರಲಿದೆ. 2029ರಲ್ಲಿ ನಡೆಯಲಿರುವ ಲೋಕಸಭಾ ಚುನಾವಣೆಯೂ ಇವರ ಅವಧಿಯಲ್ಲಿ ನಡೆಯಲಿದೆ. ಕೇಂದ್ರ ಗೃಹ ಸಚಿವಾಲಯದ ಅವಧಿಯಲ್ಲಿ ಜಮ್ಮು ಮತ್ತು ಕಾಶ್ಮೀರದಲ್ಲಿ ಸಂವಿಧಾನದ 370 ನೇ ವಿಧಿಯನ್ನು ರದ್ದುಗೊಳಿಸಿದ ನಂತರ ಪ್ರಮುಖ ನಿರ್ಧಾರಗಳನ್ನು ಜಾರಿಗೊಳಿಸುವಲ್ಲಿ ಪ್ರಮುಖ ಪಾತ್ರ ವಹಿಸಿದ್ದರು. ಜ್ಞಾನೇಶ್ ಕುಮಾರ್ ಅವರಿಗೆ ಈ ವರ್ಷದ ಕೊನೆಯಲ್ಲಿ ಬಿಹಾರದಲ್ಲಿ ವಿಧಾನಸಭಾ ಚುನಾವಣೆಯನ್ನು ನಡೆಸುವ ಸವಾಲು ಅವರ ಮುಂದಿದೆ. 2026 ರಲ್ಲಿ ಕೇರಳ, ಪುದುಚೇರಿ, ತಮಿಳುನಾಡು ಮತ್ತು ಪಶ್ಚಿಮ ಬಂಗಾಳದ ವಿಧಾನಸಭಾ ಚುನಾವಣೆಯ ಮೇಲುಸ್ತುವಾರಿ ವಹಿಸಲಿದ್ದಾರೆ. ಅವರ ಅಧಿಕಾರಾವಧಿಯಲ್ಲಿ 2027ರಲ್ಲಿ ದೇಶದ ರಾಷ್ಟ್ರಪತಿ ಹಾಗೂ ಉಪರಾಷ್ಟ್ರಪತಿ ಚುನಾವಣೆಗಳು ನಡೆಯಲಿವೆ.

**ಜ್ಞಾನೇಶ್ ಕುಮಾರ್ ಯಾರು?:** ಜ್ಞಾನೇಶ್ ಕುಮಾರ್ ಅವರು 1988 ರ ಬ್ಯಾಚ್‌ನ ಕೇರಳ-ಕೇಡರ್ ಅಧಿಕಾರಿಯಾಗಿದ್ದು, ಕಳೆದ ವರ್ಷ ಜನವರಿಯಲ್ಲಿ ಸಹಕಾರ ಸಚಿವಾಲಯದ ಕಾರ್ಯದರ್ಶಿಯಾಗಿ ನಿವೃತ್ತರಾಗಿದ್ದರು.ಅವರು ಮೇ 2022ರಿಂದ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರ ಸಚಿವಾಲಯದಲ್ಲಿ ಕಾರ್ಯದರ್ಶಿಯಾಗಿದ್ದರು. ಗೃಹ ಸಚಿವಾಲಯದಲ್ಲಿ ಐದು ವರ್ಷ ಕಳೆದಿದ್ದರು. ಮೊದಲು ಮೇ 2016 ರಿಂದ ಸೆಪ್ಟೆಂಬರ್ 2018 ರವರೆಗೆ ಜಂಟಿ ಕಾರ್ಯದರ್ಶಿಯಾಗಿ ಮತ್ತು ನಂತರ ಸೆಪ್ಟೆಂಬರ್ 2018 ರಿಂದ ಏಪ್ರಿಲ್ 2021 ನವರೆಗೆ ಹೆಚ್ಚುವರಿ ಕಾರ್ಯದರ್ಶಿಯಾಗಿ, ಆಗಸ್ಟ್ 2019 ರಲ್ಲಿ ಆರ್ಟಿಕಲ್ 370 ಅನ್ನು ರದ್ದುಗೊಳಿಸಿದಾಗ ಅವರು ಜಮ್ಮು ಮತ್ತು ಕಾಶ್ಮೀರ ಸಮಿತಿಯ ಮುಖ್ಯಸ್ಥರಾಗಿದ್ದರು. ಕೇರಳ ಸರ್ಕಾರದಲ್ಲಿ ಎರ್ನಾಕುಲಂನ ಸಹಾಯಕ ಕಲೆಕ್ಟರ್, ಅಡೂರಿನ ಸಬ್ ಕಲೆಕ್ಟರ್, ಎಸ್ಸಿ ಮತ್ತು ಎಸ್‌ಟಿ ಗಳ ಕೇರಳ ರಾಜ್ಯ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕರು, ಕೊಚ್ಚಿನ್ ಕಾರ್ಪೊರೇಶನ್‌ನ ಮುನ್ಸಿಪಲ್ ಕಮಿಷನರ್, ಕೇರಳ ರಾಜ್ಯ ಸಹಕಾರಿ ಬ್ಯಾಂಕ್‌ನ ವ್ಯವ ಸ್ಥಾಪಕ ನಿರ್ದೇಶಕರು, ಉದ್ಯಮಗಳು ಮತ್ತು ವಾಣಿಜ್ಯ ನಿರ್ದೇಶಕರು ಮತ್ತು ಎರ್ನಾಕುಲಂನ ಜಿಲ್ಲಾಧಿಕಾರಿಯಾಗಿ ಕೆಲಸ ಮಾಡಿದ್ದಾರೆ. ಗೋಶ್ರೀ ಲ್ಯಾಂಡ್ಸ್ ಡೆವಲಪ್ ಮೆಂಟ್ ಅಥಾರಿಟಿಯ ಕಾರ್ಯದರ್ಶಿಯಾಗಿ, ತಿರುವನಂತಪುರಂ ಏರ್ ಪೋರ್ಟ್ ಡೆವಲಪ್ ಮೆಂಟ್ ಸೊಸೈಟಿಯ ವ್ಯವಸ್ಥಾಪಕ ನಿರ್ದೇಶಕರಾಗಿ, ಕೇರಳ ರಾಜ್ಯ ಸಾರಿಗೆ ಯೋಜನೆಯ ಯೋಜನಾ ನಿರ್ದೇಶಕರಾಗಿ ಮತ್ತು ದೆಹಲಿಯ ಕೇರಳ ಹೌಸ್‌ನ ರೆಸಿಡೆಂಟ್ ಕಮೀಷನರ್ ಆಗಿಯೂ ಸೇವೆ ಸಲ್ಲಿಸಿದ್ದಾರೆ. ಕೇರಳ ಸರ್ಕಾರದ ಕಾರ್ಯದರ್ಶಿಯಾಗಿ, 61 ವರ್ಷದ ಐಎಎಸ್ ಅಧಿಕಾರಿ ಹಣಕಾಸು ಸಂಪನ್ಮೂಲಗಳು, ಫಾಸ್ಟ್ ಟ್ರ್ಯಾಕ್ ಯೋಜನೆಗಳು, ಲೋಕೋಪಯೋಗಿ ಇಲಾಖೆ, ಆಧುನೀಕರಿಸುವ ಸರ್ಕಾರಿ ಕಾರ್ಯಕ್ರಮ, ಆಹಾರ, ನಾಗರಿಕ ಸರಬರಾಜು, ಗ್ರಾಹಕ ವ್ಯವಹಾರಗಳಂತಹ ವೈವಿಧ್ಯಮಯ ಇಲಾಖೆಗಳನ್ನು ನಿರ್ವಹಿಸಿದ್ದಾರೆ. ಇನ್ನು ಕೇಂದ್ರ ಸರ್ಕಾರವು 1989 ಬ್ಯಾಚ್‌ನ ಹರಿಯಾಣ-ಕೇಡರ್ ಐಎಎಸ್ ಅಧಿಕಾರಿ ವಿವೇಕ್ ಜೋಶಿ ಅವರನ್ನು ಚುನಾವಣಾ ಆಯುಕ್ತರಾಗಿ ನೇಮಿಸಿ 1966, ಮೇ 21ರಂದು ಜನಿಸಿದ ಜೋಶಿ (58) ಅವರು 2031ರವರೆಗೆ ಚುನಾವಣಾ ಆಯೋಗ ಕಾರ್ಯ ನಿರ್ವಹಿಸಲಿದ್ದಾರೆ. ಹರಿಯಾಣ ಮಾಜಿ ಮುಖ್ಯ ಕಾರ್ಯದರ್ಶಿ ಜೋಶಿ ಜನವರಿ 2019 ರಿಂದ ಕೇಂದ್ರ ನಿಯೋಜನೆಯಲ್ಲಿದ್ದರು.




**ಐಐಟಿ ಕಾನ್ಪುರದಿಂದ ಸಿವಿಲ್ ಇಂಜಿನಿಯರಿಂಗ್ ನಲ್ಲಿ ತಮ್ಮ ಬಿಟೆಕ್ ಅನ್ನು ಪೂರ್ಣಗೊಳಿಸಿದರು, ಐಸಿಎಫ್ ಎಐ. ಭಾರತದ ಬಿಸಿನೆಸ್ ಫೈನಾನ್ಸ್ ಮತ್ತು ಯುಎಸ್‌ನ ಹಾವರ್ಡ್ ವಿಶ್ವವಿದ್ಯಾಲಯದ ಎಚ್ ಐಐಡಿಯಿಂದ ಪರಿಸರ ಅರ್ಥಶಾಸ್ತ್ರವನ್ನು ಅಧ್ಯಯನ ಮಾಡಿದರು.**

# ಭಾರತಕ್ಕೆ ಟೆಸ್ಲಾ ಎಂಟ್ರಿ, ಉದ್ಯೋಗಿಗಳ ಹುಡುಕಾಟ ಆರಂಭಿಸಿದ ದೈತ್ಯ ಕಂಪನಿ


**ವಾಷಿಂಗ್ಟನ್:** ಪ್ರಧಾನಿ ಮೋದಿ, ಎಲೋನ್ ಮಸ್ಕ್ ಭೇಟಿಯ ನಂತರ ಟೆಸ್ಲಾ ಸಂಸ್ಥೆ ಭಾರತಕ್ಕೆ ಕಾಲಿಸುವ ಮಹತ್ವದ ತೀರ್ಮಾನ ಕೈಗೊಂಡಿದೆ. ಅಮೆರಿಕದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೇಟಿ ಮಾಡಿದ ಸ್ವಲ್ಪ ಸಮಯದ ನಂತರ ಟೆಸ್ಲಾ ಸಂಸ್ಥೆ ಮಾರುಕಟ್ಟೆಯನ್ನು ಪ್ರವೇಶಿಸಲು ಯೋಜಿಸುತ್ತಿದೆ. ಎಲೆಕ್ಟ್ರಿಕ್-ವಾಹನ ತಯಾರಕ ಸಂಸ್ಥೆ ಯಾಗಿರುವ ಟೆಸ್ಲಾ ಬ್ಯಾಕ್-ಎಂಡ್ ಉದ್ಯೋಗಗಳು ಸೇರಿದಂತೆ 13 ಅಭ್ಯರ್ಥಿಗಳನ್ನು ಭಾರತದಲ್ಲಿ ಹುಡುಕಿದ್ದಾರೆ.

ಸೇವಾ ತಂತ್ರಜ್ಞ ವಿವಿಧ ಸಲಹಾ ಪಾತ್ರಗಳನ್ನು ಒಳಗೊಂಡಂತೆ ಕನಿಷ್ಠ ಐದು ಹುದ್ದೆಗಳು ಮುಂಬೈ ಮತ್ತು ದೆಹಲಿ ಎರಡರಲ್ಲೂ ಲಭ್ಯವಿದ್ದರೆ, ಗ್ರಾಹಕ ಎಂಗೇಜ್‌ಮೆಂಟ್ ಮ್ಯಾನೇಜರ್ ಮತ್ತು ಡೆಲಿವರಿ ಆಪರೇಷನ್ ಸ್ಪೆಷಲಿಸ್ಟ್‌ನಂತಹ ಉಳಿದ ತೆರೆಯುವಿಕೆಗಳು ಮುಂಬೈಗೆ ಇದ್ದವು. ಭಾರತದಲ್ಲಿ ಹೆಚ್ಚಿನ ಆಮದು ಸುಂಕಗಳ ಮೇಲಿನ ಕಾಳಜಿಯಿಂದಾಗಿ ಕಾರು ತಯಾರಕರು ದಕ್ಷಿಣ ಏಷ್ಯಾದ ರಾಷ್ಟ್ರದಿಂದ ದೂರ ಉಳಿದಿದ್ದರು. ಭಾರತವು ಈಗ 40,000 ಕ್ಕಿಂತ ಹೆಚ್ಚಿನ ಬೆಲೆಯ ಉನ್ನತ-ಮಟ್ಟದ ಕಾರುಗಳ ಮೇಲಿನ ಮೂಲ ಕಸ್ಟಮ್ಸ್ ಸುಂಕವನ್ನು ಶೇ. 110 ರಿಂದ 70 ಕ್ಕೆ ಇಳಿಸಿದೆ. ಚೀನಾದ 11 ಮಿಲಿಯನ್‌ಗೆ ಹೋಲಿಸಿದರೆ ಕಳೆದ ವರ್ಷ ಭಾರತದ ಎಲೆಕ್ಟ್ರಿಕ್ ಕಾರು ಮಾರಾಟವು 100,000 ಯುನಿ ಟ್‌ಗಳ ಸಮೀಪದಲ್ಲಿದೆ.

ಕಳೆದ ವಾರ ವಾಷಿಂಗ್ಟನ್‌ನಲ್ಲಿ ಮಸ್ಕ್ ಮತ್ತು ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರೊಂದಿಗಿನ ಪ್ರಧಾನಿ ಮೋದಿಯವರ ಭೇಟಿಯನ್ನು ಟೆಸ್ಲಾ ಅವರ ಭಾರತದ ಉದ್ದೇಶವು ಅನುಸರಿಸುತ್ತದೆ. ಅಂತಿಮವಾಗಿ ಎಫ್-35 ಫೈಟರ್ ಜೆಟ್‌ಗಳನ್ನು ಪೂರೈಸುವ ಕ್ರಮಗಳು ಸೇರಿದಂತೆ ಯುಎಸ್ ಮಿಲಿಟರಿ ಖರೀದಿಗಳನ್ನು ಹೆಚ್ಚಿಸಲು ಯುಎಸ್ ವ್ಯಾಪಾರ ಕೊರತೆಯನ್ನು ಪರಿಹರಿಸಲು ಮಾತುಕತೆಗಳನ್ನು ಪ್ರಾರಂಭಿಸಲು ಪ್ರಧಾನಿ ಮೋದಿ ಒಪ್ಪಿಕೊಂಡಿದ್ದಾರೆ ಎಂದು ಟ್ರಂಪ್ ನಂತರ ಹೇಳಿದರು.



# ಈ ಸುಂದರಿಗೆ ಮುಳುವಾಯ್ತು ಮದುವೆ



18ನೇ ವಯಸಿಗೆ ಮದುವೆ, 21ಕ್ಕೆ ಸಾವು

ದಿವ್ಯಾ ಅವರು ಜನಿಸಿದ್ದು 1974ರಲ್ಲಿ. ಅವರಿಗೆ ಚಿತ್ರರಂಗದ ಯಾವುದೇ ಹಿನ್ನೆಲೆ ಇರಲಿಲ್ಲ. ಅವರು 14 ವರ್ಷ ಇದ್ದಾಗ ನಿರ್ಮಾಪಕ ನಂದು ತೊಲಾನಿ ಅವರು ನಟಿಯನ್ನು ಗುರುತಿಸಿದರು. ಇಬ್ಬರೂ ಸಿನಿಮಾ ಮಾಡಬೇಕಿತ್ತು. ಆದರೆ, ಸಿನಿಮಾ ರದ್ದಾಯಿತು. ಆದರೆ, ದಿವ್ಯಾ ಅವರು ಅನೇಕ ನಿರ್ಮಾಪಕರ ಕಣ್ಣು ಕುಕ್ಕಿದರು. 1990ರಲ್ಲಿ ಅವರು ಚಿತ್ರರಂಗಕ್ಕೆ ಕಾಲಿಟ್ಟರು. ಆಗಿನ್ನೂ ಅವರಿಗೆ 16 ವರ್ಷ. ಯಶಸ್ಸಿನ ಬೆನ್ನಲ್ಲೆ ಅವಸಾನವೂ ಆಗಿ ಹೋದರು. ದಿವ್ಯಾ ಓಂ ಪ್ರಕಾಶ್ ಭಾರತಿ ಅವರು ದಿವ್ಯಾ ಭಾರತಿ ಎಂದೇ ಫೇಮಸ್ ಆಗಿದ್ದರು. ಅವರು ಸಣ್ಣ ವಯಸ್ಸಿನಲ್ಲೇ ಬಾಲಿವುಡ್ನಲ್ಲಿ ಮಿಂಚಿದರು. ತಮ್ಮ ಮುಗ್ಧ ನೋಟದಿಂದ ಎಲ್ಲಾರ ಗಮನ ಸೆಳೆದರು. ಆದರೆ, ಮೂರೇ ವರ್ಷಗಳಲ್ಲಿ ಅವರು ಬಣ್ಣದ ಲೋಕ ತೊರೆಯಬೇಕಾಯಿತು. ಅವರು ಏಪ್ರಿಲ್ 5ರ 1993ರಲ್ಲಿ ಮೃತಪಟ್ಟರು. ಈ ನಟಿ ಬಾಲಿವುಡ್ನ ಖ್ಯಾತ ನಿರ್ಮಾಪಕ ಸಾಜಿದ್ ನಾಡಿಯಾದ್ವಾಲ ಅವರನ್ನು ಮದುವೆ ಆಗಿದ್ದರು. ದಿವ್ಯಾ ಅವರು ಜನಿಸಿದ್ದು 1974ರಲ್ಲಿ. ಅವರಿಗೆ ಚಿತ್ರರಂಗದ ಯಾವುದೇ ಹಿನ್ನೆಲೆ ಇರಲಿಲ್ಲ. ಅವರು 14 ವರ್ಷ ಇದ್ದಾಗ ನಿರ್ಮಾಪಕ ನಂದು ತೊಲಾನಿ ಅವರು ನಟಿಯನ್ನು ಗುರುತಿಸಿದರು. ಇಬ್ಬರೂ ಸಿನಿಮಾ ಮಾಡಬೇಕಿತ್ತು. ಆದರೆ, ಸಿನಿಮಾ ರದ್ದಾಯಿತು. ಆದರೆ, ದಿವ್ಯಾ ಅವರು ಅನೇಕ ನಿರ್ಮಾಪಕರ ಕಣ್ಣು ಕುಕ್ಕಿದರು. 1990ರಲ್ಲಿ ಅವರು ಚಿತ್ರರಂಗಕ್ಕೆ ಕಾಲಿಟ್ಟರು. ಆಗಿನ್ನೂ ಅವರಿಗೆ 16 ವರ್ಷ. ದಕ್ಷಿಣದಲ್ಲಿ ಅವರಿಗೆ ಮೊದಲು ಅವಕಾಶ ಸಿಕ್ಕಿತು. ಅವರು 1992ರಲ್ಲಿ ಹಿಂದಿ ಚಿತ್ರರಂಗಕ್ಕೆ ಕಾಲಿಟ್ಟರು. 'ವಿಶ್ವಾತ್ಮ' ಸಿನಿಮಾದಲ್ಲಿ ಸನ್ನಿ ಡಿಯೋಲ್ ಜೊತೆ ಅವರು ನಟಿಸಿದರು. ಅವರು ಮೂರು ವರ್ಷಗಳಲ್ಲಿ 21 ಸಿನಿಮಾ ಮಾಡಿದರು.

# ಮದರಾಸಿ ಟೈಟಲ್ ಫಿಕ್ಸ್



ಆಕ್ಷನ್ ಪ್ಯಾಕ್ಡ್ ಗ್ಲಿಂಪ್ಸ್ ಅನಾವರಣ

ಅಮರನ್ ಬ್ಲಾಕ್ ಬಸ್ಟರ್ ಸಕ್ಸಸ್ ಬಳಿಕ ಶಿವಕಾರ್ತಿಕೇಯನ್ ಸಾಲು ಸಾಲು ಸಿನಿಮಾಗಳನ್ನು ಒಪ್ಪಿಕೊಳ್ಳುತ್ತಿದ್ದಾರೆ. ಇದೀಗ ಅವರ ಮದರಾಸಿ ಎಂಬ ಹೊಸ ಚಿತ್ರ ಘೋಷಣೆಯಾಗಿದೆ. ಮೊದಲ ಬಾರಿಗೆ ಶಿವಕಾರ್ತಿಕೇಯನ್ ಎ.ಆರ್.ಮುರುಗದಾಸ್ ಜೊತೆ ಕೈ ಜೋಡಿಸಿದ್ದಾರೆ. ಇವರಿಬ್ಬರ ಕಾಂಬಿನೇಷನ್ ಹೊಸ ಚಿತ್ರಕ್ಕೆ ಮದರಾಸಿ ಎಂಬ ಕ್ಯಾಚಿ ಟೈಟಲ್ ಇಡಲಾಗಿದೆ.. ಇಂದು ಶಿವಕಾರ್ತಿಕೇಯನ್ ಜನ್ಮದಿನ. ಅವರ ಹುಟ್ಟುಹಬ್ಬದ ಪ್ರಯುಕ್ತ ಮದರಾಸಿ ಸಿನಿಮಾದ ಆಕ್ಷನ್ ಪ್ಯಾಕ್ಡ್ ಗ್ಲಿಂಪ್ಸ್ ಅನಾವರಣ ಮಾಡಲಾಗಿದೆ. ಮಾಸ್ ಅವತಾರದಲ್ಲಿ ಶಿವಕಾರ್ತಿಕೇಯನ್ ಅಬ್ಬರಿಸಿದ್ದು, ಟೀಸರ್ ಪ್ರಾಮಿಸಿಂಗ್ ಆಗಿದೆ. ಸುದೀಪ್ ಎಲಾಮನ್ ಕ್ಯಾಮೆರಟ ವರ್ಕ್, ರಾಕ್ ಸ್ಟಾರ್ ಅನಿರುದ್ಧ್ ರವಿಚಂದರ್ ಗ್ಲಿಂಪ್ಸ್ ಶ್ರೀಮಂತಿಕೆ ಹೆಚ್ಚಿಸಿದೆ. ಶಿವಕಾರ್ತಿಕೇಯನ್ ಗೆ ಜೋಡಿಯಾಗಿ ರುಕ್ಮಿಣಿ ವಸಂತ್ ಸಾಥ್ ಕೊಟ್ಟಿದ್ದಾರೆ.

# ರಶ್ಮಿಕಾಗೆ ಮತ್ತೆ ಬಂಪರ್ ಆಫರ್



ಸ್ಟಾರ್ ನಟನೊಟ್ಟಿಗೆ ಸಿನಿಮಾದಲ್ಲಿ ನಟನೆ

ನಟಿ ರಶ್ಮಿಕಾ ಮಂದಣ್ಣ ಅದೃಷ್ಟ ನಟಿಯೆಂದು ಹೆಸರಾಗಿದ್ದಾರೆ. ರಶ್ಮಿಕಾ ನಟನೆಯ ಕಳೆದ ಮೂರು ಸಿನಿಮಾಗಳು ಬ್ಲಾಕ್ ಬಸ್ಟರ್ ಆಗಿವೆ. 'ಅನಿಮಲ್', 'ಪುಷ್ಪ 2' ಇದೀಗ 'ಛಾವಾ'. ಈಗ ರಶ್ಮಿಕಾ ಮತ್ತೊಮ್ಮೆ 'ಪುಷ್ಪ 2' ನಿರ್ದೇಶಕರ ಸಿನಿಮಾದಲ್ಲಿ ನಟಿಸುವ ಅವಕಾಶ ಗಿಟ್ಟಿಸಿಕೊಂಡಿದ್ದಾರೆ. ಸ್ಟಾರ್ ಹೀರೋ ಈ ಸಿನಿಮಾದ ನಾಯಕ.

ರಶ್ಮಿಕಾ ಮಂದಣ್ಣ ಅದೃಷ್ಟದ ನಟಿ. ಕನ್ನಡದ ಸಿನಿಮಾದಿಂದ ನಟನಾ ವೃತ್ತಿ ಆರಂಭಿಸಿದ ಕೊಡಗಿನ ಚೆಲುವೆ ರಶ್ಮಿಕಾ ಮಂದಣ್ಣ ಈಗ ತೆಲುಗು ಚಿತ್ರರಂಗ ಹಾಗೂ ಬಾಲಿವುಡ್‌ನಲ್ಲಿ ಸಖತ್ ಆಗಿ ಮಿಂಚುತ್ತಿದ್ದಾರೆ. ಅದೃಷ್ಟದ ನಟಿ ಎಂದೇ ಹೆಸರುಪಡೆದುಕೊಂಡಿದ್ದಾರೆ ರಶ್ಮಿಕಾ ಮಂದಣ್ಣ. ಇತ್ತೀಚೆಗಂತೂ ರಶ್ಮಿಕಾ ಮಂದಣ್ಣ ನಟಿಸಿದ ಎಲ್ಲಾ ಸಿನಿಮಾಗಳು ಬ್ಲಾಕ್ ಬಸ್ಟರ್ ಆಗುತ್ತಿವೆ. 'ಅನಿಮಲ್', 'ಪುಷ್ಪ 2' ಈಗ 'ಛಾವಾ' ಸಿನಿಮಾಗಳು ಭಾರಿ ದೊಡ್ಡ ಕಲೆಕ್ಷನ್ ಮಾಡಿವೆ.

# ಈಡಿಯಟ್ಸ್ ಚಿತ್ರಕ್ಕೆ ಅನುಷ್ಕಾ ಆಡಿಷನ್



ನಟಿ ಅನುಷ್ಕಾ ಶರ್ಮಾ ಕೊಹ್ಲಿಯ ಮದುವೆಯಾಗಿ ಎರಡು ಮಕ್ಕಳ ತಾಯಾದ ಬಳಿಕ ಚಿತ್ರರಂಗದಿಂದ ದೂರವೇ ಉಳಿದಿದ್ದಾರೆ. ಅನುಷ್ಕಾ ನಾಯಕಿಯಾಗಿ ಮೊದಲು ನಟಿಸಿದ್ದು ಶಾರುಖ್ ಖಾನ್ ನಟನೆಯ 'ರಬ್ ನೇ ಬನಾದಿ ಜೋಡಿ' ಸಿನಿಮಾದಲ್ಲಿ. ಅಸಲಿಗೆ ಆಮಿರ್ ಖಾನ್ ನಟನೆಯ '3 ಇಡಿಯಟ್ಸ್' ಸಿನಿಮಾಕ್ಕೂ ಅನುಷ್ಕಾ ಶರ್ಮಾ ಆಡಿಷನ್ ಕೊಟ್ಟಿದ್ದರು. ಆದರೆ ಆಯ್ಕೆ ಆಗಲಿಲ್ಲ. ಅನುಷ್ಕಾ ಶರ್ಮಾ ಅವರು ಚಿತ್ರರಂಗದಲ್ಲಿ ಅಷ್ಟಾಗಿ ಆಕ್ಟೀವ್ ಆಗಿಲ್ಲ. ಇದು ಅವರ ಅಭಿಮಾನಿಗಳಿಗೆ ಬೇಸರ ಮೂಡಿಸಿದೆ. ಅವರು ಮತ್ತೆ ನಟನೆಗೆ ಮರಳೋದು ಅನುಮಾನ ಎಂದೇ ಹೇಳಲಾಗುತ್ತಿದೆ. ಸದ್ಯ ಪತಿ ವಿರಾಟ್ ಕೊಹ್ಲಿ ಜೊತೆ ಸೇರಿ ಅವರು ಲಂಡನ್ನಲ್ಲಿ ಸೆಟಲ್ ಆಗುವ ಪ್ಲ್ಯಾನ್ ನಲ್ಲಿ ಇದ್ದಾರೆ. ಅವರ ಮಕ್ಕಳಿಗೂ ಅಲ್ಲಿಯೇ ಶಿಕ್ಷಣ ಕೊಡಿಸುವ ಆಲೋಚನೆ ಇದೆ. ಹೀಗಿರುವಾಗಲೇ ಅವರ ಹಳೆಯ ವಿಡಿಯೋ ಒಂದು ವೈರಲ್ ಆಗಿದೆ. ಈ ವಿಡಿಯೋದಲ್ಲಿ ಅವರು ಒಂದು ಅಚ್ಚರಿಯ ವಿಚಾರ ರಿವೀಲ್ ಮಾಡಿದ್ದರು. 2009ರಲ್ಲಿ '3 ಈಡಿಯಟ್ಸ್' ಸಿನಿಮಾ ಬಂತು. ಈ ಚಿತ್ರದಲ್ಲಿ ಪಿಯಾ ಸಹಸ್ರಬುದ್ಧೆ ಪಾತ್ರವನ್ನು ಮಾಡಲು ಅನುಷ್ಕಾ ಅವರು ಆಡಿಷನ್ ನೀಡಿದ್ದರು. ಆದರೆ, ಅವರು ಸೆಲೆಕ್ಟ್ ಆಗಲೇ ಇಲ್ಲ. ಈ ಪಾತ್ರ ಕರೀನಾ ಕಪೂರ್ ಖಾನ್ ಕೈ ಸೇರಿತ್ತು. ಈ ವಿಚಾರವನ್ನು 'ಪಿಕೆ' ಸಿನಿಮಾ ಸಂದರ್ಭದಲ್ಲಿ ಅನುಷ್ಕಾ ರಿವೀಲ್ ಮಾಡಿದ್ದರು.

ಮತ್ತೆ ನಟನೆಗೆ ಮರಳೋದು ಅನುಮಾನ

ಅನುಷ್ಕಾ ಅವರು ಆಡಿಷನ್ ನೀಡಿದ ವಿಡಿಯೋನ ರಾಜ್ಕುಮಾರ್ ಹಿರಾನಿ ಹಾಗೂ ಆಮಿರ್ ಖಾನ್ ಎದುರು ಪ್ರದರ್ಶನ ಮಾಡಲಾಯಿತು. ಅನುಷ್ಕಾ ಅವರು ಅದ್ಭುತವಾಗಿ ನಟಿಸಿದ್ದರು. ಅನುಷ್ಕಾ ಅವರನ್ನು ಏಕೆ ಈ ಪಾತ್ರಕ್ಕೆ ಆಯ್ಕೆ ಮಾಡಿಲ್ಲ ಎಂದು ಆಮಿರ್ ಖಾನ್ ಅವರೇ ಅಚ್ಚರಿಪಟ್ಟಿದ್ದರು. ಈ ಬಗ್ಗೆ ಅವರು ರಾಜ್ಕುಮಾರ್ ಹಿರಾನಿ ಅವರನ್ನು ಕೂಡ ಕೇಳಿದರು. ರಾಜ್ಕುಮಾರ್ ಹಿರಾನಿ ಅವರಿಗೆ ಈ ವಿಚಾರ ಗೊತ್ತೇ ಇರಲಿಲ್ಲ. ಅವರು ಕೂಡ ಶಾಕ್ ಆದರು. 'ನಾನು ಅನುಷ್ಕಾನ ಸಂದರ್ಶಿಸಿದ್ದೇನೆ' ಎಂಬ ರೀತಿಯಲ್ಲಿ ಇತ್ತು ಅವರ ನೋಟ. 2007ರಲ್ಲಿ ಅನುಷ್ಕಾ ಸಂದರ್ಶನ ನೀಡಿದ್ದರು.

# ಹೆಡ್ ಬುಷ್ ಡೈರೆಕ್ಟರ್ ಇದೀಗ ಹೀರೋ



ಮುಖಿ ಮತ್ತು ಶೂನ್ಯ ಜೊತೆಗೂಡಿ ನಿರ್ಮಾಣ

ಹೆಡ್ ಬುಷ್ ಮತ್ತು ರೋಸಿ ಸಿನಿಮಾಗಳ ಸೂತ್ರಧಾರ ಶೂನ್ಯ ಈಗ ಹೀರೋ ಆಗಿ ಅದೃಷ್ಟ ಪರೀಕ್ಷೆಗಿಳಿಯುತ್ತಿದ್ದಾರೆ. ಸದ್ಯ ಲೂಸ್ ಮಾದ ಯೋಗಿ 50ನೇ ಚಿತ್ರ ರೋಸಿ ನಿರ್ದೇಶನದಲ್ಲಿ ಬ್ಯುಸಿಯಾಗಿ ಅವರು ಈ ಮಧ್ಯೆ 'ಲಾರ್ಡ್ ಗಾಗಾ' ಎಂಬ ಹೊಸ ಸಿನಿಮಾ ಘೋಷಣೆ ಮಾಡಿದ್ದಾರೆ. ಆದರೆ ನಿರ್ದೇಶನ ಪಕ್ಕಕ್ಕಿಟ್ಟು ಶೂನ್ಯ ಲಾರ್ಡ್ ಗಾಗಾ ಮೂಲಕ ನಾಯಕನಾಗಿ ಬಣ್ಣ ಹಚ್ಚುತ್ತಿದ್ದಾರೆ. ಶೂನ್ಯ ನಾಯಕನಾಗಿ ನಟಿಸುತ್ತಿರುವ ಚೊಚ್ಚಲ ಸಿನಿಮಾಗೆ ಲಾರ್ಡ್ ಗಾಗಾ ಎಂಬ ವಿಭಿನ್ನ ಶೀರ್ಷಿಕೆ ಇಡಲಾಗಿದೆ. ಪ್ರೇಮಿಗಳ ದಿನವಾದ ಇಂದು ಚಿತ್ರದ ಟೈಟಲ್ ರಿವೀಲ್ ಮಾಡಲಾಗಿದೆ. ಈ ಹಿಂದೆ ಗಿಲ್ಕಿ ಎಂಬ ಸಿನಿಮಾ ನಿರ್ದೇಶನ ಮಾಡಿದ್ದ ವೈಕೆ ಲಾರ್ಡ್ ಗಾಗಾ ಸಿನಿಮಾ ಮೂಲಕ ಹೊಸಬಗೆ ಹರವಿಡೋದಿಕ್ಕೆ ಹೊರಟ್ಟಿದ್ದಾರೆ. ಲಾರ್ಡ್ ಗಾಗಾ ಸಿನಿಮಾಗೆ ಶೂನ್ಯ ಬರೀ ಪಾತ್ರಧಾರ ಅಷ್ಟೇ ಅಲ್ಲ, ನಿರ್ಮಾಪಕರು ಕೂಡ.

ತಮ್ಮ ಗೆಳೆಯ ಮುಖಿ ಜೊತೆಗೂಡಿ ತಮ್ಮದೇ ಝೀರೋ ಗ್ರಾವಿಟಿ ಫಿಲ್ಮಂ ಪ್ರೊಡಕ್ಷನ್ ಹೌಸ್ ಪ್ರಾರಂಭಿಸಿದ್ದಾರೆ. ಈ ನಿರ್ಮಾಣ ಸಂಸ್ಥೆಯಡಿ ಲಾರ್ಡ್ ಗಾಗಾ ಚಿತ್ರವನ್ನು ಮುಖಿ ಮತ್ತು ಶೂನ್ಯ ಜೊತೆಗೂಡಿ ನಿರ್ಮಾಣ ಮಾಡುತ್ತಿದ್ದಾರೆ. ಒಂದಷ್ಟು ಸಿನಿಮೋತ್ಸಾಹಿಗಳೇ ಸೇರಿ ತಯಾರಿಸುತ್ತಿರುವ ಲಾರ್ಡ್ ಗಾಗಾ ಸಿನಿಮಾಗೆ ಯುವ ಪ್ರತಿಭೆ ಹೇಮಂತ್ ಕುಮಾರ್ ಸಂಗೀತ ನಿರ್ದೇಶನ ಮಾಡಲಿದ್ದು, ಜೀವನ್ ಕ್ಯಾಮೆರಾ ಹಿಡಿಯಲಿದ್ದಾರೆ.

# ಚಾಂಪಿಯನ್ಸ್ ಟ್ರೋಫಿ ಟೂರ್ನಿಯಿಂದ 13 ಆಟಗಾರರು ಔಟ್

ಚಾಂಪಿಯನ್ಸ್ ಟ್ರೋಫಿ ಏಕದಿನ ಟೂರ್ನಿಯು ಫೆಬ್ರವರಿ 19 ರಿಂದ ಮಾರ್ಚ್ 9 ರವರೆಗೆ ನಡೆಯಲಿದೆ. ಪಾಕಿಸ್ತಾನ್ ಕ್ರಿಕೆಟ್ ಬೋರ್ಡ್ ಆಯೋಜಿಸುತ್ತಿರುವ ಈ ಟೂರ್ನಿಯಿಂದ ಒಟ್ಟು 13 ಆಟಗಾರರು ಹೊರಗುಳಿದಿದ್ದಾರೆ. ಇವರಲ್ಲಿ 9 ಮಂದಿ ಬೌಲರ್‌ಗಳು ಎಂಬುದು ವಿಶೇಷ.

ಈ ಬಾರಿಯ ಚಾಂಪಿಯನ್ಸ್ ಟ್ರೋಫಿಗೆ ಅಲಭ್ಯರಾಗಿರುವ ಪ್ರಮುಖ ಆಟಗಾರರ ಪಟ್ಟಿ ಈ ಕೆಳಗಿನಂತಿದೆ... ಬಹುನಿರೀಕ್ಷಿತ ಚಾಂಪಿಯನ್ಸ್ ಟ್ರೋಫಿ ಟೂರ್ನಿಯಿಂದ 13 ಆಟಗಾರರು ಹೊರಬಿದ್ದಿದ್ದಾರೆ. ಈ ಹತ್ತು ಆಟಗಾರರಲ್ಲಿ ಬಹುತೇಕರು ಬೌಲರ್‌ಗಳು ಎಂಬುದು ವಿಶೇಷ. ಇನ್ನು ಕೆಲ ಆಲ್‌ರೌಂಡರ್‌ಗಳು ಸಹ ಇದ್ದಾರೆ. ಹೀಗೆ ಗಾಯಗೊಂಡು ಹಾಗೂ ಇನ್ನಿತರೆ ಕಾರಣಗಳಿಂದ ಈ ಬಾರಿಯ ಚಾಂಪಿಯನ್ಸ್ ಟ್ರೋಫಿಯಿಂದ ಹಿಂದೆ ಸರಿದಿರುವ ಆಟಗಾರರ ಸಂಪೂರ್ಣ ಪಟ್ಟಿ ಇಲ್ಲಿದೆ...



ಬಹುತೇಕರು ಬೌಲರ್‌ಗಳು ಎಂಬುದು ವಿಶೇಷ

**ಪ್ಯಾಟ್ ಕಮಿನ್ಸ್:** ಆಸ್ಟ್ರೇಲಿಯಾ ತಂಡದ ನಾಯಕ ಪ್ಯಾಟ್ ಕಮಿನ್ಸ್ ಮುಂಬರುವ ಚಾಂಪಿಯನ್ಸ್ ಟ್ರೋಫಿಯಲ್ಲಿ ಕಣಕ್ಕಿಳಿಯುತ್ತಿಲ್ಲ. ಪಾದದ ನೋವಿನ ಕಾರಣ ಅವರು ಪಾಕಿಸ್ತಾನದಲ್ಲಿ ನಡೆಯಲಿರುವ ಚಾಂಪಿಯನ್ಸ್ ಟ್ರೋಫಿಯಿಂದ ಹೊರಗುಳಿದಿದ್ದಾರೆ.

**ಜೆರಾಲ್ಡ್ ಕೋಟ್ಜಿ:** ಸೌತ್ ಆಫ್ರಿಕಾ ತಂಡದ ಬಲಗೈ ವೇಗದ ಬೌಲರ್ ಜೆರಾಲ್ಡ್ ಕೋಟ್ಜಿ ಸಹ ಮುಂಬರುವ ಚಾಂಪಿಯನ್ಸ್ ಟ್ರೋಫಿಯಲ್ಲಿ ಕಾಣಿಸಿಕೊಳ್ಳುವುದಿಲ್ಲ. ತೊಡೆ ಸಂದು ಬಿಗಿತದ ಸಮಸ್ಯೆಯಿಂದ ಬಳಲುತ್ತಿರುವ ಅವರು ಟೂರ್ನಿಯಿಂದ ಹಿಂದೆ ಸರಿದಿದ್ದಾರೆ.

**ಸೈಮ್ ಅಯ್ಯೂಬ್:** ಪಾಕಿಸ್ತಾನ್ ತಂಡದ ಆರಂಭಿಕ ಆಟಗಾರ ಸೈಮ್ ಅಯ್ಯೂಬ್ ಕಣಕಾಲು ಗಾಯದ ಸಮಸ್ಯೆಯಿಂದ ಬಳಲುತ್ತಿದ್ದಾರೆ. ಹೀಗಾಗಿ ಚಾಂಪಿಯನ್ಸ್ ಟ್ರೋಫಿ ಪಾಕ್‌ತಂಡದಿಂದ ಸೈಮ್ ಅವರನ್ನು ಕೈ ಬಿಡಲಾಗಿದೆ.

**ಜೋಶ್ ಹ್ಯಾಝಲ್‌ವುಡ್:** ಆಸ್ಟ್ರೇಲಿಯಾ ತಂಡದ ಪ್ರಮುಖ ವೇಗಿ ಜೋಶ್ ಹ್ಯಾಝಲ್‌ವುಡ್ ಕೂಡ ಚಾಂಪಿಯನ್ಸ್ ಟ್ರೋಫಿಯಿಂದ ಹಿಂದೆ ಸರಿದಿದ್ದಾರೆ. ಕಣಕಾಲಿನ ನೋವಿನ ಸಮಸ್ಯೆಯಿಂದ ಬಳಲುತ್ತಿರುವ ಅವರು ಮುಂಬರುವ ಐಸಿಸಿ ಟೂರ್ನಿಯಿಂದ ಹೊರಗುಳಿಯಲು ನಿರ್ಧರಿಸಿದ್ದಾರೆ.

**ಬೆನ್ ಸಿಯರ್ಸ್:** ನ್ಯೂಝಿಲೆಂಡ್ ತಂಡದ ವೇಗಿ ಬೆನ್ ಸಿಯರ್ಸ್ ಅವರು ಮಂಡಿರಜ್ಜು ಗಾಯದ ಸಮಸ್ಯೆಯಿಂದ ಬಳಲುತ್ತಿದ್ದಾರೆ. ಹೀಗಾಗಿ ಈ ಬಾರಿಯ ಚಾಂಪಿಯನ್ಸ್ ಟ್ರೋಫಿಯಿಂದ ಕಿವೀಸ್ ವೇಗಿ ಹಿಂದೆ ಸರಿದಿದ್ದಾರೆ.

**ಮಿಚೆಲ್ ಸ್ಟಾರ್ಕ್:** ಆಸ್ಟ್ರೇಲಿಯಾ ತಂಡದ ಎಡಗೈ ವೇಗಿ ಮಿಚೆಲ್ ಸ್ಟಾರ್ಕ್ ಸಹ ಮುಂಬರುವ ಚಾಂಪಿಯನ್ಸ್ ಟ್ರೋಫಿಯಲ್ಲಿ ಕಣಕ್ಕಿಳಿಯುವುದಿಲ್ಲ. ವೈಯುಕ್ತಿಕ ಕಾರಣಗಳಿಂದಾಗಿ ಅವರು ಟೂರ್ನಿಯಿಂದ ಹಿಂದೆ ಸರಿದಿದ್ದಾರೆ.

**ಜೇಕಬ್ ಬೆಥೆಲ್:** ಇಂಗ್ಲೆಂಡ್ ತಂಡದ ಯುವ ಆಲ್‌ರೌಂಡರ್ ಜೇಕಬ್ ಬೆಥೆಲ್ ಕೂಡ ಚಾಂಪಿಯನ್ಸ್ ಟ್ರೋಫಿಯಿಂದ ಹೊರಬಿದ್ದಿದ್ದಾರೆ. ಮಂಡಿರಜ್ಜು ಗಾಯದ ಸಮಸ್ಯೆಯ ಕಾರಣ ಬೆಥೆಲ್ ಫೆಬ್ರವರಿ 19 ರಿಂದ ಶುರುವಾಗಲಿರುವ ಚಾಂಪಿಯನ್ಸ್ ಟ್ರೋಫಿಗೆ ಅಲಭ್ಯರಾಗಿದ್ದಾರೆ.

**ಅನ್ರಿಕ್ ನೋಕಿಯ:** ಸೌತ್ ಆಫ್ರಿಕಾ ತಂಡದ ವೇಗದ ಬೌಲರ್ ಅನ್ರಿಕ್ ನೋಕಿಯ ಕೂಡ ಚಾಂಪಿಯನ್ಸ್ ಟ್ರೋಫಿಗೆ ಅಲಭ್ಯರಾಗಿದ್ದಾರೆ. ಬೆನ್ನು ನೋವಿನ ಕಾರಣ ಅವರು ಟೂರ್ನಿಯಿಂದ ಹಿಂದೆ ಸರಿದಿದ್ದಾರೆ.

**ಮಿಚೆಲ್ ಮಾರ್ಷ್:** ಆಸ್ಟ್ರೇಲಿಯಾ ತಂಡದ ಆಲ್‌ರೌಂಡರ್ ಮಿಚೆಲ್ ಮಾರ್ಷ್ ಬೆನ್ನು ನೋವಿನ ಸಮಸ್ಯೆಯಿಂದ ಬಳಲುತ್ತಿದ್ದಾರೆ. ಹೀಗಾಗಿ ಅವರು ಸಹ ಆಸ್ಟ್ರೇಲಿಯಾ ತಂಡದಿಂದ ಹೊರಗುಳಿದಿದ್ದಾರೆ. ಹೀಗಾಗಿ ಈ ಬಾರಿಯ ಐಸಿಸಿ ಚಾಂಪಿಯನ್ಸ್ ಟ್ರೋಫಿಗೆ ಅಲಭ್ಯರಾಗಿದ್ದಾರೆ.

**ಅಲ್ಲಾ ಗಝನ್‌ಫರ್:** ಅಫ್ಘಾನಿಸ್ತಾನ್ ತಂಡದ ಯುವ ಸ್ಪಿನ್ನರ್ ಅಲ್ಲಾ ಗಝನ್‌ಫರ್ ಅವರು ಸಹ ಗಾಯಗೊಂಡಿದ್ದು, ಹೀಗಾಗಿ ಮುಂಬರುವ ಚಾಂಪಿಯನ್ಸ್ ಟ್ರೋಫಿ ಹಾಗೂ ಐಪಿಎಲ್‌ನಿಂದ ಹಿಂದೆ ಸರಿದಿದ್ದಾರೆ.

**ಲಾಕಿ ಫರ್ಗುಸನ್:** ನ್ಯೂಝಿಲೆಂಡ್ ತಂಡದ ವೇಗದ ಬೌಲರ್ ಲಾಕಿ ಫರ್ಗುಸನ್ ಕೂಡ ಚಾಂಪಿಯನ್ಸ್ ಟ್ರೋಫಿಯಿಂದ ಹೊರಗುಳಿದಿದ್ದಾರೆ. ಪಾದದ ಗಾಯದ ಕಾರಣ ಫರ್ಗುಸನ್ ತಂಡದಿಂದ ಹೊರಬಿದ್ದಿದ್ದು, ಹೀಗಾಗಿ ಈ ಬಾರಿಯ ಚಾಂಪಿಯನ್ಸ್ ಟ್ರೋಫಿಯಲ್ಲಿ ಲಾಕಿ ಕಾಣಿಸಿಕೊಳ್ಳುವುದಿಲ್ಲ.

**ಮಾರ್ಕಸ್ ಸ್ಟೊಯಿನಿಸ್:** ಆಸೀಸ್ ಪಡೆಯ ಆಲ್‌ರೌಂಡರ್ ಮಾರ್ಕಸ್ ಸ್ಟೊಯಿನಿಸ್ ಅಚ್ಚರಿ ಎಂಬಂತೆ ಕೆಲ ದಿನಗಳ ಹಿಂದೆ ಏಕದಿನ ಕ್ರಿಕೆಟ್‌ಗೆ ನಿವೃತ್ತಿ ಘೋಷಿಸಿದ್ದಾರೆ. ಹೀಗಾಗಿ ಈ ಬಾರಿಯ ಚಾಂಪಿಯನ್ಸ್ ಟ್ರೋಫಿ ಟೂರ್ನಿಯಲ್ಲಿ ಮಾರ್ಕಸ್ ಸ್ಟೊಯಿನಿಸ್ ಕಾಣಿಸಿಕೊಳ್ಳುವುದಿಲ್ಲ.

**ಬುಮ್ರಾ:** ಬೆನ್ನು ನೋವಿನ ಸಮಸ್ಯೆಯ ಕಾರಣ ಟೀಮ್ ಇಂಡಿಯಾ ವೇಗಿ ಜಸ್‌ಪ್ರೀತ್ ಬುಮ್ರಾ ಸಹ ಚಾಂಪಿಯನ್ಸ್ ಟ್ರೋಫಿಯಿಂದ ಹೊರಗುಳಿದಿದ್ದಾರೆ. ಬುಮ್ರಾ ಅವರ ಅಲಭ್ಯತೆಯು ಭಾರತ ತಂಡದ ಪಾಲಿಗೆ ಹಿನ್ನಡೆಯನ್ನು ಉಂಟು ಮಾಡಲಿದೆ.

# ಸೌತ್‌ನತ್ತ ಮುಖ ಮಾಡಿದ ಡೆಲ್ಲಿ ಕ್ಯಾಪಿಟಲ್ಸ್

ಡೆಲ್ಲಿ ಕ್ಯಾಪಿಟಲ್ಸ್ ತಂಡವು ಆಂಧ್ರಪ್ರದೇಶದ ವಿಶಾಖಪಟ್ಟಣದ ವೈಎಸ್‌ಆರ್ ಸ್ಟೇಡಿಯಂನಲ್ಲಿ ಒಂದು ಪಂದ್ಯವಾಡಿತ್ತು. ಇದಕ್ಕೆ ಮುಖ್ಯ ಕಾರಣ ಕಳೆದ ಬಾರಿ ವುಮೆನ್ಸ್ ಪ್ರೀಮಿಯರ್ ಲೀಗ್‌ನ ನಾಕೌಟ್ ಪಂದ್ಯಗಳನ್ನು ದೆಹಲಿಯ ಅರುಣ್ ಜೇಟ್ಲಿ ಸ್ಟೇಡಿಯಂನಲ್ಲಿ ಆಯೋಜನೆಗೊಂಡಿರುವುದು. ಅಂದರೆ ಆರ್‌ಸಿಬಿ ಮತ್ತು ಕೆಕೆಆರ್ ಪಂದ್ಯಗಳು ಜೊತೆಯಾಗಿ ನಡೆದಿದ್ದರಿಂದ ಡೆಲ್ಲಿ ಕ್ಯಾಪಿಟಲ್ಸ್ ತಂಡಕ್ಕೆ ತನ್ನ ಒಂದು ಪಂದ್ಯವನ್ನು ವಿಶಾಖಪಟ್ಟಣದಲ್ಲಿ ಆಡಬೇಕಾದ ಅನಿವಾರ್ಯತೆ ಎದುರಾಗಿತ್ತು. ಆದರೆ ಈ ಬಾರಿ ಡೆಲ್ಲಿ ಕ್ಯಾಪಿಟಲ್ಸ್ ತಂಡವು ವೈಎಸ್‌ಆರ್ ಸ್ಟೇಡಿಯಂ ಅನ್ನು 2ನೇ ತವರು ಮೈದಾನವಾಗಿ ಆಯ್ಕೆ ಮಾಡಿಕೊಂಡಿದ್ದು, ವಿಶಾಖಪಟ್ಟಣದಲ್ಲಿ 2 ಪಂದ್ಯಗಳನ್ನಾಡಲು ನಿರ್ಧರಿಸಿದೆ.

ಅದರಂತೆ ವೈಎಸ್‌ಆರ್ ಸ್ಟೇಡಿಯಂನಲ್ಲಿ ಮಾರ್ಚ್ 24 ರಂದು ನಡೆಯಲಿರುವ ಪಂದ್ಯದಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ಹಾಗೂ ಲಕ್ನೋ ಸೂಪರ್ ಜೈಂಟ್ಸ್ ತಂಡಗಳು ಮುಖಾಮುಖಿಯಾಗಲಿದೆ. ಇನ್ನು ಇದೇ ಮೈದಾನದಲ್ಲಿ ಮಾರ್ಚ್ 30 ರಂದು ನಡೆಯಲಿರುವ ಪಂದ್ಯದಲ್ಲಿ ಡೆಲ್ಲಿ ಪಡೆ ಸನ್ ರೈಸರ್ಸ್ ಹೈದರಾಬಾದ್ ತಂಡವನ್ನು ಎದುರಿಸಲಿದೆ. ಡೆಲ್ಲಿ ಕ್ಯಾಪಿಟಲ್ಸ್ ಅಲ್ಲದೆ, ರಾಜಸ್ಥಾನ್ ರಾಯಲ್ಸ್ ತಂಡ ಬರ್ಸಪರ ಸ್ಟೇಡಿಯಂ ಮತ್ತು ಸವಾಯಿ ಮಾನ್‌ಸಿಂಗ್ ಕ್ರೀಡಾಂಗಣಗಳನ್ನು ತವರು ಮೈದಾನವಾಗಿ ಆಯ್ಕೆ ಮಾಡಿಕೊಂಡಿದೆ. ಮತ್ತೊಂದೆಡೆ ಪಂಜಾಬ್ ಕಿಂಗ್ಸ್ ಮುಲ್ಲನ್‌ಪುರ್ ಹಾಗೂ ಧರ್ಮಶಾಲಾದಲ್ಲಿ ಹೋಮ್ ಮ್ಯಾಚ್‌ಗಳನ್ನು ನಿರ್ಧರಿಸಿದೆ. ಅದರಂತೆ ಈ ಬಾರಿ ಒಟ್ಟು 13 ಸ್ಟೇಡಿಯಂಗಳಲ್ಲಿ ಐಪಿಎಲ್ ಪಂದ್ಯಗಳು ನಡೆಯಲಿದೆ.



# 49 ನೆನಪಿದ್ಯಾ ಆರ್‌ಸಿಬಿ ಕಾಲೆಳೆದ ಕೆಕೆಆರ್

ಆರ್‌ಸಿಬಿ ಇತಿಹಾಸದಲ್ಲಿ ಅತ್ಯಂತ ಕಡಿಮೆ ಮೊತ್ತಕ್ಕೆ ಆಲೌಟ್ ಆದ ಕೆಟ್ಟ ದಾಖಲೆಯೊಂದು ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡದ ಹೆಸರಿನಲ್ಲಿದೆ. ಈ ಹೀನಾಯ ದಾಖಲೆಯನ್ನು ಪ್ರಸ್ತಾಪಿಸುವ ಮೂಲಕ ಕೊಲ್ಕತ್ತಾ ನೈಟ್ ರೈಡರ್ಸ್ ತಂಡವು ಇದೀಗ ಆರ್‌ಸಿಬಿ ತಂಡದ ಕಾಲೆಳೆದಿದೆ. ಇಂಡಿಯನ್ ಪ್ರೀಮಿಯರ್ ಲೀಗ್ ವೇಳಾಪಟ್ಟಿ ಪ್ರಕಟವಾದ ಬೆನ್ನಲ್ಲೇ ಹಾಲಿ ಚಾಂಪಿಯನ್ ಕೊಲ್ಕತ್ತಾ ನೈಟ್ ರೈಡರ್ಸ್ ತಂಡವು ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡದ ಕಾಲೆಳೆದಿದೆ. ಅದು ಕೂಡ 49 ರನ್‌ಗಳ ಆಲೌಟ್ ಅನ್ನು ಪ್ರಸ್ತಾಪಿಸುವ ಮೂಲಕ ಎಂಬುದೇ ವಿಶೇಷ.

2017 ರಲ್ಲಿ ಆರ್‌ಸಿಬಿ ತಂಡವು ಕೆಕೆಆರ್ ನೀಡಿದ 131 ರನ್‌ಗಳ ಗುರಿಯನ್ನು ಬೆನ್ನತ್ತಿ ಕೇವಲ 49 ರನ್‌ಗಳಿಗೆ ಆಲೌಟ್ ಆಗಿತ್ತು. ಈ ವೇಳೆ ಆರ್‌ಸಿಬಿ ಪರ ಮೂಡಿಬಂದ ಗರಿಷ್ಠ ವೈಯುಕ್ತಿಕ ಸ್ಕೋರ್ 9 ರನ್. ಇದನ್ನು ಬಾರಿಸಿದ್ದು ಕೇದರ್ ಜಾಧವ್. ಅಂದು ಕೇವಲ 49 ರನ್‌ಗೆ ಆಲೌಟ್ ಆಗುವ ಮೂಲಕ ಐಪಿಎಲ್ ಇತಿಹಾಸದಲ್ಲೇ ಅತೀ ಕಡಿಮೆ ಮೊತ್ತಕ್ಕೆ ಸರ್ವಪತನ ಕಂಡ ತಂಡವೆಂಬ ಕೆಟ್ಟ ದಾಖಲೆಯನ್ನು ಆರ್‌ಸಿಬಿ ತನ್ನದಾಗಿಸಿಕೊಂಡಿತು. ಇದನ್ನೇ ಪ್ರಸ್ತಾಪಿಸಿ ಇದಿಗ ಸೋಷಿಯಲ್ ಮೀಡಿಯಾ ಪೋಸ್ಟ್ ಹಂಚಿಕೊಂಡು ಕೆಕೆಆರ್, ಆರ್‌ಸಿಬಿ ತಂಡದ ಕಾಲೆಳೆದಿದೆ. ಇದಕ್ಕೆ ಮುಖ್ಯ ಕಾರಣ ಈ ಬಾರಿಯ ಐಪಿಎಲ್‌ನ ಮೊದಲ ಪಂದ್ಯದಲ್ಲಿ ಕೊಲ್ಕತ್ತಾ ನೈಟ್ ರೈಡರ್ಸ್ ಹಾಗೂ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡಗಳು ಮುಖಾಮುಖಿಯಾಗುತ್ತಿರುವುದು. ಮಾರ್ಚ್ 22 ರಂದು ಕೊಲ್ಕತ್ತಾದ ಈಡನ್ ಗಾರ್ಡನ್ಸ್ ಮೈದಾನದಲ್ಲಿ ನಡೆಯಲಿರುವ ಈ ಪಂದ್ಯಕ್ಕೂ ಮುನ್ನ ಆರ್‌ಸಿಬಿಗೆ ಕೆಕೆಆರ್ ಹಳೆಯ ಸೋಲಿನ ಕಹಿ ನೆನಪನ್ನು ನೆನಪಿಸಿದೆ.

# ಹೀಗಾದ್ರೆ ಭಾರತ ಪಾಕಿಸ್ತಾನ್ ನಡುವೆ 2 ಪಂದ್ಯ



ಫೆಬ್ರವರಿ 19 ರಿಂದ ಶುರುವಾಗಲಿರುವ ಚಾಂಪಿಯನ್ಸ್ ಟ್ರೋಫಿ ಏಕದಿನ ಟೂರ್ನಿಯು ಮಾರ್ಚ್ 9 ರವರೆಗೆ ನಡೆಯಲಿದೆ. 8 ತಂಡಗಳ ನಡುವಣ ಈ ಕದನದ ಮೊದಲ ಮ್ಯಾಚ್‌ನಲ್ಲಿ ಪಾಕಿಸ್ತಾನ್ ಮತ್ತು ನ್ಯೂಝಿಲೆಂಡ್ ತಂಡಗಳು ಕಣಕ್ಕಿಳಿಯಲಿವೆ. ಭಾರತ ಮತ್ತು ಪಾಕಿಸ್ತಾನ್ ನಡುವಣ ಹೈವೋಲ್ಟೇಜ್ ಪಂದ್ಯವು ಫೆಬ್ರವರಿ 23 ರಂದು ನಡೆಯಲಿದೆ. ಬಹುನಿರೀಕ್ಷಿತ ಚಾಂಪಿಯನ್ಸ್ ಟ್ರೋಫಿಗೆ ವೇದಿಕೆ ಸಿದ್ಧವಾಗಿದೆ. 8 ತಂಡಗಳ ನಡುವಣ ಈ ಟೂರ್ನಿಗೆ ಚಾಲನೆ ಸಿಗಲಿದೆ. ಮೊದಲ ಪಂದ್ಯದಲ್ಲಿ ಪಾಕಿಸ್ತಾನ್ ಮತ್ತು ನ್ಯೂಝಿಲೆಂಡ್ ತಂಡಗಳು ಮುಖಾಮುಖಿಯಾದರೆ, ಟೀಮ್ ಇಂಡಿಯಾ ಫೆಬ್ರವರಿ 20 ರಂದು ಬಾಂಗ್ಲಾದೇಶ್ ವಿರುದ್ಧ ಕಣಕ್ಕಿಳಿಯುವ ಮೂಲಕ ಚಾಂಪಿಯನ್ಸ್ ಟ್ರೋಫಿ ಅಭಿಯಾನ ಆರಂಭಿಸಲಿದೆ. ಈ ಬಾರಿ ಭಾರತ ಮತ್ತು ಪಾಕಿಸ್ತಾನ್ ತಂಡಗಳು ಒಂದೇ ಗ್ರೂಪ್‌ನಲ್ಲಿರುವುದರಿಂದ ಮೊದಲ ಸುತ್ತಿನಲ್ಲೇ ಉಭಯ ತಂಡಗಳು ಮುಖಾಮುಖಿಯಾಗಲಿದೆ. ಅದರಂತೆ ಫೆಬ್ರವರಿ 23 ರಂದು ನಡೆಯಲಿರುವ ಪಂದ್ಯದಲ್ಲಿ ಬದ್ಧವೈರಿಗಳು ಕಾದಾಡಲಿದ್ದಾರೆ. ಈ ಹೈವೋಲ್ಟೇಜ್ ಪಂದ್ಯದ ಬಳಿಕ ಭಾರತ ಮತ್ತು ಪಾಕಿಸ್ತಾನ್ ಮತ್ತೆ ಮುಖಾಮುಖಿಯಾಗಬಹುದು.

ಭಾರತ ಮತ್ತು ಪಾಕಿಸ್ತಾನ್ ಮತ್ತೆ ಮುಖಾಮುಖಿ ಹೇಗೆ ಈ ಬಾರಿಯ ಚಾಂಪಿಯನ್ಸ್ ಟ್ರೋಫಿ ರೌಂಡ್ ರಾಬಿನ್ ಮಾದರಿಯಲ್ಲಿ ನಡೆಯಲಿದೆ. ಅದರಂತೆ ಮೊದಲ ಸುತ್ತಿನಲ್ಲಿ ಗ್ರೂಪ್‌ಗಳಲ್ಲಿರುವ ತಂಡಗಳು ಪರಸ್ಪರ ಸೆಣಸಲಿದೆ. ಗ್ರೂಪ್ ೦ ನಲ್ಲಿರುವ ಭಾರತ ತಂಡವು ಪಾಕಿಸ್ತಾನ್, ನ್ಯೂಝಿಲೆಂಡ್ ಮತ್ತು ಬಾಂಗ್ಲಾದೇಶ್ ವಿರುದ್ಧ ತಲಾ ಒಂದು ಪಂದ್ಯವಾಡಲಿದೆ.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966